22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 297 | ನವದೆಹಲಿ | ಬೆಲೆ ₹ 10 | ಮೇ 3, 2025, ಶನಿವಾರ

## ಒಳಪುಟಗಳಲ್ಲಿ



ಬನ್ನೇರುಘಟ್ಟಕ್ಕೆ ಮೆಟ್ರೋ ವಿಸ್ತರಣೆಗೆ ಡಿಪಿಆರ್ ಸಿದ್ಧ: ಡಿಸಿಎಂ ಡಿಕೆಶಿ – ಪು.5


ಅಂಡರ್‌ವರ್ಲ್ಡ್ ಸೇರಿದಂತೆ ಹಲವರಿಂದ ನನಗೂ ಜೀವ ಬೆದರಿಕೆ: ಯು.ಟಿ.ಖಾದರ್ – ಪು.6

ಇಸ್ಲಾಮಾಬಾದ್ ಕಾಲೋನಿ ಹೆಸರು ಬದಲಿಸಿ; ಹಿಂದೂ ಸಂಘಟನೆಗಳ ಆಗ್ರಹ –ಪು.7


## ಪೆಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಪಾಕ್ ಐಎಸ್‌ಐ ಕೈವಾಡ ಸ್ಪಷ್ಟ: ಎನ್‌ಐಎ ಸ್ಫೋಟಕ ವರದಿ

**ನವದೆಹಲಿ, ಮೇ 2:** ಪೆಹಲಾಮ್‌ನ ಬೈಸರನ್ ವ್ಯಾಲಿಯಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ತನ್ನ ಪಾತ್ರದ ಬಗ್ಗೆ ಸಾಕ್ಷಿ ಕೇಳ್ತಿದ್ದ ಪಾಕಿಸ್ತಾನಕ್ಕೆ ಎನ್‌ಐಎ ಈಗ ಸಾಕ್ಷಿ ಕೊಟ್ಟಿದೆ. ಪ್ರಾಥಮಿಕ ತನಿಖೆಯಲ್ಲಿ ಸಾಕ್ಷ್ಯ ನಿರೂಪಿಸಿರುವ ಎನ್‌ಐಎ ದಾಳಿಯ ಹಿಂದೆ ಪಾಕ್ ಮತ್ತು ಐಎಸ್‌ಐ ಕೈವಾಡದ ಬಗ್ಗೆ ಮಾಹಿತಿಯನ್ನು ಹಂಚಿಕೊಂಡಿದೆ. ಎನ್‌ಐಎಯ ಪ್ರಾಥಮಿಕ ತನಿಖೆಯಲ್ಲಿ ಪಾಕ್ನ ಐಎಸ್‌ಐ ಹೇಗೆ ಉಗ್ರರ ಜೊತೆಗೆ ಸಂಪರ್ಕ ಹೊಂದಿತ್ತು. ದಾಳಿಯಲ್ಲಿ ಇದರ ಕೈವಾಡ ಹೇಗಿದೆ ಎನ್ನುವ ಆಘಾತಕಾರಿ ಮಾಹಿತಿಯನ್ನು ಹೊರ ಹಾಕಿದೆ. ಪಾಕ್ನ ಐಎಸ್‌ಐ ಜೊತೆಗೆ ಲಷ್ಕರ್–ಎ–ತೈಬಾ ನಡುವಿನ ಕಾರ್ಯಾಚರಣೆಯ ಸಂಬಂಧವನ್ನು ಸೂಚಿಸಿದೆ,ಐಎಸ್‌ಐ ಕಾರ್ಯಕರ್ತರ ನಿರ್ದೇಶನದ ಮೇರೆಗೆ ನಡೆದಿದೆ. ಲಷ್ಕರ್–ಎ–ತೈಬಾ ಕೇಂದ್ರ ಕಚೇರಿಯಲ್ಲಿ ಪೆಹಲ್ಗಾಮ್ ದಾಳಿಯ ಬಗ್ಗೆಪ್ಲ್ಯಾನ್ ನಡೆದಿದೆ. ದಾಳಿಯ ಕೇಂದ್ರಬಿಂದುವಾಗಿದ್ದ ಇಬ್ಬರು ಭಯೋತ್ಪಾದಕರನ್ನು ಹಶ್ಮಿ ಮೂಸಾ (ಅಲಿಯಾಸ್ ಸುಲೇಮಾನ್) ಮತ್ತು ಅಲಿ ಭಾಯ್ (ಅಲಿಯಾಸ್ ತಲ್ಹಾ ಭಾಯ್) ಎಂದು ಗುರುತಿಸಲಾಗಿದ್ದು, ಅವರು ಪಾಕಿಸ್ತಾನಿ ಪ್ರಜೆಗಳು ಎಂದು ದೃಢಪಟ್ಟಿದೆ. ಈ ಭಯೋತ್ಪಾದಕರು ಪಾಕಿಸ್ತಾನದ ಜೊತೆಗೆ ನಿರಂತರ ಸಂಪರ್ಕ ಹೊಂದಿರುವ ಬಗ್ಗೆ ಮಾಹಿತಿ ಇದೆ. ದಾಳಿಯ ವಾರಗಳ ಮೊದಲು ಭಯೋತ್ಪಾದಕರು ಭಾರತದ ಪ್ರದೇಶವನ್ನು ಪ್ರವೇಶಿಸಿದ್ದರು, ಅವರಿಗೆ ಆಶ್ರಯ, ಸಂಚರಣೆ ಮತ್ತು ವಿಚಕ್ಷಣ ಸೇರಿದಂತೆ ಸ್ಥಳೀಯ ಲಾಜಿಸ್ಟಿಕಲ್ ಬೆಂಬಲವನ್ನು ಓವರ್ ಗ್ರೌಂಡ್ ವರ್ಕರ್ಸ್ ಒದಗಿಸಿದ್ದಾರೆ. ದಾಳಿಗೆ ಸಾಕ್ಷ್ಯಗಳನ್ನು ಸಂಗ್ರಹಿಸಿರುವ ಎನ್‌ಐಎ, ದಾಳಿಯ ಮುನ್ನ ಸ್ಯಾಟಲೈಟ್ ಫೋನ್ ಆಕ್ಟಿವ್ ಆಗಿದ್ದರು ಈ ಸಮಯದಲ್ಲಿ ಮೂರು ಸ್ಯಾಟಲೈಟ್ ಗಳ ಮೂಲಕ ಸಂಭಾಷಣೆ ನಡೆದಿದೆ ಎಂದು ಎನ್‌ಐಎ ವಿಶ್ಲೇಷಿಸಿದೆ.

### ಪಾಕಿಸ್ತಾನಕ್ಕೆ ಮತ್ತೊಂದು ಆರ್ಥಿಕ ಪೆಟ್ಟು ನೀಡಲು ಭಾರತದ ಯೋಜನೆ

ಈ ನಡುವೆ ದಾಳಿಯ ಬಳಿಕ ರಾಜತಾಂತ್ರಿಕ ನಡೆಗಳ ಮೂಲಕ ಪಾಕಿಸ್ತಾನಕ್ಕೆ ಹಲವು ಶಾಕ್ ನೀಡಿರುವ ಭಾರತ ಇನ್ನಷ್ಟು ಆರ್ಥಿಕ ಪೆಟ್ಟು ನೀಡಲು ತಯಾರಿ ಮಾಡಿಕೊಳ್ತಿದೆ. ಪಾಕಿಸ್ತಾನದ ವಿದೇಶಿ ಆರ್ಥಿಕ ನೆರವುಗಳಿಗೆ ಬ್ರೇಕ್ ಹಾಕಿಸಲು ತಂತ್ರ ಮಾಡಿದ್ದು ಭಯೋತ್ಪಾದನೆ ಸಂಬಂಧಿತ ಚಟುವಟಿಕೆಗಳಿಗೆ ಹಣವನ್ನು ದುರುಪಯೋಗ ಪಡಿಸಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿ ಅಂತರರಾಷ್ಟ್ರೀಯ ಹಣಕಾಸು ನಿಧಿಯ 7 ಬಿಲಿಯನ್ ಡಾಲರ್ ನೆರವು ಪ್ಯಾಕೇಜ್‌ಗೆ ಕೊಕ್ಕೆ ಹಾಕಲು ತಯಾರಿ ಆರಂಭಿಸಿದೆ. ಅಲ್ಲದೇ ಪಾಕಿಸ್ತಾನವನ್ನು ಹಣಕಾಸು ಕ್ರಿಯಾ ಕಾರ್ಯಪಡೆ ಬೂದು ಪಟ್ಟಿಗೆ ಮರಳಿ ಸೇರಿಸಲು ಭಾರತ ಸಕ್ರಿಯವಾಗಿ ಪ್ರಯತ್ನಿಸುವ ಸಾಧ್ಯತೆ ಇದೆ ಎನ್ನಲಾಗಿದೆ. ದಾಳಿಯ ಬಗ್ಗೆ ಮಾತನಾಡಿರುವ ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್, ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಭಾರತವು ಪ್ರತಿಕ್ರಿಯಿಸಬೇಕು ಆದರೆ ಈ ಪ್ರದೇಶದಲ್ಲಿ ದೊಡ್ಡ ಸಂಘರ್ಷಕ್ಕೆ ಕಾರಣವಾಗದ ರೀತಿಯಲ್ಲಿ ಪ್ರತಿಕ್ರಿಯಿಸಬೇಕು ಪಾಕಿಸ್ತಾನವು ತನ್ನ ಭೂಪ್ರದೇಶದಲ್ಲಿ ಭಯೋತ್ಪಾದಕರ ನಾಶಕ್ಕೆ ತನ್ನ ನೆರೆಯವರೊಂದಿಗೆ ಸಹಕರಿಸಬೇಕು ಎಂದು ಹೇಳಿದ್ದಾರೆ.

## ಸುಹಾಸ್ ಶೆಟ್ಟಿ ಕೊಲೆ: ಮುಖ್ಯಮಂತ್ರಿಗೆ ದಿನೇಶ್ ಗುಂಡೂರಾವ್ ಮಾಹಿತಿ



**ಬೆಂಗಳೂರು, ಮೇ 2:** ಮಂಗಳೂರಿನಲ್ಲಿ ಹಿಂದೂ ಕಾರ್ಯಕರ್ತ ಸುಹಾಸ್‌ಶೆಟ್ಟಿ ಕೊಲೆ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪೊಲೀಸ್ ಮಹಾನಿರ್ದೇಶಕರು ಹಾಗೂ ಉಸ್ತುವಾರಿ ಸಚಿವ ದಿನೇಶ್‌ಗುಂಡೂರಾವ್ ಅವರಿಂದ ಮಾಹಿತಿ ಪಡೆದುಕೊಂಡರು. ಇಂದು ಬೆಳಿಗ್ಗೆ ಪೊಲೀಸ್ ಮಹಾನಿರ್ದೇಶಕ ಅಲೋಕ್‌ಮೋಹನ್ ಹಾಗೂ ಮಂಗಳೂರು ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್‌ಗುಂಡೂರಾವ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅವರ ಅಧಿಕೃತ ನಿವಾಸ ಕಾವೇರಿಯಲ್ಲಿ ಭೇಟಿ ಮಾಡಿ ಘಟನೆಯ ಬಗ್ಗೆ ಸಂಪೂರ್ಣ ಮಾಹಿತಿಯನ್ನು ನೀಡಿದರು.

ಮಂಡ್ಯದ ಹೆಲಿಪ್ಯಾಡ್‌ನಲ್ಲಿ ಇಂದು ಮಂಗಳೂರಿನಲ್ಲಿ ಸುಹಾಸ್ ಶೆಟ್ಟಿ ಹತ್ಯೆಯಾಗಿದ್ದು, ಪದೇಪದೇ ಕೋಮು ಗಲಭೆಗಳಾಗುತ್ತಿರುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು ಕೊಲೆ ಗೀಡಾದ ವ್ಯಕ್ತಿ ರೌಡಿಶೀಟರ್ ಆಗಿದ್ದ ಎಂದು ಪೊಲೀಸರು ತಿಳಿಸಿದ್ದು, ಈ ಬಗ್ಗೆ ಎಡಿಜಿಪಿ (ಕಾನೂನು ಸುವ್ಯವಸ್ಥೆ) ವರೊಂದಿಗೆ ಮಾತನಾಡಿ ಅವರನ್ನು ಸ್ಥಳಕ್ಕೆ ಕಳುಹಿಸಿ ಪರಿಶೀಲನೆ ನಡೆಸಲು ಸೂಚಿಸಿದ್ದೆನೆ ಮನುಷ್ಯನ ಪ್ರಾಣ ಬಹಳ ಮುಖ್ಯ. ಆರೋಪಿಗಳನ್ನು ಬಂಧಿಸಿ ಕಠಿಣ ಕ್ರಮಕೈಗೊಳ್ಳುತ್ತೇವೆ ಮಂಗಳೂರು ಜನ ಶಾಂತಿ ಕಾಪಾಡಬೇಕು ಸರ್ಕಾರ ಜನರ ಜತೆ ನಿಲ್ಲಲಿದೆ ಎಂದರು. ಕೂಡಲೇ ಅಪರಾಧಿಗಳು ಯಾರೇ ಆಗಿದ್ದರೂ ಅವರನ್ನು ಪತ್ತೆ ಹಚ್ಚಿ ದಸ್ತಗಿರಿ ಮಾಡಿ ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಲಾಗಿದೆ ಎಂದರು.

**4 ತಂಡ ರಚನೆ: ಗೃಹ ಸಚಿವ**

ಮಂಗಳೂರಿನಲ್ಲಿ ಹಿಂದೂ ಕಾರ್ಯಕರ್ತ ಸುಹಾಸ್ಶೆಟ್ಟಿ ಹತ್ಯೆ ಹಿನ್ನೆಲೆಯಲ್ಲಿ ಆರೋಪಿಗಳ ಬಂಧನಕ್ಕೆ 4 ಪೊಲೀಸ್ ತಂಡಗಳನ್ನು ರಚನೆ ಮಾಡಲಾಗಿದೆ.

**ಪೆಹಲ್ಗಾಮ್‌ಗೆ ಪ್ರಧಾನಿ ಏಕೆ ಭೇಟಿ ನೀಡಲಿಲ್ಲ**

ರೌಡಿ ಶೀಟರ್ ಸುಹಾಸ್ ಶೆಟ್ಟಿ ಕೊಲೆಯಾದ ಸ್ಥಳಕ್ಕೆ ಬಿಜೆಪಿಯವರು ಭೇಟಿ ನೀಡಿರುವ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಸಿಎಂ, ಬಿಜೆಪಿಯವರು ಯಾವಾಗಲೂ ರಾಜಕೀಯವಾಗಿ ಇಂಥ ಪ್ರಕರಣಗಳನ್ನು ಹುಡುಕುತ್ತಾರೆ. ಒಂದು ವಾರದಿಂದ ಪೆಹಲಗಾಂ ಪ್ರಕರಣದ ಬಗ್ಗೆ ಏನು ಹೇಳುತ್ತಾರೆ. ಉಗ್ರರ ದಾಳಿಗೆ 26 ಜನ ಸಾವನ್ನಪ್ಪಿದ್ದಾರೆ. ಪ್ರಧಾನಿಗಳು ಅಲ್ಲಿಗೆ ಭೇಟಿ ನೀಡಿದ್ದಾರೆಯೇ ಬಿಜೆಪಿಯವರಿಗೆ ಪ್ರಧಾನಿ ಮೋದಿಯವರಿಗೆ ಇದು ಮುಖ್ಯ ಅನ್ನಿಸುತ್ತಿಲ್ಲವೇ ಎಂದು ಮುಖ್ಯಮಂತ್ರಿಗಳು ಪ್ರಶ್ನಿಸಿದರು.

**ಭದ್ರತಾ ವೈಫಲ್ಯ ಕಾರಣ**

ಪಹಲ್ಗಾಂ ಪ್ರಕರಣ ಭದ್ರತಾ ವೈಫಲ್ಯವಲ್ಲವೇ? ಎಂದು ಪ್ರಶ್ನಿಸಿದ ಸಿಎಂ ಕಾಶ್ಮೀರದಲ್ಲಿ ಒಬ್ಬ ಪೋಲಿಸ್ ಆಗಲಿ, ಭದ್ರತಾ ಪಡೆಯವರಾಗಲಿ ನಿಯೋಜಿಸಿಲ್ಲ. ಯಾರೂ ಇಲ್ಲ ಎಂದರೆ ಏನು ಅರ್ಥ? ನೂರಾರು ಪ್ರವಾಸಿಗರು ಭೇಟಿ ನೀಡುವ ಸ್ಥಳದಲ್ಲಿ ಪೊಲೀಸರು ಇರಬೇಕು ಎಂದರು.

**ನನಗೂ ಬೆದರಿಕೆ ಕರೆ ಬಂದಿದೆ:**



ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಅವರಿಗೆ ಬೆದರಿಕೆ ಕರೆ ಬಂದಿರುವ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ ನನಗೂ ಬೆದರಿಕೆ ಕರೆಗಳು ಬರುತ್ತವೆ. ಈ ಬಗ್ಗೆ ಪೊಲೀಸರಿಗೆ ತಿಳಿಸಿ, ಅವರನ್ನು ಪತ್ತೆ ಹಚ್ಚಿ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ ಎಂದರು.

## ನ್ಯಾಷನಲ್ ಹೆರಾಲ್ಡ್ ಪ್ರಕರಣ: ಸೋನಿಯಾ, ರಾಹುಲ್‌ಗೆ ನೋಟಿಸ್




**ನವದೆಹಲಿ, ಮೇ 2:** ನ್ಯಾಷನಲ್ ಹೆರಾಲ್ಡ್‌ನ ಹಣ ಅಕ್ರಮ ವರ್ಗಾವಣೆಗೆ ಸಂಬಂಧಿಸಿದ ಪ್ರಕರಣದಲ್ಲಿ ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಅವರಿಗೆ ದೆಹಲಿಯ ರೋಸ್ ಅವೆನ್ಯೂ ನ್ಯಾಯಾಲಯ ನೋಟಿಸ್ ಜಾರಿ ಮಾಡಿದೆ.

ವಿಶೇಷ ನ್ಯಾಯಾಲಯದ ನ್ಯಾಯಾಧೀಶ ವಿಶಾಲ್ ಗೋಗನೆ, ಯಾವುದೇ ಪ್ರಕರಣದಲ್ಲಿ ಪ್ರತಿಯೊಬ್ಬರಿಗೂ ತಮ್ಮನ್ನು ತಾವು ಸಮರ್ಥಿಸಿಕೊಳ್ಳಲು ಅವಕಾಶ ಇರಬೇಕು. ಅದರಂತೆ ತನಿಖಾ ಸಂಸ್ಥೆಯು ಚಾರ್ಜ್‌ಶೀಟ್ ಅನ್ನು ನ್ಯಾಯಾಲಯಕ್ಕೆ ಸಲ್ಲಿಸಿದಾಗ ಪ್ರತಿಕ್ರಿಯೆಗೆ ಅವಕಾಶ ನೀಡಲಾಗಿತ್ತಾದರೂ, ಒಬ್ಬ ವ್ಯಕ್ತಿಯು ಮಾತನಾಡಲು ಅಥವಾ ಕಾನೂನು ಪ್ರಕ್ರಿಯೆಯ ಪ್ರತಿ ಹಂತದಲ್ಲೂ ತಮ್ಮ ವಾದವನ್ನು ಮಂಡಿಸಲು ಅವಕಾಶ ನೀಡುವುದು ನ್ಯಾಯವನ್ನು ಖಚಿತಪಡಿಸಿಕೊಳ್ಳಲು ಅತ್ಯಗತ್ಯವಾಗಿದೆ ಎಂದರು. ಪ್ರಕರಣದ ಮುಂದಿನ ವಿಚಾರಣೆಯನ್ನು ಮೇ 8ಕ್ಕೆ ನಿಗದಿಪಡಿಸಲಾಗಿದೆ.

ಬಿಜೆಪಿ ಮುಖಂಡ ಸುಬ್ರಮಣಿಯನ್ ಸ್ವಾಮಿ ಅವರು 2014ರ ಜೂನ್ 26ರಂದು ದಾಖಲಿಸಿದ ಖಾಸಗಿ ದೂರನ್ನು ಪಟಿಯಾಲ ಹೌಸ್ ನ್ಯಾಯಾಲಯದ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟರು ಪರಿಗಣನೆಗೆ ತೆಗೆದುಕೊಂಡ ನಂತರ, ಜಾರಿ ನಿರ್ದೇಶನಾಲಯ 2021ರಲ್ಲಿ ತನಿಖೆಯನ್ನು ಪ್ರಾರಂಭಿಸಿತು.

ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ದುಬೆ, ಪಿತ್ರೋಡಾ, ಕಾಂಗ್ರೆಸ್ ನಾಯಕರಾದ ದಿವಂಗತ ಮೋತಿಲಾಲ್ ವೋರಾ ಮತ್ತು ಆಸ್ಕರ್ ಫರ್ನಾಂಡೀಸ್, ಖಾಸಗಿ ಕಂಪನಿಯಾದ ಯಂಗ್ ಇಂಡಿಯಾ ಮತ್ತು ಕೆಲವು ಪ್ರಮುಖ ರಾಜಕೀಯ ವ್ಯಕ್ತಿಗಳು ಕ್ರಿಮಿನಲ್ ಪಿತೂರಿ ನಡೆಸಿದ್ದನ್ನು ದೂರಿನಲ್ಲಿ ಎತ್ತಿತೋರಿಸಲಾಗಿದೆ.

ಇವರೆಲ್ಲರೂ ಅಸೋಸಿಯೇಟೆಡ್ ಜರ್ನಲ್ಸ್ ಲಿಮಿಟೆಡ್ಗೆ ಸೇರಿದ 2 ಸಾವಿರ ಕೋಟಿ ಬೆಲೆಬಾಳುವ ಆಸ್ತಿಗಳನ್ನು ಸ್ವಾಧೀನಕ್ಕೆ ತೆಗೆದುಕೊಳ್ಳಲು ಹಣದ ಅಕ್ರಮ ವರ್ಗಾವಣೆ ನಡೆಸಿರುವುದನ್ನು ದೂರಿನಲ್ಲಿ ಹೇಳಲಾಗಿದೆ ಎಂದು ಇ.ಡಿ ಉಲ್ಲೇಖಿಸಿದೆ.

ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತು ಇತರರ ವಿರುದ್ಧ ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಹಣ ಅಕ್ರಮ ವರ್ಗಾವಣೆಯ ಆರೋಪ ಹೊರಿಸಿ ಜಾರಿ ನಿರ್ದೇಶನಾಲಯ (ಇ.ಡಿ) ಏಪ್ರಿಲ್ 9ರಂದು ದೋಷಾರೋಪ ಪಟ್ಟಿ ಸಲ್ಲಿಸಿದೆ. ಕಾಂಗ್ರೆಸ್ ಮುಖಂಡರಾದ ಸ್ಯಾಮ್ ಪಿತ್ರೋಡಾ ಮತ್ತು ಸುಮನ್ ದುಬೆ ಅವರನ್ನು ಕೂಡ ಆರೋಪಿಗಳೆಂದು ಹೇಳಲಾಗಿದೆ. ಕಾಂಗ್ರೆಸ್ ನಾಯಕರಾದ ಸೋನಿಯಾ ಮತ್ತು ರಾಹುಲ್ ಅವರು ಯಂಗ್ ಇಂಡಿಯನ್ನ ಬಹುಪಾಲು ಷೇರುದಾರರಾಗಿದ್ದು, ಅವರಲ್ಲಿ ಪ್ರತಿಯೊಬ್ಬರು ಶೇ. 38ರಷ್ಟು ಷೇರುಗಳನ್ನು ಹೊಂದಿದ್ದಾರೆ.




## ನಿತ್ಯ ಪಂಚಾಂಗ 3.05.2025 ಶನಿವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ,
ಉತ್ತರಾಯಣ ವಸಂತ ಋತು
ಚಾಂದ್ರಮಾನ, ವೈಶಾಖ ಶುದ್ಧ

ಷಷ್ಠಿ, ಪುನರ್ವಸು ನಕ್ಷತ್ರ,
ಸಾಲಿಗ್ರಾಮ ಯೋಗನರಸಿಂಹ ರಥ,
ಯರಗೋಳ ಪುಣ್ಯದಿನ,
ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನ, ವಿಶ್ವ ಅಸ್ತಮಾ ದಿನ,

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಕೇಂದ್ರದ ನಿಧಿಯಿಂದ ಯಾವ ರಾಜ್ಯದಲ್ಲೂ ಜಾತಿಗಣತಿ ಅಸಾಧ್ಯ: ಖರ್ಗೆ ತೀರುಗೇಟ್

**ಬೆಂಗಳೂರು,ಮೇ 2:** ಕೇಂದ್ರ ಸರ್ಕಾರ ನಡೆಸುವ ಜಾತಿಗಣತಿಗೆ ಮೀಸಲಿಟ್ಟಿರುವ 515 ಕೋಟಿ ಎಲ್ಲಿಗೆ ಸಾಕಾಗುತ್ತದೆ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕಿಡಿಕಾರಿದ್ದಾರೆ. ಈ ಬಗ್ಗೆ ಮಾತನಾಡಿದ ಅವರು, ಕರ್ನಾಟಕದಲ್ಲಿ ಹತ್ತು ವರ್ಷಗಳ ಹಿಂದೆ ಕಾಂಗ್ರೆಸ್ ಸರ್ಕಾರ ನಡೆಸಿದ ಸಾಮಾಜಿಕ ಸಮೀಕ್ಷೆ ನಡೆಸಿತ್ತು. ಅದಕ್ಕೆ ರೂ.168 ಕೋಟಿ ವೆಚ್ಚ ಮಾಡಿತ್ತು. ಆದರೆ ಇದೀಗ ಕೇಂದ್ರ ಇಡೀ ದೇಶದಲ್ಲಿ ಜಾತಿ ಸಮೀಕ್ಷೆ ಮಾಡಲು ಕೇವಲ 515 ಕೋಟಿ ರೂಪಾಯಿ ಮೀಸಲು ಇಟ್ಟಿದೆ ಎಂದರು. ಕೇಂದ್ರಕ್ಕೆ ಜಾತಿಗಣತಿ ಮಾಡಬೇಕು ಎಂದು ನಿಜಕ್ಕೂ ಆಸಕ್ತಿಯಿದಿದ್ದರೆ ಬಜೆಟ್ ನಲ್ಲಿ ಅದಕ್ಕಾಗಿಯೇ ದೊಡ್ಡ ಮೊತ್ತದ ಅನುದಾನ ತೆಗೆದಿಡುತ್ತಿದ್ದರು, ಆದರೆ ಅವರು ಆ ರೀತಿ ಮಾಡಿಲ್ಲ. ಕೇಂದ್ರ ಇಟ್ಟಿರುವ 515 ಕೋಟಿ ರೂಪಾಯಿ ಹಣ ಉತ್ತರ ಪ್ರದೇಶವೊಂದರ ಜಾತಿ ಗಣತಿ ಮಾಡಲು ಸಾಧ್ಯವಾಗುವುದಿಲ್ಲ ಎಂದು ಖರ್ಗೆ ಹೇಳಿದರು. ದೇಶದಲ್ಲಿ ತುರತುರಿಯಲ್ಲಿ ಜಾತಿಗಣತಿ ಮಾಡುವುದಾಗಿ ಘೋಷಣೆ ಮಾಡಿದ್ದಾರೆ, ಪ್ರಧಾನಿ ಮೋದಿ ಅವರಿಗೆ ನಿಜಕ್ಕೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ಸಬಲೀಕರಣದ ನಿಜವಾದ ಕಾಳಜಿ ಇದ್ದರೆ ಮೀಸಲಾತಿಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲಿ ನೋಡೋಣ ಎಂದು ಖರ್ಗೆ ಬಹಿರಂಗ ಸವಾಲು ಹಾಕಿದರು.



# ಜಾತಿಗಣತಿ: ರಾಜಕರಣ ಬಿಟ್ಟು ಚರ್ಚೆಗೆ ಬನ್ನಿ ಸರ್ಕಾರಕ್ಕೆ ಈಶ್ವರಪ್ಪ ತಾಕೀತು

**ಶಿವಮೊಗ್ಗ, ಮೇ 2:** ಮಾಜಿ ಡಿಸಿಎಂ ಕೆ.ಎಸ್. ಈಶ್ವರಪ್ಪ ಸುದ್ದಿಗೋಷ್ಠಿ ಮಾಡಿ ಮಾತನಾಡಿ, ದೇಶ– ರಾಜ್ಯದಲ್ಲಿ ಜಾತಿ ಗಣತಿ ಬಗ್ಗೆ ಚರ್ಚೆಯಾಗುತ್ತಿರುವುದು ಸಂತೋಷದ ವಿಷಯವಾದರೂ ಅದರಲ್ಲಿ ರಾಜಕೀಯ ಚರ್ಚೆಯಾಗುತ್ತಿರುವುದು ನೋವಿನ ಸಂಗತಿ. ಈಗ ಈ ವಿಷಯವಾಗಿ ಕ್ರೆಡಿಟ್ ಯಾರು ತೆಗೆದುಕೊಳ್ಳಬೇಕು ಎಂಬುವ ಚರ್ಚೆಯಾಗುತ್ತಿದೆ. ಇದನ್ನು ಮೊದಲು ನಿಲ್ಲಿಸಿ. ರಾಜ್ಯದಲ್ಲಿ ಜಾತಿಗಣತಿ ಆದೇಶ ಆಗಿ, 10 ವರ್ಷ ಆಯ್ತು. 168 ಕೋಟಿ ಖರ್ಚಾಗಿದೆ. ವರದಿ ಸಲ್ಲಿಕೆಯಾಗಿ ಈಗ ಬಿಡುಗಡೆಯಾದರೂ ಚರ್ಚೆಯಾಗುತ್ತಿದೆ. ಸಿಎಂ ಸಿದ್ದರಾಮಯ್ಯ ಉತ್ತರನ ಪೌರುಷ ತೋರುತ್ತಿದ್ದಾರೆ. ಅವರ ಪಕ್ಷದವರೇ ಕಾಲೆಳೆಯುತ್ತಿದ್ದಾರೆ ಎಂದು ವ್ಯಂಗ್ಯವಾಡಿದ್ದಾರೆ.



ಕ್ಯಾಬಿನೆಟ್ ನಲ್ಲೇ ಚರ್ಚೆ ಮಾಡ್ತಿವಿ ಅಂತಿದ್ದಾರೆ. ಲಿಂಗಾಯತ, ಒಕ್ಕಲಿಗ ಶಾಸಕರು ಚರ್ಚೆ ಮಾಡಿ, ಅಂತಿಮ ತೀರ್ಮಾನ ಮಾಡುತ್ತೇವೆ ಅಂದಿದ್ದಾರೆ. ಇದರರ್ಥ ಇನ್ನು ಜಾತಿಗಣತಿಗೆ ಮೋಕ್ಷ ಸಿಕ್ಕಿಲ್ಲ. ರಾಜಕಾರಣ ಬಿಟ್ಟು, ಚರ್ಚೆ ಮಾಡಿ, ಹೊರಗೆ ಮಾಡಿ. ನಂತರ ತಿದ್ದುಪಡಿ ಮಾಡಿದರ ಆಯಿತು. ಬಿಜೆಪಿ ಕೂಡ ಗೊಂದಲ ಮಾಡುವುದು ಬೇಡ. ಸಿಎಂ ಗೆ ತಾಕತ್ ಇದ್ದರೆ ಇಷ್ಟು ದಿನದೊಳಗೆ ಬಿಡುಗಡೆ ಮಾಡುತ್ತೇವೆಂದು ಹೇಳಲಿ. ಎಲ್ಲಾ ಜಾತಿಯವರಿಗೆ ನ್ಯಾಯ ಕೊಡುವುದಕ್ಕೆ ಸಿಎಂ ದಿನಾಂಕ ನಿಗದಿ ಮಾಡಲಿ. ಇಲ್ಲವಾದರೆ ಸಿಎಂ ಸ್ಥಾನ ಉಳಿಸಿಕೊಳ್ಳಲು ಮಾಡಿರುವ ಉಪಾಯ ಎನ್ನುವಂತಾಗುತ್ತದೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ಮುಸ್ಲಿಂ ಗುಂಡಾಗಿರಿ ಹೆಚ್ಚಾಗಿದೆ

ಶಿವಮೊಗ್ಗ ಹಾಗೂ ರಾಜ್ಯದಲ್ಲಿ ಮುಸ್ಲಿಂ ಗುಂಡಾಗಿರಿ ಹೆಚ್ಚಾಗಿದೆ. ಸಿದ್ದರಾಮಯ್ಯ ಮುಸ್ಲಿಂರಿಗೆ ಬಜೆಟ್ ಕೊಟ್ಟ ಮೇಲೆ ಇಂತಹ ಪ್ರಕರಣಗಳು ಹೆಚ್ಚಾಗುತ್ತಿವೆ. ಶಿವಮೊಗದಲ್ಲೂ ರೌಡಿಗಳು ಗನ್ ಹಿಡಿದು, ಓಡಾಡುತ್ತಾರೆ. ಗುಂಡು ಹಾರಿಸುತ್ತಾರೆ. ರಾಜ್ಯದಲ್ಲಿ ಒಂದು ಸರ್ಕಾರ ಇದೆ ಅಂತಾ ಅನಿಸುತ್ತಲೇ ಇಲ್ಲ. ಪೊಲೀಸರು ಬದುಕಿದ್ದರೂ ಸತ್ತಿದ್ದಾರೆ. ಗುಂಡಾಗಳಿಗೆ ಪೊಲೀಸರ ಭಯವೇ ಇಲ್ಲದಂತಾಗಿದೆ ಎಂದು ಆರೋಪಿಸಿದ್ದಾರೆ.

# ಜಾತಿ ಜನಗಣತಿ ಕುರಿತು ಕಾಂಗ್ರೆಸ್ 60 ವರ್ಷಗಳ ಮೌನ: ಜೋಶಿ ವಾಗ್ದಾಳಿ



**ಹುಬ್ಬಳ್ಳಿ, ಮೇ 2:** ಜಾತಿ ಆಧಾರಿತ ಜನಗಣತಿ ಬೇಡಿಕೆಗೆ ಸಂಬಂಧಿಸಿದಂತೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಶುಕ್ರವಾರ ಕಾಂಗ್ರೆಸ್ ಪಕ್ಷದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು, ಆರು ದಶಕಗಳ ಕಾಲ ಅಧಿಕಾರದಲ್ಲಿದ್ದರೂ ಅದು ಬೂಟಾಟಿಕೆ ಮತ್ತು ನಿಷ್ಕ್ರಿಯತೆ ಎಂದು ಆರೋಪಿಸಿದರು.

"ಕಾಂಗ್ರೆಸ್ 60 ವರ್ಷಗಳ ಕಾಲ ದೇಶವನ್ನು ಆಳಿತು ಆದರೆ ಸರಿಯಾದ ಜಾತಿ ಜನಗಣತಿಯನ್ನು ನಡೆಸಲಿಲ್ಲ ಅಥವಾ 2011ರ ಸಮೀಕ್ಷೆಯಿಂದ ಜಾತಿ ದತ್ತಾಂಶವನ್ನು ಬಿಡುಗಡೆ ಮಾಡಲಿಲ್ಲ" ಎಂದು ಯುಪಿಎ ಸರ್ಕಾರದ ಅಡಿಯಲ್ಲಿ ನಡೆಸಲಾದ ಸಾಮಾಜಿಕ–ಆರ್ಥಿಕ ಮತ್ತು ಜಾತಿ ಜನಗಣತಿ (ಎಸ್‌ಇಸಿಸಿ)ಯನ್ನು ಉಲ್ಲೇಖಿಸಿ ಜೋಶಿ ಇಲ್ಲಿ ವರದಿಗಾರರಿಗೆ ತಿಳಿಸಿದರು.

"2004 ರಲ್ಲಿ ಅಧಿಕಾರಕ್ಕೆ ಬಂದ ನಂತರವೂ, ಅವರಿಗೆ 2011 ರವರೆಗೆ ಏಳು ವರ್ಷಗಳು ಇದ್ದವು. ಅವರ ಪ್ರಧಾನಿ ಅಥವಾ ಅವರ 'ಸೂಪರ್ ಪ್ರಧಾನಿ, ಸೋನಿಯಾ ಗಾಂಧಿಯನ್ನು ಉಲ್ಲೇಖಿಸಿ, ಅದರ ಮೇಲೆ ಏಕೆ ಕ್ರಮ ಕೈಗೊಳ್ಳಲಿಲ್ಲ? ಅವರು ಸಾಕಷ್ಟು ಪ್ರಬುದ್ಧರು ಅಥವಾ ಬುದ್ಧಿವಂತರು ಅಲ್ಲವೇ?"

ಕಾಂಗ್ರೆಸ್ ನಾಯಕರು ತಮ್ಮನ್ನು ತಾವು ಪೂರೈಸಲು ವಿಫಲವಾದ ಬೇಡಿಕೆಗಳನ್ನು ಎತ್ತುವ ಮೊದಲು ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಸಚಿವರು ಹೇಳಿದರು. ಪಕ್ಷಕ್ಕೆ ಎಲ್ಲಾ ಅವಕಾಶಗಳಿದ್ದರೂ, 2011 ರ ಜನಗಣತಿಯ ಜಾತಿ ಅಂಶವನ್ನು ಏಕೆ ಬಹಿರಂಗಪಡಿಸಲಿಲ್ಲ ಎಂದು ಅವರು ಪ್ರಶ್ನಿಸಿದರು.

ಜಾತಿ ಆಧಾರಿತ ಮೀಸಲಾತಿಗೆ ಐತಿಹಾಸಿಕ ವಿರೋಧವನ್ನು ಉಲ್ಲೇಖಿಸಿದ ಜೋಶಿ, ಮಾಜಿ ಪ್ರಧಾನಿಗಳಾದ ಜವಾಹರಲಾಲ್ ನೆಹರು ಮತ್ತು ರಾಜೀವ್ ಗಾಂಧಿ ಇಬ್ಬರೂ ಅಂತಹ ಕ್ರಮಗಳನ್ನು ವಿರೋಧಿಸಿದ್ದರು ಎಂದು ನೆನಪಿಸಿಕೊಂಡರು. "ರಾಜೀವ್ ಗಾಂಧಿಯವರು ಸಂಸತ್ತಿನಲ್ಲಿ ಮಾಡಿದ ಅತಿ ಉದ್ದದ ಭಾಷಣವು ಎಸ್ಸಿ ಮತ್ತು ಒಬಿಸಿಗಳಿಗೆ ಮೀಸಲಾತಿಯ ವಿರುದ್ಧವಾಗಿತ್ತು. ಆ ಸಮಯದಲ್ಲಿ ಅಸ್ತಿತ್ವದಲ್ಲಿರುವ ಮೀಸಲಾತಿಗಳನ್ನು ಸಹ ಅವರು ವಿರೋಧಿಸಿದರು" ಎಂದು ಅವರು ಹೇಳಿದರು.

ಸಾಮಾಜಿಕ ನ್ಯಾಯದ ಕುರಿತು ತಮ್ಮ ಸಮಿತಿಯ ಶಿಫಾರಸುಗಳನ್ನು ನಿರ್ಲಕ್ಷಿಸಿದ ನಂತರ ಡಾ. ಬಿ.ಆರ್. ಅಂಬೇಡ್ಕರ್ ಅವರು ನೆಹರು ಅವರ ಸಂಪುಟಕ್ಕೆ ರಾಜೀನಾಮೆ ನೀಡಿದರು ಎಂದು ಜೋಶಿ ಗಮನಸೆಳೆದರು. "ಈ ವರದಿಯನ್ನು ಕಾಂಗ್ರೆಸ್ ನಾಯಕತ್ವ ತೆರೆಯಲೇ ಇಲ್ಲ. ಅವರು ಅದನ್ನು ಸಕ್ರಿಯವಾಗಿ ವಿರೋಧಿಸಿದರು" ಎಂದು ಅವರು ಹೇಳಿದರು.

ಮಂಡಲ್ ಆಯೋಗದ ಶಿಫಾರಸುಗಳನ್ನು ಮೊದಲು ಪ್ರಸ್ತಾಪಿಸಿದಾಗ ಕಾಂಗ್ರೆಸ್ ವಿರೋಧಿಸಿದೆ ಎಂದು ಅವರು ಆರೋಪಿಸಿದರು. "ಅವರು ಇಂದು ಸಮೀಕ್ಷೆಗಳು ಮತ್ತು ಸಾಮಾಜಿಕ ನ್ಯಾಯದ ಬಗ್ಗೆ ಮಾತನಾಡುತ್ತಾರೆ, ಆದರೆ ಮಂಡಲ್ ಆಯೋಗ ಹೊರಬಂದಾಗ, ಅವರು ಅದನ್ನು ವಿರೋಧಿಸಿದರು" ಎಂದು ಜೋಶಿ ಹೇಳಿದರು.

"ಈ ವಿಷಯವನ್ನು ಗದ್ದಲ ಮಾಡುವ ಮತ್ತು ರಾಜಕೀಯಗೊಳಿಸುವ ಮೊದಲು, ಕಾಂಗ್ರೆಸ್ ತನ್ನದೇ ಆದ ದಾಖಲೆಯನ್ನು ನೋಡಬೇಕು. ಅವರಿಗೆ ಅಧಿಕಾರ ಮತ್ತು ಜನಾದೇಶ ವಿದ್ದಾಗ ಕಾರ್ಯನಿರ್ವಹಿಸಲು ವಿಫಲರಾದವರು ಅವರೇ" ಎಂದು ಅವರು ಹೇಳಿದರು.



ರಾಜ್ಯಪಾಲ ಥಾವರ್ ಚಂದ್ ಗೆಹ್ಲೋತ್ ಅವರನ್ನು ಕೇಂದ್ರ ಸಚಿವ ವಿ ಸೋಮಣ್ಣ ಶುಕ್ರವಾರ ರಾಜಭವನದಲ್ಲಿ ಭೇಟಿಯಾಗಿದ್ದರು.

# ಸಚಿವ ಶಿವಾನಂದ ಪಾಟೀಲ್ ರಾಜೀನಾಮೆ

**ಬೆಂಗಳೂರು,ಮೇ 2:** ರಾಜ್ಯದ ಕೃಷಿ ಉತ್ಪನ್ನ ಮಾರುಕಟ್ಟೆ, ಜವಳಿ ಹಾಗೂ ಸಕ್ಕರೆ ಖಾತೆ ಸಚಿವ ಶಿವಾನಂದ ಪಾಟೀಲ್ ಅವರು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಬಿಜೆಪಿಯ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಶಿವಾನಂದ್ ಪಾಟೀಲ್ರವರು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ನನ್ನ ವಿರುದ್ಧ ಸ್ಪರ್ಧಿಸಲಿ ಎಂದು ಸವಾಲು ಹಾಕಿದ್ದರು.

ಈ ಸವಾಲನ್ನು ಸ್ವೀಕರಿಸಿರುವ ಸಚಿವ ಶಿವಾನಂದ ಪಾಟೀಲ್ ಅವರು ಇಂದು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ತಮ್ಮ ವಿರುದ್ಧ ಬಾಗಲಕೋಟೆಯ ಬಸವನ ಬಾಗೇವಾಡಿ ಕ್ಷೇತ್ರದಲ್ಲಿ ಸ್ಪರ್ಧಿಸುವಂತೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರಿಗೆ ಸವಾಲು ಹಾಕಿದರು. ಬೆಂಗಳೂರಿನಲ್ಲಿಂದು ವಿಧಾನಸಭಾಧ್ಯಕ್ಷರ ಕಚೇರಿಯಲ್ಲಿ ಸಭಾಧ್ಯಕ್ಷ ಯು.ಟಿ. ಖಾದರ್ ಅವರನ್ನು ಭೇಟಿ ಮಾಡಿದ ಸಚಿವ ಶಿವಾನಂದ ಪಾಟೀಲ್ ಅವರು ಶಾಸಕ ಸ್ಥಾನಕ್ಕೆ ರಾಜೀನಾಮೆ ಪತ್ರವನ್ನು ಸಲ್ಲಿಸಿದರು. ಆದರೆ ಶಿವಾನಂದ ಪಾಟೀಲ್ ಅವರು ಷರತ್ತು ವಿಧಿಸಿದ್ದಾರೆ. ಶಾಸಕ ಸ್ಥಾನಕ್ಕೆ ಯತ್ನಾಳ್ ರಾಜೀನಾಮೆ ನೀಡಿದರೆ ಮಾತ್ರ ತನ್ನ ರಾಜೀನಾಮೆ ಪತ್ರ ಅಂಗೀಕರಿಸುವಂತೆ ಸೂಚಿಸಿದ್ದಾರೆ ಎಂದು ವರದಿಯಾಗಿದೆ.ಬಸವನ ಬಾಗೇವಾಡಿ ಶಾಸಕ ಮತ್ತು ವಿಜಯಪುರ ನಗರ ಶಾಸಕರ ಈ ರಾಜಕೀಯ ಸಮರ ಯಾವ ಹಂತಕ್ಕೆ ಹೋಗುತ್ತದೆ ಎನ್ನುವುದನ್ನು ಕಾದು ನೋಡಬೇಕಿದೆ.

**ಸಚಿವ ಶಿವಾನಂದ ಎಸ್.ಪಾಟೀಲ್ ಅವರು ನಿಯಮದ ಪ್ರಕಾರ ತಮ್ಮ ಶಾಸಕ ಸ್ಥಾನಕ್ಕೆ ರಾಜೀನಮಾನೆ ನೀಡಿಲ್ಲ ಎಂದು ಸ್ಪೀಕರ್ ಯು.ಟಿ.ಖಾದರ್ ಅವರು ಸ್ಪಷ್ಟಪಡಿಸಿದರು.ಬಿಜೆಪಿಯಿಂದ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಶಿವಾನಂದ ಅವರಿಗೆ ಹಾಕಿದ್ದ ಸವಾಲಿನಂತೆ, ಶಾಸಕ ಸ್ಥಾನಕ್ಕೆ ರಾಜೀನಾಮೆ ಪತ್ರವನ್ನು ಸ್ಪೀಕರ್ ಅವರಿಗೆ ಸಲ್ಲಿಸಿದ್ದರು.ಈ ಕುರಿತು ವಿಧಾನಸೌಧದಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿರುವ ಖಾದರ್ ಅವರು, ಶಿವನಂದ ಪಾಟೀಲ್ ನನ್ನನ್ನು ಭೇಟಿ ಮಾಡಿದ್ದಾರೆ. ಶಾಸಕ ಸ್ಥಾನಕ್ಕೆ ಯ್ನಾಳ್ ರಾಜೀನಾಮೆ ಕೊಟ್ಟರೆ, ಆಮೇಲೆ ನನ್ನ ರಾಜೀನಾಮೆ ಅಂಗೀಕರಿಸಿ ಎಂದು ಶಿವಾನಂದ ಹೇಳಿದ್ದಾಗಿ ಸ್ಪೀಕರ್ ತಿಳಿಸಿದರು. ಯತ್ನಾಳ್ ವಿರುದ್ಧ ಸ್ಪರ್ಧಿಸಿ ಗೆಲ್ಲುತ್ತೇನೆ ಅಂದಿದ್ದಾರೆ. ನಿಯಮದ ಪ್ರಕಾರ ಅವರು ರಾಜೀನಾಮೆ ನೀಡಿಲ್ಲ.**

**ವಿಜಯಪುರ ನಗರ ಕ್ಷೇತ್ರದ ಶಾಸಕರಾದ ಬಸವನಗೌಡ ಆರ್. ಪಾಟೀಲ್ ಯತ್ನಾಳ್ ಅವರು ತಮ್ಮ ವಿಜಯಪುರ ಮತ ಕ್ಷೇತ್ರದ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿ ನನ್ನ ವಿರುದ್ಧ ಬಸವನ ಬಾಗೇವಾಡಿ ಮತ ಕ್ಷೇತ್ರದಿಂದ ಸ್ಪರ್ಧೆ ಮಾಡುವುದಾಗಿ ಸವಾಲು ಹಾಕಿದ್ದಾರೆ. ನಾನು ಅವರ ಸವಾಲನ್ನು ಸ್ವೀಕರಿಸಿ, ಅವರ ವಿರುದ್ಧ ಚುನಾವಣೆಗೆ ಸ್ಪರ್ಧಿಸಲು ನಿರ್ಧರಿಸಿದ್ದೇನೆ. ಹಾಗಾಗಿ ನಾನು ಪ್ರತಿನಿಧಿಸುತ್ತಿರುವ ಬಸವನ ಬಾಗೇವಾಡಿ ವಿಧಾನಸಭಾ ಕ್ಷೇತ್ರದ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸುತ್ತಿದ್ದೇನೆ.**




ತಿರುವನಂತಪುರಂನಲ್ಲಿ ಪ್ರಧಾನಿ ಮೋದಿ ಅವರು ವಿಳಿಂಜಂ ಅಂತಾರಾಷ್ಟ್ರೀಯ ಬಂದರನ್ನು ರಾಷ್ಟ್ರಕ್ಕೆ ಅರ್ಪಿಸಿದರು.

# ಬಿಜೆಪಿ, ಆರ್.ಎಸ್.ಎಸ್‌ಗೆ ಸಾಮಾಜಿಕ ನ್ಯಾಯದಲ್ಲಿ ನಂಬಿಕೆ ಇಲ್ಲ: ಮುಖ್ಯಮಂತ್ರಿ

**ಬೆಂಗಳೂರು, ಮೇ 2:** ಬಿಜೆಪಿ ಮತ್ತು ಆರ್.ಎಸ್.ಎಸ್‌ಗೆ ಸಾಮಾಜಿಕ ನ್ಯಾಯದಲ್ಲಿ ನಂಬಿಕೆ ಇಲ್ಲ. ಈ ಬಗ್ಗೆ ಅವರಿಗೆ ಬದ್ಧತೆಯೂ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲ್ಲೂಕಿನ ತೂಬಿನಕೆರೆ ಹೆಲಿಫ್ಯಾಡ್ ನಲ್ಲಿ ಮಾಧ್ಯಮದರೊಂದಿಗೆ ಮಾತನಾಡಿದರು. ನೂರು ವರ್ಷಗಳ ಇತಿಹಾಸ ನೋಡಿದರೆ ಅವರು ಯಾವಾಗಲೂ ಸಾಮಾಜಿಕ ನ್ಯಾಯವನ್ನು ವಿರೋಧಿಸುತ್ತಲೇ ಬಂದವರು. ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಮಿಲ್ಲರ್ ಆಯೋಗದಿಂದ ಹಿಡಿದು ಇಂದಿನವರೆಗೆ ವಿರೋಧ ಮಾಡುತ್ತಲೇ ಬಂದಿದ್ದಾರೆ. ಆರ್.ಎಸ್.ಎಸ್. 1925 ರಂದು ಪ್ರಾರಂಭವಾಗಿದ್ದು 2025 ಕ್ಕೆ ನೂರು ವರ್ಷಗಳಾಗುತ್ತಿದೆ. ಅವರು ಮೀಸಲಾತಿಯನ್ನು ಎಂದೂ ಒಪ್ಪಿಲ್ಲ ಎಂದರು.



**ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ ಆಗಬೇಕು:**

ರಾಹುಲ್ ಗಾಂಧಿ ಯವರು ಎರಡು ವರ್ಷಗಳಿಂದ ಈ ಬಗ್ಗೆ ಬಹಳ ಗಂಭೀರವಾಗಿ ಒತ್ತಾಯ ಮಾಡುತ್ತಿದ್ದರು. ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ಕೂಡ ಇದನ್ನು ಸೇರಿಸಲು ಅವರೇ ಕಾರಣಕರ್ತರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪ್ರಧಾನಿ ಮೋದಿಯವರಿಗೆ ಪತ್ರವನ್ನೂ ಬರೆದಿದ್ದರು. ಈ ಎಲ್ಲರ ಹೋರಾಟ ಮತ್ತು ಒತ್ತಡದ ನಂತರ ಜಾತಿಗಣತಿ ಮಾಡುತ್ತೇವೆ ಎಂದು ಕೇಂದ್ರ ಸರ್ಕಾರ ಹೇಳಿದೆ. ಆದರೆ ಯಾವಾಗ ಎಂದು ಸಮಯ ನಿಗದಿ ಮಾಡಿಲ್ಲ. ಜನಗಣತಿಯಲ್ಲಿಯೇ ಜಾತಿ ಗಣತಿಯನ್ನು ಮಾಡುವುದಾಗಿ ಹೇಳಿದ್ದಾರೆ. ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ ಆಗಬೇಕು. ಸಂವಿಧಾನಕ್ಕೆ ತಿದ್ದುಪಡಿ ತಂದು ಮೀಸಲಾತಿಯ ಗರಿಷ್ಠ ಪರಿಮಿತಿಯನ್ನು ಹೆಚ್ಚು ಮಾಡಬೇಕು ಎಂದು ಒತ್ತಾಯಿಸಿದರು. ಸರ್ವೋಚ್ಚ ನ್ಯಾಯಾಲಯದ ವಿಭಾಗೀಯ ಪೀಠವು ಶೇ.50% ಗಿಂತ ಹೆಚ್ಚಬಾರದು ಎಂದು ಹೇಳಿದೆ. ಮೀಸಲಾತಿ 50% ಆದರೆ, ಜನಸಂಖ್ಯೆಯ ಅನುಗುಣವಾಗಿ ಮೀಸಲಾತಿ ನೀಡಬೇಕು ಎಂದರು. ಸಾಮಾಜಿಕ, ಶೈಕ್ಷಣಿಕ, ಆರ್ಥಿಕವಾಗಿ ಹಿಂದುಳಿದವರಿಗೆ ಮೀಸಲಾತಿ ಕೊಡಬೇಕಾಗಿರುವುದು ಅತ್ಯಂತ ಅನಿವಾರ್ಯ ಮತ್ತು ಅಗತ್ಯ. ಸಮ ಸಮಾಜದ ನಿರ್ಮಾಣಕ್ಕೆ ಎಲ್ಲರೂ ಆರ್ಥಿಕವಾಗಿ ಸಾಮಾಜಿಕವಾಗಿ ಸಬಲರಾಗಬೇಕು. ಆಗ ಮಾತ್ರ ಜಾತಿಯನ್ನು ಹೋಗಲಾಡಿಸಲು ಸಾಧ್ಯವಾಗುತ್ತದೆ ಎಂದರು.

ಮೀಸಲಾತಿಯಲ್ಲಿ ಶೇ.50 ರಷ್ಟು ಗರಿಷ್ಠ ಪರಿಮಿತಿಯನ್ನು ತೆಗೆಯಬೇಕು, ಖಾಸಗಿ ಕ್ಷೇತ್ರದಲ್ಲಿಯೂ ಮೀಸಲಾತಿಯನ್ನು ತರಬೇಕೆಂದು ಪ್ರಧಾನಿಗಳನ್ನು ಒತ್ತಾಯಿಸುವುದಾಗಿ ಮುಖ್ಯಮಂತ್ರಿಗಳು ತಿಳಿಸಿದರು. ಸಮೀಕ್ಷೆಯ ಸಮಯವನ್ನು ನಿಗದಿ ಮಾಡಬೇಕು. ನ್ಯಾಯಮೂರ್ತಿ ರೋಹಿಣಿ ಸಮಿತಿಯ ಶಿಫಾರಸುಗಳನ್ನೂ ಜಾರಿಗೊಳಿಸುವ ಜೊತೆಗೆ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆಯನ್ನೂ ಕೈಗೊಳ್ಳಬೇಕು ಎಂದರು.

# ಮುಂದಿನ ವರ್ಷ ಬೆಂಗಳೂರು ಹಬ್ಬ: ಐಫಾ ಪ್ರಶಸ್ತಿ ಸಮಾರಂಭ ಆಯೋಜನೆ: ಡಿಕೆಶಿ

**ಬೆಂಗಳೂರು,ಮೇ 2:** "ಈ ವರ್ಷ ಡಿಸೆಂಬರ್ ಅಥವಾ ಮುಂದಿನ ವರ್ಷ ಜನವರಿಯಲ್ಲಿ ಬೆಂಗಳೂರು ಹಬ್ಬ, ಐಫಾ ಪ್ರಶಸ್ತಿ ಸಮಾರಂಭ ನಡೆಸಲಾಗುವುದು" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.



ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಭಾರತೀಯ ಚಲನಚಿತ್ರ ಅಕಾಡೆಮಿ ವತಿಯಿಂದ ಉತ್ಸವ ಹಾಗೂ ಅಂತಾರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭ ನಡೆಸುವ ಸಂಬಂಧ ಐಫಾಪ್ರತಿನಿಧಿಗಳ ಜತೆ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಸಭೆ ನಡೆಸಿದ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು."ಡಿಸೆಂಬರ್ ಅಥವಾ ಜನವರಿಯಲ್ಲಿ ಬೆಂಗಳೂರು ಹಬ್ಬ ಹಾಗೂ ಐಫಾ ಪ್ರಶಸ್ತಿ ವಿತರಣೆ ಸಮಾರಂಭ ಚರ್ಚೆ ನಡೆಸಲಾಗಿದೆ. ಈ ಬಗ್ಗೆ ಐಫಾದವರ ಜತೆ ಚರ್ಚೆ ನಡೆಸಲಾಯಿತು. ಒಂದಷ್ಟು ಕಾರ್ಯಕ್ರಮಗಳನ್ನು ಸಂಯೋಜಿಸಿ ಬೆಂಗಳೂರಿನಲ್ಲಿ ಒಂದು ವಾರಗಳ ಕಾಲ ಉತ್ತಮ ವಾತಾವರಣ ಸೃಷ್ಟಿ ಮಾಡುವುದು ನಮ್ಮ ಆದ್ಯತೆ. ಜೊತೆಗೆ ಬೆಂಗಳೂರಿನ ಬಗ್ಗೆ ಮಹತ್ವ ನೀಡಬೇಕು ಎನ್ನುವುದು ನಮ್ಮ ಆಲೋಚನೆ" ಎಂದರು."

ಈ ಹಿಂದೆ ರಾಜಸ್ಥಾನದಲ್ಲಿ ನಡೆದಿತ್ತು. ತೆಲಂಗಾಣದಲ್ಲಿ ಸೌಂದರ್ಯ ಸ್ಪರ್ಧೆ ಮಾಡುತ್ತಿದ್ದಾರೆ. ನಾವು ಇದನ್ನು ಮಾಡಲು ಹೋಗುವುದಿಲ್ಲ. ಇತ್ತೀಚಿನ ದಿನಗಳಲ್ಲಿ ಬಾಲಿವುಡ್ ಗಿಂತ ನಮ್ಮ ಸ್ಯಾಂಡಲ್ ವುಡ್ ಎತ್ತರಕ್ಕೆ ಹೋಗಿದೆ. ಇದಕ್ಕೆ ಉತ್ತೇಜನ ಕೊಡಬೇಕು ಎಂಬುದು ನಮ್ಮ ಉದ್ದೇಶ. ಅಕ್ಟೋಬರ್ ನಲ್ಲಿ ದಸರಾವಿರುವ ಕಾರಣಕ್ಕೆ ಡಿಸೆಂಬರ್, ಜನವರಿಯಲ್ಲಿ ನಡೆಸಬಹುದು ಎಂದು ತಿಳಿಸಲಾಗಿದೆ. ಅಂತರರಾಷ್ಟ್ರೀಯ ಮಟ್ಟದಲ್ಲಿ ನಮ್ಮ ಸಂಸ್ಕೃತಿಯನ್ನು ಪರಿಚಯಿಸಲು ಅವಕಾಶ ಸಿಗಲಿದೆ. ಮುಂಬೈ ಬಿಟ್ಟರೆ ಬೆಂಗಳೂರು ಈ ರೀತಿಯ ಕಾರ್ಯಕ್ರಮಗಳಿಗೆ ಸೂಕ್ತ ಎಂದು ಆಯೋಜಕರು ತಿಳಿಸಿದ್ದಾರೆ" ಎಂದು ಹೇಳಿದರು.




ಬಜರಂಗದಳ ಕಾರ್ಯಕರ್ತ ಸುಹಾಸ್ ಶೆಟ್ಟಿ ಹತ್ಯೆಯ ಹಿನ್ನೆಲೆಯಲ್ಲಿ ಶುಕ್ರವಾರ ದಕ್ಷಿಣ ಕನ್ನಡ ಜಿಲ್ಲೆ ಬಂದ್‌ಗೆ ವಿಶ್ವ ಹಿಂದೂ ಪರಿಷತ್ ಕರೆ ನೀಡಿತ್ತು.

# ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣ ಎನ್‌ಐಎಗೆ ಹಸ್ತಾಂತರಿಸಲು ಕೇಂದ್ರ ಸಚಿವ ಅಮಿತ್ ಶಾಗೆ ಸಂಸದ ಚೌಟ ಪತ್ರ

**ಮಂಗಳೂರು,ಮೇ 2:** ಬಜ್ಪೆಯಲ್ಲಿ ನಡೆದ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಬರ್ಬರ ಹತ್ಯೆ ಪ್ರಕರಣವನ್ನು ರಾಜ್ಯ ಸರ್ಕಾರವು ತತ್‌ಕ್ಷಣವೇ ರಾಷ್ಟ್ರೀಯ ತನಿಖಾ ಸಂಸ್ಥೆಗೆ (ಎನ್‌ಐಎ) ವರ್ಗಾಯಿಸಬೇಕೆಂದು ಒತ್ತಾಯಿಸಿ ದಕ್ಷಿಣ ಕನ್ನಡ ಸಂಸದ ಕ್ಯಾ ಬ್ರಿಜೇಶ್ ಚೌಟ ಅವರು ಇಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಪತ್ರ ಬರೆದಿದ್ದಾರೆ.

ಗೃಹ ಸಚಿವವರಿಗೆ ಬರೆದ ಪತ್ರದಲ್ಲಿ ಸಂಸದರು, ಸುಹಾಸ್ ಶೆಟ್ಟಿ ಬರ್ಬರ ಹತ್ಯೆ ಘಟನೆಯಿಂದ ನಾನು ದಿಗ್ಭ್ರಮೆಗೊಂಡಿದ್ದು, ಭೀಕರ ಕೊಲೆ ಕೃತ್ಯದ ಕುರಿತು ತೀವ್ರ ಆತಂಕ ಮತ್ತು ನೋವಿನಿಂದ ಈ ಪತ್ರವನ್ನು ಬರೆಯುತ್ತಿದ್ದೇನೆ. ಈ ಘಟನೆಯು ಕರಾವಳಿ ಕರ್ನಾಟಕ ಪ್ರದೇಶದಲ್ಲಿ ಹೆಚ್ಚುತ್ತಿರುವ ಕಾನೂನುಬಾಹಿರತೆ, ಬಲಗೊಳ್ಳುತ್ತಿರುವ ಇಸ್ಲಾಮಿಕ್ ಮೂಲಭೂತವಾದ ಮತ್ತು ರಾಷ್ಟ್ರ ವಿರೋಧಿ ಶಕ್ತಿಗಳ ಅಟ್ಟಹಾಸಕ್ಕೆ ಸ್ಪಷ್ಟ ನಿದರ್ಶನವಾಗಿದೆ. ಸುಹಾಸ್ ಶೆಟ್ಟಿ ಹತ್ಯೆಯು ಕರಾವಳಿ ಮಾತ್ರವಲ್ಲ ಇಡೀ ರಾಜ್ಯದ ಜನರನ್ನೇ ಬೆಚ್ಚಿ ಬೀಳುವಂತೆ ಮಾಡಿದೆ ಎಂದು ಕ್ಯಾಪ್ಟನ್ ಬ್ರಿಜೇಶ್ ಚೌಟ ಅವರು ಕಳವಳ ವ್ಯಕ್ತಪಡಿಸಿದ್ದಾರೆ.



ಈ ಹಿಂದೆಯೂ ಇದೇ ರೀತಿಯಲ್ಲಿ ಬಿಜೆಪಿ ಕಾರ್ಯಕರ್ತರಾದ ಸುಳ್ಯದ ಪ್ರವೀಣ್ ನೆಟ್ಟಾರು ಅವರ ಹತ್ಯೆಯನ್ನು ನಿಷೇಧಿತ ಪಿಎಫ್‌ಐ ಸಂಘಟನೆ ಕಾರ್ಯಕರ್ತರು ನಡೆಸಿದ್ದರು. ಈ ಸಂಘಟನೆಯನ್ನು ನಮ್ಮ ಪ್ರಧಾನ ಮಂತ್ರಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಈಗಾಗಲೇ ನಿಷೇಧಿಸಿದೆ. ಇಷ್ಟಾಗಿಯೂ ಈಗ ಪ್ರವೀಣ್ ಮಾದರಿಯಲ್ಲೇ ಮತ್ತೊಬ್ಬ ಹಿಂದೂ ಯುವಕ ತನ್ನ ಕಳೆದುಕೊಂಡಿರುವ ಅತ್ಯಂತ ನೋವಿನ ವಿಚಾರ. ಈ ರೀತಿಯ ಹತ್ಯೆಯು ಈ ಪ್ರದೇಶದಲ್ಲಿ ಪಿಎಫ್‌ಐ ನಂತಹ ಮೂಲಭೂತವಾದಿ ಸಂಘಟನೆಗಳು ಇನ್ನೂ ಸ್ಲೀಪರ್ ಸೆಲ್ನಂತೆ ಜೀವಂತವಾಗಿರುವುದನ್ನು ಸ್ಪಷ್ಟಪಡಿಸುತ್ತದೆ. ತಮ್ಮ ಮಗನನ್ನು ಕಳೆದುಕೊಂಡಿರುವ ಸುಹಾಸ್ ಶೆಟ್ಟಿ ಅವರ ಕುಟುಂಬವು ದಿಗ್ಭ್ರಾಂತಗೊಂಡು ನ್ಯಾಯಕ್ಕಾಗಿ ಕಾಯುತ್ತಿದೆ. ಈ ಭಾಗದ ಚುನಾಯಿತ ಪ್ರತಿನಿಧಿಯಾಗಿ ಮತ್ತು ಇಲ್ಲಿನ ನೋವು ಹಾಗೂ ಹತಾಶೆಯನ್ನು ವೈಯಕ್ತಿಕವಾಗಿ ಕಂಡಿರುವ ವ್ಯಕ್ತಿಯಾಗಿ, ಈ ಪ್ರಕರಣದ ಸಮಗ್ರ ಮತ್ತು ನಿಷ್ಪಕ್ಷಪಾತ ತನಿಖೆಯನ್ನು ಈ ಕೂಡಲೇ ಎನ್‌ಐಎಗೆ ಹಸ್ತಾಂತರಿಸಬೇಕೆಂದು ಕ್ಯಾ. ಚೌಟ ಅವರು ತಮ್ಮ ಪತ್ರದಲ್ಲಿ ಒತ್ತಾಯಿಸಿದ್ದಾರೆ.

ಈ ಭೀಕರ ಘಟನೆಯಲ್ಲಿ ನಿಷೇಧಿತ ಪಿಎಫ್‌ಐ ಸಂಘಟನೆಯ ಕಾರ್ಯಕರ್ತರ ಕೈವಾಡದ ಸಾಧ್ಯತೆ ಇರುವುದರಿಂದ ಈ ಕುರಿತು ಕಠಿಣ ಕಾನೂನು ಕ್ರಮ ತೆಗೆದುಕೊಳ್ಳಬೇಕಾಗಿರುವುದು ಅತ್ಯಗತ್ಯ. ದಕ್ಷಿಣ ಕನ್ನಡ ಮಾತ್ರವಲ್ಲ ಈ ದೇಶದ ಯಾವುದೇ ಭಾಗದಲ್ಲಿ ಮೂಲಭೂತವಾದಿ, ರಾಷ್ಟ್ರ ವಿರೋಧಿ ಮತ್ತು ಜಿಹಾದಿ ಮಾನಸಿಕತೆಯ ಶಕ್ತಿಗಳು ಬೆಳೆಯಲು ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು. ಈ ಕೊಲೆ ಕೃತ್ಯದ ಹಿಂದಿರುವ ಸಮಾಜ ಘಾತುಕ ಸಂಘಟನೆಗಳು, ಹತ್ಯೆ ಹಿಂದಿನ ಒಳಸಂಚು, ಇದರಲ್ಲಿ ಭಾಗಿಯಾದವರು ಹಾಗೂ ಕುಮ್ಮಕ್ಕು ನೀಡಿರುವ ದುಷ್ಟಶಕ್ತಿಯನ್ನು ಬುಡ ಸಮೇತ ಕಿತ್ತು ಹಾಕಬೇಕು. ಆ ಮೂಲಕ ಕಾನೂನಿಲ್ಲಿ ಇರುವ ಜನರ ವಿಶ್ವಾಸವನ್ನು ಮರುಸ್ಥಾಪಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ. ಸುಹಾಸ್ ಶೆಟ್ಟಿ ಅವರ ಹತ್ಯೆ ವಿಚಾರವಾಗಿ ಕೇಂದ್ರ ಗೃಹ ಸಚಿವರಾದ ಅಮಿತ್ ಶಾ ಅವರು ಮಧ್ಯಪ್ರವೇಶಿಸಿ, ಕೇವಲ ಅಪರಾಧಿಗಳು ಮಾತ್ರವಲ್ಲದೆ ಅವರಿಗೆ

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಭೀಕರ ಕೊಲೆ: ಮಂಗಳೂರು ಸುತ್ತಮುತ್ತ ಉದ್ವಿಗ್ನ

**ಬೆಂಗಳೂರು, ಮೇ.2:** ಹಿಂದೂ ಕಾರ್ಯಕರ್ತ, ರೌಡಿಶೀಟರ್ ಸುಹಾಸ್ ಶೆಟ್ಟಿ ಭೀಕರ ಕೊಲೆ ಹಿನ್ನೆಲೆಯಲ್ಲಿ ಮಂಗಳೂರು ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಉದ್ವಿಗ್ನ ಪರಿಸ್ಥಿತಿ ಉಂಟಾಗಿದ್ದು, ಇಡೀ ಮಂಗಳೂರು ಪ್ರಕ್ಷುಬ್ಧವಾಗಿದ್ದು, ಬೂದಿ ಮುಚ್ಚಿದ ಕೆಂಡದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಕೊಲೆ ಖಂಡಿಸಿ ಕರೆ ನೀಡಲಾಗಿರುವ ಮಂಗಳೂರು ಬಂದ್‌ಗೂ ಉತ್ತಮ ಸ್ಪಂದನೆ ವ್ಯಕ್ತವಾಗಿತ್ತು, ಅಂಗಡಿ ಮುಂಗಟ್ಟುಗಳು ಬಾಗಿಲು ಹಾಕಿದ್ದು, ಬಸ್ ಸೇರಿದಂತೆ ವಾಹನ ಸಂಚಾರ ಸಂಪೂರ್ಣ ಸ್ಥಗಿತಗೊಂಡಿದ್ದು, ಇಡೀ ಮಂಗಳೂರು ಸ್ತಬ್ಧಗೊಂಡಿದೆ. ವಾಹನಗಳ ಮೇಲೆ ಕಲ್ಲು ತೂರಾಟಗಳು ನಡೆದಿದ್ದು, ಕೆಲ ಬಸ್ಗಳು ಜಖಂಗೊಂಡಿವೆ. ಮಂಗಳೂರಿನಲ್ಲಿ ಪರಿಸ್ಥಿತಿಯನ್ನು ನಿಯಂತ್ರಿಸಲು ಇಂದಿನಿಂದ ಮೇ 6ರವರೆಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಸುಹಾಸ್ ಶೆಟ್ಟಿ ಕೊಲೆ





ಖಂಡಿಸಿ ಇಂದು ದಕ್ಷಿಣ ಕನ್ನಡ ಜಿಲ್ಲೆ ಬಂದ್ಗೆ ಹಿಂದೂಪರ ಸಂಘಟನೆಗಳು ಕರೆ ನೀಡಿದ್ದು, ರಸ್ತೆಗಿಳಿದ ಖಾಸಗಿ ಬಸ್ಸುಗಳು ಕಲ್ಲು ತೂರಾಟ ನಡೆಸಲಾಗಿದ್ದು ಏಳೆಂಟು ವಾಹನಗಳಿಗೆ ಹಾನಿಯುಂಟಾಗಿದೆ. ಕಳೆದ 2022ರಲ್ಲಿ ಸುರತ್ಕಲ್‌ನಲ್ಲಿ ನಡೆದ ಫಾಜಿಲ್ ಕೊಲೆ ಪ್ರಕರಣದ ಪ್ರಮುಖ ಆರೋಪಿ ಸುಹಾಸ್ ಶೆಟ್ಟಿಯನ್ನು ನಿನ್ನೆ ರಾತ್ರಿ 8.27ರ ಸುಮಾರಿಗೆ ಬಜಪೆ ಕಿನ್ನಿಪದವು ಎಂಬಲ್ಲಿ ಬರ್ಬರವಾಗಿ ಕೊಚ್ಚಿ ಕೊಲೆ ಮಾಡಲಾಗಿದೆ. ಹಿಂದೂ ಕಾರ್ಯಕರ್ತನ ಹತ್ಯೆ ಖಂಡಿಸಿ ವಿಶ್ವ ಹಿಂದೂ ಪರಿಷತ್ ದಕ್ಷಿಣ ಕನ್ನಡ ಬಂದ್ಗೆ ಕರೆ ನೀಡಿದೆ. ರಸ್ತೆಗಿಳಿದ ಖಾಸಗಿ ಬಸ್ ಮೇಲೆ ಉದ್ರಿಕ್ತ ಗುಂಪಿನಿಂದ ಕಲ್ಲು ತೂರಾಟ ನಡೆದಿದೆ. ಮಂಗಳೂರಿನ ಹಂಪನಕಟ್ಟೆ ಬಳಿಯ ಬಸ್ಸಿಗೆ ಉದ್ರಿಕ್ತ ಗುಂಪಿನಿಂದ ಕಿಡಿಗೇಡಿಗಳು ಕಲ್ಲು

**ಮೂರು ವಾಹನಗಳು ಜಪ್ತಿ:**

ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಮೂರು ವಾಹನಗಳನ್ನು ವಶಕ್ಕೆ ಪಡೆದಿದ್ದಾರೆ. ಸುಹಾಸ್ ಶೆಟ್ಟಿ ಅವರ ಇನೋವಾ ಕಾರು, ಆರೋಪಿಗಳು ಕೃತ್ಯಕ್ಕೆ ಬಳಸಿದ ಸ್ವಿಫ್ಟ್ ಕಾರು ಹಾಗೂ ಮೀನು ಸಾಗಾಟದ ವಾಹನಗಳನ್ನು ವಶಪಡಿಸಿಕೊಂಡಿದ್ದಾರೆ. ಆರೋಪಿಗಳು ಬಳಸಿದ ಸ್ವಿಫ್ಟ್ ಕಾರಿನಲ್ಲಿ ಮಾರಕಾಸ್ತ್ರಗಳು ಪತ್ತೆಯಾಗಿವೆ. ಬಂದ್ ಕರೆ ನೀಡಿರುವ ಹಿನ್ನೆಲೆಯಲ್ಲಿ ಮಂಗಳೂರು ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ ಮೇ 6ರ ಮುಂಜಾನೆ 6 ಗಂಟೆವರೆಗೆ ನಾಲ್ಕು ದಿನಗಳ ಕಾಲ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ಸೂಕ್ಷ್ಮ ಪ್ರದೇಶದಲ್ಲಿ ರಾತ್ರಿ ಇಡೀ ಗಸ್ತು ತಿರುಗಲು ಹಿರಿಯ ಅಧಿಕಾರಿಗಳು ಸೂಚನೆ ನೀಡಿದ್ದು, ಮಂಗಳೂರು ನಗರಕ್ಕೆ ಹೆಚ್ಚಿನ ಪೊಲೀಸರ ನಿಯೋಜನೆ ಮಾಡಲಾಗಿದೆ.

**ಪ್ರತೀಕಾರದ ಎಚ್ಚರಿಕೆ:**

ಸುಹಾಸ್ ಶೆಟ್ಟಿಯನ್ನು ಕೊಲೆಗೈದ ತನಿಖೆಯ ವೇಳೆ ಕೊಲೆ ಕೇಸ್‌ಗೆ ಸಂಬಂಧಿಸಿದ ಕೆಲವು ಸ್ಫೋಟಕ ವಿಚಾರಗಳು ಬಯಲಾಗುತ್ತಿವೆ. ದುಷ್ಕರ್ಮಿಗಳು ಸೋಶಿಯಲ್ ಮೀಡಿಯಾದಲ್ಲೇ ಸುಹಾಸ್ ಶೆಟ್ಟಿಗೆ ಪ್ರತೀಕಾರದ ಎಚ್ಚರಿಕೆ ಕೊಟ್ಟಿದ್ದರು ಎಂದು ಗೊತ್ತಾಗಿದೆ.

ಕಳೆದ ಮಾರ್ಚ್ 31 ರಂದು ಸುಹಾಸ್ ಶೆಟ್ಟಿ ಕೊಲೆಗೆ ಸ್ಕೆಚ್ ಹಾಕಲಾಗಿತ್ತು. ಮಾರ್ಚ್ ಅಂತ್ಯದಲ್ಲೇ ಸುಹಾಸ್ ಶೆಟ್ಟಿಯ ತಲೆ ಉರುಳಿಸಲು ಹಂತಕರು ಸಂಚು ರೂಪಿಸಿದ್ದರು. ಹಂತಕರು ಸುಹಾಸ್ ಫೋಟೋ ಸಹಿತ ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಹಾಕಿ ಟಾರ್ಗೆಟ್ ಫಿಕ್ಸ್ ಮಾಡಿದ್ದರಲ್ಲದೆ, ಅದನ್ನು ಸ್ವತಃ ಸುಹಾಸ್‌ಗೆ ಟ್ಯಾಗ್ ಮಾಡಿದ್ದರು. ಆ ಟ್ಯಾಗ್ ಮಾಡಿದ ವಿಡಿಯೋವನ್ನು ಸುಹಾಸ್ ಶೆಟ್ಟಿ ಡೌನ್ ಲೋಡ್ ಮಾಡಿಕೊಂಡಿದ್ದ ಎನ್ನಲಾಗಿದೆ.

**ಇನ್‌ಸ್ಟಾಗ್ರಾಂ ಪೇಜ್:**

ಟಾರ್ಗೆಟ್ ಕಿಲ್ಲರ್ ಹೆಸರಿನ ಇನ್‌ಸ್ಟಾಗ್ರಾಂ ಪೇಜ್ ಕೂಡ ರಚಿಸಿದ್ದ ದುಷ್ಕರ್ಮಿಗಳು, ಸುಹಾಸ್‌ಗೆ ಟಾರ್ಗೆಟ್ ಫಿಕ್ಸ್ ಮಾಡಿರುವುದಾಗಿಯೂ ಹೇಳಿದ್ದರು. 2022ರ ಜುಲೈ 28ರಂದು ಹತ್ಯೆಯಾದ ಸುರತ್ಕಲ್ನ ಫಾಜೀಲ್ನ ಫೋಟೋ ಜೊತೆಗೆ ಸುಹಾಸ್ನ ಫೋಟೋ ಹಾಕಿ ರಿವೇಂಜ್ ಸೂನ್ ಎಂದು ಪೋಸ್ಟ್ ಮಾಡಿದ್ದರು. ಮಂಗಳೂರಿನಲ್ಲಿ ನಡೆದ ಬಶೀರ್ ಹತ್ಯೆ ಆರೋಪಿಯ ಪ್ರತೀಕಾರದ ಬಗ್ಗೆಯೂ ಪೋಸ್ಟ್ ಮಾಡಿದ್ದರು. 2018ರ ಜನವರಿ 3ರಂದು ನಡೆದಿದ್ದ ಬಶೀರ್ ಹತ್ಯೆ ಪ್ರಕರಣದಲ್ಲಿ ಬಶೀರ್ ಹತ್ಯೆ ಆರೋಪಿ ಶ್ರೀಜಿತ್ ಫೋಟೋ ಕೂಡ ಬಳಸಿ ರಿವೇಂಜ್ ಸೂನ್ ಎಂದು ಪೋಸ್ಟ್ ಮಾಡಿದ್ದರು. ಫಾಜಿಲ್ ಹತ್ಯೆಗೆ ಪ್ರತೀಕಾರವಾಗಿ ಹಂತಕರು ಸುಹಾಸ್ ಕೊಲೆ ಮಾಡಿದ್ದಾರೆ ಎಂದು ತಿಳಿದುಬಂದಿದೆ.

## 35ಕಿಮೀ ಸುಹಾಸ್ ಶೆಟ್ಟಿ ಪಾರ್ಥಿವ ಶರೀರ ಮೆರವಣಿಗೆ

ದುಷ್ಕರ್ಮಿಗಳಿಂದ ಭೀಕರ ಕೊಲೆಯಾದ ಹಿಂದೂ ಕಾರ್ಯಕರ್ತ, ರೌಡಿಶೀಟರ್ ಸುಹಾಸ್ ಶೆಟ್ಟಿ ಪಾರ್ಥಿವ ಶರೀರವು ಮೆರವಣಿಗೆ ಮೂಲಕ ಬಂಟ್ವಾಳ ತಾಲೂಕಿನ ಕಾರಿಂಜಕ್ಕೆ ತೆರಳಿತು. ಬೆಳಗ್ಗೆಯೇ ಬಿಜೆಪಿ ಶಾಸಕರು, ಆರ್‌ಎಸ್‌ಎಸ್ ಮುಖಂಡ ಕಲ್ಲಡ್ಕ ಪ್ರಭಾಕರ ಭಟ್, ಹಿಂದೂ ಮುಖಂಡ ಪುನೀತ್ ಕೆರೆಹಳ್ಳಿ, ಬಜರಂಗದಳದ ಮುಖಂಡರು ಸೇರಿದಂತೆ ನೂರಾರು ಕಾರ್ಯಕರ್ತರು ಆಸ್ಪತ್ರೆಯ ಶವಗಾರದ ಮುಂದೆ ಜಮಾಯಿಸಿದ್ದರು. ಆಸ್ಪತ್ರೆಯ ಆವರಣದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು. ಬೆಳಗ್ಗೆ 9.30ರ ಸುಮಾರಿಗೆ ಮೃತದೇಹದ ಪಾರ್ಥಿವ ಶರೀರ ಕಾರಿಂಜದತ್ತ ಮೆರವಣಿಗೆಯಲ್ಲಿ ಸಾಗಿದೆ. ಮಂಗಳೂರಿನಿಂದ ಸುಮಾರು 35ಕಿ.ಮೀ. ದೂರವಿರುವ ಕಾರಿಂಜಕ್ಕೆ ಪಾರ್ಥಿವ ಶರೀರವು ತೆರೆದ ವಾಹನದಲ್ಲಿ ಸಾಗಿತು. ದಾರಿ ಉದ್ದಕ್ಕೂ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು, ಯಾವುದೇಅಹಿತಕರ ಘಟನೆಗಳು



ನಡೆಯದಂತೆ ಪೊಲೀಸ್ ಮುನ್ನೆಚ್ಚರಿಕೆ ವಹಿಸಲಾಗಿತ್ತು. ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ, ಕಾರಿಂಜದಲ್ಲಿರುವ ಸುಹಾಸ್ ಶೆಟ್ಟಿ ಮನೆಗೆ ಭೇಟಿ ನೀಡಿ, ಮೃತದೇಹದ ಅಂತಿಮ ದರ್ಶನ ಪಡೆದರು.

ಹತ್ಯೆಯಾಗಿರುವ ಹಿಂದುತ್ವಪರ ಕಾರ್ಯಕರ್ತ, ರೌಡಿ ಶೀಟರ್ ಸುಹಾಸ್ ಶೆಟ್ಟಿ ಮನೆಗೆ ಶಾಸಕ ರಾಜೇಶ್ ನಾಯ್ಕ್, ಉಮಾನಾಥ ಕೋಟ್ಯಾನ್, ವೇದವ್ಯಾಸ ಕಾಮತ್, ಆರ್‌ಎಸ್‌ಎಸ್ ಮುಖಂಡ ಡಾ. ಕಲ್ಲಡ್ಕ ಪ್ರಭಾಕರ ಭಟ್, ಹಿಂದುತ್ವವಾದಿ ಮುಖಂಡ ಅರುಣ್ ಪುತ್ತಿಲ ಭೇಟಿ ನೀಡಿ ಅವರ ತಾಯಿಗೆ ಸಾಂತ್ವನ ಹೇಳಿದರು.ವಿಶ್ವಹಿಂದೂ ಪರಿಷತ್ ಮುಖಂಡ ಮಿಲಿಂದ್ ಪರಾಂಡೆ, ದಕ್ಷಿಣ ಪ್ರಾಂತ ಕಾರ್ಯವಾಹ ಶರಣ್ ಪಂಪ್‌ವೆಲ್ಮಾಜಿ ಶಾಸಕ ಸಂಜೀವ ಮಠಂದೂರು ಮತ್ತಿತರರು ಇದ್ದರು. ಸುಹಾಸ್ ಶೆಟ್ಟಿ ಮನೆಯ ಬಳಿ ಸಾಕಷ್ಟು ಜನರು ಸೇರಿದ್ದಾರೆ.

## ಸುಹಾಸ್ ಶೆಟ್ಟಿ ನಿವಾಸಕ್ಕೆ ಬಿ.ವೈ.ವಿಜಯೇಂದ್ರ ಭೇಟಿ

ಮೃತ ಸುಹಾಸ್ ಶೆಟ್ಟಿ ನಿವಾಸಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭೇಟಿ ನೀಡಿ ಪಕ್ಷದ ಪರವಾಗಿ 25 ಲಕ್ಷ ಪರಿಹಾರ ನೀಡುತ್ತೇವೆ ಎಂದು ಘೋಷಿಸಿದರು. ಬಿಜೆಪಿ ಈ ಘಟನೆಯನ್ನು ಬಹಳ ಗಂಭೀರವಾಗಿ ತೆಗೆದುಕೊಂಡಿದೆ. ರಾಜ್ಯದಲ್ಲಿ ಹಿಂದೂ ಕಾರ್ಯಕರ್ತರಿಗೆ ರಕ್ಷಣೆ ಇಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಜೀವಕ್ಕೆ ರಕ್ಷಣೆ ನೀಡದಿರುವುದು ಪೊಲೀಸರ ವೈಫಲ್ಯ. ಕಾಂಗ್ರೆಸ್ ಸರ್ಕಾರದ ಮೇಲೆ ವಿಶ್ವಾಸ ಇಲ್ಲದಂತಾಗಿದೆ.



ಮುಖಂಡರು ಕಾರ್ಯಕರ್ತರು ಸುಹಾಸ್ ಕುಟುಂಬದ ಜೊತೆಗೆ ಇದ್ದೇವೆ. ಘಟನೆಗೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ಗೃಹ ಸಚಿವ ಜಿ.ಪರಮೇಶ್ವರ್ ಘಟನೆಯ ಗಂಭೀರತೆ ಅರ್ಥಮಾಡಿಕೊಳ್ಳಬೇಕು.

ಸರ್ಕಾರಕ್ಕೆ ಮನುಷತ್ವ ಇದ್ದರೆ ಕುಟುಂಬಕ್ಕೆ ಪರಿಹಾರ ನೀಡಬೇಕು. ಕೊಲೆಯಾದ ಸುಹಾಸ ಶೆಟ್ಟಿ ಕುಟುಂಬಕ್ಕೆ ಪರಿಹಾರ ನೀಡಬೇಕು. ಸುಹಾಸ ಶೆಟ್ಟಿ ಕೊಲೆ NIA ತನಿಖೆಗೆ ವಹಿಸಬೇಕು ಎಂದು ಆಗ್ರಹಿಸಿದರು.

**ಕೊಲೆಗಾರರ ಸುಳಿವು ಪತ್ತೆ**

ಘಟನೆ ಬೆನ್ನಲ್ಲೇ ಎಡಿಜಿಪಿ ಹಿತೇಂದ್ರ ಅವರು ನಗರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಸುದ್ದಿಗಾರರೊಂದಿಗೆ ಮಾಡಿ ಕೊಲೆ ಆರೋಪಿಗಳ ಸುಳಿವು ಸಿಕ್ಕಿದೆ. ತಪ್ಪಿತಸ್ಥರ ವಿರುದ್ಧ ಮುಲಾಜಿಲ್ಲದೆ ಕ್ರಮ ಕೈಗೊಳ್ಳುತ್ತೇವೆ ಎಂದಿದ್ದಾರೆ. ಮೃತ ಸುಹಾಸ್ ಈ ಹಿಂದೆ ಬಜರಂಗದಳದ ಕಾರ್ಯಕರ್ತರಾಗಿದ್ದರು ಮತ್ತು ಅವರ ವಿರುದ್ಧ ಹಲವು ಕೊಲೆ ಪ್ರಯತ್ನದ ಪ್ರಕರಣಗಳು ದಾಖಲಾಗಿದ್ದವು ಎಂದು ಹೇಳಿದರು.

## ಇದೊಂದು ಘೋರ ಹತ್ಯೆ

### ದಿನೇಶ್ ಗುಂಡೂರಾವ್ ವಿಷಾದ

**ಬೆಂಗಳೂರು, ಮೇ 2:** ಮಂಗಳೂರಿನಲ್ಲಿ ನಡೆದ ದ್ವೇಷ ಹತ್ಯೆಯ ಹಿಂದೆ ಯಾರೇ ಇದ್ದರು ತನಿಖೆ ನಡೆಸಿ ಕಠಿಣ ಕ್ರಮ ಜರುಗಿಸುವುದಾಗಿ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಇಂದು ಸಿಎಂ ಭೇಟಿ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಸಚಿವರು, ಸುಹಾಸ್ ಶೆಟ್ಟಿಯನ್ನು ಘೋರವಾಗಿ ಹತ್ಯೆ ಮಾಡಲಾಗಿದ್ದು, ಇದೊಂದು ದುರ್ಘಟನೆ ಎಂದು ವಿಷಾದ ವ್ಯಕ್ತಪಡಿಸಿದರು.



ಮಂಗಳೂರಿನಲ್ಲಿ ಇತ್ತೀಚೆಗೆ ನಡೆದ ಹತ್ಯೆಗಳ ಹಿನ್ನೆಲೆಯಲ್ಲಿ ಪೊಲೀಸರು ಕೈಗೊಂಡಿರುವ ಕ್ರಮಗಳ ಕುರಿತಂತೆ ಬೆಂಗಳೂರಿನಲ್ಲಿ ಇಂದು ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಸಚಿವ ದಿನೇಶ್ ಗುಂಡೂರಾವ್ ಚರ್ಚೆ ನಡೆಸಿದರು. ಮಂಗಳೂರಿನಲ್ಲಿ ದ್ವೇಷ ಹತ್ಯೆಗಳು ನಡೆಯುತ್ತಿರುವುದು ಖಂಡನೀಯ. ಈ ರೀತಿಯ ಹತ್ಯೆಗಳನ್ನ ನಿಯಂತ್ರಣಕ್ಕೆ ತರಲು ಎಲ್ಲಾ ಸಂಘಟನೆಗಳು, ಪಕ್ಷಗಳು ಸೇರಿ ಸಹಕರ ಅಗತ್ಯವಾಗಿದೆ ಎಂದರು. ಅಶ್ರಫ್ ಎಂಬ ವ್ಯಕ್ತಿ ಹತ್ಯೆ ಹಿಂದೆಯೇ ಸುಹಾಸ್ ಶೆಟ್ಟಿಯವರ ಈ ಕೊಲೆ ಆಗಿದೆ. ಸುಹಾಸ್ ಕೂಡಾ ರೌಡಿ ಶೀಟರ್ ಆಗಿದ್ದರು. ಆದರೆ ಈ ರೀತಿಯ ಕೊಲೆ ಆಗಬಾರದು. ನಮಗೆ ಎಲ್ಲರೂ ಒಂದೇ. ಜಾತಿ ಧರ್ಮಯಾವುದೇ ಇರಲಿ. ಈ ರೀತಿಯ ಕೊಲೆಗಳು ಮರುಕಳಿಸಬಾರದು. ಇದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಹತ್ಯೆಯ ಹಿಂದೆ ಯಾರೇ ಇದ್ದರೂ ತನಿಖೆ ನಡೆಸಿ ಶಿಕ್ಷೆ ಕೊಡಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವುದಾಗಿ ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ಮಂಗಳೂರಿನಲ್ಲಿ ಬಹಳ ಗಂಭೀರವಾಗಿ ಭಯದ ವಾತಾವರಣ ಇದೆ. ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಕ್ರಮಗಳನ್ನ ತೆಗೆದುಕೊಳ್ಳಲು ಸೂಚನೆ ನೀಡಲಾಗಿದೆ. ಬಿಜೆಪಿ ನಾಯಕರು ಅಂತ್ಯಕ್ರಿಯೆ ಯಲ್ಲಿ ಭಾಗವಹಿಸಲು ಸ್ವತಂತ್ರರು. ಬಿಜೆಪಿ ನಾಯಕರು. ತನಿಖೆಯಾದ ಬಳಿಕ ಕಾರಣ ಗೊತ್ತಾಗಲಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

## ಪಾಕಿಸ್ತಾನ ಜಿಂದಾಬಾದ್ ಎಂದಾಗಲೇ ಕ್ರಮ ಕೈಗೊಂಡಿದ್ದರೆ ಇಂತಹ ಕೃತ್ಯ ನಡೆಯುತ್ತಿರಲಿಲ್ಲ: ಅಶೋಕ್

**ಬೆಂಗಳೂರು, ಮೇ 2:** ಪಾಕಿಸ್ತಾನ ಜಿಂದಾಬಾದ್ ಎಂದು ಘೋಷಣೆ ಕೂಗಿದಾಗಲೇ ಕಾಂಗ್ರೆಸ್ ಸರ್ಕಾರ ಕಠಿಣ ಕ್ರಮ ವಹಿಸಿದ್ದರೆ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿಯ ಹತ್ಯೆ ಆಗುತ್ತಿರಲಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ರೋಶ ವ್ಯಕ್ತಪಡಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿಯ ಕೊಲೆಯ ಮೂಲಕ ಮಂಗಳೂರಿನಲ್ಲಿ ಉದ್ವಿಗ್ನ ಸ್ಥಿತಿ ನಿರ್ಮಾಣವಾಗಿದೆ. ಮಂಗಳೂರು ಬಂದ್ ಮಾಡಲಾಗಿದೆ. ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ 2013 ರಲ್ಲಿ ಅಧಿಕಾರದಲ್ಲಿದ್ದಾಗ 36 ಹಿಂದೂ ಕಾರ್ಯಕರ್ತರ ಹತ್ಯೆಯಾಗಿತ್ತು. ಪಾಪ್ಯುಲರ್ ಫ್ರಂಟ್ ಮೊದಲಾದ ಸಂಘಟನೆಗಳು ಇಂತಹ ಕೃತ್ಯಗಳನ್ನು ಮಾಡಿವೆ. ಪಾಕಿಸ್ತಾನ ಜಿಂದಾಬಾದ್ ಎಂದಾಗಲೇ ಕಠಿಣ ಕ್ರಮ ಕೈಗೊಂಡಿದ್ದರೆ ಇಂತಹ ಕೃತ್ಯ ನಡೆಯುತ್ತಿರಲಿಲ್ಲ ಎಂದರು. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಕೂಡಲೇ ಪಾಕಿಸ್ತಾನ ಜಿಂದಾಬಾದ್ ಎಂದು ಘೋಷಣೆ ಕೂಗಲಾಗುತ್ತದೆ. ಪಾಕಿಸ್ತಾನಕ್ಕೆ ಅಪಮಾನ ಮಾಡಲು ಧ್ವಜವನ್ನು ರಸ್ತೆಗೆ ಅಂಟಿಸಿದರೆ ಅದನ್ನು ಮಹಿಳೆಯರು ಎತ್ತಿಕೊಂಡು ಹೋಗುತ್ತಾರೆ. ಅಮಾಯಕ



ಹಿಂದೂ ಕಾರ್ಯಕರ್ತರ ಬಳಿ ಯಾವುದೇ ಆಯುಧ ಇಲ್ಲವೆಂದು ತಿಳಿದು ದಾಳಿ ಮಾಡಲಾಗುತ್ತಿದೆ ಎಂದರು. ಸಿಎಂ ಸಿದ್ದರಾಮಯ್ಯ ಯುದ್ಧ ಬೇಡ ಎನ್ನುತ್ತಾರೆ. ಪಾಕಿಸ್ತಾನ ಜಿಂದಾಬಾದ್ ಎಂದು ಕೂಗುವ ದೇಶದ್ರೋಹಿಗಳ ವಿರುದ್ಧ ಕ್ರಮ ಕೈಗೊಳ್ಳುವುದಿಲ್ಲ. ಇಂತಹ ದೇಶದ್ರೋಹಿಗಳನ್ನು ಗುಂಡಿಕ್ಕುವ ಕಾನೂನು ಬಂದರೆ ಮಾತ್ರ ದೇಶ ಸುರಕ್ಷಿತವಾಗಿರುತ್ತದೆ. ಇನ್ನೆಷ್ಟು ಹಿಂದೂ ಕಾರ್ಯಕರ್ತರ ಬಲಿಯಾಗಲಿ ಎಂದು ಸಿಎಂ ಸಿದ್ದರಾಮಯ್ಯ ಬಯಸುತ್ತಾರೋ ಗೊತ್ತಿಲ್ಲ. ಲವ್ ಜಿಹಾದ್ ಆದಾಗ, ಪಾಕಿಸ್ತಾನ ಜಿಂದಾಬಾದ್ ಎಂದಾಗಲೇ ಕಠಿಣ ಕ್ರಮ ಕೈಗೊಂಡಿದ್ದರೆ ಇಂತಹ ಘಟನೆ ನಡೆಯುತ್ತಿರಲಿಲ್ಲ. ಕಾನೂನು ಸುವ್ಯವಸ್ಥೆ ಹದಗೆಟ್ಟಿರುವುದರ ಬಗ್ಗೆ ಸರ್ಕಾರಕ್ಕೆ ಎಚ್ಚರಿಕೆ ನೀಡಲಿದ್ದೇವೆ ಎಂದರು. ಸುಹಾಸ್ ಎಲ್ಲೆಲ್ಲಿ ಓಡಾಡುತ್ತಾನೆ, ಆತನ ಬಳಿ ಆಯುಧ ಇಲ್ಲವೆಂದು ತಿಳಿದಿದ್ದು ಹೇಗೆ? ಈ ವಿಚಾರದಲ್ಲಿ ಪೊಲೀಸ್ ಇಲಾಖೆಯಿಂದಲೇ ಮಾಹಿತಿ ಸೋರಿಕೆ ಯಾಗಿರುವ ಅನುಮಾನವಿದೆ. ಇಂತಹ ಘಟನೆ ನಡೆದಾಗ ಸಿಎಂ ಸಿದ್ದರಾಮಯ್ಯ ಸಬೂಬು ಹೇಳುವ ನಡೆ ತೋರುತ್ತಾರೆ. ಸಚಿವ ದಿನೇಶ್ ಗುಂಡೂರಾವ್ ಅವರಿಗೆ ಪಾಕಿಸ್ತಾನ ಜಿಂದಾಬಾದ್ ಎಂದರೂ ಏನೂ ಅನ್ನಿಸುವುದಿಲ್ಲ. ಅವರದ್ದು ಅಂತಹ ಎಮ್ಮೆ ಚರ್ಮ ಎಂದು ಟೀಕಿಸಿದರು. ಪೊಲೀಸ್ ಇಲಾಖೆ ಕಾಂಗ್ರೆಸ್ ಪಕ್ಷದ ಇಲಾಖೆಯಾಗಿದೆ. ಸಿಎಂ ಸಿದ್ದರಾಮಯ್ಯನವರೇ ಪೊಲೀಸರಿಗೆ ಹೊಡೆಯಲು ಮುಂದಾಗುತ್ತಾರೆ ಎಂದರು.

## ಸುಹಾಸ್ ಪ್ರಕರಣ ರಾಜಕೀಯಕ್ಕೆ ಬಳಸಬಾರದು: ಡಿಸಿಎಂ ಮನವಿ



**ಬೆಂಗಳೂರು, ಮೇ 2:** ಸುಹಾಸ್ ಶೆಟ್ಟಿ ಹತ್ಯೆಯನ್ನು ಬಿಜೆಪಿಯವರು ರಾಜಕೀಯಕ್ಕೆ ಬಳಸಿಕೊಳ್ಳಬಾರದು. ಕರ್ನಾಟಕ ರಾಜ್ಯ ಶಾಂತಿಯಿಂದಿದೆ. ಶಾಂತಿಯಿಂದ ಇರುವುದಕ್ಕೆ ಬಿಜೆಪಿಯವರು ಸಹಕಾರ ನೀಡಬೇಕು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು. ವಿಧಾನಸೌಧದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶುಕ್ರವಾರ ಪ್ರತಿಕ್ರಿಯೆ ನೀಡಿದರು.

ಮಂಗಳೂರಿನಲ್ಲಿ ಸುಹಾಸ್ ಶೆಟ್ಟಿ ಹತ್ಯೆ ಬಗ್ಗೆ ಕೇಳಿದಾಗ, ಹತ್ಯೆಯಲ್ಲಿ ಭಾಗಿಯಾಗಿರುವ ತಪ್ಪಿತಸ್ಥರ ವಿರುದ್ಧ ಪೊಲೀಸರು ಕಾನೂನು ಕ್ರಮ ತೆಗೆದುಕೊಳ್ಳುತ್ತಾರೆ.

ಈ ವಿಚಾರದಲ್ಲಿ ನಾವು ತಲೆಹಾಕಲು ಹೋಗುವುದಿಲ್ಲ ಎಂದರು. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗಿದೆ ಎನ್ನುವ ಬಿಜೆಪಿ ಆರೋಪದ ಬಗ್ಗೆ ಕೇಳಿದಾಗ, ಇದರ ಬಗ್ಗೆ ನಾನು ಪ್ರತಿಕ್ರಿಯೆ ನೀಡಲು ಹೋಗುವುದಿಲ್ಲ. ಮಂಗಳೂರಿನ ಪೊಲೀಸರು ಉತ್ತಮ ಸಾಮರ್ಥ್ಯ ಹೊಂದಿದ್ದಾರೆ. ಈ ಘಟನೆ ಬಗ್ಗೆ ಕಾನೂನು ಕ್ರಮ ತೆಗೆದುಕೊಳ್ಳುತ್ತಾರೆ ಎಂದರು.

## ಅಬೂಬಕರ್ ಕೊಲೆಗೆ ವಿಫಲ ಯತ್ನ

**ಉಡುಪಿ, ಮೇ 2:** ಮಂಗಳೂರಿನಲ್ಲಿ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಹತ್ಯೆ ಬೆನ್ನಲ್ಲೇ ಉಡುಪಿಯಲ್ಲಿ ಮುಸ್ಲಿಂ ಯುವಕನ ಹತ್ಯೆಗೆ ಯತ್ನ ನಡೆದಿದೆ. ಹೌದು, ಉಡುಪಿ ತಾಲೂಕಿನ ಅತ್ರಾಡಿಯಲ್ಲಿ ಮುಸ್ಲಿಂ ಆಟೋ ಚಾಲಕ ಅಬೂಬಕರ್ ಮೇಲೆ ದಾಳಿಯಾಗಿದೆ.

ಅಬೂಬಕರ್‌ನನ್ನು ಅಡ್ಡಗಟ್ಟಿ ಸುಶಾಂತ್, ಸಂದೇಶ್ ಪೂಜಾರಿ ಎಂಬುವರು ಕೊಲೆಗೆ ಯತ್ನಿಸಿದ್ದಾರೆ ಕೂಡಲೇ ಹಿರಿಯಡ್ಕ ಪೊಲೀಸರು ಇಬ್ಬರನ್ನು ಬಂಧಿಸಿದ್ದಾರೆ. ಪೊಲೀಸರ ವಿಚಾರಣೆ ವೇಳೆ ಸುಹಾಸ್ ಶೆಟ್ಟಿ ಹತ್ಯೆಗೆ ಪ್ರತೀಕಾರಕ್ಕಾಗಿ ಕೃತ್ಯ ಎಸಗಿರುವುದಾಗಿ ಇಬ್ಬರು ತಪ್ಪೊಪ್ಪಿಕೊಂಡಿದ್ದಾರೆ ಎನ್ನಲಾಗಿದೆ.

## ಮಹಾರಾಷ್ಟ್ರದೊಂದಿಗೆ ಬೆಳಗಾವಿ, ಕಾರವಾರ, ನಿಪ್ಪಾಣಿ ವಿಲೀನಕ್ಕೆ ಅಜಿತ್ ಪವಾರ್ ಆಗ್ರಹ

**ಮುಂಬೈ, ಮೇ 2:** ಬೆಳಗಾವಿ ಮತ್ತು ಕಾರವಾರದಂತಹ ಮರಾಠಿ ಮಾತನಾಡುವ ಜನರು ನಮ್ಮೊಂದಿಗೆ ಇಲ್ಲ ಎನ್ನುವ ವಿಷಾದ ಇಂದಿಗೂ ನಮ್ಮ ಹೃದಯದಲ್ಲಿದೆ. ಅವು ಮಹಾರಾಷ್ಟ್ರಕ್ಕೆ ಸೇರಿದ ದಿನ ಮಹರಾಷ್ಟ್ರ ಪೂರ್ಣಗೊಂಡಿದೆ ಎಂದು ನಾವು ವಿಶ್ವಾಸದಿಂದ ಹೇಳಬಹುದು ಎಂದು ಮಹಾರಾಷ್ಟ್ರ ಡಿಸಿಎಂ ಅಜಿತ್ ಪವಾರ್ ಹೇಳಿದ್ದಾರೆ. ಮಹರಾಷ್ಟ್ರ ಏಕೀಕರಣ ದಿನದ ಭಾಗವಾಗಿ ಮಾತನಾಡಿದ ಅವರು, ಕರ್ನಾಟಕದ ಮರಾಠಿ ಮಾತನಾಡುವ ಪ್ರದೇಶಗಳಾದ ಬೆಳಗಾವಿ, ಕಾರವಾರ, ನಿಪ್ಪಾಣಿಗಳನ್ನು ಮಹಾರಾಷ್ಟ್ರದೊಂದಿಗೆ ವಿಲೀನಗೊಳಿಸಬೇಕೆಂದು ಅಜಿತ್ ಪವಾರ್ ಆಗ್ರಹಿಸಿದರು.

1956ರ ರಾಜ್ಯಗಳ ಪುನರ್ಸಂಘಟನೆಯ ಸಂದರ್ಭದಲ್ಲಿ ಮರಾಠಿ ಭಾಷಿಕ ಪ್ರದೇಶಗಳನ್ನು ಮಹಾರಾಷ್ಟ್ರಕ್ಕೆ ಸೇರಿಸುವಲ್ಲಿ ಐತಿಹಾಸಿಕ ತಪ್ಪುಗಳಾಗಿವೆ. ಇದು ಇಂದಿಗೂ ಗಾಯದಂತೆ ಉಳಿದಿದೆ ಎಂದು ತಿಳಿಸಿದ್ದಾರೆ. ಬೆಳಗಾವಿ ಸೇರಿದಂತೆ ಕರ್ನಾಟಕದ ಕೆಲವು ಗಡಿಭಾಗದ ಪ್ರದೇಶಗಳಲ್ಲಿ ಮರಾಠಿ ಭಾಷಿಕರು ಬಹುಸಂಖ್ಯೆಯಲ್ಲಿದ್ದರೂ, ಈ ಪ್ರದೇಶಗಳು ಭಾಷಾವಾರು ರಾಜ್ಯ ಪುನರ್ವಿಂಗಡನೆಯ ಸಂದರ್ಭದಲ್ಲಿ ಮಹಾರಾಷ್ಟ್ರಕ್ಕೆ ಸೇರಲಿಲ್ಲ. ಈ ವಿಷಯವು ಮಹಾರಾಷ್ಟ್ರ ಮತ್ತು ಕರ್ನಾಟಕದ ನಡುವಿನ ಗಡಿ ವಿವಾದದ ಒಂದು ಸೂಕ್ಷ್ಮ ಅಂಶವಾಗಿದ್ದು, ದಶಕಗಳಿಂದ ರಾಜಕೀಯ ಚರ್ಚೆಗೆ ಕಾರಣವಾಗಿದೆ, ಇದು ಸದ್ಯ ಸುಪ್ರೀಂಕೋರ್ಟ್‌ನಲ್ಲಿದೆ ಎಂದರು.

## ಟ್ರಾನ್ಸ್‌ಶಿಪ್‌ಮೆಂಟ್ ಹಬ್‌ಗೆ ಪ್ರಧಾನಿ ಮೋದಿ ಚಾಲನೆ

**ತಿರುವನಂತಪುರಂ, ಮೇ 2:** ಕೇರಳದ ವಿಳಿಂಜಂ ಬಂದರಿನಲ್ಲಿ ಭಾರತದ ಮೊದಲ ಅಂತರರಾಷ್ಟ್ರೀಯ ಟ್ರಾನ್ಸ್‌ಶಿಪ್‌ಮೆಂಟ್ ಹಬ್ ಅನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಉದ್ಘಾಟಿಸಿದರು. ಇದು ಭಾರತದ ಕಡಲ ಉದ್ಯಮಗಳಲ್ಲಿ ಒಂದು ಮೈಲಿಗಲ್ಲಾಗಿದ್ದು, ತಿರುವನಂತಪುರಂನಲ್ಲಿರುವ ಈ ಆಳ ಸಮುದ್ರ ಬಂದರು ಭಾರತದ ಮೊದಲ ಮೀಸಲಾದ ಕಂಟೇನರ್ ಟ್ರಾನ್ಸ್‌ಶಿಪ್‌ಮೆಂಟ್ ಕೇಂದ್ರವಾಗಿದೆ. ಇದು ದಕ್ಷಿಣ ರಾಜ್ಯವನ್ನು ಜಾಗತಿಕ ನೌಕಾ ನಕ್ಷೆಯಲ್ಲಿ ಇರಿಸುತ್ತದೆ. ಅದಾನಿ ಬಂದರುಗಳು ಮತ್ತು ವಿಶೇಷ ಆರ್ಥಿಕ ವಲಯ ಲಿಮಿಟೆಡ್ ಸುಮಾರು 8,867 ಕೋಟಿ ರೂ. ವೆಚ್ಚದಲ್ಲಿ, ಸಾರ್ವಜನಿಕ–ಖಾಸಗಿ ಮಾದರಿಯ ಅಡಿಯಲ್ಲಿ ಸರ್ಕಾರದ ಸಹಭಾಗಿತ್ವದಲ್ಲಿ ನಿರ್ಮಿಸಲಾಗಿದೆ.




ಇದು ಜಾಗತಿಕ ಹಡಗು ಮತ್ತು ವ್ಯಾಪಾರ ಮಾರ್ಗಗಳಲ್ಲಿ ಭಾರತದ ಉಪಸ್ಥಿತಿಯನ್ನು ಗಮನಾರ್ಹವಾಗಿ ಹೆಚ್ಚಿಸುವ ನಿರೀಕ್ಷೆಯಿದೆ.

ಟ್ರಾನ್ಸ್‌ಶಿಪ್‌ಮೆಂಟ್ ಹಬ್ ಒಂದು ಪ್ರಮುಖ ಬಂದರು, ಅಲ್ಲಿ ಸರಕು ಕಂಟೇನರ್‌ಗಳನ್ನು ಒಂದು ಹಡಗಿನಿಂದ ಇನ್ನೊಂದಕ್ಕೆ ವರ್ಗಾಯಿಸಲಾಗುತ್ತದೆ, ಸಾಮಾನ್ಯವಾಗಿ ಅವುಗಳ ಅಂತಿಮ ಗಮ್ಯಸ್ಥಾನಕ್ಕೆ ಹೋಗುವ ದಾರಿಯಲ್ಲಿ. ದೊಡ್ಡ ಹಡಗುಗಳು ಈ ಆಳವಾದ ನೀರಿನ ಬಂದರುಗಳಲ್ಲಿ ಕಂಟೇನರ್‌ಗಳನ್ನು ಇಳಿಸುತ್ತವೆ ಮತ್ತು ನಂತರ ಸರಕುಗಳನ್ನು ಸಣ್ಣ ಫೀಡರ್ ಹಡಗುಗಳಿಗೆ ಸಾಗಿಸಲಾಗುತ್ತದೆ, ಅಲ್ಲಿ ದೊಡ್ಡ ಹಡಗುಗಳನ್ನು ಅಳವಡಿಸಲು ಸಾಧ್ಯವಾಗದ ಪ್ರಾದೇಶಿಕ ಬಂದರುಗಳಿಗೆ ಸಾಗಿಸಲಾಗುತ್ತದೆ.

### ವಿಳಿಂಜಂ ಬಂದರಿನ ಪ್ರಮುಖ ಲಕ್ಷಣಗಳು

ಗಾತ್ರ ಮತ್ತು ಸಾಮರ್ಥ್ಯ: 20 ಮೀಟರ್ ಆಳದ ಈ ಬಂದರು ವಿಶ್ವದ ಅತಿದೊಡ್ಡ ಕಂಟೈನರ್ ಹಡಗುಗಳಿಗೆ ಸೇವೆ ಸಲ್ಲಿಸಬಲ್ಲದು. ಮೊದಲ ಹಂತದಲ್ಲಿ 1ದಶಲಕ್ಷ TEU (ಟ್ವೆಂಟಿ–ಫೂಟ್ ಈಕ್ವಲೆಂಟ್ ಯೂನಿಟ್) ಸಾಮರ್ಥ್ಯವನ್ನು ಹೊಂದಿದ್ದು, ಪೂರ್ಣಗೊಂಡಾಗ 6.2 ಮಿಲಿಯನ್ TEU ಸಾಮರ್ಥ್ಯಕ್ಕೆ ಏರಲಿದೆ.

ಸ್ಥಳದ ಪ್ರಯೋಜನ: ಕೊಲಂಬೊ ಮತ್ತು ಸಿಂಗಾಪುರದಂತಹ ಪ್ರಮುಖ ಟ್ರಾನ್ಸ್‌ಶಿಪ್‌ಮೆಂಟ್ ಕೇಂದ್ರಗಳಿಗೆ ಸಮೀಪವಿರುವ ವಿಳಿಂಜಂ ಬಂದರು ಜಾಗತಿಕ ವಾಣಿಜ್ಯ ಮಾರ್ಗಗಳಿಗೆ ಸಂಪರ್ಕ ಕಲ್ಪಿಸುತ್ತದೆ. ತಾಂತ್ರಿಕ ಸೌಲಭ್ಯ: ಸ್ವಯಂಚಾಲಿತ ಕ್ರೇನ್‌ಗಳು, ಆಧುನಿಕ ಕಂಟೈನರ್ ನಿರ್ವಹಣಾ ವ್ಯವಸ್ಥೆಗಳು ಮತ್ತು ಪರಿಸರ ಸ್ನೇಹಿ ತಂತ್ರಜ್ಞಾನಗಳನ್ನು ಒಳಗೊಂಡಿದೆ.

ಪರಿಸರ ಸಂರಕ್ಷಣೆ: ಕರಾವಳಿ ಕೊರೆತ ಮತ್ತು ಸಮುದ್ರ ಪರಿಸರವನ್ನು ರಕ್ಷಿಸಲು ವಿಶೇಷ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಬಂದರಿನ ಮಹತ್ವ: ವಿಳಿಂಜಂ ಬಂದರು ಭಾರತದ ಸಮುದ್ರ ವಾಣಿಜ್ಯಕ್ಕೆ ಒಂದು ದೊಡ್ಡ ಹೆಜ್ಜೆಯಾಗಿದೆ.

ಆರ್ಥಿಕ ಉತ್ತೇಜನ: ಈ ಬಂದರು 2.5 ಲಕ್ಷಕ್ಕೂ ಅಧಿಕ ಉದ್ಯೋಗಾವಕಾಶಗಳನ್ನು ಸೃಷ್ಟಿಸಲಿದೆ ಎಂದು ಅಂದಾಜಿಸಲಾಗಿದೆ. ಕೇರಳದ ಆರ್ಥಿಕತೆಗೆ ಗಣನೀಯ ಕೊಡುಗೆ ನೀಡಲಿದೆ.

ವಿದೇಶೀ ಟ್ರಾನ್ಸ್‌ಶಿಪ್‌ಮೆಂಟ್ ಕಡಿಮೆ: ಭಾರತದ 75% ಕಂಟೈನರ್ ಗಳು ಕೊಲಂಬೊ, ಸಿಂಗಾಪುರ ಅಥವಾ ದುಬೈನಂತಹ ವಿದೇಶೀ ಬಂದರಿನಲ್ಲಿ ಟ್ರಾನ್ಸ್‌ಶಿಪ್‌ಮೆಂಟಿಗೆ ಒಳಗಾಗುತ್ತವೆ. ವಿಳಿಂಜಂ ಬಂದರು ಈ ಅವಲಂಬನೆಯನ್ನು ಕಡಿಮೆ ಮಾಡಿ, ವೆಚ್ಚ ಮತ್ತು ಸಮಯವನ್ನು ಉಳಿಸಲಿದೆ.

ಜಾಗತಿಕ ಸ್ಪರ್ಧೆ: ಈ ಬಂದರು ಭಾರತವನ್ನು ಜಾಗತಿಕ ಸಮುದ್ರ ವಾಣಿಜ್ಯದ ಪ್ರಮುಖ ಕೇಬಂದರಿನ ಒಂದಾಗಿ ಸ್ಥಾಪಿಸಲಿದೆ. ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಧಾನಿ ಮೋದಿ, ವಿಳಿಂಜಂ ಬಂದರು ಕೇವಲ ಕೇರಳಕ್ಕೆ ಮಾತ್ರವಲ್ಲ, ಇಡೀ ಭಾರತಕ್ಕೆ ಒಂದು ಆರ್ಥಿಕ ಶಕ್ತಿ ಕೇಂದ್ರವಾಗಲಿದೆ.

ಇದು ಆತ್ಮನಿರ್ಭರ ಭಾರತದ ದಿಶೆಯಲ್ಲಿ ಒಂದು ಪ್ರಮುಖ ಹೆಜ್ಜೆ ಎಂದು ಹೇಳಿದರು. ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್, ಈ ಯೋಜನೆಯ ಯಶಸ್ಸಿಗೆ ಕೇಂದ್ರ ಸರ್ಕಾರದ ಬೆಂಬಲವನ್ನು ಶ್ಲಾಘಿಸಿದರು.

ಬಂದರಿನ ಎರಡನೇ ಮತ್ತು ಮೂರನೇ ಹಂತದ ಕಾಮಗಾರಿಗಳು ಶೀಘ್ರದಲ್ಲೇ ಆರಂಭವಾಗಲಿದ್ದು, 2030ರ ವೇಳೆಗೆ ಬಂದರು ತನ್ನ ಪೂರ್ಣ ಸಾಮರ್ಥ್ಯವನ್ನು ತಲುಪಲಿದೆ.

ಇದರ ಜೊತೆಗೆ, ಬಂದರಿನ ಸುತ್ತಮುತ್ತ ಔದ್ಯೋಗಿಕ ಕಾರಿಡಾರ್ ಮತ್ತು ಲಾಜಿಸ್ಟಿಕ್ಸ್ ಹಬ್‌ಗಳನ್ನು ಅಭಿವೃದ್ಧಿಪಡಿಸುವ ಯೋಜನೆಯೂ ಇದೆ. ವಿಳಿಂಜಂ ಬಂದರು ಭಾರತದ ಸಮುದ್ರ ವಾಣಿಜ್ಯದ ಭವಿಷ್ಯವನ್ನು ಮರುವ್ಯಾಖ್ಯಾನಿಸಲಿದೆ ಎಂಬ ನಂಬಿಕೆಯೊಂದಿಗೆ, ಈ ಯೋಜನೆ ದೇಶದ ಆರ್ಥಿಕ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸಲಿದೆ.

## ದೆಹಲಿಯಲ್ಲಿ ಗುಡುಗು ಸಹಿತ ಮಳೆ ನಾಲ್ವರ ಸಾವು: ಐಎಂಡಿ ಎಚ್ಚರಿಕೆ

**ನವದೆಹಲಿ, ಮೇ 2:** ದೆಹಲಿ ಮತ್ತು ಎನ್ಸಿಆರ್‌ನಲ್ಲಿ ಮುಂಜಾನೆ ಬಿರುಗಾಳಿ, ಗುಡುಗು ಸಹಿತ ಆಲಿಕಲ್ಲು ಮಳೆಯಾಗಿದ್ದು ಜನಜೀವನ ಅಸ್ಥವ್ಯಸ್ಥವಾಗಿದೆ. ನಜಾಫ್‌ಗಢ ಪ್ರದೇಶದಲ್ಲಿ ಭಾರೀ ಮಳೆ ಮತ್ತು ಬಿರುಗಾಳಿಯ ನಂತರ ಮನೆ ಕುಸಿದು ಓರ್ವ ಮಹಿಳೆ ಮತ್ತು ಮೂವರು ಮಕ್ಕಳು ಸೇರಿದಂತೆ ನಾಲ್ವರು ಸಾವನ್ನಪ್ಪಿದ್ದಾರೆ. ಕೃಷಿ ಜಮೀನಿನಲ್ಲಿ ನಿರ್ಮಿಸಲಾದ ಮನೆಯ ಮೇಲೆ ಮರ ಬಿದ್ದು ಈ ದುರಂತ ಅಪಘಾತ ಸಂಭವಿಸಿದೆ. ಮೃತರನ್ನು 26 ವರ್ಷದ ಜ್ಯೋತಿ ಮತ್ತು ಅವರ ಮೂವರು ಮಕ್ಕಳು ಎಂದು ಗುರುತಿಸಲಾಗಿದೆ. ಪೊಲೀಸರು ಮತ್ತು ಅಗ್ನಿಶಾಮಕ ದಳದ ಸಹಾಯದಿಂದ, ನಾಲ್ವರನ್ನೂ ಅವಶೇಷಗಳಿಂದ ಹೊರತೆಗೆದು ಜಾಫರ್‌ಪುರ ಕಲಾನ್ನ ಆರ್‌ಟಿಆರ್ ಆಸ್ಪತ್ರೆಗೆ ಸಾಗಿಸಲಾಯಿತು, ಆದರೆ ಅಷ್ಟರಲ್ಲಾಗಲೇ ಮೃತಪಟ್ಟಿದ್ದರು. ಜ್ಯೋತಿ ಅವರ ಪತಿ ಅಜಯ್ ಅವರಿಗೆ ಸಣ್ಣಪುಟ್ಟ ಗಾಯಗಳಾಗಿವೆ.

ದೆಹಲಿಯಲ್ಲಿ ಹಠಾತ್ ಪ್ರತಿಕೂಲ ಹವಾಮಾನದಿಂದಾಗಿ ಹವಾಮಾನ ಇಲಾಖೆ ನಗರದಲ್ಲಿ ರೆಡ್ ಅಲರ್ಟ್ ಘೋಷಿಸಿದೆ. ನಗರದ ಹಲವಾರು ಭಾಗಗಳಲ್ಲಿ ನೀರು ನಿಂತಿರುವುದು ಮತ್ತು ಮರಗಳು ಧರೆಗುರುಳಿರುವ ಬಗ್ಗೆ ವರದಿಯಾಗಿದೆ. ಅಕಾಲಿಕ ಮಳೆಯಿಂದಾಗಿ ದೆಹಲಿಯ ಅನೇಕ ಸ್ಥಳಗಳಲ್ಲಿ ಸ್ವಲ್ಪ ಪ್ರಮಾಣದಲ್ಲಿ ನೀರು ನಿಂತಿದೆ. ಗುಡುಗು, ಮಿಂಚು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮಿಂಟೋ ರಸ್ತೆ, ಆರ್.ಕೆ.ಪುರಂನ ಮೇಜರ್ ಸೋಮನಾಥ್ ಮಾರ್ಗ ಮತ್ತು ಖಾನ್ಪುರಗಳು ಮಳೆಯಿಂದ ವಿಶೇಷವಾಗಿ ಹಾನಿಗೊಳಗಾಗಿವೆ.

ಐಎಂಡಿ ಅಂಕಿಅಂಶಗಳ ಪ್ರಕಾರ, ಕಳೆದ ಮೂರು ಗಂಟೆಗಳಲ್ಲಿ, ನಗರದ ಪ್ರಾಥಮಿಕ ವೀಕ್ಷಣಾಲಯವಾದ ಸಫ್ದರ್ಜಂಗ್ ಹವಾಮಾನ ಕೇಂದ್ರದಲ್ಲಿ 77 ಮಿ.ಮೀ ಮಳೆಯಾಗಿದೆ. ಲೋಧಿ ರಸ್ತೆಯಲ್ಲಿ 78 ಮಿ.ಮೀ, ಪಾಲಂನಲ್ಲಿ 30 ಮಿ.ಮೀ. ನಜಾಫ್ಗಡದಲ್ಲಿ 19.5 ಮಿ.ಮೀ ಮತ್ತು ಪಿತಾಂಪುರದಲ್ಲಿ 32 ಮಿ.ಮೀ ಮಳೆಯಾಗಿದೆ. ದೆಹಲಿಯ ಅನೇಕ ಭಾಗಗಳಲ್ಲಿ ಮರಗಳು ಬುಡಮೇಲಾಗಿವೆ. ಅದು ಮುಂಜಾನೆ ಧೂಳಿನ ಬಿರುಗಾಳಿಯನ್ನು ಕಂಡಿತು.

ದೆಹಲಿ ವಿಮಾನ ನಿಲ್ದಾಣದಲ್ಲಿ ಇಳಿಯಬೇಕಿದ್ದ ಎರಡು ವಿಮಾನಗಳನ್ನು ಜೈಪುರಕ್ಕೆ ಮತ್ತು ಒಂದು ವಿಮಾನವನ್ನು ಅಹಮದಾಬಾದ್‌ಗೆ ತಿರುಗಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪ್ರಕಾರ, 100ಕ್ಕೂ ಹೆಚ್ಚು ವಿಮಾನಗಳು ವಿಳಂಬವಾಗಿವೆ. 40ಕ್ಕೂ ಹೆಚ್ಚು ವಿಮಾನಗಳ ಸಂಚಾರಕ್ಕೆ ಅಡ್ಡಿಯುಂಟಾಯಿತು ಮತ್ತು ಸುಮಾರು 100 ವಿಮಾನಗಳ ಸಂಚಾರ ವಿಳಂಬವಾಯಿತು.

**ಈಶಾನ್ಯ ಭಾರತಕ್ಕೆ ಎಚ್ಚರಿಕೆ:**

ಈಶಾನ್ಯ ರಾಜ್ಯಗಳಾದ ಅಸ್ಸಾಂ, ಮೇಘಾಲಯ, ಅರುಣಾಚಲ ಪ್ರದೇಶ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ, ಮತ್ತು ತ್ರಿಪುರಾದ ಕೆಲವು ಜಿಲ್ಲೆಗಳಲ್ಲಿ ಭಾರೀ ಮಳೆಯೊಂದಿಗೆ ಗುಡುಗು ಮತ್ತು ಮಿಂಚಿನ ಚಟುವಟಿಕೆ ನಿರೀಕ್ಷಿಸಲಾಗಿದೆ. ಗಂಟೆಗೆ 40–50 ಕಿಮೀ ವೇಗದ ಬಿರುಗಾಳಿಯ ಸಾಧ್ಯತೆಯಿದ್ದು, ಇದರಿಂದ ಗಿಡ–ಮರಗಳಿಗೆ ಹಾನಿ, ವಿದ್ಯುತ್ ಸಂಪರ್ಕಕ್ಕೆ ಅಡಚಣೆ ಮತ್ತು ಕೃಷಿ ಬೆಳೆಗಳಿಗೆ ನಷ್ಟ ಉಂಟಾಗಬಹುದು ಎಂದು ಐಎಂಡಿ ಎಚ್ಚರಿಸಿದೆ. ಸ್ಥಳೀಯ ಆಡಳಿತವು ಜನರಿಗೆ ಸುರಕ್ಷಿತ ಸ್ಥಳಗಳಲ್ಲಿ ಇರಲು ಮತ್ತು ಅಗತ್ಯ ಮುನ್ನೆಚ್ಚರಿಕೆ ವಹಿಸಲು ಸೂಚಿಸಿದೆ.

# ಕರ್ನಾಟಕ ಸೇರಿ 11 ರಾಜ್ಯಗಳ 26 ಬ್ಯಾಂಕ್ ವಿಲೀನ




**ನವದೆಹಲಿ, ಮೇ 2:** ದೇಶದ 11 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ 26 ಗ್ರಾಮೀಣ ಬ್ಯಾಂಕ್‌ಗಳನ್ನು ವಿಲೀನಗೊಳಿಸಲಾಗಿದೆ. ಮೇ 1ರಿಂದ ಇದು ಅಧಿಕೃತವಾಗಿ ಜಾರಿಯಾಗಿದೆ. 11 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ 26 ಪ್ರಾದೇಶಿಕ ಗ್ರಾಮೀಣ ಬ್ಯಾಂಕ್ಗಳ (ಆರ್‌ಆರ್‌ಬಿ) ವಿಲೀನವು ಇಂದಿನಿಂದ ಜಾರಿಗೆ ಬರಲಿದೆ. ಇದು ಆರ್‌ಆರ್‌ಬಿಗಳನ್ನು ಬಲಿಷ್ಠಗೊಳಿಸುವುದು, ಉತ್ತಮ ಆಡಳಿತ, ಸುಧಾರಿತ ಸಾಲದ ಹರಿವು ಮತ್ತು ಆರ್ಥಿಕ ಸೇರ್ಪಡೆಯತ್ತ ಮಹತ್ವದ ಹೆಜ್ಜೆಯಿಡುವುದನ್ನು ಸೂಚಿಸುತ್ತದೆ ಎಂದು ಹಣಕಾಸು ಸೇವೆಗಳ ಇಲಾಖೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ.

ಏಪ್ರಿಲ್ 8ರಂದು, ಡಿಎಫ್‌ಎಸ್ ಒಂದು ರಾಜ್ಯ ಒಂದು ಗ್ರಾಮೀಣ ಬ್ಯಾಂಕ್ ತತ್ವದಡಿ 26 ಆರ್‌ಆರ್ಬಿಗಳ ವಿಲೀನಕ್ಕೆ ಅಧಿಸೂಚನೆ ಹೊರಡಿಸಿತ್ತು. ಇದು ಆರ್‌ಆರ್‌ಬಿಗಳ ವಿಲೀನದ ನಾಲ್ಕನೇ ಹಂತವಾಗಿದೆ. ಈ ಹಿಂದೆ ನಡೆದ ವಿಲೀನಗಳಿಂದಾಗಿ ಆರ್‌ಆರ್‌ಬಿಗಳ ದಕ್ಷತೆಯಲ್ಲಿ ಸುಧಾರಣೆಯಾಗಿದೆ ಎಂದ ಹಣಕಾಸು ಸಚಿವಾಲಯ, ನವೆಂಬರ್ 2024ರಲ್ಲಿ ಪಾಲುದಾರರೊಂದಿಗೆ ಸಮಾಲೋಚನೆಗಾಗಿ ವಿಲೀನ ಯೋಜನೆಯನ್ನು ರೂಪಿಸಿತ್ತು.

ಪಾಲುದಾರರೊಂದಿಗೆ ಸಮಾಲೋಚನೆ ನಡೆಸಿದ ನಂತರ, 10 ರಾಜ್ಯಗಳು ಮತ್ತು 1 ಕೇಂದ್ರಾಡಳಿತ ಪ್ರದೇಶದ 26 ಆರ್‌ಆರ್‌ಬಿಗಳ ವಿಲೀನವನ್ನು ಪ್ರಾಥಮಿಕವಾಗಿ ಪ್ರಮಾಣದ ದಕ್ಷತೆ ಮತ್ತು ವೆಚ್ಚ ತರ್ಕಬದ್ಧಗೊಳಿಸುವಿಕೆಯ ಸುಧಾರಣೆಯ ಮೇಲೆ ಕೇಂದ್ರೀಕರಿಸಲಾಗಿತ್ತು. ಇತ್ತೀಚಿನ ವಿಲೀನದ ನಂತರ, 26 ರಾಜ್ಯಗಳು ಮತ್ತು 2 ಕೇಂದ್ರಾಡಳಿತ ಪ್ರದೇಶಗಳಲ್ಲಿ 28 ಆರ್‌ಆರ್‌ಬಿಗಳು ಉಳಿದುಕೊಂಡಿವೆ. ಇವುಗಳು 700 ಜಿಲ್ಲೆಗಳಲ್ಲಿ 22,000ಕ್ಕೂ ಹೆಚ್ಚು ಶಾಖೆಗಳನ್ನು ಹೊಂದಿವೆ. ಆರ್‌ಆರ್‌ಬಿಗಳ ಪ್ರಮುಖ ಕಾರ್ಯಕ್ಷೇತ್ರ ಗ್ರಾಮೀಣ ಪ್ರದೇಶಗಳಲ್ಲಿದ್ದು, ಶೇ.92ರಷ್ಟು ಶಾಖೆಗಳು ಗ್ರಾಮೀಣ ಅಥವಾ ಅರೆ ನಗರ ಪ್ರದೇಶಗಳಲ್ಲಿವೆ.

ಈ ಹಿಂದಿನ ಮೂರು ಹಂತಗಳಲ್ಲಿ, ಅಂದರೆ ಹಂತ–I (ಹಣಕಾಸು ವರ್ಷ 2006ರಿಂದ 2010) ಆರ್‌ಆರ್‌ಬಿಗಳ ಸಂಖ್ಯೆಯನ್ನು 196 ರಿಂದ 82ಕ್ಕೆ ಇಳಿಸಲಾಗಿತ್ತು. ಹಂತ–2 (ಹಣಕಾಸು ವರ್ಷ 2013ರಿಂದ 2015) ಆರ್‌ಆರ್‌ಬಿಗಳ ಸಂಖ್ಯೆಯನ್ನು 82ರಿಂದ 56ಕ್ಕೆ ಇಳಿಸಲಾಗಿತ್ತು. ಹಂತ–3 (ಹಣಕಾಸು ವರ್ಷ 2019 ರಿಂದ 2021) ಆರ್‌ಆರ್ಬಿಗಳ ಸಂಖ್ಯೆಯನ್ನು 56ರಿಂದ 43ಕ್ಕೆ ಇಳಿಸಲಾಗಿತ್ತು.

ಗ್ರಾಮೀಣ ಪ್ರದೇಶಗಳಲ್ಲಿ ಕೃಷಿ, ವ್ಯಾಪಾರ, ವಾಣಿಜ್ಯ, ಕೈಗಾರಿಕೆ ಮತ್ತು ಇತರ ಉತ್ಪಾದಕ ಚಟುವಟಿಕೆಗಳ ಅಭಿವೃದ್ಧಿಗೆ, ವಿಶೇಷವಾಗಿ ಸಣ್ಣ ಮತ್ತು ಅತಿ ಸಣ್ಣ ರೈತರು, ಕೃಷಿ ಕಾರ್ಮಿಕರು, ಕುಶಲಕರ್ಮಿಗಳು ಮತ್ತು ಸಣ್ಣ ಉದ್ಯಮಿಗಳಿಗೆ ಸಾಲ ಮತ್ತು ಇತರ ಸೌಲಭ್ಯಗಳನ್ನು ಒದಗಿಸುವ ಮೂಲಕ ಗ್ರಾಮೀಣ ಆರ್ಥಿಕತೆಯನ್ನು ಅಭಿವೃದ್ಧಿಪಡಿಸಲು ಪ್ರಾದೇಶಿಕ ಗ್ರಾಮೀಣ ಬ್ಯಾಂಕ್‌ಗಳನ್ನು (ಆರ್‌ಆರ್‌ಬಿ) 1975ರಲ್ಲಿ ಸ್ಥಾಪಿಸಲಾಯಿತು.

ಕರ್ನಾಟಕದಲ್ಲಿ ಎರಡು ರೀತಿಯ ಗ್ರಾಮೀಣ ಬ್ಯಾಂಕ್‌ಗಳು ಕಾರ್ಯನಿರ್ವಹಿಸುತ್ತಿತ್ತು. 1. ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕ್ (ಕೆವಿಜಿಬಿ) ಮತ್ತು 2. ಕರ್ನಾಟಕ ಗ್ರಾಮೀಣ ಬ್ಯಾಂಕ್ (ಕೆಜಿಬಿ). ಇದೀಗ ಈ ಎರಡೂ ಬ್ಯಾಂಕ್‌ಗಳನ್ನು ವಿಲೀನಗೊಳಿಸಿ, ಕರ್ನಾಟಕ ಗ್ರಾಮೀಣ ಬ್ಯಾಂಕ್ ಆಗಿ ಮಾಡಲಾಗಿದೆ. ಈ ಬ್ಯಾಂಕ್ನ ಕೇಂದ್ರ ಕಚೇರಿ ಬಳ್ಳಾರಿಯಲ್ಲಿ ಇರಲಿದೆ. ಗಮನಾರ್ಹವಾಗಿ, 1970ರ ದಶಕದಲ್ಲಿ ರಾಜ್ಯದಲ್ಲಿ 13 ರೀತಿಯ ಗ್ರಾಮೀಣ ಬ್ಯಾಂಕ್ಗಳು ಇದ್ದವು. ಅವುಗಳನ್ನು ಹಂತ, ಹಂತವಾಗಿ ವಿಲೀನಗೊಳಿಸುತ್ತಾ ಬಂದು, ಅಂತಿಮವಾಗಿ ಎರಡು ಗ್ರಾಮೀಣ ಬ್ಯಾಂಕ್‌ಗಳು ಉಳಿದಿದ್ದವು. ಇದೀಗ, ಅವುಗಳನ್ನೂ ವಿಲೀನಗೊಳಿಸಲಾಗಿದೆ. ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕ್ ರಾಜ್ಯದ 9 ಜಿಲ್ಲೆಗಳಲ್ಲಿ 629 ಶಾಖೆಗಳನ್ನು ಹೊಂದಿತ್ತು. ಕರ್ನಾಟಕ ಗ್ರಾಮೀಣ ಬ್ಯಾಂಕ್ ರಾಜ್ಯದ 22 ಜಿಲ್ಲೆಗಳಲ್ಲಿ 1,122 ಶಾಖೆಗಳನ್ನು ಹೊಂದಿತ್ತು. ಇದೀಗ ಎರಡೂ ಬ್ಯಾಂಕ್‌ಗಳ ವಿಲೀನದೊಂದಿಗೆ ಕರ್ನಾಟಕ ಗ್ರಾಮೀಣ ಬ್ಯಾಂಕ್ ದೇಶದ ಎರಡನೇ ಅತಿದೊಡ್ಡ ಗ್ರಾಮೀಣ ಬ್ಯಾಂಕ್ ಎನಿಸಿಕೊಂಡಿದೆ




ಆಂಧ್ರಪ್ರದೇಶದ ಅಮರಾವತಿಯಲ್ಲಿ ಪ್ರಧಾನಿ ಮೋದಿ ವಿವಿಧ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು.

# ಗಡೀಪಾರು ಭೀತಿ ಎದುರಿಸುತ್ತಿರುವ ಕುಟುಂಬಕ್ಕೆ ಸುಪ್ರೀಂಕೋರ್ಟ್ ರಕ್ಷಣೆ

**ನವದೆಹಲಿ, ಮೇ 2:** ಗುರುತಿನ ದಾಖಲೆಗಳ ಪರಿಶೀಲನೆಯ ಆದೇಶ ಬರುವವರೆಗೆ ವೀಸಾ ಅವಧಿ ಮುಗಿದ ನಂತರವೂ ಒಂದೇ ಕುಟುಂಬದ ಆರು ಸದಸ್ಯರ ವಿರುದ್ಧ ಪಾಕಿಸ್ತಾನಕ್ಕೆ ಗಡೀಪಾರು ಮಾಡುವಂತಹ ಬಲವಂತದ ಕ್ರಮಗಳನ್ನು ತೆಗೆದುಕೊಳ್ಳದಂತೆ ಸುಪ್ರೀಂ ಕೋರ್ಟ್ ಶುಕ್ರವಾರ ಅಧಿಕಾರಿಗಳಿಗೆ ಸೂಚಿಸಿದೆ.

ಕುಟುಂಬ ಸದಸ್ಯರು ಕಾಶ್ಮೀರದ ನಿವಾಸಿಗಳಾಗಿದ್ದು, ಅವರ ಮಗ ಬೆಂಗಳೂರಿನಲ್ಲಿ ಕೆಲಸ ಮಾಡುತ್ತಿದ್ದಾನೆ. 26 ಜನರು ಪ್ರಾಣ ಕಳೆದುಕೊಂಡ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಅವರು ಪಾಕಿಸ್ತಾನಕ್ಕೆ ಗಡೀಪಾರು ಭೀತಿ ಎದುರಿಸುತ್ತಿದ್ದಾರೆ.

ಈ ವಿಷಯವು ಮಾನವೀಯ ದೃಷ್ಟಿಕೋನವನ್ನು ಒಳಗೊಂಡಿದೆ ಎಂದು ಗಮನಿಸಿದ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಮತ್ತು ಎನ್ ಕೋಟೀಶ್ವರ್ ಸಿಂಗ್ ಅವರ ಪೀಠವು, ದಾಖಲೆ ಪರಿಶೀಲನಾ ಆದೇಶದಿಂದ ಅವರು ನೊಂದಿದ್ದರೆ ಜಮ್ಮು ಮತ್ತು ಕಾಶ್ಮೀರ ಹೈಕೋರ್ಟ್ ಅನ್ನು ಸಂಪರ್ಕಿಸಲು ಕುಟುಂಬಕ್ಕೆ ಸ್ವಾತಂತ್ರ್ಯವನ್ನು ನೀಡಿತು.

ಭಾರತೀಯ ದಾಖಲೆಗಳನ್ನು ಹೊಂದಿದ್ದರೂ ಸಹ, ತಮ್ಮನ್ನು ಬಂಧಿಸಿ ಪಾಕಿಸ್ತಾನಕ್ಕೆ ಗಡೀಪಾರು ಮಾಡಲು ವಾಘಾ ಗಡಿಗೆ ಕರೆದೊಯ್ಯಲಾಗಿದೆ ಎಂದು ಹೇಳಿಕೊಂಡ ಅಹ್ಮದ್ ತಾರೆಕ್ ಬಟ್ ಮತ್ತು ಅವರ ಐದು ಕುಟುಂಬ ಸದಸ್ಯರು ಸಲ್ಲಿಸಿದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಿಚಾರಣೆ ನಡೆಸಿತು. ಪಹಲ್ಗಾಮ್ ದಾಳಿಯ ನಂತರ, ಏಪ್ರಿಲ್ 25ರಂದು ಕೇಂದ್ರವು ಅಧಿಸೂಚನೆಯಲ್ಲಿ ಪಾಕಿಸ್ತಾನಿ ಪ್ರಜೆಗಳ ವೀಸಾವನ್ನು ರದ್ದುಗೊಳಿಸಿದೆ. ಆದೇಶದಲ್ಲಿ ಒದಗಿಸಲಾದವರನ್ನು ಹೊರತುಪಡಿಸಿ ಅವರನ್ನು ಗಡೀಪಾರು ಮಾಡಲು ನಿರ್ದಿಷ್ಟ ಸಮಯವನ್ನು ನೀಡಿದೆ ಎಂದು ನ್ಯಾಯಪೀಠ ಗಮನಿಸಿತು.

# ಪತ್ರಿಕಾ ಸ್ವಾತಂತ್ರ್ಯ: ಭಾರತಕ್ಕೆ 151ನೇ ಸ್ಥಾನ




**ನವದೆಹಲಿ, ಮೇ 2:** ವಿಶ್ವ ಪತ್ರಿಕಾ ಸ್ವಾತಂತ್ರ್ಯ ಸೂಚ್ಯಂಕ–2025ರಲ್ಲಿ ಭಾರತವು 180ರಲ್ಲಿ 151ನೇ ಸ್ಥಾನ ಪಡೆದಿದೆ. 2024ರಲ್ಲಿ 159ನೇ ಸ್ಥಾನ ಪಡೆದಿತ್ತು. ಪ್ರಜಾಪ್ರಭುತ್ವ ಆಡಳಿತಕ್ಕಾಗಿ ಕೆಲಸ ಮಾಡುವ ಅಂತಾರಾಷ್ಟ್ರೀಯ ಲಾಭರಹಿತ ಸಂಸ್ಥೆಯಾದ ರಿಪೋರ್ಟರ್ಸ್ ವಿಥೌಟ್ ಬಾರ್ಡರ್ಸ್ ಪ್ರಕಟಿಸಿದ ವರದಿಯಲ್ಲಿ ವಿಶ್ವದಾದ್ಯಂತ ಹೆಚ್ಚಿನ ಮಾಧ್ಯಮಗಳಿಗೆ ಆರ್ಥಿಕ ಒತ್ತಡ ಪ್ರಮುಖ ಸಮಸ್ಯೆಯಾಗಿ ಹೇಳಲಾಗಿದೆ.

ಭಾರತ 2024ರಲ್ಲಿ 159ನೇ ಸ್ಥಾನ ಮತ್ತು 2023ರಲ್ಲಿ 161ನೇ ಸ್ಥಾನ ಪಡೆದಿತ್ತು. ಈ ಬಾರಿ 151ನೇ ಸ್ಥಾನ ಪಡೆಯುವ ಮೂಲಕ ಕೊಂಚ ಸುಧಾರಿಸಿದೆ. ಆದಾಗ್ಯೂ, ಭಾರತದ ಪತ್ರಿಕಾ ಸ್ವಾತಂತ್ರ್ಯ ಅತ್ಯಂತ ಗಂಭೀರ ಪರಿಸ್ಥಿತಿಯಲ್ಲಿಯೇ ಇದೆ ಎಂದು ರಿಪೋರ್ಟರ್ಸ್ ವಿದೌಟ್ ಬಾರ್ಡರ್ಸ್ ಹೇಳಿದೆ. ರಾಜಕೀಯ ಪ್ರಭಾವಿಗಳ ಕೈಯಲ್ಲಿ ಮಾಧ್ಯಮಗಳ ಮಾಲೀಕತ್ವದ ಕೇಂದ್ರೀಕರಣವು ಮಾಧ್ಯಮ ಬಹುತ್ವಕ್ಕೆ ಸವಾಲಾಗಿರುವ ದೇಶಗಳಲ್ಲಿ ಭಾರತವೂ ಸೇರಿದೆ ಎಂದು ವರದಿ ತಿಳಿಸಿದೆ.

ಅದಲ್ಲದೆ, ವರದಿಯು ಜಾಗತಿಕ ಪತ್ರಿಕಾ ಸ್ವಾತಂತ್ರ್ಯದ ಸ್ಥಿತಿಯನ್ನು ಮೊದಲ ಬಾರಿಗೆ ಕಠಿಣ ಪರಿಸ್ಥಿತಿಯಲ್ಲಿದೆ ಎಂದಿದೆ. ಮಾಧ್ಯಮ ದುರ್ಬಲಗೊಳ್ಳಲು ಕಾರಣವಾದ ಪ್ರಮುಖ ಅಂಶವೆಂದರೆ ಆರ್ಥಿಕ ಒತ್ತಡ ಎಂದು ಹೇಳಿದೆ. ಸೂಚ್ಯಂಕದಲ್ಲಿ ನೆರೆಯ ರಾಷ್ಟ್ರಗಳಲ್ಲಿ ನೇಪಾಳ (90ನೇ ಸ್ಥಾನ), ಮಾಲ್ಡೀವ್ಸ್ (104ನೇ ಸ್ಥಾನ), ಶ್ರೀಲಂಕಾ (139ನೇ ಸ್ಥಾನ), ಬಾಂಗ್ಲಾದೇಶ (149ನೇ ಸ್ಥಾನ)ಕ್ಕಿಂತ ಭಾರತ ಹಿಂದೆ ಇದ್ದರೆ, ಭೂತಾನ್ (152ನೇ ಸ್ಥಾನ), ಪಾಕಿಸ್ತಾನ (158ನೇ ಸ್ಥಾನ), ಮ್ಯಾನ್ಮಾರ್ (169 ನೇ ಸ್ಥಾನ), ಅಫ್ಘಾನಿಸ್ತಾನ (175ನೇ ಸ್ಥಾನ) ಮತ್ತು ಚೀನಾ (178ನೇ ಸ್ಥಾನ) ಕ್ಕಿಂತ ಉತ್ತಮ ಸ್ಥಾನದಲ್ಲಿದೆ. ನಾರ್ವೆ, ಎಸ್ಟೋನಿಯಾ ಮತ್ತು ನೆದರ್ಲ್ಯಾಂಡ್ಸ್ ಮೊದಲ ಮೂರು ಸ್ಥಾನಗಳನ್ನು ಪಡೆದಿದೆ.

ರಿಪೋರ್ಟರ್ಸ್ ವಿಥೌಟ್ ಬಾರ್ಡರ್ಸ್ ರಾಜಕೀಯ, ಆರ್ಥಿಕ, ಶಾಸಕಾಂಗ, ಸಾಮಾಜಿಕ ಮತ್ತು ಭದ್ರತೆ ಎಂಬ ಐದು ಅಂಶಗಳ ಆಧಾರದ ಮೇಲೆ ದೇಶಗಳಲ್ಲಿನ ಪತ್ರಿಕಾ ಸ್ವಾತಂತ್ರ್ಯವನ್ನು ಮೌಲ್ಯಮಾಪನ ಮಾಡುತ್ತದೆ. ಆರ್ಥಿಕ ಸ್ವಾತಂತ್ರ್ಯವಿಲ್ಲದೆ ಪತ್ರಿಕಾ ಸ್ವಾತಂತ್ರ್ಯವಿಲ್ಲ ಎಂದು ರಿಪೋರ್ಟರ್ಸ್ ವಿಥೌಟ್ ಬಾರ್ಡರ್ಸ್‌ನ ಸಂಪಾದಕೀಯ ನಿರ್ದೇಶಕಿ ಆನ್ ಬೊಕಾಂಡೆ ಹೇಳಿದ್ದಾರೆ. ಸುದ್ದಿ ಮಾಧ್ಯಮಗಳು ಆರ್ಥಿಕವಾಗಿ ಸಂಕಷ್ಟದಲ್ಲಿರುವಾಗ, ಗುಣಮಟ್ಟದ ವರದಿಗಾರಿಕೆಯನ್ನು ಕಡೆಗಣಿಸಿ ಪ್ರೇಕ್ಷಕರನ್ನು ಆಕರ್ಷಿಸುವ ಸ್ಪರ್ಧೆಗೆ ಇಳಿಯುತ್ತವೆ ಮತ್ತು ಅವರನ್ನು ಶೋಷಿಸಲು ಪ್ರಯತ್ನಿಸುವ ಬಂಡವಾಳಶಾಹಿಗಳು ಮತ್ತು ಸಾರ್ವಜನಿಕ ಅಧಿಕಾರಿಗಳಿಗೆ ಬಲಿಯಾಗಬಹುದುಎಂದಿದ್ದಾರೆ.

ಪತ್ರಿಕೋದ್ಯಮಕ್ಕೆ ಅನುಕೂಲಕರವಾದ ಮತ್ತು ಅಂತರ್ಗತವಾಗಿ ದುಬಾರಿಯಾಗಿರುವ ವಿಶ್ವಾಸಾರ್ಹ ಮಾಹಿತಿಯ ಉತ್ಪಾದನೆಯನ್ನು ಖಾತ್ರಿಪಡಿಸುವ ಸ್ಥಿತಿಗೆ ಮಾಧ್ಯಮ ಆರ್ಥಿಕತೆಯನ್ನು ತುರ್ತಾಗಿ ಪುನಃಸ್ಥಾಪಿಸಬೇಕು. ಸಾರ್ವಜನಿಕ ಹಿತಾಸಕ್ತಿಗೆ ಸೇವೆ ಸಲ್ಲಿಸುವ ಉಚಿತ, ವಿಶ್ವಾಸಾರ್ಹ ಮಾಹಿತಿಯನ್ನು ಖಚಿತಪಡಿಸಿಕೊಳ್ಳಲು ಮಾಧ್ಯಮದ ಆರ್ಥಿಕ ಸ್ವಾತಂತ್ರ್ಯವು ಅಗತ್ಯವಾಗಿದೆ ಎಂದು ಆನ್ ಬೊಕಾಂಡೆ ಹೇಳಿದ್ದಾರೆ.

# ಜಮ್ಮು–ಕಾಶ್ಮೀರದ 5 ಜಿಲ್ಲೆಗಳ ಎಲ್‌ಒಸಿಯಲ್ಲಿ ಪಾಕ್ ಗುಂಡಿನ ದಾಳಿ



**ಜಮ್ಮು, ಮೇ 2;** ಜಮ್ಮು ಮತ್ತು ಕಾಶ್ಮೀರದ ಐದು ಜಿಲ್ಲೆಗಳ ನಿಯಂತ್ರಣ ರೇಖೆಯ ಉದ್ದಕ್ಕೂ ಪಾಕಿಸ್ತಾನ ಸೇನೆಯು ಅಪ್ರಚೋದಿತ ಸಣ್ಣ ಶಸ್ತ್ರಾಸ್ತ್ರಗಳಿಂದ ಗುಂಡು ಹಾರಿಸುವ ಮೂಲಕ ಮತ್ತೊಮ್ಮೆ ಕದನ ವಿರಾಮವನ್ನು ಉಲ್ಲಂಘಿಸಿದೆ. ಮೇ 1–2ರ ರಾತ್ರಿ, ಕುಪ್ವಾರಾ, ಬಾರಾಮುಲ್ಲಾ, ಪೂಂಚ್, ರಾಜೌರಿಯ ನೌಶೇರಾ ಮತ್ತು ಜಮ್ಮು ಮತ್ತು ಕಾಶ್ಮೀರದ ಕೇಂದ್ರಾಡಳಿತ ಪ್ರದೇಶದ ಜಮ್ಮು ಜಿಲ್ಲೆಗಳ ಅಖ್ನೂರ್‌ಗಳ ಎದುರಿನ ನಿಯಂತ್ರಣ ರೇಖೆಯಾದ್ಯಂತದ ಪೋಸ್ಟ್‌ಗಳಿಂದ ಪಾಕಿಸ್ತಾನ ಸೇನಾ ಠಾಣೆಗಳು ಅಪ್ರಚೋದಿತ ಸಣ್ಣ ಶಸ್ತ್ರಾಸ್ತ್ರಗಳಿಂದ ಗುಂಡು ಹಾರಿಸಿದವು ಎಂದು ಶುಕ್ರವಾರ ಇಲ್ಲಿ ರಕ್ಷಣಾ ವಕ್ತಾರರು ತಿಳಿಸಿದ್ದಾರೆ.

"ಭಾರತೀಯ ಸೇನಾ ಪಡೆಗಳು ಮಾಪನಾಂಕ ನಿರ್ಣಯಿಸಿದ ಮತ್ತು ಪ್ರಮಾಣಾನುಗುಣ ರೀತಿಯಲ್ಲಿ ಪ್ರತಿಕ್ರಿಯಿಸಿದವು" ಎಂದು ಅವರು ಹೇಳಿದರು. ಏಪ್ರಿಲ್ 30 ರಂದು, ಕಾಶ್ಮೀರ ವಿಭಾಗದ ಬಾರಾಮುಲ್ಲಾ ಮತ್ತು ಕುಪ್ವಾರಾ ಜಿಲ್ಲೆಗಳ ಜೊತೆಗೆ ಜಮ್ಮು ಮತ್ತು ಸಾಂಬಾ ಜಿಲ್ಲೆಗಳ ಪರ್ಗ್ವಾಲ್ ಮತ್ತು ರಾಮಗಢ್ ಸೆಕ್ಟರ್‌ಗಳಲ್ಲಿನ ಅಂತರರಾಷ್ಟ್ರೀಯ ಗಡಿಯುದ್ದಕ್ಕೂ ಪಾಕಿಸ್ತಾನ ಸೇನೆಯು ಕ್ರಮವಾಗಿ ನೌಶೇರಾ, ಸುಂದರ್ಬಾನಿ ಮತ್ತು ಅಖ್ನೂರ್ ಸೆಕ್ಟರ್‌ಗಳ ಎದುರಿನ ನಿಯಂತ್ರಣ ರೇಖೆಯಾದ್ಯಂತ ಸಣ್ಣ ಶಸ್ತ್ರಾಸ್ತ್ರಗಳಿಂದ ಗುಂಡು ಹಾರಿಸಿತು. ಏಪ್ರಿಲ್ 22 ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನದ ನಡುವೆ ಗಡಿಯಲ್ಲಿ ಉದ್ವಿಗ್ನತೆ ಹೆಚ್ಚಾಯಿತು.

# ಚಾರ್‌ಧಾಮ್ ಯಾತ್ರೆಗೆ ಚಾಲನೆ ಕೇದಾರನಾಥ ಧಾಮದ ಬಾಗಿಲು ಮುಕ್ತ



**ರುದ್ರಪ್ರಯಾಗ,ಮೇ 2:** ಉತ್ತರಾಖಂಡದ ಪವಿತ್ರ ಚಾರಧಾಮ್ ಯಾತ್ರೆಯ ಭಾಗವಾಗಿ, ಕೇದಾರನಾಥ ಧಾಮದ ಬಾಗಿಲುಗಳನ್ನು ತೆರಲಾಯಿತು. ಬೆಳಿಗ್ಗೆ 7 ಗಂಟೆಗೆ ವೃಷಭ ಲಗ್ನದಲ್ಲಿ ಭಕ್ತರ ದರ್ಶನಕ್ಕಾಗಿ ಶಾಸ್ತ್ರೋಕ್ತವಾಗಿ ತೆರೆಯಲಾಯಿತು. ಈ ಸಂದರ್ಭದಲ್ಲಿ ಸಾವಿರಾರು ಭಕ್ತರು 'ಹರ್ ಹರ್ ಮಹಾದೇವ' ಜಯಘೋಷ ಕೂಗಿದರು. ಕೇದಾರನಾಥ ದೇವಾಲಯವನ್ನು ಈ ಬಾರಿ 108 ಕ್ವಿಂಟಾಲ್ ವಿವಿಧ ರೀತಿಯ ಹೂಗಳಿಂದ ಅಲಂಕರಿಸಲಾಗಿದೆ. ನೇಪಾಳ, ಥಾಯ್ಲ್ಯಾಂಡ್ ಮತ್ತು ಶ್ರೀಲಂಕಾದಿಂದ ತರಲಾದ ಗುಲಾಬಿ, ಮಲ್ಲಿಗೆ ಸೇರಿದಂತೆ 54 ಬಗೆಯ ಹೂಗಳಿಂದ ದೇವಾಲಯದ ಶೃಂಗರಿಸಲಾಗಿದೆ. ಗುರುವಾರ ಸಂಜೆ ಬಾಬಾ ಕೇದಾರನಾಥನ ಪಂಚಮುಖಿ ಡೋಲಿಯು ಕೇದಾರನಾಥ ಧಾಮಕ್ಕೆ ಆಗಮಿಸಿತು. ಡೋಲಿಯ ಆಗಮನದ ಸಂದರ್ಭದಲ್ಲಿ ಭಕ್ತರು ಭಕ್ತಿಭಾವದಿಂದ ಸ್ವಾಗತಿಸಿದರು. ಬಾಗಿಲು ತೆರೆಯುವ ಸಮಾರಂಭದಲ್ಲಿ ಉತ್ತರಾಖಂಡದ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರು ಭಾಗವಹಿಸಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಹೆಸರಿನಲ್ಲಿ ಮೊದಲ ಪೂಜೆ ಸಲ್ಲಿಸಲಾಯಿತು. ಬಾಗಿಲು ತೆರೆಯುತ್ತಿದ್ದಂತೆ ಭಕ್ತರು ತಮ್ಮ ಶ್ರದ್ಧೆಯನ್ನು ಜಯಕಾರಗಳ ಮೂಲಕ ವ್ಯಕ್ತಪಡಿಸಿದರು. ದೇವಾಲಯದ ಸುತ್ತಲೂ ಭಕ್ತರ ದಂಡು ಜಮಾಯಿಸಿತು. ಕೇದಾರನಾಥ ಧಾಮದಲ್ಲಿ ಈ ಬಾರಿ ಭಕ್ತರಿಗಾಗಿ ವಿಶೇಷ ವ್ಯವಸ್ಥೆಗಳನ್ನು ಮಾಡಲಾಗಿದ್ದು, ಭದ್ರತೆ, ಆರೋಗ್ಯ ಸೇವೆ ಮತ್ತು ಸ್ವಚ್ಛತೆಗೆ ಹೆಚ್ಚಿನ ಒತ್ತು ನೀಡಲಾಗಿದೆ. ಕೇದಾರನಾಥ ಯಾತ್ರೆಗಾಗಿ ಸರ್ಕಾರವು ವಿಶೇಷ ವ್ಯವಸ್ಥೆಗಳನ್ನು ಕಲ್ಪಿಸಿದೆ. ಈ ಬಾರಿ ಕೇದಾರನಾಥ ಮತ್ತು ಯಮುನೋತ್ರಿ ಮಾರ್ಗದಲ್ಲಿ 4,300ಕ್ಕೂ ಹೆಚ್ಚು ಕುದುರೆ–ಗಾಡಿ ಸಂಚಾಲಕರು ಸೇವೆಯನ್ನು ಒದಗಿಸಲಿದ್ದಾರೆ. ಇದರ ಜೊತೆಗೆ, ಯಾತ್ರಿಗಳ ಸುರಕ್ಷತೆಗಾಗಿ ಪ್ಯಾರಾ ಮಿಲಿಟರಿ ಫೋರ್ಸ್‌ನ ತುಕಡಿಯನ್ನು ಮೊದಲ ಬಾರಿಗೆ ನಿಯೋಜಿಸಲಾಗಿದೆ.

# ಜಾತಿಗಣತಿ ನಿರ್ಲಕ್ಷಿಸಲು ಬಿಜೆಪಿಗೆ ಅಸಾಧ್ಯವಾಗಿತ್ತು: ಸಂಸದ ಮನೋಜ್

**ನವದೆಹಲಿ, ಏ. 02:** ಜಾತಿ ಜನಗಣತಿಯ ವಿರುದ್ಧ ಈ ಹಿಂದೆ ಹೇಳಿಕೆ ನೀಡಿದ್ದ ಬಿಜೆಪಿ ನಾಯಕರ ವಿರುದ್ಧ ಶುಕ್ರವಾರ ರಾಷ್ಟ್ರೀಯ ಜನತಾ ದಳ ಸಂಸದ ಮನೋಜ್ ಝಾ ಅವರು ಪರೋಕ್ಷವಾಗಿ ವಾಗ್ದಾಳಿ ನಡೆಸಿದ್ದಾರೆ. ಜಾತಿಗಣತಿಯ ಬೇಡಿಕೆಯು ನಿರ್ಲಕ್ಷಿಸಲು ಸಾಧ್ಯವಾಗದ ಬೇಡಿಕೆ ಎಂದು ಅವರು ಪ್ರತಿಪಾದಿಸಿದ್ದಾರೆ. ಬಟೇಂಗೆ ತೋ ಕಟೇಂಗೆ ಎಂಬ ಘೋಷಣೆಗೆಯ ಬದಲಾಗಿ ಯಾವ ಘೋಷಣೆ ಕೂಗುತ್ತೀರಿ ಎಂದು ಅವರು ಬಿಜೆಪಿಗೆ ಕೇಳಿದ್ದಾರೆ.

ನಮ್ಮ (ಬಿಹಾರ) ವಿಪಕ್ಷ ನಾಯಕ ತೇಜಸ್ವಿ ಯಾದವ್ ಕೂಡ ಇದನ್ನೇ ಹೇಳಿದ್ದಾರೆ. ನಾವು ಕೂಡ ಇದನ್ನೇ ಹೇಳುತ್ತಿದ್ದೇವೆ. ಇದು ನಿರ್ಲಕ್ಷಿಸಲು ಸಾಧ್ಯವಾಗದ ಬೇಡಿಕೆ. ಜಾತಿ ಜನಗಣತಿ ನಡೆದರೆ, ಜಾತಿವಾದದ ವಿಷ ಹರಡುತ್ತದೆ ಎಂದು ಹೇಳಿದ್ದ ಬಿಜೆಪಿಯ ದೊಡ್ಡ ನಾಯಕರ ಬಗ್ಗೆ ನನಗೆ ಚಿಂತೆಯಾಗಿದ್ದು, ಅವರು ಈಗ ತಮ್ಮ ಹೇಳಿಕೆಯನ್ನು ಹೇಗೆ ಮುಚ್ಚಿಡುತ್ತಾರೆ ಎಂದು ಝಾ ಅವರು ಹೇಳಿದ್ದಾರೆ.

ಜಾತಿ ಜನಗಣತಿಯನ್ನು ಮೂಲತಃ 2021ಕ್ಕೆ ನಿಗದಿಪಡಿಸಲಾಗಿದ್ದಂತೆ, ಅದನ್ನು ಕಾರ್ಯಗತಗೊಳಿಸಲು ಮತ್ತು ನಡೆಸಲು ಸರ್ಕಾರವು ಒಂದು ಕಾಲಮಿತಿ ಅಥವಾ ಮಾರ್ಗಸೂಚಿಯನ್ನು ರಚಿಸಬೇಕೆಂದು ಅವರು ಒತ್ತಾಯಿಸಿದ್ದಾರೆ. ಮಹಿಳಾ ಮೀಸಲಾತಿ ಮತ್ತು ಕ್ಷೇತ್ರ ಪುನರ್ವಿಂಗಡನೆ ಸೇರಿದಂತೆ ಹಲವು ಸಮಸ್ಯೆಗಳು ಸರ್ಕಾರಿ ಜನಗಣತಿಗೆ ನಿಕಟ ಸಂಬಂಧ ಹೊಂದಿವೆ ಎಂದು ಅವರು ಹೇಳಿದ್ದಾರೆ.

ಮುಖ್ಯವಾದ ವಿಷಯವೆಂದರೆ ಹಲವು ಪ್ರಮುಖ ವಿಷಯಗಳನ್ನು ಒಟ್ಟಿಗೆ ಸೇರಿಸಲಾಗಿದೆ. ಜನಗಣತಿ 2021ರಲ್ಲಿ ನಡೆಯಬೇಕಿತ್ತು. ಆದರೆ ಈಗ ನಾಲ್ಕು ವರ್ಷಗಳು ಕಳೆದಿವೆ, ಅದಾಗ್ಯೂ, ಈ ಬಗ್ಗೆ ಏನೂ ನಡೆದಿಲ್ಲ. ಜಾತಿ ಜನಗಣತಿ, ಮಹಿಳಾ ಮೀಸಲಾತಿ ಮತ್ತು ಕ್ಷೇತ್ರ ಪುನರ್ವಿಂಗಡನೆಯು ಜನಗಣತಿಯೊಂದಿಗೆ ಸಂಬಂಧ ಹೊಂದಿವೆ.

ಅದಕ್ಕಾಗಿ ಒಂದು ಸಮಯ ಅಥವಾ ಮಾರ್ಗಸೂಚಿ ಇರಬೇಕು ಎಂದು ಝಾ ಹೇಳಿದ್ದಾರೆ.

ಈ ಮಧ್ಯೆ, ಕೇಂದ್ರ ಸರ್ಕಾರ ಜಾತಿ ಜನಗಣತಿ ನಡೆಸಲು ನಿರ್ಧರಿಸಿರುವ ವಿಚಾರದ ಬಗ್ಗೆ ಪ್ರತಿಕ್ರಿಯಿಸಿರುವ ಮಹಾರಾಷ್ಟ್ರ ಕಾಂಗ್ರೆಸ್ ಅಧ್ಯಕ್ಷ ಹರ್ಷವರ್ಧನ್ ವಸಂತರಾವ್ ಸಪ್ಕಲ್ ಅವರು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಮನ್ನಣೆ ನೀಡಿದ್ದಾರೆ. ಜಾತಿ ಜನಗಣತಿಯನ್ನು ಸಮಯಕ್ಕೆ ಅನುಗುಣವಾಗಿ ಜಾರಿಗೆ ತರಬೇಕೆಂದು ಅವರು ಒತ್ತಾಯಿಸಿದ್ದಾರೆ.

# ರಸ್ತೆಯಲ್ಲಿ ಬಿದ್ದಿದ್ದ ಪಾಕ್ ಧ್ವಜ ಎತ್ತಲು ಯತ್ನಿಸಿದ ಬಾಲಕಿ ಹೊರಹಾಕಿದ ಶಾಲೆ



**ಲಖನೌ, ಮೇ 2:** ಅಪ್ರಾಪ್ತ ಮುಸ್ಲಿಂ ವಿದ್ಯಾರ್ಥಿಯೊಬ್ಬ ಅಲಿಗಢದ ರಸ್ತೆಯ ಮೇಲೆ ಬಿದ್ದಿರುವ ಪಾಕಿಸ್ತಾನಿ ಧ್ವಜದ ಮೇಲೆ ಮೂತ್ರ ವಿಸರ್ಜನೆಗೆ ಬಲವಂತ ಮಾಡಿದ ವರದಿಗಳ ಬೆನ್ನಲ್ಲೇ, ಉತ್ತರ ಪ್ರದೇಶದ ಸಹರಾನ್ಪುರ ಜಿಲ್ಲೆಯಲ್ಲಿ 11ನೇ ತರಗತಿಯ ಮುಸ್ಲಿಂ ವಿದ್ಯಾರ್ಥಿನಿಯೊಬ್ಬರು ರಸ್ತೆಯಲ್ಲಿ ಬಿದ್ದಿರುವ ಪಾಕಿಸ್ತಾನಿ ಧ್ವಜವನ್ನು ಎತ್ತಿಕೊಳ್ಳಲು ಪ್ರಯತ್ನಿಸುತ್ತಿರುವ ವಿಡಿಯೋ ವೈರಲ್ ಆದ ನಂತರ ಆಕೆಯನ್ನು ಶಾಲೆಯಿಂದ ಹೊರಹಾಕಲಾಗಿದೆ.

ಸ್ಕೂಟಿ ಸವಾರಿ ಮಾಡುತ್ತಿದ್ದ ವಿದ್ಯಾರ್ಥಿನಿ ನೆಲದಲ್ಲಿ ಸಿಲುಕಿಕೊಂಡಿದ್ದ ಪಾಕಿಸ್ತಾನಿ ಧ್ವಜವನ್ನು ನೋಡಿ, ಸ್ಕೂಟಿ ನಿಲ್ಲಿಸಿ ಅದನ್ನು ಎತ್ತಿಕೊಳ್ಳಲು ಪ್ರಯತ್ನಿಸಿದಳು. ಆದರೆ ಅವಳು ಎತ್ತಿಕೊಳ್ಳಲಿಲ್ಲ ಮತ್ತು ತನ್ನ ವಾಹನವನ್ನು ಹಿಂತಿರುಗಿಸಿ ಹೊರಟುಹೋದಳು ಎಂದು ವರದಿಗಳು ಹೇಳಿವೆ. ದಾರಿಹೋಕರೊಬ್ಬರು ಆಕೆಯ ಕೃತ್ಯವನ್ನು ತಮ್ಮ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿ ಇಂಟರ್ನೆಟ್‌ನಲ್ಲಿ ಅಪ್ಲೋಡ್ ಮಾಡಿದ್ದಾರೆ. ಆ ವಿಡಿಯೋ ಬೇಗನೆ ವೈರಲ್ ಆಯಿತು ಎಂದು ವರದಿಗಳು ತಿಳಿಸಿವೆ.

ವೀಡಿಯೊ ನೋಡಿದ ನಂತರ ಕೇಸರಿ ಕಾರ್ಯಕರ್ತರು ಆಕೆಯ ಕೃತ್ಯವನ್ನು ದೇಶ ವಿರೋಧಿ ಎಂದು ಬಣ್ಣಿಸಿದರು ಮತ್ತು ಆಕೆ ಓದುತ್ತಿದ್ದ ಶಾಲೆಯಲ್ಲಿ ಕೋಲಾಹಲ ಸೃಷ್ಟಿಸಿದರು ಮತ್ತು ಆಕೆಯನ್ನು ಹೊರಹಾಕುವಂತೆ ಒತ್ತಾಯಿಸಿದರು ಎಂದು ವರದಿಗಳು ತಿಳಿಸಿವೆ. ನಂತರ ಶಾಲಾ ಆಡಳಿತ ಮಂಡಳಿ ಆಕೆಯನ್ನು ಸಂಸ್ಥೆಯಿಂದ ಹೊರಹಾಕಿತು. ಈ ಘಟನೆ ಮಂಗಳವಾರ ಸಹರಾನ್ಪುರ ಜಿಲ್ಲೆಯ ಗಂಗೋ ಪ್ರದೇಶದಲ್ಲಿ ನಡೆದಿದ್ದು, ಗುರುವಾರ ವಿಡಿಯೋ ವೈರಲ್ ಆದ ನಂತರ ಬೆಳಕಿಗೆ ಬಂದಿದೆ.

ಉತ್ತರಪ್ರದೇಶದ ಕೋಮು ಸೂಕ್ಷ್ಮ ಅಲಿಗಢ ಪಟ್ಟಣದಲ್ಲಿ ರಸ್ತೆಯಲ್ಲಿ ಬಿದ್ದಿದ್ದ ಪಾಕಿಸ್ತಾನಿ ಧ್ವಜವನ್ನು ಕುತೂಹಲದಿಂದ ಎತ್ತಿಕೊಂಡ ಅಪ್ರಾಪ್ತ ಮುಸ್ಲಿಂ ವಿದ್ಯಾರ್ಥಿಯನ್ನು ಕೆಲವು ಕೇಸರಿ ಕಾರ್ಯಕರ್ತರು ನಿಂದಿಸಿ, ಧ್ವಜದ ಮೇಲೆ ಮೂತ್ರ ವಿಸರ್ಜನೆ ಮಾಡಿಸಿದ್ದಾರೆ ಎಂಬ ವರದಿಗಳು ಬಂದ ಬೆನ್ನಲ್ಲೇ ಈ ಘಟನೆ ನಡೆದಿದೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡು ಮೂವರನ್ನು ಬಂಧಿಸಲಾಗಿದೆ. ಈ ಬಗ್ಗೆ ತನಿಖೆ ನಡೆಸಲಾಗುತ್ತಿದ್ದು, ವೀಡಿಯೊದಲ್ಲಿ ಕಂಡುಬರುವ ಅಪರಾಧಿಗಳನ್ನು ಗುರುತಿಸಿದ ನಂತರ ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

# 2000 ರೂ. ನೋಟ್ ಬ್ಯಾನ್ ಆದರೂ ಚಲಾವಣೆ

**ನವದೆಹಲಿ, ಮೇ 02:** ಭಾರತೀಯ ರಿಸರ್ವ್ ಬ್ಯಾಂಕ್ ನೋಟನ್ನು ಹಿಂತೆಗೆದುಕೊಂಡ ಎರಡು ವರ್ಷಗಳ ನಂತರವೂ 6,266 ಕೋಟಿ ರೂ. ಮೌಲ್ಯದ 2000 ರೂ. ನೋಟುಗಳು ಇನ್ನೂ ಚಲಾವಣೆಯಲ್ಲಿವೆ ಎಂದು ಅಧಿಕೃತ ಮಾಹಿತಿ ತಿಳಿಸಿದೆ. 2000 ರೂ. ನೋಟುಗಳು ಇನ್ನೂ ಕಾನೂನುಬದ್ಧವಾಗಿವೆ. ಮೇ 19, 2023 ರಂದು, ಭಾರತೀಯ ರಿಸರ್ವ್ ಬ್ಯಾಂಕ್ ಚಲಾವಣೆಯಿಂದ 2000 ರೂ. ಮುಖಬೆಲೆಯ ನೋಟುಗಳನ್ನು ಹಿಂತೆಗೆದುಕೊಳ್ಳುವುದಾಗಿ ಘೋಷಿಸಿತು.

ಶುಕ್ರವಾರದ ಆರ್‌ಬಿಐ ತನ್ನ ಹೇಳಿಕೆಯಲ್ಲಿ, ಚಲಾವಣೆಯಲ್ಲಿರುವ 2000 ರೂ. ನೋಟುಗಳ ಒಟ್ಟು ಮೌಲ್ಯವು ಮೇ 19, 2023 ರಂದು ವ್ಯವಹಾರ ಮುಕ್ತಾಯದ ಸಮಯದಲ್ಲಿ 3.56 ಲಕ್ಷ ಕೋಟಿ ರೂ.ಗಳಷ್ಟಿತ್ತು, ಇದು ಏಪ್ರಿಲ್ 30, 2025 ರಂದು ವ್ಯವಹಾರ ಮುಕ್ತಾಯದ ಸಮಯದಲ್ಲಿ 6,266 ಕೋಟಿ ರೂ.ಗಳಿಗೆ ಇಳಿದಿದೆ ಎಂದು ತಿಳಿಸಿದೆ. ಹೀಗಾಗಿ, ಮೇ 19, 2023ರಂದು ಚಲಾವಣೆಯಲ್ಲಿರುವ 2000 ರೂ. ನೋಟುಗಳಲ್ಲಿ ಶೇ.98.24ರಷ್ಟು ಹಿಂತಿರುಗಿವೆ ಎಂದು ಕೇಂದ್ರ ಬ್ಯಾಂಕ್ ತಿಳಿಸಿದೆ.

ಅಕ್ಟೋಬರ್ 7, 2023 ರವರೆಗೆ ಎಲ್ಲ ಬ್ಯಾಂಕ್ ಶಾಖೆಗಳಲ್ಲಿ ಅಂತಹ ನೋಟುಗಳ ಠೇವಣಿ ಅಥವಾ ವಿನಿಮಯದ ಸೌಲಭ್ಯ ಲಭ್ಯವಿತ್ತು. ಆದರೂ, ಈ ಸೌಲಭ್ಯವು ರಿಸರ್ವ್ ಬ್ಯಾಂಕಿನ 19 ವಿತರಣಾ ಕಚೇರಿಗಳಲ್ಲಿ ಇನ್ನೂ ಲಭ್ಯವಿದೆ. ಅಕ್ಟೋಬರ್ 9, 2023 ರಿಂದ, ಆರ್ಬಿಐ ವಿತರಣಾ ಕಚೇರಿಗಳು ವ್ಯಕ್ತಿಗಳು ಮತ್ತು ಸಂಸ್ಥೆಗಳಿಂದ ತಮ್ಮ ಬ್ಯಾಂಕ್ ಖಾತೆಗಳಿಗೆ ಠೇವಣಿ ಇಡಲು ರೂ. 2000 ನೋಟುಗಳನ್ನು ಸ್ವೀಕರಿಸುತ್ತಿವೆ. ಇದಲ್ಲದೆ, ಜನರು ತಮ್ಮ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಲು ದೇಶದ ಯಾವುದೇ ಅಂಚೆ ಕಚೇರಿಯಿಂದ ಯಾವುದೇ ಆರ್ಬಿಐ ನೀಡುವ ಕಚೇರಿಗಳಿಂದ ಇಂಡಿಯಾ ಪೋಸ್ಟ್ ಮೂಲಕ 2000 ರೂ. ನೋಟುಗಳನ್ನು ಕಳುಹಿಸಬಹುದು.



ಅಂತರಾಷ್ಟ್ರೀಯ ಕಾರ್ಮಿಕ ದಿನಾಚರಣೆಯನ್ನು ಬೆಂಗಳೂರಿನ ಬಸವನಗುಡಿ ವಿಧಾನಸಭಾ ಕ್ಷೇತ್ರದ ತ್ಯಾಗರಾಜನಗರ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ ಮತ್ತು ಚೆನ್ನಮ್ಮನ ಕರೆ ಅಂಗಳದ (C.T.Bed Park) ಉದ್ಯಾನವನದ ನಡಿಗೆದಾರರ ಸಂಘದ ವತಿಯಿಂದ ಆಚರಿಸಲಾಯಿತು. ಈ ಸಮಾರಂಭದಲ್ಲಿ ಸ್ಥಳೀಯ ಕಾರ್ಮಿಕ ಮುಖಂಡರಾದ ಪ್ರೆಸ್ ಮೂರ್ತಿ ಮತ್ತು ಕುಮಾರಸ್ವಾಮಿ ಹಾಗೂ ಶ್ರೀನಿವಾಸ ಇವರುಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಮುಖಂಡರಾದ ಸಂಘದ ಅಧ್ಯಕ್ಷರಾದ ಎಂ.ಚಂದ್ರಶೇಖರ್, ಕಾರ್ಯದರ್ಶಿ ಲಕ್ಷ್ಮೀನಾರಾಯಣ, ನರಸಿಂಹಲು, ಜೋಗಪ್ಪನಾಯಕ್, ಚಂದ್ರಶೇಖರ ಆಚಾರ್, ಶ್ರೀರಾಮುಲು. ಕೇಶವಮೂರ್ತಿ ಇನ್ನಿತರರು ಭಾಗವಹಿಸಿದರು.

# ಸೇನಾ ಸಂಸ್ಥೆಗಳ ವೆಬ್‌ಸೈಟ್ ಹ್ಯಾಕ್ ಮಾಡುವ ಪಾಕ್ ಪ್ರಯತ್ನ ವಿಫಲಗೊಳಿಸಲು ಭಾರತ ಯಶಸ್ವಿ



ನವದೆಹಲಿ, ಮೇ 2: ಪಹಲ್ಗಾಮ್ ದಾಳಿಯ ನಂತರ ದ್ವಿಪಕ್ಷೀಯ ಉದ್ವಿಗ್ನತೆ ಹೆಚ್ಚುತ್ತಿರುವ ನಡುವೆ, ಪಾಕಿಸ್ತಾನವು ಭಾರತೀಯ ಸೇನಾ ಸಂಸ್ಥೆಗಳ ವೆಬ್ಸೈಟ್ಗಳನ್ನು ಹ್ಯಾಕ್ ಮಾಡಲು ನಿರಂತರವಾಗಿ ಪ್ರಯತ್ನಿಸುತ್ತಿದೆ, ಆದರೆ ಭಾರತೀಯ ಸೈಬರ್ ಭದ್ರತಾ ಸಂಸ್ಥೆಗಳು ಇವುಗಳನ್ನು ಪರಿಣಾಮಕಾರಿಯಾಗಿ ವಿಫಲಗೊಳಿಸುತ್ತಿವೆ. ಭಾರತ ತೆಗೆದುಕೊಂಡ ನಿರಂತರ ಕ್ರಮಗಳಿಂದ ನಿರಾಶೆಗೊಂಡ ಪಾಕಿಸ್ತಾನ ಪ್ರಾಯೋಜಿತ ಹ್ಯಾಕರ್ ಗುಂಪುಗಳಾದ 'ಸೈಬರ್ ಗ್ರೂಪ್ ಊಓಂಫ1337' ಮತ್ತು 'ನ್ಯಾಷನಲ್ ಸೈಬರ್ ಕ್ರೂ' ಭಾರತೀಯ ವೆಬ್ಸೈಟ್ಗಳ ಮೇಲೆ ನಿರಂತರವಾಗಿ ಸೈಬರ್ ದಾಳಿ ನಡೆಸುತ್ತಿವೆ ಎಂದು ಭದ್ರತಾ ಮೂಲಗಳು ಶುಕ್ರವಾರ ತಿಳಿಸಿವೆ. ಈ ಗುಂಪುಗಳು ಗುರುವಾರ ಕೆಲವು ವೆಬ್ಸೈಟ್ಗಳನ್ನು ಹ್ಯಾಕ್ ಮಾಡಲು ವಿಫಲ ಪ್ರಯತ್ನಗಳನ್ನು ಮಾಡಿದ್ದವು. ಸೈಬರ್ ಭದ್ರತಾ ಸಂಸ್ಥೆಗಳು ಈ ಹ್ಯಾಕಿಂಗ್ ಪ್ರಯತ್ನಗಳನ್ನು ತಕ್ಷಣವೇ ಪತ್ತೆಹಚ್ಚಿ ಅವುಗಳನ್ನು ತಟಸ್ಥಗೊಳಿಸಿದವು. ಇತ್ತೀಚಿನ ಪ್ರಚೋದನೆಯ ಘಟನೆಯಲ್ಲಿ, ಆರ್ಮಿ ಪಬ್ಲಿಕ್ ಸ್ಕೂಲ್ ನಗ್ರೋಟಾ ಮತ್ತು ಸುಂಜುವಾನ್ ವೆಬ್ಸೈಟ್ಗಳನ್ನು ಗುರಿಯಾಗಿಸಿ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಲಿಪಶುಗಳನ್ನು ಅಪಹಾಸ್ಯ ಮಾಡುವ ಸಂದೇಶಗಳೊಂದಿಗೆ ಅವರನ್ನು ವಿರೂಪಗೊಳಿಸಲು ಪ್ರಯತ್ನಿಸಲಾಯಿತು. ಮತ್ತೊಂದು ಘಟನೆಯಲ್ಲಿ, ಮಾಜಿ ಸೈನಿಕರ ಆರೋಗ್ಯ ಸೇವೆಗಳಿಗೆ ಸಂಬಂಧಿಸಿದ ವೆಬ್ಸೈಟ್ ಅನ್ನು ವಿರೂಪಗೊಳಿಸಲಾಗಿದೆ, ಇದು ಪಾಕಿಸ್ತಾನದ ಹೆಚ್ಚುತ್ತಿರುವ ಹತಾಶೆಯನ್ನು ಸೂಚಿಸುತ್ತದೆ. ಪಾಕಿಸ್ತಾನದಿಂದ ಕಾರ್ಯನಿರ್ವಹಿಸುತ್ತಿರುವ ಹ್ಯಾಕರ್ಗಳು ಮಕ್ಕಳು, ಮಾಜಿ ಸೈನಿಕರು ಮತ್ತು ಇತರ ಮುಗ್ಧ ಜನರಿಗೆ ಸಂಬಂಧಿಸಿದ ವೆಬ್ಸೈಟ್ಗಳ ಮೇಲೆ ದಾಳಿ ಮಾಡಲು ಪದೇ ಪದೇ ಪ್ರಯತ್ನಿಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ. ಮಾಜಿ ಸೈನಿಕರು ಮತ್ತು ಕುಟುಂಬಗಳ ವೇದಿಕೆಗಳ ಮೇಲೆ ದಾಳಿ ಮಾಡುವುದು ಪಾಕಿಸ್ತಾನದ ಮತ್ತೊಂದು ಹೇಯ ಕೃತ್ಯವಾಗಿದ್ದು, ಅನೈತಿಕ ವಿಧಾನಗಳ ಮೂಲಕ ಕಾರ್ಯನಿರ್ವಹಿಸಲು ಅದರ ನಿರಂತರ ಪ್ರಯತ್ನಗಳನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ಹೇಳಿದರು.

ಪಾಕಿಸ್ತಾನ ಪ್ರಾಯೋಜಿತ ಹ್ಯಾಕರ್ಗಳು ಆರ್ಮಿ ಇನ್ಸ್ಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್ಮೆಂಟ್ ಮತ್ತು ಭಾರತೀಯ ವಾಯುಪಡೆಯ ವೆಟರನ್ಸ್ ವೆಬ್ಸೈಟ್ಗಳನ್ನು ಹ್ಯಾಕ್ ಮಾಡಿರುವುದು ಡಿಜಿಟಲ್ ಯುದ್ಧಭೂಮಿಯಲ್ಲಿ ಉದ್ವಿಗ್ನತೆಯನ್ನು ಪ್ರಚೋದಿಸುವ ಮತ್ತು ಹೆಚ್ಚಿಸುವ ಪಾಕಿಸ್ತಾನಿ ಸ್ಥಾಪನೆಯ ಉದ್ದೇಶವನ್ನು ಮತ್ತಷ್ಟು ಎತ್ತಿ ತೋರಿಸುತ್ತದೆ.

## ಮಂಗಳೂರಿನಲ್ಲಿ ಸುಹಾಸ್ ಶೆಟ್ಟಿ ಹತ್ಯೆ

# ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳಲು ಸಿದ್ದರಾಮಯ್ಯ ಸೂಚನೆ

**ಬೆಂಗಳೂರು, ಮೇ.2–** ಮಂಗಳೂರಿನಲ್ಲಿ ಕೊಲೆ ಆದವನು ರೌಡಿ ಶೀಟರ್ ಎನ್ನಲಾಗುತ್ತಿದೆ. ಸಮಗ್ರ ತನಿಖೆಗೆ ಸೂಚನೆ ನೀಡಿದ್ದೇನೆ. ಕೃತ್ಯ ಎಸಗಿದವರನ್ನು ಪತ್ತೆ ಹಚ್ಚಿ ಬಂಧಿಸಿ ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳಲು ಸೂಚನೆ ನೀಡಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಮಂಡ್ಯದ ಹೆಲಿಪ್ಯಾಡ್‌ನಲ್ಲಿ ಇಂದು ಮಂಗಳೂರಿನಲ್ಲಿ ಸುಹಾಸ್ ಶೆಟ್ಟಿ ಹತ್ಯೆಯಾಗಿದ್ದು, ಪದೇಪದೇ ಕೋಮು ಗಲಭೆಗಳಾಗುತ್ತಿರುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು ಕೊಲೆ ಗೀಡಾದ ವ್ಯಕ್ತಿ ರೌಡಿಶೀಟರ್ ಆಗಿದ್ದ ಎಂದು ಪೊಲೀಸರು ತಿಳಿಸಿದ್ದು, ಈ ಬಗ್ಗೆ ಎಡಿಜಿಪಿವರೊಂದಿಗೆ ಮಾತನಾಡಿ ಅವರನ್ನು ಸ್ಥಳಕ್ಕೆ ಕಳುಹಿಸಿ ಪರಿಶೀಲನೆ ನಡೆಸಲು ಸೂಚಿಸಿದ್ದೇನೆ. ಮನುಷ್ಯನ ಪ್ರಾಣ ಬಹಳ ಮುಖ್ಯ. ಕೂಡಲೇ ಅಪರಾಧಿಗಳು ಯಾರೇ ಆಗಿದ್ದರೂ ಅವರನ್ನು ಪತ್ತೆ ಹಚ್ಚಿ ದಸ್ತಗಿರಿ ಮಾಡಿ ಕಾನೂನಿನ ಪ್ರಕಾರ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಲಾಗಿದೆ ಎಂದರು.

**ಪಹಲ್ಗಾಮ್‌ಗೆ ಪ್ರಧಾನಿ ಮೋದಿ ಏಕೆ ಭೇಟಿ ನೀಡಲಿಲ್ಲ:** ರೌಡಿ ಶೀಟರ್ ಸುಹಾಸ್ ಶೆಟ್ಟಿ ಕೊಲೆಯಾದ ಸ್ಥಳಕ್ಕೆ ಬಿಜೆಪಿಯವರು ಭೇಟಿ ನೀಡಿರುವ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಸಿಎಂ, ಬಿಜೆಪಿಯವರು ಯಾವಾಗಲೂ ರಾಜಕೀಯವಾಗಿ ಇಂಥ ಪ್ರಕರಣಗಳನ್ನು ಹುಡುಕುತ್ತಾರೆ.

ಒಂದು ವಾರದಿಂದ ಪೆಹಲಗಾಮ್ ಪ್ರಕರಣದ ಬಗ್ಗೆ ಏನು ಹೇಳುತ್ತಾರೆ. ಉಗ್ರರ ದಾಳಿಗೆ 26 ಜನ ಸಾವನ್ನಪ್ಪಿದ್ದಾರೆ.

ಪ್ರಧಾನಿಗಳು ಅಲ್ಲಿಗೆ ಭೇಟಿ ನೀಡಿದ್ದಾರೆಯೇ ಬಿಜೆಪಿಯವರಿಗೆ ಪ್ರಧಾನಿ ಮೋದಿಯವರಿಗೆ




ಇದು ಮುಖ್ಯ ಅನ್ನಿಸುತ್ತಿಲ್ಲವೇ ಎಂದು ಮುಖ್ಯಮಂತ್ರಿಗಳು ಪ್ರಶ್ನಿಸಿದರು.

**ಪಹಲ್ಗಾಂ ಪ್ರಕರಣ ಭದ್ರತಾ ವೈಫಲ್ಯ ಕಾರಣ:**

ಪಹಲ್ಗಾಮ್ ಪ್ರಕರಣ ಭದ್ರತಾ ವೈಫಲ್ಯವಲ್ಲವೇ ಎಂದು ಪ್ರಶ್ನಿಸಿದ ಸಿಎಂ ಕಾಶ್ಮೀರದಲ್ಲಿ ಒಬ್ಬ ಪೋಲಿಸ್ ಆಗಲಿ, ಭದ್ರತಾ ಪಡೆಯವರಾಗಲಿ ನಿಯೋಜಿಸಿಲ್ಲ. ಯಾರೂ ಇಲ್ಲ ಎಂದರೆ ಏನು ಅರ್ಥ ನೂರಾರು ಪ್ರವಾಸಿಗರು ಭೇಟಿ ನೀಡುವ ಸ್ಥಳದಲ್ಲಿ ಪೊಲೀಸರು ಇರಬೇಕು ಎಂದರು.

**ನನಗೂ ಬೆದರಿಕೆ ಕರೆ ಬಂದಿದೆ:** ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್ ಅವರಿಗೆ ಬೆದರಿಕೆ ಕರೆ ಬಂದಿರುವ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ ನನಗೂ ಬೆದರಿಕೆ ಕರೆಗಳು ಬರುತ್ತವೆ. ಈ ಬಗ್ಗೆ ಪೊಲೀಸರಿಗೆ ತಿಳಿಸಿ, ಅವರನ್ನು ಪತ್ತೆ ಹಚ್ಚಿ ಕ್ರಮಕೈಗೊಳ್ಳಲು ಸೂಚಿಸಲಾಗಿದೆ ಎಂದರು.

# ಸುಹಾಸ್ ಶೆಟ್ಟಿ ಕೊಲೆ ಖಂಡಿಸಿದ ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್

**ಬೆಂಗಳೂರು, ಮೇ.2–** ಮಂಗಳೂರಿನಲ್ಲಿ ನಿನ್ನೆ ನಡೆದ ಸುಹಾಸ್ ಶೆಟ್ಟಿ ಕೊಲೆಯನ್ನು ತೀವ್ರವಾಗಿ ಖಂಡಿಸುವುದಾಗಿ ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್ ಹೇಳಿದರು.

ಈ ಹತ್ಯೆಯ ದುಷ್ಕರ್ಮಿಗಳು ಯಾರೇ ಇದ್ದರೂ ಕಠಿಣ ಕ್ರಮ ಕೈಗೊಳ್ಳಬೇಕು.ಶಾಂತಿ, ಸುವ್ಯವಸ್ಥೆ ಕಾಪಾಡಲು ಪೊಲೀಸ್ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅವರು ಸೂಚಿಸಿದರು.

ಸುದ್ದಿಗಾರರೊಂದಿಗೆ, ವೈಯಕ್ತಿಕ ದ್ವೇಷದ ಹಿನ್ನಲೆಯಲ್ಲಿ ಹತ್ಯೆಯಾಗಿರ ಬಹುದು. ಹತ್ಯೆಯಾದ ಸುಹಾಸ್ ಶೆಟ್ಟಿ ಈ ಹಿಂದೆ ಕೀರ್ತಿ ಎಂಬುವರ ಕೊಲೆ ಪ್ರಕರಣದಲ್ಲಿ ಪ್ರಮುಖ ಆರೋಪಿಯಾಗಿದ್ದರು. ತನಿಖೆ ನಂತರ ಸತ್ಯಾಂಶ ಗೊತ್ತಾಗಲಿದೆ. ವೈಯಕ್ತಿಕ ಗುಂಪುಗಳ ನಡುವಿನ ಘರ್ಷಣೆಯಾಗಿದೆಯೇ ಹೊರತು ಧರ್ಮ–ಧರ್ಮದ ನಡುವಿನ ದ್ವೇಷ ಇದಲ್ಲ. ಕರಾವಳಿಗೆ ಅದರದೇ ಆದ ಪರಂಪರೆ ಇದೆ ಎಂದು ಹೇಳಿದರು. ದಕ್ಷಿಣ ಕನ್ನಡ ಜಿಲ್ಲೆಯನ್ನು ಮುಂದೆ ಕೊಂಡೊಯ್ಯಲು ಎಲ್ಲರ ಸಹಕಾರ ಬೇಕು. ಯಾವುದೇ ಸಮಾಜ, ಧರ್ಮ ನಮ ಮಂಗಳೂರನ್ನು ಹಿಂದಕ್ಕೆ ಕೊಂಡೊಯ್ಯಬಾರದು. ಈ ಕೃತ್ಯಗಳು ನಡೆದಾಗ ದ್ವೇಷದ ಭಾವನೆ ಉಂಟಾಗುವುದು ಸಹಜ. ಇದನ್ನು ನಿಯಂತ್ರಿಸುವ ಕೆಲಸವನ್ನು ಪೊಲೀಸ್ ಇಲಾಖೆ ಮಾಡಬೇಕು ಎಂದರು. ಫಾಜಿಲ್ ಹತ್ಯೆಗೆ ಪ್ರತೀಕಾರ ಎಂಬ ಭಾವ ಜನರಲ್ಲಿತ್ತು. ಆದರೆ ಫಾಜಿಲ್ ಅವರ ತಂದೆಯೇ ದೂರವಾಣಿ ಕರೆ ಮಾಡಿ ಇಂತಹ ಪ್ರತಿಕಾರ ನಮದಲ್ಲ. ಘಟನೆಗೂ



ನಮಗೂ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ ಎಂದು ಹೇಳಿದರು. ರಾಜಕೀಯವಾಗಿ ಉತ್ತರ ಕೊಡಲು ಹೋಗುವುದಿಲ್ಲ. ರಾಜಕೀಯವಾಗಿ ಯಾರೂ ಈ ಘಟನೆಯನ್ನು ಬಳಸಿಕೊಳ್ಳಬೇಡಿ. ಆರೋಪ ಮಾಡುತ್ತಿರುವವರು ಆತಾವಲೋಕನ ಮಾಡಿಕೊಳ್ಳಲಿ ಎಂದು ಅವರು ಹೇಳಿದರು.

# ರಾಜ್ಯದಲ್ಲಿ ಕಾಶ್ಮೀರ ಪರಿಸ್ಥಿತಿ ನಿರ್ಮಾಣ, ಹಿಂದೂಗಳಿಗೆ ರಕ್ಷಣೆ ಇಲ್ಲ: ವಿಜಯೇಂದ್ರ ವಾಗ್ದಾಳಿ



**ಬೆಂಗಳೂರು, ಮೇ.2–** ಮಂಗಳೂರಿನಲ್ಲಿ ಹಿಂದೂ ಕಾರ್ಯಕರ್ತನ ಹತ್ಯೆಗೆ ಕೇಸರಿ ಪಡೆ ಆಕ್ರೋಶ ವ್ಯಕ್ತಪಡಿಸಿದ್ದು, ರಾಜ್ಯಸರ್ಕಾರದ ವಿರುದ್ಧ ಬಿಜೆಪಿ ನಾಯಕರುಗಳು ವಾಗ್ದಾಳಿ ನಡೆಸಿ ಕರ್ನಾಟಕವನ್ನು ಕಾಂಗ್ರೆಸ್ ಸರ್ಕಾರ ಕಾಶ್ಮೀರ ಮಾಡಲು ಹೊರಟಿದೆ ಎಂದು ಕಿಡಿಕಾರಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ಕರ್ನಾಟಕದಲ್ಲಿ ಕಾಶ್ಮೀರ ಪರಿಸ್ಥಿತಿ ನಿರ್ಮಾಣ ಮಾಡಲು ಕಾಂಗ್ರೆಸ್ ಹೊರಟಿದೆ. ಹಿಂದೂಗಳಿಗೆ ರಕ್ಷಣೆ ಇಲ್ಲವಾಗಿದೆ ಎಂದು ವಾಗ್ದಾಳಿ ನಡೆಸಿದ್ದಾರೆ. ರಾಜ್ಯದಲ್ಲಿ ಕಾನೂನು ವ್ಯವಸ್ಥೆ ಯನ್ನು ಗೂಂಡಾಗಳು, ಸಮಾಜಘಾತುಕ ಶಕ್ತಿಗಳು, ಅಪೋಶನ ಮಾಡಿಕೊಂಡು ಕೊಲೆ, ಸುಲಿಗೆ, ಅತ್ಯಾಚಾರ ಹಾಗೂ ದೌರ್ಜನ್ಯಗಳಲ್ಲಿ ನಿರತರಾಗಿದ್ದಾರೆ.ಮಂಗಳೂರಿನ ಹಿಂದೂ ಕಾರ್ಯಕರ್ತ ಸುಹಾಸ್ ಅವರ ಭೀಕರ ಕೊಲೆ ಸಾಗಜೀರ ಸಮಾಜವನ್ನು ಬೆಚ್ಚಿ ಬೀಳಿಸಿದೆ. ಮತೀಯವಾದಿಗಳು ಹಿಂದೂ ವಿರೋಧಿ ರಕ್ಕಸರು ನಡು ರಸ್ತೆಯಲ್ಲೇ ಅಟ್ಟಹಾಸ ಗೈದು ಕೊಲೆ ಮಾಡಿರುವ ದೃಶ್ಯಗಳು ನಾವು ಯಾವ ನೆಲದಲ್ಲಿ ವಾಸಿಸುತ್ತಿದ್ದೇವೆ ಎಂಬ ಪ್ರಶ್ನೆಯನ್ನು ಹುಟ್ಟುಹಾಕಿದೆ. ಸುಹಾಸ್ ಕೊಲೆ ಪೂರ್ವ ನಿಯೋಜಿತ ಎನ್ನುವುದು ಸುಸ್ಪಷ್ಟ ಎಂದಿದ್ದಾರೆ. ಈ ಕೊಲೆಗೆ ಗುಪ್ತಚರ ಇಲಾಖೆ ವೈಫಲ್ಯವೋ ಕಾನೂನು ಸುವ್ಯವಸ್ಥೆ ಹೊತ್ತವರ ಹೊಣೆಗೇಡಿತನ ಕಾರಣವೋ ಎಂಬ ಬಗ್ಗೆ ಸೂಕ್ತ ತನಿಖೆ ನಡೆಯಬೇಕಿದೆ ಎಂದು ವಿಜಯೇಂದ್ರ ಆಗ್ರಹಿಸಿದ್ದಾರೆ.

ಕಾಶ್ಮೀರದಲ್ಲಿ ಹಿಂದೂಗಳ ಮಾರಣಹೋಮದ ಸುದ್ದಿ ಇನ್ನೂ ಹಸಿರಾಗಿರುವಾಗಲೇ ಮಂಗಳೂರಿನಲ್ಲಿ ಹಿಂದೂ ಕಾರ್ಯಕರ್ತನನ್ನು ಕೊಚ್ಚಿ ಕೊಲೆ ಮಾಡಿರುವುದು ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಕಾಶ್ಮೀರ ಪರಿಸ್ಥಿತಿ ನಿರ್ಮಾಣ ಮಾಡಲು ಹೊರಟಂತೆ ಕಾಣುತ್ತಿದೆ. ಮೇಲಿಂದ ಮೇಲೆ ಕರ್ನಾಟಕದಲ್ಲಿ ಹಿಂದೂಗಳ ಮೇಲಿನ ದೌರ್ಜನ್ಯ ಹಲ್ಲೆ ಕೊಲೆಗಳು ನಿರಂತರವಾಗಿ ನಡೆಯುತ್ತಿದ್ದು ರಾಜ್ಯದ ಜನತೆ ಆತಂಕಗೊಂಡಿದ್ದಾರೆ. ಕಾನೂನು ಸುವ್ಯವಸ್ಥೆಯನ್ನು ಕೊಲೆಗಡುಕರು ದುಷ್ಟರ ಕೈಗೆ ಒಪ್ಪಿಸಿರುವಂತೆ ಕಾಣುತ್ತಿರುವ ಈ ಕಾಂಗ್ರೆಸ್ ಸರ್ಕಾರದ ಮುಷ್ಠಿಯಿಂದ ರಾಜ್ಯವನ್ನು ಕಾಪಾಡುವ ನಿಟ್ಟಿನಲ್ಲಿ ರಾಜ್ಯಪಾಲರು ಮಧ್ಯ ಪ್ರವೇಶಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# ಬನ್ನೇರುಘಟ್ಟಕ್ಕೆ ಮೆಟ್ರೋ ವಿಸ್ತರಣೆಗೆ ಡಿಪಿಆರ್ ಸಿದ್ಧ: ಡಿಸಿಎಂ ಡಿಕೆಶಿ

**ಬೆಂಗಳೂರು, ಮೇ.2–** ಆನೇಕಲ್ ತಾಲೂಕಿಗೆ ಕುಡಿಯಲು ಕಾವೇರಿ ನೀರು ಪೂರೈಸಲು ಟೆಂಡರ್ ಕರೆಯಲಾಗಿದ್ದು ಹಾಗೂ ಮೆಟ್ರೋ ವಿಸ್ತರಣೆಗೆ ಡಿಪಿಆರ್ ಸಿದ್ಧಪಡಿಸಲಾ ಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ನಮಗೆ ಆನೇಕಲ್ ಬೇರೆಯಲ್ಲ ಕನಕಪುರ ಬೇರೆಯಲ್ಲ.ಈ ಕ್ಷೇತ್ರದ ಅಭಿವೃದ್ಧಿಗೆ ನಾವು ಬದ್ಧವಾಗಿದ್ದೇವೆ ಎಂದು ತಿಳಿಸಿದರು.ಆನೇಕಲ್ ತಾಲ್ಲೂಕು ಹೆನ್ನಾಗರ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ ಶುಕ್ರವಾರ ನಡೆದ ವಿವಿಧ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಾತನಾಡಿ, ಸಚಿವ ರಾಮಲಿಂಗಾರೆಡ್ಡಿ, ಶಾಸಕ ಶಿವಣ್ಣ, ಮಾಜಿ ಸಂಸದ ಸುರೇಶ್, ರಮೇಶ್ ಅವರು ನಿಮ್ಮನ್ನು ಬೆಂಗಳೂರು ನಗರ ವ್ಯಾಪ್ತಿಗೆ ಸೇರಿಸಬೇಕು ಎಂದು ನನ್ನ ಮೇಲೆ ಒತ್ತಾಯ ಹಾಕುತ್ತಿದ್ದಾರೆ. ಈ ಬಗ್ಗೆ ಮುಂದೆ ಚರ್ಚೆ ಮಾಡುತ್ತೇನೆ. ನಿಮ್ಮನ್ನು ಗ್ರೇಟರ್ ಬೆಂಗಳೂರಿನಲ್ಲಿ ಸೇರಿಸಲು ಚರ್ಚೆಯಾಗುತ್ತಿದೆ. ಎಲ್ಲಾ ಶಾಸಕರ ಜತೆ ಚರ್ಚೆ ಮಾಡಿ ತೀರ್ಮಾನ ಮಾಡುತ್ತೇವೆ. ಇನ್ನು ಈ ಭಾಗಕ್ಕೆ ಕಾವೇರಿ ನೀರನ್ನು ಪೂರೈಸಬೇಕು ಎಂದು ಸುರೇಶ್ ಹಾಗೂ ರಾಮಲಿಂಗಾ ರೆಡ್ಡಿ ಅವರು ಒತ್ತಡ ಹಾಕುತ್ತಿದ್ದಾರೆ. ಆನೇಕಲ್ ತಾಲೂಕಿಗೆ 30 ಎಂಎಲ್‌ಡಿ ನೀರನ್ನು ನೀಡಲು ಟೆಂಡರ್ ಕರೆಯಲಾಗಿದೆ.



ಈ ಬಗ್ಗೆ ನಾಳೆ ಶಾಸಕ ಶಿವಣ್ಣ ಅವರ ಜತೆ ಚರ್ಚೆ ಮಾಡಲಿದ್ದೇನೆ. ಜಿಗಣಿ, ಆನೇಕಲ್, ಸರ್ಜಾಪುರ, ಬನ್ನೇರುಘಟ್ಟಕ್ಕೆ ಮೆಟ್ರೋ ರೈಲು ಮಾರ್ಗ ವಿಸ್ತರಿಸಲು ಡಿಪಿಆರ್ ಸಿದ್ಧಪಡಿಸಲಾಗುತ್ತಿದೆ ಎಂದು ತಿಳಿಸಿದರು.

ನಮಗೆ ಆನೇಕಲ್ ಬೇರೆಯಲ್ಲ ಕನಕಪುರ ಬೇರೆಯಲ್ಲ. ಈ ಕ್ಷೇತ್ರದ ಅಭಿವೃದ್ಧಿಗೆ ನಾವು ಬದ್ಧವಾಗಿದ್ದೇವೆ. ಈ ಕ್ಷೇತ್ರದಲ್ಲಿ ವಿದ್ಯಾವಂತರು, ಪ್ರಜ್ಞಾವಂತರಿದ್ದೀರಿ. ಒಂದೇ ಗ್ರಾಮ ಪಂಚಾಯ್ತಿಯಲ್ಲಿ ಇಷ್ಟು ದೊಡ್ಡ ಕಾರ್ಯಕ್ರಮ ಮಾಡುತ್ತಿದ್ದು, ನಿಮ್ಮ ಜತೆ ನಮ್ಮ ಸರ್ಕಾರ ಇದೆ ಎಂದು ಹೇಳಲು ನಾನು ಹಾಗೂ ರಾಮಲಿಂಗಾರೆಡ್ಡಿ ಅವರು ಬಂದಿದ್ದೇವೆ ಎಂದರು.

# ಅಂತರ್ಜಲ ಬರಿದು, ನೀರಿನ ಅಭಾವ ಸಾಧ್ಯತೆ

**ಬೆಂಗಳೂರು, ಮೇ 2–** ಸಿಲಿಕಾನ್ ಸಿಟಿಗೆ ಈ ಬಾರಿಯೂ ನೀರಿನ ಅಭಾವ ಸೃಷ್ಟಿಯಾಗುವ ಸಾಧ್ಯತೆ ಇದೆ ಎನ್ನಲಾಗಿದೆ.

ಏಕೆಂದರೆ, ಅಂತರ್ಜಲ ಕೈ ಕೊಟ್ಟಿದ್ದು, ಪಾಲಿಕೆ ವ್ಯಾಪ್ತಿಯಲ್ಲಿನ ಬರೋಬ್ಬರಿ 12 ಸಾವಿರಕ್ಕೂ ಅಧಿಕ ಬೋರ್‌ವೆಲ್‌ಗಳಲ್ಲಿ ನೀರಿಲ್ಲ. ಹೀಗಾಗಿ ಇಂತಹ ಬೋರ್ ವೆಲ್‌ಗಳನ್ನು ಬಿಬಿಎಂಪಿ ಜಲ ಮಂಡಳಿಗೆ ಹಸ್ತಾಂತರ ಮಾಡಿ ಕೈತೊಳೆದುಕೊಂಡಿದೆ. ಪಾಲಿಕೆ ಬಳಿ ಇದ್ದ ಬರೋಬ್ಬರಿ 14



ಸಾವಿರಕ್ಕೂ ಅಧಿಕ ಬೋರ್‌ವೆಲ್ ಗಳು ಜಲಮಂಡಳಿಗೆ ಹಸ್ತಾಂತರ ವಾಗಿವೆ. ಪ್ರತಿ ವರ್ಷ ಬೋರ್‌ವೆಲ್ ನಿರ್ವಹಣೆ, ಅಂತರ್ಜಲ ಮಟ್ಟ ಏರಿಕೆಗೆ ಪಾಲಿಕೆ ಮೀಸಲಿಟ್ಟ ಕೋಟಿ ಕೋಟಿ ಹಣ ಖೋತ ಆಗುತ್ತಿದೆ. ಈ ಹಿನ್ನೆಲೆಯಲ್ಲಿ ನಿರ್ವಹಣೆ ಕಷ್ಟ ಎಂಬ ಕಾರಣಕ್ಕೆ ಜಲ ಮಂಡಳಿಗೆ ಹಸ್ತಾಂತರಿಸಲಾಗಿದೆ.ಆದರೆ, ಅತ್ತ ನೀರೂ ಇಲ್ಲ, ಇತ್ತ ನಿರ್ವಹಣೆ ಹೊಣೆಯಿಂದಾಗಿ ಜಲಮಂಡಳಿಗೆ ಹೊರೆಯಾಗುತ್ತಿದೆ. ಪಾಲಿಕೆ ಹಸ್ತಾಂತರ ಮಾಡಿದ ಬೋರ್‌ವೆಲ್ ಗಳು ನೀರಿಲ್ಲದೇ, ಜನರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ತನ್ನದಲ್ಲದ ತಪ್ಪಿಗೆ ಜಲಮಂಡಳಿ ಜನರ ಕಡೆಯಿಂದ ಛೀಮಾರಿ ಹಾಕಿಸಿಕೊಳ್ಳುತ್ತಿದೆ.

## 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ ಎ, ಬಿ ವೃಂದ ಪರೀಕ್ಷೆ

# ಪರೀಕ್ಷಾ ಕೇಂದ್ರಗಳ ಹತ್ತಿರ ಜೆರಾಕ್ಸ್, ಪುಸ್ತಕ ಅಂಗಡಿ ಪೊಲೀಸ್ ಮುಚ್ಚುವಂತೆ ಆಯುಕ್ತ ದಯಾನಂದ್ ಆದೇಶ

**ಬೆಂಗಳೂರು, ಮೇ 2–** ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ 2023–24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ ಎ ಮತ್ತು ಗ್ರೂಪ್ ಬಿ ವೃಂದದ 384 ಹುದ್ದೆಗಳಿಗೆ ಮುಖ್ಯ ಪರೀಕ್ಷೆ ನಾಳೆಯಿಂದ ನಾಲ್ಕು ದಿನ ನಡೆಯಲಿದ್ದು, ಪರೀಕ್ಷಾ ಕೇಂದ್ರಗಳ ಸುತ್ತ ನಿಷೇದಾಜ್ಞೆ ಜಾರಿ ಗೊಳಿಸಲಾಗಿದೆ.

ಆರ್.ಪಿ.ಸಿ 310 ಮತ್ತು ಹೆಚ್.ಕೆ 74 ಹುದ್ದೆಗಳಿಗೆ ಮುಖ್ಯ ಪರೀಕ್ಷೆಗಳು ನಾಳೆ ಮೇ 5, ಮೇ 7 ಮತ್ತು ಮೇ 9 ರಂದು ನಗರದ ಒಟ್ಟು 9 ಉಪಕೇಂದ್ರಗಳಲ್ಲಿ



ನಡೆಯಲಿದೆ.

ಈ ಪರೀಕ್ಷೆಗಳನ್ನು ಸುಗಮವಾಗಿ ಹಾಗೂ ಸುವ್ಯವಸ್ಥಿತವಾಗಿ ನಡೆಸುವ ಸಲುವಾಗಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿನ 200 ಮೀಟರ್ ಪ್ರದೇಶವನ್ನು ನಿಷೇ ತ ಪ್ರದೇಶವೆಂದು ಘೋಷಿಸಲಾಗಿದೆ.

ಪರೀಕ್ಷೆ ನಡೆಯುವ ದಿನಾಂಕಗಳಂದು ಪರೀಕ್ಷಾ ಕೇಂದ್ರಗಳ ಹತ್ತಿರದಲ್ಲಿರುವ ಎಲ್ಲಾ ಜೆರಾಕ್ಸ್, ಪುಸ್ತಕ ಅಂಗಡಿಗಳನ್ನು ಮುಚ್ಚುವಂತೆ ನಗರ ಪೊಲೀಸ್ ಆಯುಕ್ತರಾದ ಬಿ.ದಯಾನಂದ ರವರು ಆದೇಶ ಹೊರಡಿಸಿದ್ದಾರೆ.

# ಸಿ.ಟಿ.ರವಿ ಸಲ್ಲಿಸಿದ ಅರ್ಜಿ ವಜಾ

**ಬೆಂಗಳೂರು, ಮೇ 2–** ಕಳೆದ ವರ್ಷ ಡಿಸೆಂಬರ್‌ನಲ್ಲಿ ಬೆಳಗಾವಿಯಲ್ಲಿ ನಡೆದ ಅಧಿವೇಶನದಲ್ಲಿ ಬಿಜೆಪಿ ಎಂಎಲ್‌ಸಿ ಸಿ.ಟಿ.ರವಿ ಅವರು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರಿಗೆ ಅವಾಚ್ಯ ಪದಗಳಿಂದ ನಿಂದಿಸಿದ್ದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸಿ.ಟಿ.ರವಿ ಅವರು ಪ್ರಕರಣ ರದ್ದು ಕೋರಿ ಹೈಕೋರ್ಟಿಗೆ ಅರ್ಜಿ ಸಲ್ಲಿಸಿದ್ದರು.

ಇದೀಗ ವಿಚಾರಣೆ ನಡೆಸಿದ ಹೈಕೋರ್ಟ್ ಸಿ.ಟಿ.ರವಿ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದೆ. ಲಕ್ಷ್ಮಿ ಹೆಬ್ಬಾಳ್ಕರ್ ಅವರಿಗೆ ಸಿಟಿ ರವಿ ಅವಾಚ್ಯ ಪದ ಬಳಕೆ ಮಾಡಿದ್ದರು. ಈ ಪ್ರಕರಣವನ್ನು ರದ್ದು ಕೋರಿ ಸಿ.ಟಿ.ರವಿ ಸಲ್ಲಿಸಿದ್ದ ಅರ್ಜಿ ವಜಾಗೊಳಿಸಲಾಗಿದೆ.

ಆರೋಪಿಸಿದ ಪದ ಉತ್ತರಿಸಿದ್ದಾರೆ. ಅದು ಮಹಿಳೆಯ ಘನತೆಗೆ ಹಾನಿ ಉಂಟಾಗುತ್ತದೆ ಇದು ಶಾಸನ ಸಭೆಯ ವಿನಾಯಿತಿಗೆ ಒಳಪಡುವುದಿಲ್ಲ ಎಂದು ನ್ಯಾ. ಎಂ.ನಾಗಪ್ರಸನ್ನ ಅವರಿದ್ದ ಹೈ ಕೋರ್ಟ್ ಪೀಠ ಅಭಿಪ್ರಾಯ ವ್ಯಕ್ತಪಡಿಸಿದೆ.





ಈ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಎರಡನೆಯ ರ‍್ಯಾಂಕ್ (624/625) ಪಡೆದಿರುವ ಚಿರಂಜೀವಿ ಪ್ರಣವಿ. ಎನ್. ರಾಜ್. ಅವರಿಗೆ ಎನ್‌ಇಎಸ್‌ನ ಎಲ್ಲಾ ಪದಾಧಿಕಾರಿಗಳು, ಶಾಲೆಯ ಎಲ್ಲಾ ಅಧ್ಯಾಪಕರು, ಕಚೇರಿ, ಹಾಗೂ ಇತರೆ ಸಿಬ್ಬಂದಿಗಳ ಪರವಾಗಿ ಅಭಿನಂದನೆ ಸಲ್ಲಿಸಿದರು.

# ಶಿಕ್ಷಕರ ಹುದ್ದೆ ಭರ್ತಿ ಆಗದಿದ್ದರೆ ಶಾಲೆಗಳು ಅಧೋಗತಿಗೆ: ಬಿಳಿಮಲೆ ಎಚ್ಚರಿಕೆ

**ಬೆಂಗಳೂರು, ಮೇ. 2–**ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ಆರವತ್ತು ಸಾವಿರ ಶಿಕ್ಷಕರ ಹುದ್ದೆಗಳನ್ನು ಆದ್ಯತೆಯ ಮೇರೆಗೆ ಶೀಘ್ರ ಭರ್ತಿ ಮಾಡದಿದ್ದಲ್ಲಿ ಶಾಲೆಗಳು ಅಧೋಗತಿಗೆ ತಲುಪಲಿವೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ ಆತಂಕ ವ್ಯಕ್ತಪಡಿಸಿದ್ದಾರೆ.

ಕನ್ನಡದ ಅಸ್ಮಿತೆಯಾಗಿರುವ ಸರ್ಕಾರಿ ಶಾಲೆಗಳು ಈಗಾಗಲೇ ಇಳಿಮುಖವಾಗುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಯಿಂದ ದುಸ್ಥಿತಿಗೆ ತಲುಪಿವೆ. ಸಾರ್ವಜನಿಕರ ಆಗ್ರಹಕ್ಕೆ ಮಣಿದು ಸಾವಿರಾರು ಕನ್ನಡ ಶಾಲೆಗಳನ್ನು ಆಂಗ್ಲ ಮಾಧ್ಯಮದ ಶಾಲೆಗಳನ್ನಾಗಿ ಪರಿವರ್ತಿಸಲಾಗುತ್ತಿದೆ. ತಾಯ್ನುಡಿಯ ಶಿಕ್ಷಣದ ವೈಜ್ಞಾನಿಕ ಅವಶ್ಯಕತೆಯನ್ನು ಹಿನ್ನೆಲೆಗೆ ಸರಿಸಲಾಗುತ್ತಿದೆ. ಇದೇ ಪರಿಸ್ಥಿತಿ ಮುಂದುವರೆದರೆ ಮುಂದಿನ ದಿನಗಳಲ್ಲಿ ಕನ್ನಡ ಕೇವಲ ಆಡುಭಾಷೆಯಾಗಿ ಉಳಿಯುವ ಅಪಾಯ ತಪ್ಪಿದ್ದಲ್ಲ ಎಂದು ಬಿಳಿಮಲೆ ಹೇಳಿದ್ದಾರೆ.



ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಆರವತ್ತು ಸಾವಿರ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ಕಳೆದ ಸಾಲಿನಲ್ಲಿ ಕೇವಲ ನಲವತ್ತಮೂರು ಸಾವಿರ ಅತಿಥಿ ಶಿಕ್ಷಕರನ್ನು ನೇಮಿಸಿ ಕೊಂಡಿದ್ದು, ಇದು ಬೋಧನಾ ವ್ಯವಸ್ಥೆಯನ್ನು ಇನ್ನಷ್ಟು ಸಂಕೀರ್ಣ ವಾಗಿಸಿದೆ. ಅತಿಥಿ ಶಿಕ್ಷಕರಿಗೆ ನೀಡುವ ಗೌರವಧನವು ನರೇಗಾ ದಿನಗೂಲಿ ಮೊತ್ತಕ್ಕಿಂತ ಕಡಿಮೆ ಇದ್ದು, ಅವರುಗಳ ಸೇವಾ ಭದ್ರತೆ ಸೇರಿದಂತೆ ಕನಿಷ್ಠ ಅವಕಶ್ಯಕತೆಗಳನ್ನು ಸಹ ಈಡೇರಿಸದೇ ಹೋದಲ್ಲಿ ಅವರಿಂದ ಬದ್ಧತೆಯ ಕೆಲಸವನ್ನು ನಿರೀಕ್ಷಿಸುವುದು ಕಷ್ಟಸಾಧ್ಯವೆಂದಿರುವ ಬಿಳಿಮಲೆ, ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಶಿಕ್ಷಕರ ಕೊರತೆಯನ್ನು ನೀಗಿಸಬೇಕಾದ್ದು ಸರ್ಕಾರದ ಪ್ರಾಥಮಿಕ ಜವಾಬ್ದಾರಿಯಾಗುತ್ತದೆ. ಅತಿಥಿ ಶಿಕ್ಷಕರಿಗೆ ಬದ್ಧತೆಯಿಂದ ಕಾರ್ಯ ನಿರ್ವಹಿಸುವ ವಾತಾವರಣವನ್ನು ಕಲ್ಪಿಸುವುದರ ಜೊತೆಯಲ್ಲಿ ಶಿಕ್ಷಕರ ನೇಮಕಾತಿಗೆ ಸರ್ಕಾರವು ಮೊದಲ ಆದ್ಯತೆಯನ್ನು ನೀಡಬೇಕು ಎಂದು ಹೇಳಿದ್ದಾರೆ.

ರಾಜ್ಯದಲ್ಲಿ 3500ಕ್ಕೂ ಅಧಿಕ ಶತಮಾನ ಕಂಡ ಸರ್ಕಾರಿ ಶಾಲೆಗಳಿದ್ದು ಇವುಗಳ ಕಾಯಕಲ್ಪಕ್ಕೆ ವರದಿಯನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಸಿದ್ಧಪಡಿಸುತ್ತಿದ್ದು, ಇದನ್ನು ಶೀಘ್ರ ಸರ್ಕಾರಕ್ಕೆ ಸಲ್ಲಿಸಲಿದೆ ಎಂದು ಪುರುಷೋತ್ತಮ ಬಿಳಿಮಲೆ ಹೇಳಿದ್ದಾರೆ.

# ಎಸ್‌ಎಸ್‌ಎಲ್‌ಸಿ ಪರೀಕ್ಷೆ–1: ಶೇ.66.14ರಷ್ಟು ಫಲಿತಾಂಶ, ಮತ್ತೆ ಬಾಲಕಿಯರೇ ಮೇಲುಗೈ



ಈ ಪರೀಕ್ಷೆಯಲ್ಲಿ ತೇರ್ಗಡೆಯಾಗದ ವಿದ್ಯಾರ್ಥಿಗಳು ಆತಂಕ, ಹತಾಶೆಗೆ ಒಳಗಾಗುವುದು ಬೇಡ, ನಿಮ್ಮೆದುರು ಮತ್ತೆ ಪರೀಕ್ಷೆ ಬರೆಯುವ ಅವಕಾಶಗಳಿವೆ. ಮರಳಿ ಪ್ರಯತ್ನಿಸಿದರೆ ಯಶಸ್ಸು ಖಂಡಿತಾ ಸಿಗಲಿದೆ ಎಂಬುದಾಗಿ ಸಿಎಂ ಸಿದ್ಧರಾಮಯ್ಯ ಕಿವಿಮಾತು ಹೇಳಿದ್ದಾರೆ.ಈ ಬಗ್ಗೆ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವಂತ ಅವರು, ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ನಾಡಿನ ಎಲ್ಲ ವಿದ್ಯಾರ್ಥಿಗಳಿಗೆ ಅಭಿನಂದನೆಗಳು. ನಿಮ್ಮೆಲ್ಲರ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಿದ್ದಾರೆ. ಈ ಪರೀಕ್ಷೆಯಲ್ಲಿ ತೇರ್ಗಡೆಯಾಗದ ವಿದ್ಯಾರ್ಥಿಗಳು ಆತಂಕ, ಹತಾಶೆಗೆ ಒಳಗಾಗುವುದು ಬೇಡ, ನಿಮ್ಮೆದುರು ಮತ್ತೆ ಪರೀಕ್ಷೆ ಬರೆಯುವ ಅವಕಾಶಗಳಿವೆ. ಮರಳಿ ಪ್ರಯತ್ನಿಸಿದರೆ ಯಶಸ್ಸು ಖಂಡಿತಾ ಸಿಗಲಿದೆ ಎಂದಿದ್ದಾರೆ.

**ಬೆಂಗಳೂರು, ಮೇ. 2–** ಎಸ್‌ಎಸ್‌ಎಲ್‌ಸಿ ಪರೀಕ್ಷೆ – 1ರ ಫಲಿತಾಂಶ ಪ್ರಕಟಗೊಂಡಿದ್ದು, ಒಟ್ಟಾರೆ ಶೇ. 66.14 ರಷ್ಟು ಫಲಿತಾಂಶ ಬಂದಿದೆ. ಮೊದಲನೆ ರ‍್ಯಾಂಕ್‌ನನ್ನು 22 ವಿದ್ಯಾರ್ಥಿಗಳು ಹಂಚಿಕೊಂಡಿದ್ದು, ಇವರೆಲ್ಲ 625ಕ್ಕೆ 625 ಅಂಕಗಳನ್ನು ಪಡೆದು ಪ್ರಥಮ ರ‍್ಯಾಂಕ್ ಗಳಿಸಿದ್ದಾರೆ. ಎಸ್‌ಎಸ್‌ಎಲ್ಸಿ ಪರೀಕ್ಷೆಯ ಫಲಿತಾಂಶವನ್ನು ಸುದ್ದಿಗೋಷ್ಠಿಯಲ್ಲಿಂದು ಶಿಕ್ಷಣ ಸಚಿವ ಮಧುಬಂಗಾರಪ್ಪ ಪ್ರಕಟಿಸಿ ಫಲಿತಾಂಶದ ಮಾಹಿತಿಗಳನ್ನು ನೀಡಿದರು.

ಈ ಬಾರಿಯ ಎಸ್‌ಎಸ್‌ಎಲ್ಸಿ ಪರೀಕ್ಷೆಯ ಫಲಿತಾಂಶದಲ್ಲಿ ದಕ್ಷಿಣ ಕನ್ನಡ ಜಿಲ್ಲೆ ಪ್ರಥಮ ಸ್ಥಾನ ಪಡೆದಿದ್ದು, ಉಡುಪಿ ದ್ವಿತೀಯ ಸ್ಥಾನ, ಕಲಬುರಗಿ ಕೊನೆಯ ಸ್ಥಾನ ಪಡೆದುಕೊಂಡಿದೆ ಎಂದು ಹೇಳಿದರು. ಎಂದಿನಂತೆ ಫಲಿತಾಂಶದಲ್ಲಿ ಬಾಲಕಿಯರು ಮುಂದಿದ್ದು, ನಗರ ವಿದ್ಯಾರ್ಥಿಗಳು ಗ್ರಾಮೀಣ ವಿದ್ಯಾರ್ಥಿಗಳಿಗಿಂದ ಹೆಚ್ಚಿನ ಸಂಖ್ಯೆಯಲ್ಲಿ ಉತ್ತೀರ್ಣರಾಗಿದ್ದಾರೆ. ಬಾಲಕಿಯರ ಉತ್ತೀರ್ಣತಾ ಪ್ರಮಾಣ ಶೇ. 74ರಷ್ಟಿದ್ದರೆ, ಬಾಲಕರ ಉತ್ತೀರ್ಣತಾ ಪ್ರಮಾಣ ಶೇ. 58.07ರಷ್ಟಿದೆ. ನಗರ ಪ್ರದೇಶದ ವಿದ್ಯಾರ್ಥಿಗಳ ಉತ್ತೀರ್ಣತಾ ಪ್ರಮಾಣ ಶೇ. 67.05ರಷ್ಟಿದೆ. ಗ್ರಾಮೀಣ ವಿದ್ಯಾರ್ಥಿಗಳ ಉತ್ತೀರ್ಣತಾ ಪ್ರಮಾಣ ಶೇ. 65.47 ರಷ್ಟಿದೆ ಎಂದರು. ಕಳೆದ ಮಾರ್ಚ್ 21 ರಿಂದ ಏ. 4ರವರೆಗೂ ರಾಜ್ಯಾದ್ಯಂತ 2,818 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆದಿತ್ತು. ಈ ಪರೀಕ್ಷೆಯನ್ನು 8,42,173 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯವನ್ನು ಕಳೆದ ಏ. 15 ರಿಂದ ಏ. 26ರ ವರೆಗೂ 237 ಮೌಲ್ಯಮಾಪನ ಕೇಂದ್ರಗಳಲ್ಲಿ ನಡೆದಿತ್ತು. ಒಟ್ಟು 60,943 ಮೌಲ್ಯಮಾಪಕರಿಂದ ಮೌಲ್ಯಮಾಪನ ಕಾರ್ಯ ನಡೆಸಲಾಗಿತ್ತು ಎಂದು ಮಾಹಿತಿ ನೀಡಿದರು. ಪರೀಕ್ಷೆಗಳ ಫಲಿತಾಂಶವನ್ನು ಜಾಲತಾಣದಲ್ಲಿ ಪ್ರಕಟಸಲಾಗಿದ್ದು, ವಿದ್ಯಾರ್ಥಿಗಳ ನೋಂದಾಯಿತ ಮೊಬೈಲ್ ಸಂಖ್ಯೆಗೂ ಎಸ್‌ಎಂಎಸ್ ಮೂಲಕ ರವಾನಿಸಲಾಗಿದೆ ಎಂದು ಅವರು ಹೇಳಿದರು.

ಈ ಬಾರಿಯ ಎಸ್‌ಎಸ್‌ಎಲ್ಸಿ ಪರೀಕ್ಷೆಯಲ್ಲಿ ಸರ್ಕಾರಿ ಶಾಲೆಗಳ ಒಟ್ಟಾರೆ ಫಲಿತಾಂಶ ಶೇ.62.7 ರಷ್ಟಿದ್ದು, ಅನುದಾನಿತ ಶಾಲೆಗಳ ಒಟ್ಟಾರೆ ಫಲಿತಾಂಶ ಶೇ.58.97, ಅನುದಾನ ರಹಿತ ಶಾಲೆಗಳ ಒಟ್ಟಾರೆ ಫಲಿತಾಂಶ ಶೇ. 75.59ರಷ್ಟಿದೆ.

ಈ ಬಾರಿಯ ಎಸ್‌ಎಸ್‌ಎಲ್ಸಿ ಪರೀಕ್ಷೆಯಲ್ಲಿ 329 ಸರ್ಕಾರಿ ಶಾಲೆಗಳು ಶೇ. 100ಕ್ಕೆ 100ರಷ್ಟು ಫಲಿತಾಂಶ ಪಡೆದಿದ್ದು, 53 ಅನುದಾನಿತ, 539 ಅನುದಾನರಹಿತ ಶಾಲೆಗಳು ಶೇ. 100ಕ್ಕ 100ರಷ್ಟು ಫಲಿತಾಂಶ ಪಡೆದಿವೆ. ಈ ಬಾರಿ 6 ಸರ್ಕಾರಿ ಶಾಲೆಗಳು 30 ಅನುದಾನಿತ ಶಾಲೆಗಳು ಹಾಗೂ 108 ಅನುದಾನರಹಿತ ಶಾಲೆಗಳು ಶೂನ್ಯ ಫಲಿತಾಂಶ ಪಡೆದಿವೆ. ಈ ಬಾರಿಯ ಎಸ್‌ಎಸ್‌ಎಲ್ಸಿ ಪರೀಕ್ಷೆಯಲ್ಲಿ ಕನ್ನಡ ಮಾಧ್ಯಮದಲ್ಲಿ ಓದಿದ ವಿದ್ಯಾರ್ಥಿಗಳ ಉತ್ತೀರ್ಣತಾ ಪ್ರಮಾಣ ಶೇ. 57.61 ರಷ್ಟಿದ್ದು, ಆಂಗ್ಲ ಮಾಧ್ಯಮದ ವಿದ್ಯಾರ್ಥಿಗಳ ಉತ್ತೀರ್ಣತಾ ಪ್ರಮಾಣ ಶೆ.78.38ರಷ್ಟಿದೆ. ಉರ್ದು ಮಾಧ್ಯಮದಲ್ಲಿ ಶೇ. 46.46, ಮರಾಠಿ ಮಾಧ್ಯಮದಲ್ಲಿ ಶೇ. 53.97, ತೆಲುಗು ಮಾಧ್ಯಮದಲ್ಲಿ ಶೇ.74.56, ತಮಿಳು ಮಾಧ್ಯಮದಲ್ಲಿ ಶೇ. 37.88, ಹಿಂದಿ ಮಾಧ್ಯಮದಲ್ಲಿ ಶೇ.53.72ರಷ್ಟು ಫಲಿತಾಂಶ ಬಂದಿದೆ. ಈ ಎಸ್‌ಎಸ್‌ಎಲ್ಸಿ ಪರೀಕ್ಷೆಯಲ್ಲಿ 55.066 ವಿದ್ಯಾರ್ಥಿಗಳು ಎ ಪ್ಲಸ್ ಗ್ರೇಡ್ ಅಂದರೆ ಶೇ. 90 ರಿಂದ 100 ರಷ್ಟು ಅಂಕ, 96,536 ವಿದ್ಯಾರ್ಥಿಗಳು ಎ ಗ್ರೇಡ್ (ಶೇ. 80–89 ), 1,14,852 ವಿದ್ಯಾರ್ಥಿಗಳು ಬಿ ಪ್ಲಸ್ ಗ್ರೇಡ್ (ಶೇ. 70–79), 1,26,541 ವಿದ್ಯಾರ್ಥಿಗಳು ಬಿ ಗ್ರೇಡ್ (ಶೇ. 60–69), 109762 ವಿದ್ಯಾರ್ಥಿಗಳು ಸಿ ಪ್ಲಸ್ ಗ್ರೇಡ್ (ಶೇ. 50–59), 20,318 ವಿದ್ಯಾರ್ಥಿಗಳು ಸಿ ಗ್ರೇಡ್ (ಶೇ.35–49)ನಲ್ಲಿ ಪಾಸಾಗಿದ್ದಾರೆ.

## ಮೇನಲ್ಲಿ ಪರೀಕ್ಷೆ 2, ಜೂನ್ ಪರೀಕ್ಷೆ 3

ಎಸ್‌ಎಸ್‌ಎಲ್ಸಿ ಪರೀಕ್ಷೆಯ ಫಲಿತಾಂಶವನ್ನು ಉತ್ತಮಪಡಿಸಿಕೊಳ್ಳಲು ಹಾಗೂ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳು ಮತ್ತೆ ಪರೀಕ್ಷೆ ಬರೆಯಲು ಎಸ್‌ಎಸ್‌ಎಲ್ಸಿ ಪರೀಕ್ಷೆ –2 ಮತ್ತು ಎಸ್‌ಎಸ್‌ಎಲ್ಸಿ ಪರೀಕ್ಷೆ –3ನ್ನು ನಡೆಸಲಾಗುತ್ತಿದ್ದು, ಎಸ್‌ಎಸ್‌ಎಲ್ಸಿ ಪರೀಕ್ಷೆ –2 ಮೇ 26 ರಿಂದ ಜೂ. 2ರ ವರೆಗೂ ನಡೆಯಲಿದೆ. ಎಸ್‌ಎಸ್‌ಎಲ್ಸಿ ಪರೀಕ್ಷೆ –3 ಜೂ. 23 ರಿಂದ ಜೂ. 30ರ ವರೆಗೂ ನಡೆಯಲಿದೆ ಎಂದು ಅವರು ಹೇಳಿದರು. ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿ ಪಡೆಯಲು ಶನಿವಾರದಿಂದ ಆನ್‌ಲೈನ್‌ನಲ್ಲಿ ಮೇ 5ರ ವರೆಗೂ ಅರ್ಜಿ ಸಲ್ಲಿಸಬಹುದು. ಉತ್ತರ ಪತ್ರಿಕೆಗಳ ಮರು ಎಣಿಕೆ ಮತ್ತು ಮರುಮೌಲ್ಯಮಾಪನಕ್ಕೆ ಮೇ 4 ರಿಂದ ಮೇ 11ರ ವರೆಗೂ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

## ಎಂದಿನಂತೆ ಹೆಣ್ಣುಮಕ್ಕಳದ್ದೇ ಪಾರಮ್ಯ

ಈ ಬಾರಿ ಎಸೆಸೆಲ್ಸಿಯಲ್ಲಿ ಕಳೆದ ಬಾರಿಗಿಂತ ಶೇ 8ರಷ್ಟು ಅಧಿಕ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ ಸಚಿವ ಮಧು ಬಂಗಾರಪ್ಪ, ಪರೀಕ್ಷೆಯ ಪಾವಿತ್ರ್ಯ ಕಾಪಾಡಲು ಗ್ರೇಸ್ ಮಾರ್ಕ್ಸ್ ಗೆ ಕಡಿವಾಣ ಹಾಕಲಾಗಿದ್ದು, ವೆಬ್ ಕ್ಯಾಸ್ಟಿಂಗ್ ಮಾಡಲಾಗಿತ್ತು ಎಂದರು.ಈ ಬಾರಿ ಒಟ್ಟು 22 ಮಂದಿ ವಿದ್ಯಾರ್ಥಿಗಳು ಅತಿ ಹೆಚ್ಚು ಅಂಕ ಗಳಿಸಿದ್ದಾರೆ. ದೇವನಹಳ್ಳಿಯ ಸಿ. ಭಾವನಾ, ಮಾಗಡಿ ಮೇನ್ ರೋಡ್ ನ ಧನಲಕ್ಷ್ಮಿ, ಮೈಸೂರಿನ ಧನುಷ್, ಗಿರಿನಗರದ ಜಾಹ್ನವಿ, ಮಲ್ಲೇಶ್ವರದ ಮಧುಸೂಧನ್ ಹಾಗೂ ಕಲ್ಯಾಣ ನಗರದ ನಮಿತಾ ಅತಿ ಹೆಚ್ಚು ಅಂಕ ಗಳಿಸಿದ್ದಾರೆ.ಸರ್ಕಾರಿ ಶಾಲೆಗಳಲ್ಲಿ ಶೇ 62.7 ರಷ್ಟು ಫಲಿತಾಂಶ ಬಂದಿದ್ದು, ಅನುದಾನಿತ ಶಾಲೆಗಳಲ್ಲಿ ಶೇ 58 ಹಾಗೂ ಅನುದಾನ ರಹಿತ ಶಾಲೆಗಳಲ್ಲಿ ಶೇ 75 ರಷ್ಟು ಫಲಿತಾಂಶ ಬಂದಿದೆ. ಎಂದಿನಂತೆ ಹೆಣ್ಣುಮಕ್ಕಳೇ ಮೇಲುಗೈ ಸಾಧಿಸಿದ್ದು ಶೇ 74 ರಷ್ಟು ವಿದ್ಯಾರ್ಥಿನಿಯರು, ಶೇ 58 ರಷ್ಟು ವಿದ್ಯಾರ್ಥಿಗಳು ಪಾಸಾಗಿದ್ದಾರೆ.625/625 ಗಳಿಸಿದ ವಿದ್ಯಾರ್ಥಿಗಳ ಸಂಖ್ಯೆ 22, 624 ಅಂಕ ಪಡೆದ ವಿದ್ಯಾರ್ಥಿಗಳ ಸಂಖ್ಯೆ 65 ಹಾಗೂ 623 ಅಂಕ ಪಡೆದ ವಿದ್ಯಾರ್ಥಿಗಳ ಸಂಖ್ಯೆ 108 ಆಗಿದೆ. 189 ವಿದ್ಯಾರ್ಥಿಗಳು 622 ಅಂಕ ಪಡೆದಿದ್ದಾರೆ.

# ಅಂಡರ್‌ವರ್ಲ್ಡ್ ಸೇರಿದಂತೆ ಹಲವರಿಂದ ನನಗೂ ಜೀವ ಬೆದರಿಕೆ: ಯು.ಟಿ.ಖಾದರ್



**ಬೀದರ್, ಮೇ.2–** ಅಂಡರ್ ವರ್ಲ್ಡ್ ಸೇರಿದಂತೆ ಪಿಎಫ್‌ಐ ಸಂಘಟನೆಗಳಿಂದ ಹಲವು ಕಡೆಗಳಿಂದ ಈ ಹಿಂದೆ ಕೆಲವು ಬಾರಿ ನನಗೆ ಜೀವ ಬೆದರಿಕೆ ಕರೆಗಳು ಬಂದಿವೆ ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ ಹೇಳಿದರು.

ಮಾಧ್ಯಮಗಳೊಂದಿಗೆ, ಪಿಎಫ್‌ಐನಿಂದಲೂ ಜೀವ ಬೆದರಿಕೆ ಬಂದಿದೆ ಎಂಬ ಅನುಪಮಾ ಶೆಣೈ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ನನಗಾಗಿ ಮಂಗಳೂರಿನಲ್ಲಿ ಎನ್‌ಐಎ ಸ್ಥಾಪನೆ ಮಾಡುವುದು ಬೇಡ. ಜಿಲ್ಲೆಯ ಜನಕ್ಕಾಗಿ ಮಾಡುವುದಾದರೆ ಮಾಡಲಿ. ಎಲ್ಲಿ ಹುಟ್ಟಬೇಕು? ಎಲ್ಲಿ ಸಾಯಬೇಕು? ಅದನ್ನು ದೇವರು ಮೊದಲೇ ಬರೆದಿದ್ದಾನೆ. ನೆಮ್ಮದಿಯಾಗಿ ಸಾಯುವ ಪರಿಸ್ಥಿತಿ ದೇವರು ಮಾಡಲಿಕೊಡಲಿ ಎಂದು ಪ್ರಾರ್ಥನೆ ಮಾಡುತ್ತೇನೆ. ದೇವರು ಇಟ್ಟಂತೆ ಇರಲಿ, ನಮ್ಮ ಕೈಯಲ್ಲಿ ಏನೂ ಇಲ್ಲ ಎಂದು ಹೇಳಿದರು.

ಕಾಶ್ಮೀರದ ಪಹಲ್ಗಾಮ್ ನಲ್ಲಿ ಉಗ್ರರ ದಾಳಿ ಖಂಡನೀಯ. ದಾಳಿಕೋರರನ್ನು ಪತ್ತೆ ಹಚ್ಚಿ ಕಠಿಣ ಕ್ರಮ ಕೈಗೊಳ್ಳುವದರ ಜೊತೆಗೆ ಅದರ ಹಿಂದೆ ಯಾರಿದ್ದಾರೋ ಅವರನ್ನು ಮಟ್ಟ ಹಾಕುವ ಕೆಲಸ ಕೇಂದ್ರ ಸರ್ಕಾರ ಮಾಡಬೇಕು. ದೇಶದ ಜನರು ಮೋದಿಯವರಿಂದ ಇದನ್ನೇ ಅಪೇಕ್ಷೆ ಪಡುತ್ತಾರೆ. ದಾಳಿಗೊಳಗಾದ ಜನರಿಗೆ ಮಾತ್ರವಲ್ಲ, ಇಡಿ ದೇಶದ ಜನರಿಗೆ ನ್ಯಾಯಕೊಡುವ ಕೆಲಸ ಕೇಂದ್ರ ಸರ್ಕಾರ ಮಾಡಬೇಕು ಎಂದು ಆಗ್ರಹಿಸಿದರು.

ದೇಶದ ಸೌಹಾರ್ದತೆಯನ್ನು ಕದಡುವುದು ಭಯೋತ್ಪಾದಕ ಕೃತ್ಯದ ಉದ್ದೇಶವಾಗಿದ್ದು, ಜಾತ್ಯಾತೀತತೆಯನ್ನು ಹಾಳು ಮಾಡಿ, ದೇಶವನ್ನು ದುರ್ಬಲಗೊಳಿಸುವುದು ಅವರ ಗುರಿಯಾಗಿದೆ. ಈ ಕೃತ್ಯದ ವಿರುದ್ಧ ಏನು ಕ್ರಮ ಕೈಗೊಳ್ಳಬೇಕು ಅದನ್ನೆಲ್ಲ ಕೇಂದ್ರ ಸರ್ಕಾರ ತೆಗೆದುಕೊಳ್ಳಬೇಕು. ಯುದ್ಧ ಮಾಡಬೇಕಾ ಅಥವಾ ಬೇಡವಾ ಎನ್ನುವುದು ಮೋದಿ ಹಾಗೂ ಸರ್ವಪಕ್ಷಗಳಿಗೆ ಬಿಟ್ಟಿದ್ದು ಎಂದರು.

ಕೇಂದ್ರದಿಂದ ಜನಗಣತಿ ಜೊತೆಗೆ ಜಾತಿಗಣತಿ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಅದು ಕೇಂದ್ರ ಮತ್ತು ರಾಜ್ಯಕ್ಕೆ ಬಿಟ್ಟಿದ್ದು, ಆಡಳಿತ ಪಕ್ಷ, ಪ್ರತಿಪಕ್ಷಗಳಿಗೆ ಮಿತ್ರನಾಗಿ ನಾನು ಸ್ಪೀಕರ್ ಆಗಿದ್ದೇನೆ. ನನ್ನ ಬಾಯಿಗೆ ಈಗ ಬೀಗ ಹಾಕಿದ್ದು, ನನ್ನ ಪ್ರಕಾರ ನಾನೂ ಮಾತನಾಡಿದ್ದೇನೆ ಎಂದು ಹೇಳಿದರು.

# ಮಠಗಳಿಂದ ನಾಡು, ನುಡಿ ಸಂಸ್ಕೃತಿ ಉಳಿದಿದೆ: ಸಚಿವ ಬೋಸರಾಜು ಅಭಿಮತ




**ರಾಯಚೂರು, ಮೇ.2–** ಜನರಲ್ಲಿ ಸಂಸ್ಕೃತಿ ಸಂಸ್ಕಾರ ಹಾಗೂ ಸಮಾದಲ್ಲಿ ಶಾಂತಿ ಕಾಪಾಡುವಲ್ಲಿ ಮಠಗಳ ಪಾತ್ರ ಬಹಳ ಮುಖ್ಯವಾಗಿದೆ. ಅನ್ನ ದಾಸೋಹ, ಜ್ಞಾನ ದಾಸೋಹ, ಅಯ್ಯಾಚಾರ, ನಿರಾಶ್ರಿತರಿಗೆ ಆಶ್ರಯ, ಬಡ ಮಕ್ಕಳಿಗೆ ಶಿಕ್ಷಣದ ಅರಿವು ಮೂಡಿಸುವುದಲ್ಲದೇ ಉಚಿತ ಸಾಮೂಹಿಕ ವಿವಾಹಗಳನ್ನು ಆಯೋಜಿಸುವ ಮೂಲಕ ದುಂದುವೆಚ್ಚಕ್ಕೆ ಕಡಿವಾಣ ಹಾಕಿ ಬಡವರ ಕನಸಿನ ಬಯಕೆಗಳನ್ನು ಈಡೇರಿಸುತ್ತಿವೆ ಎಂದು ಸಚಿವ ಎನ್.ಎಸ್.ಭೋಸರಾಜು ಹೇಳಿದರು.

ಮಾನ್ವಿ ತಾಲೂಕಿನ ಶ್ರೀ ಅಡೆವಿಸಿದ್ದೇಶ್ವರ ಮಠದಲ್ಲಿ ಶ್ರೀ ಮರಿಬಸವ ದೇಶಕೇಂದ್ರ ದೇವರ ಪಟ್ಟಾಭಿಷೇಕ ಕಾರ್ಯಕ್ರಮದಲ್ಲಿ ಸಚಿವ ಎನ್ ಎಸ್ ಬೋಸರಾಜು ಹಾಗೂ ಶಾಸಕ ಹಂಪಯ್ಯ ನಾಯಕ ಅವರು ಬಾಗವಹಿಸಿದ್ದರು.

ನಮ್ಮೆಲ್ಲರಲ್ಲಿ ನಾಡು, ನುಡಿ ಸಂಸ್ಕೃತಿ ಉಳಿಯಬೇಕಾದರೆ ಇಂತಹ ಮಠಗಳ ಸಾಕಷ್ಟು ಪರಿಶ್ರಮವಿದೆ. ಜಾತಿ ಧರ್ಮದಿಂದ ಆಚೆಗೆ ಎಲ್ಲರನ್ನೂ ಒಂದೇ ಭಾವನೆಯಿಂದ ನೋಡುವ ಮೂಲಕ ದೇಶದಲ್ಲಿ ಸೌಹಾರ್ದತೆಯನ್ನು ಇಂತಹ ಮಠಗಳು ಕಾಪಾಡುತ್ತಿವೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.




ಶುಕ್ರವಾರ ಮಂಗಳೂರಿನಲ್ಲಿ ಸುಹಾಸ್ ಶೆಟ್ಟಿ ಅವರ ಅಂತ್ಯಕ್ರಿಯೆಯ ಮೆರವಣಿಗೆ ನಡೆಯಿತು.

# ಮುಸ್ಲಿಮರನ್ನು ಕೇಂದ್ರವಾಗಿಟ್ಟುಕೊಂಡು ರಾಜಕಾರಣ ಮಾಡುತ್ತಿರುವುದು ಕಾಂಗ್ರೆಸ್: ಸುನಿಲ್ ಕುಮಾರ್



**ಮಂಗಳೂರು, ಮೇ.2–** ನಿನ್ನೆ ಬಜ್ಪೆಯಲ್ಲಿ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿಯನ್ನು ಲಾಂಗು ಮಚ್ಚುಗಳಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಇಡೀ ರಾಜ್ಯವನ್ನೇ ಬೆಚ್ಚಿ ಬೀಳಿಸಿದೆ. ಇದೀಗ ಘಟನೆ ಬಗ್ಗೆ ಕಾರ್ಕಳದ ಶಾಸಕ ಸುನಿಲ್ ಕುಮಾರ್ ಸ್ಫೋಟಕ ಹೇಳಿಕೆ ನೀಡಿದ್ದಾರೆ.

ಸುಹಾಸ್ ಶೆಟ್ಟಿ ಹತ್ಯೆಯ ಕುರಿತು ಮಾತನಾಡಿರುವ ಸುನಿಲ್ ಕುಮಾರ್, ಸುಹಾಸ್ ಶೆಟ್ಟಿಯ ಹತ್ಯೆಯ ಬಗ್ಗೆ ಪೊಲೀಸರಿಗೆ ಮೊದಲೇ ಮಾಹಿತಿ ಇತ್ತು. ಈ ಬಗ್ಗೆ ಅವರಿಗೆ ಮೊದಲೇ ತಿಳಿದಿತ್ತು. ಆದರೆ ಅತೀಯಾದ ಮುಸ್ಲಿಮರ ಓಲೈಕೆಯಿಂದಾಗಿ ರಾಜ್ಯದಲ್ಲಿ ಇಂತಹ ಘಟನೆಗಳು ಮರುಕಳಿಸುತ್ತಿದೆ ಎಂದು ಹೇಳಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಮೊದಲೇ ಹತ್ಯೆಯ ಬಗ್ಗೆ ಸಂದೇಶ ಹರಿದಾಡಿತ್ತು. ಮೊದಲೇ ಮಾಹಿತಿ ಇದ್ದರೂ ಪೊಲೀಸರು ಸುಮ್ಮನಿದ್ದರು. ಕಾಂಗ್ರೆಸ್ ರಾಜ್ಯದಲ್ಲಿ ಮುಸ್ಲಿಮರನ್ನು ಕೇಂದ್ರವಾಗಿಟ್ಟುಕೊಂಡು ರಾಜಕಾರಣ ಮಾಡುತ್ತಿದೆ. ಶವದ ಮೇಲಿನ ಕಾಂಗ್ರೆಸ್ ರಾಜಕಾರಣ ರಾಜ್ಯವನ್ನು ಇಲ್ಲಿಗೆ ತಂದು ನಿಲ್ಲಿಸಿದೆ ಎಂದು ಕಿಡಿಕಾರಿದ್ದಾರೆ.

# ಇಂದಿನ ವಿದ್ಯಾರ್ಥಿಗಳಿಗೆ ಸೃಜನಶೀಲತೆ -ವಿಮರ್ಶಾತ್ಮಕ ಚಿಂತನೆ, ಮನೋಭಾವನೆ ಮುಖ್ಯ - ಎಸ್. ಪನ್ನರಾಜ್

**ಬಳ್ಳಾರಿ ಮೇ.02–** 02/05/2025 ರಂದು ಬಳ್ಳಾರಿಯ ವೀರಶೈವ ವಿದ್ಯಾವರ್ಧಕ ಸಂಘದ ಅಲ್ಲಂ ಕರಿಬಸಪ್ಪ ಇನ್ಸಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ (ಅಕಿಮ್) ಕಾಲೇಜಿನಲ್ಲಿ 'ಪಾಂಚಜನ್ಯ 2025' ಒಂದು ದಿನದ ರಾಷ್ಟ್ರೀಯ ಮಟ್ಟದ ಪದವಿ ಕಾಲೇಜ್ ವಿದ್ಯಾರ್ಥಿಗಳಿಗೆ ಮ್ಯಾನೇಜ್ಮೆಂಟ್ ಫೆಸ್ಟ್ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಮುಖ್ಯ ಅತಿಥಿಗಳಾದ ಎಸ್. ಪನ್ನರಾಜ್ ಮಾಜಿ ಅಧ್ಯಕ್ಷರು, ಎಸ್ ಐ ಆರ್ ಸಿ, ಚೆನ್ನೈ ಮತ್ತು ಡಾ. ಬಿ. ಶಂಭು ಲಿಂಗಪ್ಪ, ವಿಭಾಗೀಯ ನಿರ್ದೇಶಕರು, ವಿ ಟಿ ಯು ವಿಭಾಗೀಯ ಕೇಂದ್ರ, ಕಲಬುರಗಿ ಇವರು ಉದ್ಘಾಟಿಸಿದರು. ವಿದ್ಯಾರ್ಥಿಗಳು ಪ್ರತಿಯೊಂದು ಸ್ಪರ್ಧೆಗಳಲ್ಲಿ ಭಾಗವಹಿಸಬೇಕು. ಇಂದು ವಿದ್ಯಾರ್ಥಿಗಳು ನಾವೀನ್ಯತೆ, ನಾಯಕತ್ವ ಮತ್ತು ನಿರ್ವಹಣೆಯ ಶ್ರೇಷ್ಠತೆಯನ್ನು ಬೆಳೆಸಿಕೊಳ್ಳಬೇಕು. ಕೇವಲ ಶಿಕ್ಷಣ ಪುಸ್ತಕಕ್ಕೆ ಮಾತ್ರ ಸೀಮಿತವಾಗಬಾರದು. ಭವಿಷ್ಯದಲ್ಲಿ ಸವಾಲುಗಳನ್ನು ನಿರ್ವಹಣೆ ಮಾಡಲು ಮತ್ತು ಸಹಯೋಗ, ಸೃಜನಶೀಲತೆ ಮತ್ತು ವಿಮರ್ಶಾತ್ಮಕ ಚಿಂತನೆಗಳ ಮನೋಭಾವನೆ ಬೆಳಸಿಕೊಂಡು ಇಂತಹ ಕಾರ್ಯಕ್ರಮಗಳಲ್ಲಿ ಭಾಗ ವಹಿಸುವುದು ಅತ್ಯವಶ್ಯಕವಾಗಿದೆಂದು ಪನ್ನರಾಜ್ ರವರು ವಿದ್ಯಾರ್ಥಿಗಳಿಗೆ ಕರೆಕೊಟ್ಟರು.

ವಿದ್ಯಾರ್ಥಿಗಳಿಗೆ ಎಲ್ಲಾ ನಿರ್ವಹಣಾತ್ಮಕ ಗುಣಗಳನ್ನು ಬೆಳೆಸಿಕೊಳ್ಳುವ ಅತೀ ಮುಖ್ಯವಾದ ಕಾರ್ಯಕ್ರಮವನ್ನು ಸಂಸ್ಥೆಯು ಆಯೋಜಿಸಿದೆ. ಎಲ್ಲಾ ವಿದ್ಯಾರ್ಥಿಗಳು ಒಂದಡೆ ಸೇರಿ ವಿವಿಧ ಸ್ಪರ್ಧಾತ್ಮಕ ಚರ್ಚೆಗಳಲ್ಲಿ ಭಾಗವಹಿಸಿ ಭೌತಿಕವಾಗಿ ಮತ್ತು ಮಾನಸಿಕವಾಗಿ ತಯರಾಗುವುದು ಮುಖ್ಯವಾಗಿದೆ. ಇದು ಎಲ್ಲಾ ವಿದ್ಯಾರ್ಥಿಗಳ ನೈಜ ಪ್ರತಿಭೆ ಮತ್ತು ಕೌಶಲ್ಯಗಳನ್ನು ಪ್ರದರ್ಶಿಸುತ್ತದೆ. ಮತ್ತು ಶಿಕ್ಷಣ ಸಮುದಾಯದ ಬೆಳವಣಗೆಯನ್ನು ಎತ್ತಿ ತೋರಿಸುತ್ತದೆ. ವೀ ವಿ ಸಂಘವು ಶಿಕ್ಷಣಕ್ಕೆ ವಿಶಿಷ್ಠವಾದ ಮಹತ್ವವನ್ನು ನೀಡಿದೆ. ಸುಮಾರು 100 ವರ್ಷಗಳಿಂದ ಅವಿರತವಾಗಿ ಶ್ರಮಿಸುತ್ತಿದೆ. ವಿದ್ಯಾರ್ಥಿಗಳ ಶೈಕ್ಷಣಿ ಕ ಅಭಿವೃದ್ಧಿಗೆ ಹಲವಾರು ಕಾರ್ಯಕ್ರಮಗಳನ್ನು ನಡೆಸುತ್ತಿದ್ದು, ಎಲ್ಲಾರು ಸದುಪಯೋಗಪಡಿಸಿಕೊಂಡು ಸಂಸ್ಥೆಯ ಕೀರ್ತಿಯನ್ನು ಹೆಚ್ಚಿಸಲು ಕರೆಕೊಟ್ಟರು. ದೇಶದ ಅಭಿವೃದ್ಧಿಯಲ್ಲಿ ನಿರ್ವಹಣ ಶಾಸ್ತ್ರ ಸ್ನಾತಕೋತ್ತರ ಪದವಿ ಪಡೆದ ವಿದ್ಯಾರ್ಥಿಗಳು ತಮ್ಮನ್ನು ತೊಡಗಿಸಿಕೊಂಡು ಉದ್ಯಮಿಗಳಾಗಲು ಮತ್ತು ಉತ್ತಮ ನೆಟವರ್ಕ ಹೊಂದಲು ನಮ್ಮ ಸಂಸ್ಥೆಯು ಪ್ರೇರಣೆ ಮತ್ತು ಸ್ಫೂರ್ತಿಯಾಗಿದೆಂದು ಸಂಸ್ಥೆಯ ಆಡಳಿತ ಮಂಡಳಿ ಟಿ. ನರೇಂದ್ರಬಾಬು ತಿಳಿಸಿದರು.

## ಬೆಲೆ ಹೆಚ್ಚು ಮಾಡಿದ್ದು ತಾನು - ಪ್ರತಿಭಟನೆ ಕೇಂದ್ರದ ವಿರುದ್ಧ

# ಸಿದ್ದರಾಮಯ್ಯನಂತಹ ಪಿಕ್‌ಪಾಕೆಟರ್ ಯಾರೂ ಇಲ್ಲ: ಪ್ರಹ್ಲಾದ್ ಜೋಶಿ

**ಹುಬ್ಬಳ್ಳಿ, ಮೇ.2–** ರಾಜ್ಯದಲ್ಲಿ ಹಾಲು, ವಿದ್ಯುತ್, ಬಸ್ ದರ, ಪೆಟ್ರೋಲ್, ಸರಾಯಿ ದರ, ಮುದ್ರಾಂಕ್ ಶುಲ್ಕ ಮುಂತಾದವುಗಳನ್ನು ತಾನು. ಬೆಲೆ ಏರಿಕೆ ವಿರುದ್ಧ ಹೋರಾಟ ನಡೆಸುತ್ತಿರುವುದು ಕೇಂದ್ರ ಸರ್ಕಾರದ ವಿರುದ್ಧ. ಸಿದ್ದರಾಮಯ್ಯನಂಥ ಪಿಕ್ ಪಾಕೆಟರ್ ಯಾರೂ ಇಲ್ಲ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಆರೋಪಿಸಿದರು.

ಈ ಕುರಿತು ಹುಬ್ಬಳ್ಳಿಯಲ್ಲಿ ಶುಕ್ರವಾರ ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಸಿದ್ದರಾಮಯ್ಯರಿಗೆ ದುರಂಹಕಾರದ ಪರಮಾವದಿ ಹೆಚ್ಚಾಗಿದೆ. ಕಳ್ಳತನ ಮಾಡ್ತೀರಿ, ಸುಳ್ಳತನ ಮಾಡ್ತೀರಿ, ಹಗಲು ದರೋಡೆ ನಡೆಸಿದ್ದೀರಿ. ಸಿದ್ದರಾಮಯ್ಯ ಶಿಷ್ಯಂದಿರು ಬಾಲಿಶವಾಗಿ ಮಾತನಾಡುತ್ತಿದ್ದಾರೆ. ನಮ್ಮ ಸರ್ಕಾರ ಬಂದ ಮೇಲೆ ಹೆಚ್ಚಿನ ಬೆಲೆ ಏರಿಕೆ ಆಗಿಲ್ಲ. ಕರ್ನಾಟಕದಲ್ಲಿ ಬೆಲೆ ಏರಿಕೆ ಆಗಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ಪ್ರಹ್ಲಾದ್ ಜೋಶಿ ಅವರು ತೀವ್ರ ವಾಗ್ದಾಳಿ ನಡೆಸಿದರು.

ಹಾಲಿನಿಂದ ಆಲ್ಕೋಹಾಲ್ ವರಗೆ ಎಲ್ಲಾ ಬೆಲೆ ಏರಿಕೆ ಮಾಡಿದ್ದಾರೆ. ಸಿದ್ದರಾಮಯ್ಯ, ಡಿಸಿಎಂ ಡಿ ಕೆ ಶಿವಕುಮಾರ್, ಮಲ್ಲಿಕಾರ್ಜುನ್ ಖರ್ಗೆ ಸ್ಥಿತಿ ಕೆಟ್ಟುಹೋದ ಗ್ರಾಮಾಫೋನ್ ನಂತಿದೆ. ಮರ್ಯಾದಿಗೇಡಿನ ಪರಮಾವದಿಯಲ್ಲಿದ್ದಾರೆ ಸಿದ್ದರಾಮಯ್ಯ ಎಂದು ಜೋಶಿ ಅವರು ಕಿಡಿಕಾರಿದ್ದಾರೆ. ಇದು ಸಿಎಂ ಸಿದ್ದರಾಮಯ್ಯನವರ ಮರ್ಯಾದೆ ಗೇಡಿತನಕದ ಪರಮಾವಧಿ ಎಂದು ಹೇಳಿದರು.

ಪೆಗಾಸಸ್ ವಿಚಾರದಲ್ಲಿ ಸದನ ಹಾಳು ಮಾಡಿದರು. ಈಗ ಅದೇನು ಆಯಿತು. ಬೆಲೆ ಏರಿಕೆ ಬಗ್ಗೆ ನಾನು ಸದನದಲ್ಲಿ ಚರ್ಚೆಗೆ ಸಿದ್ಧ ಅಂತ ಹೇಳಿದೆ ಆದರೆ ಯಾರು ಕಾಂಗ್ರೆಸ್ ಸಂಸದರು ಮಾತನಾಡಲಿಲ್ಲ. ಕರ್ನಾಟಕದಲ್ಲಿ ಹಾಲಿನಿಂದ ಆಲ್ಕೋಹಾಲ್ ವರಿಗೆ ಬೆಲೆ ಏರಿಕೆ ಇವರ ಮಿಸ್ ಮ್ಯಾನೇಜ್ಮೆಂಟ್ ಕಾರಣ. ರಾಜ್ಯ ಸರ್ಕಾರ ವಿರುದ್ಧ ನಾ ನೀನ ಮರೆಯಲಾರೆ ಅಂತ ಹಾಡಿನ ಮೂಲಕ ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿ ಅವರು ವ್ಯಂಗ್ಯವಾಡಿದರು.



ಡಿಕೆ ಶಿವಕುಮಾರ್, ಸಿದ್ದರಾಮಯ್ಯ ಒಳಗೊಳಗೆ ಬಡಿದಾಡಿತ್ತಾರೆ ಹೊರಗೆ ಏನೇನೋ ಮಾತನಾಡುತ್ತಾರೆ. ಮೀಸಲಾತಿಯಿಂದ ಸೆಕೆಂಡ್ ಗ್ರೇಡ್ ವ್ಯಕ್ತಿಗಳು ಅಧಿಕಾರ ವ್ಯವಸ್ಥೆ ಬರ್ತಾರೆ ಅಂತ ನೆಹರು ಪತ್ರ ಬರೆದಿದ್ದಾರೆ. ಈ ಹಿಂದೆ ಇಂದಿರಾ ಗಾಂಧಿ ವಿರುದ್ಧ ಕಪ್ಪು ಬಟ್ಟೆ ಪ್ರದರ್ಶನ ಮಾಡಿರಿವ ಸಿದ್ದರಾಮಯ್ಯ ಈಗ ಅಲ್ಲಿ ಹೋಗಿ ಬಿದ್ದಿರಿ. ಮುಸ್ಲಿಂ ಸಮುದಾಯದಲ್ಲಿ ಸಹ ಅಸ್ಪೃಶ್ಯರು ಇದ್ದಾರೆ ಅವರ ಗಣತಿ ಯಾಕೆ ಮಾಡಿಲ್ಲ. ಯಾಕಿಷ್ಟು ತಲೆ ಕಟ್ಟಿರುವು ತರ ಸಿದ್ದರಾಮಯ್ಯ ವರ್ತನೆ ಮಾಡುತ್ತಾರೆ. ಬಂದೋಬಸ್ತ್ ಹೋಗಿದ್ದ ಎಎಸ್ಪಿ ಮೇಲೆ ಹೊಡೆಯಲು ಹೋಗತ್ತಾರೆ. ದಪ್ಪ ಚರ್ಮದವರಿಗೆ ಏನು ಹೇಳಬೇಕು. ಪಾಕಿಸ್ತಾನಕ್ಕೆ ಎಷ್ಟು ಜನ ಕಳುಹಿಸಲಾಗಿದೆ ಉತ್ತರ ನೀಡಿ ಎಂದು ಪ್ರಶ್ನಿಸಿದರು.

ಸಿದ್ದರಾಮಯ್ಯ ಹೇಳಿಕೆ ಪಾಕಿಸ್ತಾನದಲ್ಲಿ ಸಂಭ್ರಮಿಸಿದ್ದಾರೆ. ಸ್ವಲ್ಪನಾದರು ಮರ್ಯಾದೆ ಬೇಕಲ್ವಾ ದೇಶ ಭದ್ರತೆ ವಿಚಾರದಲ್ಲಿ.ಇವರು ಪಾಕಿಸ್ತಾನದ ಹೀರೋ ಆಗಿದ್ದಾರೆ. ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಮಾತು ಸಹ ಕೇಳಲ್ವಾ. ಪಾಕಿಸ್ತಾನದ ಜಿಂದಾಬಾದ್ ಎನ್ನಲು ನೂರಾರು ಕಾರಣ ಅಂತೆ? ಇದು ದೇಶ ದ್ರೋಹ ಅಲ್ವಾ ನೀವು ಯಾರನ್ನು ಬೆಂಬಲಿಸಿತ್ತಿರಾ?. ನಿಮ್ಮ ಕಾರ್ಯಕ್ರಮದಲ್ಲಿ ಬಂದು ಧಿಕ್ಕಾರ ಕೂಗಿದವರು, ಮಂಗಳೂರು ಕುಕ್ಕರ್ ಬಾಂಬ್ ವಿಚಾರದಲ್ಲಿ ನಿಮ್ಮ ಗುಪ್ತಚರ ಇಲಾಖೆ ಏನು ಮಾಡಿತು ಎಂದು ಪ್ರಶ್ನಿಸಿದರು

## ಜನಗಣತಿಯ ಆಧಾರದ ಮೇಲೆ ಮಾತ್ರ ಮೀಸಲಾತಿ

# ಕೇಂದ್ರ ಸರ್ಕಾರ ತೆಗೆದುಕೊಂಡ ನಿರ್ಧಾರಕ್ಕೆ ಸ್ವಾಗತ: ಜಯಪ್ರಕಾಶ್ ಹೆಗ್ಡೆ

**ಉಡುಪಿ, ಮೇ.2–** ಜನಸಂಖ್ಯಾ ಸಮೀಕ್ಷೆಯೊಂದಿಗೆ ಜಾತಿ ಜನಗಣತಿ ನಡೆಸುವಂತೆ ರಾಹುಲ್ ಗಾಂಧಿಯವರು ಬಹಳ ಹಿಂದಿನಿಂದಲೂ ಆಗ್ರಹಿಸುತ್ತಲೇ ಬಂದಿದ್ದರು. ಇದೀಗ ಕೇಂದ್ರ ಸರ್ಕಾರ ಈ ಬಗ್ಗೆ ನಿರ್ಧಾರ ಕೈಗೊಂಡಿರುವುದು ಸಂತಸ ತಂದಿದೆ ಎಂದು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷ ಕೆ. ಜಯಪ್ರಕಾಶ್ ಹೆಗ್ಡೆ ಅವರು ಹೇಳಿದ್ದಾರೆ.

ಉಡುಪಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾವು ಸಾಮಾಜಿಕ–ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ನಡೆಸಿದ್ದೇವೆ. ಜಾತಿ ಜನಗಣತಿಯ ಆಧಾರದ ಮೇಲೆ ಮಾತ್ರ ಮೀಸಲಾತಿ ನೀಡುವುದು ಸವಾಲಿನ ಕೆಲಸ. ಸಾಮಾಜಿಕ ಮತ್ತು ಆರ್ಥಿಕ ಪರಿಸ್ಥಿತಿಗಳನ್ನು ಅರ್ಥಮಾಡಿಕೊಳ್ಳುವುದರಿಂದ ಮೀಸಲಾತಿ ಹಂಚಿಕೆ ಮತ್ತು ವ್ಯಕ್ತಿಗಳು ಯಾವ ವರ್ಗಕ್ಕೆ ಸೇರಿದವರು ಎಂಬುದನ್ನು ನಿರ್ಧರಿಸುವುದು ಸುಲಭವಾಗುತ್ತದೆ. ಕೇಂದ್ರ ಸರ್ಕಾರ ತೆಗೆದುಕೊಂಡ ನಿರ್ಧಾರ ಸಂತಸ ತಂದಿದೆ. ಬಿಜೆಪಿ ಹೈಕಮಾಂಡ್ ಒಪ್ಪಿದ್ದು, ರಾಜ್ಯ ಬಿಜೆಪಿ ಕೂಡ ಅದನ್ನು ಪಾಲಿಸಬೇಕು ಎಂದು ಹೇಳಿದ್ದಾರೆ.

ಕೇಂದ್ರ ಸರ್ಕಾರ ಸಂಪುಟದಲ್ಲಿ ನಿರ್ಧಾರ ತೆಗೆದುಕೊಂಡಿದೆ. ರಾಜ್ಯದ ಜಾತಿ ಜನಗಣತಿ ವರದಿಯ ಕುರಿತು ಸಂಪುಟ ಏನು ನಿರ್ಧರಿಸುತ್ತದೆ ಎಂಬುದನ್ನು ಕಾದು ನೋಡೋಣ ಎಂದು ತಿಳಿಸಿದರು.

ಉಡುಪಿ–ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ ಅವರು ಜಯಪ್ರಕಾಶ್ ಹೆಗ್ಡೆ ಅವರ ಸಮೀಕ್ಷಾ ವರದಿಯನ್ನು ವಿಧಾನಸಭೆಯ ಮುಂದೆ ಮಂಡಿಸಲಾಗುವುದು. ಆದರೆ, ಬಿಜೆಪಿ ನಮ್ಮ ಸಮೀಕ್ಷಾ ವರದಿಯನ್ನು ಒಪ್ಪುತ್ತಿಲ್ಲ. ಅವರು ಒಪ್ಪಿದ್ದೇ ಆದರೆ, ಅದನ್ನು ತಕ್ಷಣವೇ ಸರ್ಕಾರಕ್ಕೆ ಹಸ್ತಾಂತರಿಸುತ್ತಿದ್ದೆವು. ಎಚ್. ಕಾಂತರಾಜು ಅವರು ಸಂಗ್ರಹಿಸಿದ ದತ್ತಾಂಶವನ್ನು ಆಧರಿಸಿ ನಾವು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದೇವೆ.



ಮುಂದಿನ ನಿರ್ಧಾರ ಸರ್ಕಾರಕ್ಕೆ ಬಿಟ್ಟದ್ದು ಎಂದು ಹೇಳಿದ್ದಾರೆ.

ರಾಷ್ಟ್ರೀಯ ಜನಗಣತಿಯನ್ನು 2011ರಲ್ಲಿ ನಡೆಸಲಾಗಿತ್ತು. ಈಗ 2025ನೇ ವರ್ಷ. ಈ ಅವಧಿಯಲ್ಲಿ ಅನೇಕ ಚುನಾವಣೆಗಳು ನಡೆದಿತೆ. ನಾವು ನಮ್ಮ ಜವಾಬ್ದಾರಿಯನ್ನು ಪೂರೈಸಿದ್ದೇವೆ, ನಿರ್ಧಾರ ತೆಗೆದುಕೊಳ್ಳುವುದು ಸರ್ಕಾರಕ್ಕೆ ಬಿಟ್ಟದ್ದು. ವರದಿ ಮಂಡನೆಗಾಗಿ ನಾವು ಕಾಯುತ್ತಿದ್ದೇವೆಯ ರಾಜ್ಯ ಸಚಿವ ಸಂಪುಟವು ಅದನ್ನು ಅನುಮೋದಿಸಿ ಅಂಗೀಕರಿಸಿದ ನಂತರ, ಸರ್ಕಾರವು ಮುಂದಿನ ನಿರ್ಧಾರಗಳನ್ನು ತೆಗೆದುಕೊಳ್ಳಬಹುದು.ಕರ್ನಾಟಕ ಮಾದರಿಯನ್ನು ಅನುಸರಿಸಿ ಜನಗಣತಿಯನ್ನು ನಡೆಸುವಂತೆ ಎಲ್ಲಾ ರಾಜ್ಯಗಳಿಗೂ ನಾನು ಒತ್ತಾಯಿಸುತ್ತೇನೆ. ಸಾಮಾಜಿಕ–ಆರ್ಥಿಕ ಶೈಕ್ಷಣಿಕ ಪರಿಸ್ಥಿತಿಗಳನ್ನು ಸಾರ್ವಜನಿಕಗೊಳಿಸಬೇಕು. ಇದರಿಂದ ಸಣ್ಣ ಜಾತಿಗಳು ಕೂಡ ಪ್ರಯೋಜನಗಳನ್ನು ಪಡೆಯಬೇಕು. ಸಮಾನ ಸಮಾಜವನ್ನು ನಿರ್ಮಿಸಲು ವರದಿಯನ್ನು ಕಾರ್ಯಗತಗೊಳಿಸುವುದು ಅವಶ್ಯಕ. ಜಾತಿ ಜನಗಣತಿಯಲ್ಲಿ ಕೇಂದ್ರ ಸರ್ಕಾರವು ಯಾವ ವಿಭಾಗಗಳನ್ನು ಸಮೀಕ್ಷೆ ಮಾಡುತ್ತದೆ ಎಂಬುದನ್ನು ಕಾದು ನೋಡಬೇಕಾಗಿದೆ. ನಮ್ಮ ಜನಗಣತಿ ಮತ್ತು ಅವರ ಜನಗಣತಿಯ ನಡುವೆ ವ್ಯತ್ಯಾಸಗಳಿದ್ದರೆ, ನವೀಕರಿಸುವ ಅವಕಾಶಗಳಿವೆ ಎಂದು ಹೇಳಿದರು.ಬಳಿಕ ಪಹಲ್ಗಾಮ್ ಉಗ್ರರ ದಾಳಿ ಕುರಿತು ಮಾತನಾಡಿದ ಅವರು, ಇಡೀ ರಾಷ್ಟ್ರ ಸರ್ಕಾರದ ಜೊತೆಗೆ ಒಗ್ಗಟ್ಟಾಗಿ ನಿಂತಿದೆ ಎಂದರು.

## ಕೇಂದ್ರದಿಂದ ಜನಗಣತಿಗಷ್ಟೇ ಸೀಮಿತವಾಗದಿರಲಿ

# ಶೈಕ್ಷಣಿಕ, ಆರ್ಥಿಕ, ಸಾಮಾಜಿಕ ಸ್ಥಿತಿಗತಿ ಸಮೀಕ್ಷೆಯಾಗಲಿ: ಖಂಡ್ರೆ

**ಬೀದರ್, ಮೇ.2–** ಕೇಂದ್ರ ಸರ್ಕಾರ ಜಾತಿ ಗಣತಿಗಷ್ಟೇ ಸೀಮಿತವಾಗಿದೆ. ಯಾವುದೇ ಜಾತಿ ಜನಾಂಗಕ್ಕೆ ಅನ್ಯಾಯವಾಗದ ರೀತಿಯಲ್ಲಿ ಶೈಕ್ಷಣಿಕ, ಆರ್ಥಿಕ ಮತ್ತು ಸಾಮಾಜಿಕ ಸ್ಥಿತಿಗತಿಯ ಸಮಗ್ರ ಸಮೀಕ್ಷೆಯನ್ನೂ ನಡೆಯಬೇಕು ಎಂದು ಅರಣ್ಯ ಮತ್ತು ಪರಿಸರ, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಒತ್ತಾಯಿಸಿದರು.

ಕೇಂದ್ರ ಸರ್ಕಾರವೇ ಜಾತಿ ಗಣತಿ ಮಾಡುವ ಘೋಷಣೆ ಮಾಡಿರುವ ಬಗ್ಗೆ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ಲೋಕಸಭಾ ಚುನಾವಣೆ ವೇಳೆ ಮಲ್ಲಿಕಾರ್ಜುನ ಖರ್ಗೆ, ಸೋನಿಯಾಗಾಂಧಿ ಮತ್ತು ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷ ತನ್ನ ಪ್ರಣಾಳಿಕೆಯಲ್ಲೇ ಜಾತಿ ಗಣತಿ ನಡೆಸುವ ಆಶ್ವಾಸನೆ ನೀಡಿತ್ತು. ಕೇಂದ್ರ ಸರ್ಕಾರ ಈಗ ನಮ್ಮ ನಿಲುವನ್ನು ಬೆಂಬಲಿಸಿದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರವೇ ಜಾತಿ ಗಣತಿ ಮಾಡುವ ಘೋಷಣೆ ಮಾಡಿರುವ ಬಗ್ಗೆ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು, ಲೋಕಸಭಾ ಚುನಾವಣೆ ವೇಳೆ ಮಲ್ಲಿಕಾರ್ಜುನ ಖರ್ಗೆ, ಸೋನಿಯಾಗಾಂಧಿ ಮತ್ತು ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷ ತನ್ನ ಪ್ರಣಾಳಿಕೆಯಲ್ಲೇ ಜಾತಿ ಗಣತಿ ನಡೆಸುವ ಆಶ್ವಾಸನೆ ನೀಡಿತ್ತು. ಕೇಂದ್ರ ಸರ್ಕಾರ ಈಗ ನಮ್ಮ ನಿಲುವನ್ನು ಬೆಂಬಲಿಸಿದೆ. ಕೇಂದ್ರ ಸರ್ಕಾರ ಕೇವಲ ಜಾತಿಗಳ ತಲೆ ಎಣಿಕೆ ಮಾಡಿದರೆ ಸಾಲದು, ದೇಶದ ಎಲ್ಲ ಜಾತಿಯ ಜನರ ಆರ್ಥಿಕ, ಶೈಕ್ಷಣಿಕ ಮತ್ತು ಸಾಮಾಜಿಕ ಪರಿಸ್ಥಿತಿಯ ನಿಖರ ಸಮೀಕ್ಷೆ ನಡೆಸಬೇಕು. ಆಗ ಮಾತ್ರ ಸರ್ವರಿಗೂ ನ್ಯಾಯ ಸಿಗಲು ಸಾಧ್ಯ ಎಂದು ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.

ಭಾರತದಲ್ಲಿ ಜಾತಿಯ ಜನಗಣತಿ ಮೊದಲ ಬಾರಿಗೆ 1931ರಲ್ಲಿ ನಡೆದಿತ್ತು. ಅದೇ ಮೊದಲ ಮತ್ತು ಅದೇ ಕಡೆಯ ಜಾತಿ ಗಣತಿಯೂ ಆಗಿತ್ತು. ಅದಾದ ನಂತರ ಕಾಂಗ್ರೆಸ್ ಪಕ್ಷ ಜಾತಿಗಣತಿಯ ಅಗತ್ಯವನ್ನು ಪ್ರತಿಪಾದಿಸಿತ್ತು ಎಂದು ಹೇಳಿದರು.

ಸರ್ಕಾರದ ಯೋಜನೆಗಳ ಪ್ರಯೋಜನ ಎಲ್ಲ ವಂಚಿತರಿಗೂ ಲಭ್ಯವಾಗಬೇಕು ಮತ್ತು ಹಿಂದುಳಿದಿರುವಿಕೆಯ ಆಧಾರದ ಮೇಲೆ ಸರ್ಕಾರದ ಯೋಜನೆಗಳನ್ನು ರೂಪಿಸಬೇಕು ಇದಕ್ಕೆ ಜಾತಿಗಣತಿ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿ ಆಧಾರದಲ್ಲಿ ನಡೆದಾಗ ಮಾತ್ರ



ಸಾಧ್ಯವಾಗುತ್ತದೆ. 1931ರ ನಂತರ ಭಾರತದಾದ್ಯಂತ ಈವರೆಗೆ ಜಾತಿವಾರು – ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ ನಡೆಸಿಲ್ಲ. ಹೀಗಾಗಿ ಸರ್ಕಾರದ ಸೌಲಭ್ಯಗಳು ಸಮರ್ಪಕವಾಗಿ ಹಂಚಿಕೆ ಆಗುತ್ತಿಲ್ಲ. ಅರ್ಹ ಫಲಾನುಭವಿಗಳನ್ನು ಗುರುತಿಸಲು, ಸಮಾಜದಲ್ಲಿ ಅತ್ಯಂತ ಹಿಂದುಳಿದ ಸಮಾಜಕ್ಕೆ ಸೂಕ್ತ ಪ್ರಾತಿನಿಧ್ಯ ನೀಡಿ ಅವರನ್ನು ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಮೇಲೆತ್ತಲು ಆಗುತ್ತಿಲ್ಲ. ಹೀಗಾಗಿ ಜಾತಿ ಗಣತಿ ಇಂದಿನ ಅಗತ್ಯವಾಗಿದೆ ಎಂದು ಈಶ್ವರ ಖಂಡ್ರೆ ಪ್ರತಿಪಾದಿಸಿದರು.

ಜಯಂತಿ ಆಚರಣೆ, ಸಾರ್ವಜನಿಕ ಕಾರ್ಯಕ್ರಮ ಸೇರಿ ಯಾವುದೇ ಸಂದರ್ಭದಲ್ಲಿ ಯಾವುದೇ ಜನಾಂಗೀಯ ಹಲ್ಲೆ ನಡೆದು, ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾದಂತೆ ಪೊಲೀಸ್ ಇಲಾಖೆ ಮತ್ತು ಸ್ಥಳೀಯ ಆಡಳಿತ ಮುಂಜಾಗರೂಕತಾ ಕ್ರಮ ಕೈಗೊಳ್ಳಬೇಕು. ಮುಗ್ಧ ಜನರಿಗೆ ತೊಂದರೆ ಆಗದಂತೆ ನೋಡಿಕೊಳ್ಳಬೇಕು. ತಪ್ಪಿತಸ್ಥರು ಯಾರೇ ಆಗಿದ್ದರೂ ಅವರ ವಿರುದ್ಧ ನಿರ್ದಾಕ್ಷಿಣ್ಯ ಮತ್ತು ಕಾನೂನು ರೀತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರು ನಿರ್ದೇಶನ ನೀಡಿದ್ದಾರೆ. ಮುಂದೆ ಇಂತಹ ಘಟನೆ ನಡೆಯದಂತೆ ಎಚ್ಚರ ವಹಿಸಬೇಕು, ಮರು ಕಳಿಸಿದರೆ ಜಿಲ್ಲಾಡಳಿತ ಮತ್ತು ಜಿಲ್ಲಾ ಪೊಲೀಸ್ ಇಲಾಖೆಯನ್ನೇ ಹೊಣೆ ಮಾಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವರು ಎಚ್ಚರಿಕೆ ನೀಡಿದ್ದಾರೆ.

ಖುಂದವಂದಪೂರ ಘಟನೆಯನ್ನು ಖಂಡಿಸಿರುವ ಸಚಿವರು, ಬೀದರ್ ಸರ್ವಜನಾಂಗದ ಶಾಂತಿಯ ತೋಟವಾಗಿದ್ದು, ಜಿಲ್ಲೆಯಲ್ಲಿ ಯಾರೂ ಶಾಂತಿ ಕದಡಬಾರದು. ಕೆಲವು ಅಹಿತಕರ ಘಟನೆಗಳಿಂದಲೇ ದ್ವೇಷ ಹೆಚ್ಚಾಗಿ, ಸೌಹಾರ್ದತೆಗೆ ಭಂಗ ಬರುತ್ತದೆ. ಒಂದು ಕಿಡಿಯನ್ನು ನಿರ್ಲಕ್ಷಿಸಿದರೆ ಅದು ಬೆಂಕಿಯ ಜ್ವಾಲೆ ಆಗುತ್ತದೆ. ಮನವಿ ಮಾಡಿದ್ದಾರೆ.

# ಬಳ್ಳಾರಿಯಲ್ಲಿ ಅದ್ದೂರಿಯಾಗಿ ಮುತ್ಯಾಲಮ್ಮ ದೇವಸ್ಥಾನದ ಪ್ರತಿಷ್ಠಾಪನೆ




**ಬಳ್ಳಾರಿ, ಮೇ.02–** ಬಳ್ಳಾರಿ ನಗರದ ಅಗಡಿ ಕಾಂಪೌಂಡ್ನಲ್ಲಿ ಮುತ್ಯಾಲಮ್ಮ ದೇವಸ್ಥಾನದ ಪ್ರತಿಷ್ಠಾಪನ ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಚರಣೆ ಮಾಡಲಾಯಿತು. ಭಕ್ತಿ ಮತ್ತು ಉತ್ಸಾಹದಿಂದ ದೈವ ಕಾರ್ಯಕ್ರಮವನ್ನು ಆಚರಿಸಲಾಯಿತು.

900 ಕ್ಕೂ ಹೆಚ್ಚು ಜನ ಭಕ್ತರು ಕಾರ್ಯಕ್ರಮದಲ್ಲಿ ಭಾವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ಸಮುದಾಯವನ್ನು ಆಚರಣೆ ಮತ್ತು ಏಕತೆಯಲ್ಲಿ ಒಟ್ಟುಗೂಡಿಸುವ ವೈವಿಧ್ಯಮಯ ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳು ನಡೆದವು.

ಈಶ್ವರ್ ಸಾಯಿ ರೇಣಿಗುಂಟ್ಲ ವಿಜೇತ ಪ್ರಶಸ್ತಿಯನ್ನು ಗೆದ್ದರು. ಕ್ಯಾರಮ್ ಸಿಂಗಲ್ಸ್ ಸ್ಪರ್ಧೆ ಮತ್ತು ಶಟಲ್ ಬ್ಯಾಡ್ಮಿಂಟನ್ ಡಬಲ್ಸ್ ಟೂರ್ನಮೆಂಟ್, ಇದರಲ್ಲಿ ಸುರೇಶ್ ಮತ್ತು ಶ್ರೀಶಾಂತ್ ವಿಜೇತರಾದರು. ವರ್ಣರಂಜಿತ ಮತ್ತು ಉತ್ಸಾಹಭರಿತ ನೃತ್ಯ ಪ್ರದರ್ಶನಗಳ ಸರಣಿಯು ಹಬ್ಬದ ಉತ್ಸಾಹಕ್ಕೆ ಕಾರಣವಾಯಿತು, ಪ್ರೇಕ್ಷಕರನ್ನು ಸಾಂಸ್ಕೃತಿಕ ಕಾರ್ಯಕ್ರಮಗಳು ಮನ ರಂಜಿಸಿದವು.

ನಂದೀಶ್ ಮುಲ್ಲಂಗಿ (ನಗರ ಮೇಯರ್), ನೂರ್ ಮೊಹಮ್ಮದ್ (15 ನೇ ವಾರ್ಡ್ ಕಾರ್ಪೊರೇಟರ್), ಮತ್ತು ಬಿ.ಆರ್.ಎಲ್. ಸೀನ ಸೇರಿದಂತೆ ಗೌರವಾನ್ವಿತ ಗಣ್ಯರು ಈ ಆಚರಣೆಯಲ್ಲಿ ಭಾಗವಹಿಸಿದ್ದರು. ಸಾಂಸ್ಕೃತಿಕ ಮೌಲ್ಯಗಳು ಮತ್ತು ಸಮುದಾಯ ಅಭಿವೃದ್ಧಿಗೆ ಸಂಘಟಕರ ಬದ್ಧತೆಯನ್ನು ಶ್ಲಾಘಿಸಿದರು.

ಕಾರ್ಯಕ್ರಮದ ಆಯೋಜಕರಾದ ಶ್ರೀಮತಿ ರಾಧಾ ಗುಡುತೂರ್, ಶ್ರೀಮತಿ ವೀಣರಾಜ್ ರೇಣಿಗುಂಟ್ಲ, ಶ್ರೀಮತಿ ಲಕ್ಷ್ಮಿ ಚೆಲ್ಲೂರ್, ಮತ್ತು ಶ್ರೀಮತಿ ಅರುಣಾ ಅಶೋಕ್ ಸಿಂಗ್ ಮತ್ತು ಇಡೀ ಮಹಿಳಾ ತಂಡಕ್ಕೆ ವಿಶೇಷ ಧನ್ಯವಾದಗಳನ್ನು ಸಲ್ಲಿಸಿದರು. ಕಾರ್ಯಕ್ರಮ ಅದ್ದೂರಿಯಾಗಿ ಯಶಸ್ವಿಯಾಗಿ ನಡೆಯಿತು.

## ದರೋಡೆ ನಡೆದು ವಾರದೊಳಗೆ ಪ್ರಕರಣ ಭೇದಿಸಿದ ಪೊಲೀಸರು; ಮೂವರ ಬಂಧನ

ಬೀದರ, ಮೇ. 2: ನಗರದ ಓಲ್ಡ್ ಆದರ್ಶ ಕಾಲೋನಿಯ ಮನೆಯವರನ್ನು ಮಾರಕಾಸ್ತ್ರಗಳಿಂದ ಬಎದರಿಸಿ ಸುಮಾರು 15.55 ಲಕ್ಷ ರೂಮೌಲ್ಯದ ನಗನಾಣ್ಯಗಳನ್ನು ದೋಚಿದ್ದ ಪ್ರಕರಣವನ್ನು ಶುಕ್ರವಾರ ಭೇದಿಸಿರುವ ಜಿಲ್ಲಾ ಪೊಲೀಸರು ಮೂವರು ಡಕಾಯಿತರನ್ನು ಬಂಧಿಸಿದ್ದಾರೆ. ಈ ವೇಳೆ ಮುಖ್ಯ ಪೇದೆಗೆ ಚಾಕುವಿನಿಂದ ಇರಿತದ ಗಾಯಗಳಾಗಿದ್ದು, ಆರೋಪಿಯೊಬ್ಬನ ಕಾಲಿಗೆ ಗುಂಡೇಟು ತಗುಲಿದೆ.

ಕಳೆದ ಏ.26ರಂದು ನಸುಕಿನ ಜಾವ ಮನೆಯ ಬಾಗಿಲು ಮುರಿದು, ಒಳಗೆ ಪ್ರವೇಶಿಸಿದ್ದ ಐವರು ಮುಸುಕುಧಾರಿಗಳು ಮನೆಯವರನ್ನು ಮಾರಕಾಸ್ತ್ರಗಳಿಂದ ಬೆದರಿಸಿ ಸುಲಿಗೆ ಮಾಡಿದ್ದರು. ಈ ಪ್ರಕರಣ ನಗರದ ಜನರನ್ನು ಬೆಚ್ಚಿ ಬೀಳಿಸುವಂತೆ ಮಾಡಿತ್ತು. ಪ್ರಕರಣವನ್ನು ಸವಾಲಾಗಿ ಸ್ವೀಕರಿಸಿದ್ದ ಜಿಲ್ಲಾ ಪೊಲೀಸರು ಘಟನೆ ನಡೆದ ಒಂದು ವಾರದಲ್ಲಿ ಆರೋಪಿಗಳನ್ನು ಸೆರೆ ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ.

ಡಕಾಯಿತರು ಮಹಾರಾಷ್ಟ್ರದವರು: ಮಹಾರಾಷ್ಟ್ರದ ಬೀಡ್ ಜಿಲ್ಲೆಯ ಪರಳಿಯ ಕರ್ತಾರ್ ಸಿಂಗ್, ಆತನ ಸಹಹೋದರನಾದ ಬೀದರ ನಿವಾಸಿ ಜಗಜೀತ್‌ಸಿಂಗ್ ಹಾಗೂ ಪುಣೆಯ ಅಕ್ಷಯ ಬಂಧಿತ ಆರೋಪಿಗಳಾಗಿದ್ದಾರೆ. ಕಳವು ಮಾಡಿದ ಚಿನ್ನವನ್ನು ಮಾರಾಟಕ್ಕೆ ಸಹಕಾರ ನೀಡಿದ್ದ ವ್ಯಕ್ತಿಯನ್ನು ಸಹ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಕಾರ್ಯಾಚರಣೆ ವೇಳೆ ಪೊಲೀಸರ ಗುಂಡೇಟಿನಿಂದ ಕರ್ತಾರಸಿಂಗ್ ಬಲಗಾಲಿಗೆ ಗುಂಡು ತಗುಲಿದ್ದರೆ, ಡಕಾಯಿತನಿಂದ ಚಾಕು ಇರಿತಕ್ಕೆ ಮುಖ್ಯ ಪೇದೆ ಮಕ್ಸೂದ್ ಅವರ ಭುಜಕ್ಕೆ ಗಂಭೀರ ಗಾಯವಾಗಿದ್ದು, ಇಬ್ಬರನ್ನು ಬ್ರಿಮ್ಸ್ ಆಸ್ಪತ್ರೆಗೆ ದಾಖಲು ಮಾಡಲಾಗಿದೆ.

ಕರ್ತಾರ್ ಸಿಂಗ್: ಘಟನೆ ಹಿನ್ನೆಲೆ: ನಗರದ ಓಲ್ಡ್ ಆದರ್ಶ ಕಾಲೋನಿಯಲ್ಲಿ ಕಳೆದ ಶನಿವಾರ ನಸುಕಿನ ಜಾವ ಡಿಸಿ ಕಚೇರಿಯಲ್ಲಿ ಸೂಪರಿಟೆಂಡೆಂಟ್ ಆಗಿರುವ ಜ್ಯೋತಿಲತಾ ಸಂತೋಷ ಕುಮಾರ ಅವರ ಮನೆಗೆ ನುಗ್ಗಿದ್ದ ಮುಸುಕುಧಾರಿಗಳು ಈ ದುಷ್ಕೃತ್ಯ ನಡೆಸಿದ್ದರು. ಜ್ಯೋತಿಲತಾ, ಅವರ ತಾಯಿ ಮತ್ತು ಮಗನಿಗೆ ಚಾಕು ಮತ್ತು ಏರ್ ಗನ್ ತೋರಿಸಿ 15.55 ಲಕ್ಷ ಮೌಲ್ಯದ ಚಿನ್ನ ಮತ್ತು ನಗದು ಹಣ ದೋಚಿದ್ದರು. ಪೊಲೀಸರಿಗೆ ಹೇಳದಂತೆ ಬಾತ್‌ರೂಂನಲ್ಲಿ ಕೂಡಿಹಾಕಿದ್ದರು. ಈ ಕುರಿತು ಗಾಂಧಿ ಗಂಜ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಎಸ್‌ಪಿ ಮಾರ್ಗದರ್ಶನದಲ್ಲಿ ಗಾಂಧಿಗಂಜ್ ಮತ್ತು ಬೀದರ ಗ್ರಾಮೀಣ ಪೊಲೀಸ್ ಅಧಿಕಾರಿಗಳನ್ನು ಒಳಗೊಂಡ ವಿಶೇಷ ತನಿಖಾ ತಂಡ ರಚಿಸಲಾಗಿತ್ತು. ಆರೋಪಿಗಳು ತಾಲೂಕಿನ ಹೊನ್ನಿಕೇರಿ ಕ್ರಾಸ್ ಬಳಿ ಓಡಾಡುತ್ತಿರುವ ಕುರಿತು ಖಚಿತ ಮಾಹಿತಿ ಮೇರೆಗೆ ಈ ತಂಡ ದಾಳಿ ನಡೆದಿದೆ. ಡಕಾಯಿತರನ್ನು ವಶಕ್ಕೆ ಪಡೆಯುವ ಸಂದರ್ಭದಲ್ಲಿ

# ಪಾಕ್ ದರಿದ್ರ ದೇಶ, ಅದಕ್ಕೆ ಬೇರೆ ಕೆಲಸವಿಲ್ಲ: ಸಚಿವ ಎಂ.ಬಿ.ಪಾಟೀಲ್

**ವಿಜಯಪುರ, ಮೇ.2–** ಮಾನವೀಯತೆಯಲ್ಲಿ ನಂಬಿಕೆ ಇಟ್ಟವರು ಪಹಲ್ಗಾಮ್ ಘಟನೆಯನ್ನು ಖಂಡಿಸಬೇಕು. ಉಗ್ರರು ಮಾಡಿದ್ದು ಹೇಡಿತನದ ಕೃತ್ಯ, ಹುಡುಕಾಡಿ ಉಗ್ರರನ್ನು ಕೊಲ್ಲಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಆಕ್ರೋಶ ಹೊರಹಾಕಿದರು.

ಪಾಕಿಸ್ತಾನ ಉಗ್ರರು ನಡೆಸಿದ ದಾಳಿಯ ಕುರಿತು ನಗರದಲ್ಲಿ ಸುದ್ದಿಗಾರರೊಂದಿಗೆ ಪ್ರತಿಕ್ರಿಯೆ ನೀಡಿರುವ ಅವರು, ಪಾಕ್ ದರಿದ್ರ ದೇಶ. ತಿನ್ನಲು ಕೂಳಿಲ್ಲದಿದ್ದರೂ ಭಯೋತ್ಪದನೆ ಮಾತ್ರ ಬಿಟ್ಟಿಲ್ಲ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಪಾಕಿಸ್ತಾನವನ್ನು ಮೂಲೆಗುಂಪು ಮಾಡಬೇಕು. ಕಾಶ್ಮೀರದಲ್ಲಿಯೂ ಬೆಂಬಲ ಇಲ್ಲ, ಕಾಶ್ಮೀರಿಗಳು ಭಾರತದ ಪರ, ಶಾಂತಿಯ ಕಡೆಗೆ ಇದ್ದಾರೆ. ಟೂರಿಸಂ ಡೆವಲಪ್‌ಮೆಂಟ್ ಆದ ಮೇಲೆ ಉಗ್ರರಿಗೆ ಸಹಿಸಲು ಆಗಿಲ್ಲ, ಇದನ್ನೆಲ್ಲ ಕೆಡಿಸಬೇಕು ಎನಿಸಿದೆ ಎಂದರು.

ಇಂಡೋ ಪಾಕ್ ನಡುವೆ ಯುದ್ಧದ ಕಾರ್ಮೋಡ ವಿಚಾರದ ಕುರಿತು ಮಾತನಾಡಿ, ಯೂರೋಪ ರಾಷ್ಟಗಳು ನಮ್ಮ ಜೊತೆಗೆ

> ಎಂ ಪೊಲೀಸ್ ಅಧಿಕಾರಿ ಮೇಲೆ ಕೈ ಎತ್ತಿಲ್ಲ, ಯಾರು ಎಸ್ಪಿ ಎಂದು ಕೈ ತೋರಿಸಿದ್ದಾರೆ. ಹೊಡೆಯಲು ಹೋಗಿಲ್ಲ. ಕಾಂಗ್ರೆಸ್ ಕಾರ್ಯಕ್ರಮದಲ್ಲಿ ಬಿಜೆಪಿ ಮಹಿಳಾ ಕಾರ್ಯಕರ್ತೆಯರು ಆಗಮಿಸಿ ಕಪ್ಪು ಬಾವುಟ ಪ್ರದರ್ಶನ ಮಾಡಿದ್ದು ಯಾಕೆ?. ನಾಳೆ ಮೋದಿ ಕಾರ್ಯಕ್ರಮದಲ್ಲಿ ನಾವು 50 ಜನ ಹೋಗಿ ಗಲಾಟೆ ಮಾಡಿದರೆ ಹೇಗೆ?. ಹೆಣ್ಮಕ್ಕಳನ್ನ ಬಳಸಿ ಗಲಾಟೆ ಮಾಡಿಸಿದ್ದಾರೆ. ಬಿಜೆಪಿಯಲ್ಲಿ ಗಂಡಸರು ಇಲ್ವಾ? ಗಂಡಸರು ಬರಬೇಕಾಗಿತ್ತಲ್ವಾ?
> –ಎಂ.ಬಿ.ಪಾಟೀಲ, ಜಿಲ್ಲಾ ಉಸ್ತುವಾರಿ ಸಚಿವ

ಇರಬೇಕು. ಚೀನಾ, ಅಮೆರಿಕಾ ಸೇರಿ ಎಲ್ಲರೂ ಪರಸ್ಪರ ಉಗ್ರವಾದವನ್ನ ಖಂಡಿಸಬೇಕು. ಪಾಕ್ ಒಂದು ದರಿದ್ರ ದೇಶ, ಪಾಕ್‌ಗೆ ಬೇರೆ ಕೆಲಸ ಇಲ್ಲ. ಅವರ ದೇಶದಲ್ಲೇ ಅವರ ಪರಿಸ್ಥಿತಿ ಹೀನಾಯವಾಗಿದೆ. ಯುದ್ಧಕ್ಕೆ ಹೆದರಿ ಸೈನಿಕರು, ಅಧಿಕಾರಿಗಳು ಓಡಿ ಹೋಗಿದ್ದಾರೆ. ಪಹಲ್ಗಾಮ್ ಘಟನೆ ಹೇಡಿಗಳ ಕೃತ್ಯ, ಹೇಯ ಕೃತ್ಯ. ಈಗ ಕೇಂದ್ರ ಎಚ್ಚೆತ್ತುಕೊಳ್ಳಬೇಕು. ಈ ವಿಚಾರದಲ್ಲಿ ನಾವು ರಾಜಕೀಯ ಮಾಡಲ್ಲ, ಸೂಕ್ತ ಸೇನೆ, ಪೊಲೀಸ್ ವ್ಯವಸ್ಥೆ ಬೇಕು. ಆಯಕಟ್ಟಿನ ಜಾಗದಲ್ಲಿ ಸೇನೆಯನ್ನು ನಿಯೋಜಿಸಬೇಕು. ಪ್ರವಾಸೋದ್ಯಮ ಆರಂಭವಾಗಬೇಕು. ಪೆಹಲ್ಗಾಮ್ ಭಾರತದ ಸ್ವಿಟ್ಜರ್ಲೆಂಡ್ ಮತ್ತೆ ಅಲ್ಲಿ ಪ್ರವಾಸೋದ್ಯಮ ಶುರುವಾಗಬೇಕು. ಸೂಕ್ತ ಕ್ರಮಗಳನ್ನು ಕೇಂದ್ರ ಸರ್ಕಾರ ತೆಗೆದುಕೊಳ್ಳಬೇಕು ಎಂದು ಹೇಳಿದರು.

ಪಾಕ್ ಜೊತೆಗೆ ಯುದ್ಧ ಬೇಡ, ಸಿಎಂ ಹೇಳಿಕೆ ವಿವಾದದ ವಿಚಾರಕ್ಕೆ ಉತ್ತರಿಸಿದ ಅವರು, ಸಿಎಂ ಬೇರೆ ಅರ್ಥದಲ್ಲಿ ಹೇಳಿದ್ದಾರೆ. ಪಾಕ್ ವಿರುದ್ಧ ಯುದ್ಧ ಆಗಲೇಬೇಕು. ಸಿಎಂ ಯುದ್ಧ ಪರಿಹಾರವಲ್ಲ ಎಂದಿದ್ದಾರೆ. ಅವರ ಬಳಿ ನ್ಯೂಕ್ಲಿಯರ್ ಇದೆ, ಇತರೆ ಎಲ್ಲ ರಾಷ್ಟಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಯುದ್ಧ ಮಾಡಬೇಕು. ಪಾಕ್ ವಿರುದ್ಧ ಯುದ್ಧವಾಗಲೇಬೇಕು. ಪಾಕ್‌ಗೆ ತಕ್ಕ ಶಾಸ್ತಿ ಆಗಲೇಬೇಕು. ಈ ಹಿಂದೆ ಇಂದಿರಾ ಗಾಂಧಿ



ಪ್ರಧಾನಿಯಾಗಿದ್ದಾಗ ಕ್ರಮ ಕೈಗೊಂಡ ರೀತಿ ಕ್ರಮ ಆಗಬೇಕು. ಪಾಕಿಸ್ತಾನವನ್ನು ಸದೆಬಡಿಯಬೇಕು, ಕೇಂದ್ರದ ಜೊತೆಗೆ, ಮೋದಿ ಜೊತೆಗೆ ಎಲ್ಲ ರಾಜಕೀಯ ಪಕ್ಷಗಳಿವೆ. ಎಚ್ಚರಿಕೆಯಿಂದ, ಪರಿಣಾಮಕಾರಿಯಾಗಿ ಆಗಬೇಕು. ಅಣು ಬಾಂಬ್ ಬೆದರಿಕೆ ಹಾಕುತ್ತಿದ್ದಾರೆ. ಮುನ್ನೆಚ್ಚರಿಕೆ ತೆಗೆದುಕೊಂಡು ಯುದ್ಧ ಮಾಡಲಿ. ನಮ್ಮ ದೇಶದ ಜನರಿಗೆ ತೊಂದರೆಯಾದಂತೆ ಯುದ್ಧ ಆಗಲಿ ಎಂದು ಮನವಿ ಮಾಡಿದರು.



ಬಜರಂಗದಳ ಕಾರ್ಯಕರ್ತ ಸುಹಾಸ್ ಶೆಟ್ಟಿ ಹತ್ಯೆ ಖಂಡಿಸಿ ಚಿಕ್ಕಮಗಳೂರಿನಲ್ಲಿ ಬಿಜೆಪಿ ಕಾರ್ಯಕರ್ತರು ಶುಕ್ರವಾರ ಪ್ರತಿಭಟನೆ ನಡೆಸಿದರು.

### ಪಂಚ ಗ್ಯಾರಂಟಿ ರಾಜ್ಯ ಸಮಿತಿಯಿಂದ ಪ್ರಗತಿ ಪರಿಶೀಲನೆ

# ಸಮಾಜದ ಪ್ರತಿ ವ್ಯಕ್ತಿಯ ಆರ್ಥಿಕ ಸದೃಢತೆ ಸರ್ಕಾರದ ಗುರಿ: ರೇವಣ್ಣ

**ಕಲಬುರಗಿ, ಮೇ.2–** ಸಮಾಜದಲ್ಲಿ ಪ್ರತಿಯೊ ಬ್ಬರನ್ನು ಸಾಮಾಜಿಕವಾಗಿ ಆರ್ಥಿಕವಾಗಿ ಸದೃಢರನ್ನಾಗಿ ಮಾಡುವ ಉದ್ದೇಶದಿಂದ ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ ಎಂದು ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಮಿತಿಯ ರಾಜ್ಯ ಅಧ್ಯಕ್ಷರಾದ ಎಚ್.ಎಂ. ರೇವಣ್ಣ ಅವರು ಹೇಳಿದರು.



ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರಾಜ್ಯ ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಎಚ್.ಎಂ.ರೇವಣ್ಣ ಅವರ ಅಧ್ಯಕ್ಷತೆಯಲ್ಲಿ ಪ್ರಗತಿ ಪರಿಶೀಲನೆ ನಡೆಯಿತು. ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್, ಜಿಪಂ ಸಿಇಓ ಭಂವರ್ ಸಿಂಗ್ ಮೀನಾ, ಶಾಸಕರಾದ ಅಲ್ಲಮಪ್ರಭು ಪಾಟೀಲ್ ಮತ್ತು ತಿಪ್ಪಣಪ್ಪ ಕಮಕನೂರು ಅವರುಗಳಿದ್ದರು.

ನಗರದ ಜಿಲ್ಲಾಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಜಿಲ್ಲಾ ಸಮಿತಿಯೊಡನೆ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಜ್ಯದ 5 ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತು ಸಾಧಕ–ಬಾಧಕಗಳ ಪರಿಶೀಲನಾ ಸಭೆಗಳನ್ನು ಪ್ರತಿ ಜಿಲ್ಲಾಮಟ್ಟದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಜನರಿಗೆ ಅನುಕೂಲ ಆಗಲಿ ಎಂಬ ಉದ್ದೇಶದಿಂದ ಮಾನ್ಯ ಮುಖ್ಯಮಂತ್ರಿ ಸಿದ್ದಾರಾಮಯ್ಯ ನೇತೃತ್ವದ ಸರ್ಕಾರ ಜಾರಿಗೆ ತಂದಿರುವ ಈ ಯೋಜನೆಗಳು ಬಡವರನ್ನು ಸಮಾಜಿಕವಾಗಿ ಆರ್ಥಿಕವಾಗಿ ಹಿಂದುಳಿದವರಿಗೆ ಆರ್ಥಿಕವಾಗಿ ಸಬಲರನ್ನಾಗಿ ಮಾಡುತ್ತವೆ. ಐದು ಗ್ಯಾರಂಟಿ ಯೋಜನೆಗಳ ಕುರಿತು ಅಧಿಕಾರಿಗಳಿಂದ ವಿಸ್ತತವಾದ ಮಾಹಿತಿಯನ್ನು ಪಡೆದು ಜನ ಸಮಾನ್ಯರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗೃಹಜ್ಯೋತಿ ಯೋಜನೆ ಕುರಿತಂತೆ ಜಿಲ್ಲೆಯ ಕುಸನೂರು ರಾಜಪೂರ, ಅಮಲ್ಲವಾಡಿ, ಸ್ಟೇಶನ್ ಬಜಾರ ವಿದ್ಯುತ್ ಬಿಲ್ಲುಗಳ ಸಮಸ್ಯೆ ಜಾಸ್ತಿಯಾಗುತ್ತಿದ್ದು, ಜೆಸ್ಕಾಂ ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು. ಜಿಲ್ಲೆಯಲ್ಲಿ ಗೃಹಜ್ಯೋತಿ ಯೋಜನೆಯಡಿ ಈವರೆಗೆ ಒಟ್ಟು 6,32,630 ನೋಂದಾಣಿಯಾಗಿದ್ದು, ಒಟ್ಟು ಅರ್ಹ ಗ್ರಾಹಕರು 607253 ಶೇಕಡ 94.35 ಪ್ರತಿಶತದಷ್ಟು ಯೋಜನೆಯ ಲಾಭ ಪಡೆಯುತ್ತಿದ್ದಾರೆ. ಕೂಸನೂರಿನಲ್ಲಿ ಕೆಲವೊಂದು ವಿದ್ಯುತ್ ಬಿಲ್ಲುಗಳು 200 ಯುನಿಟಕ್ಕಿಂತ ಹೆಚ್ಚು ವಿದ್ಯುತ್ ಬಿಲ್ಲುಗಳು ಮೊತ್ತ ಜಾಸ್ತಿ ಬಂದಿದ್ದು, ಇದನ್ನು ತಡೆಯಲು ಕ್ರಮಕೈಗೊಳ್ಳಬೇಕು ಜೆಸ್ಕಾಂ ಕೆಲವೊಂದು ಮನೆಗಳ ಮೀಟರ್ ಸರಿಯಾಗಿ ಕೂಡಿಸಿರುವುದಿಲ್ಲ ಎಂದು ಸ್ಥಳೀಯ ಸಮಿತಿಗಳಿಂದ ದೂರುಗಳು ಸಹ ಬಂದವು. ಇದಕ್ಕೆ ಉತ್ತರಿಸಿದ ಜಾಸ್ಕಂ ಅಧಿಕಾರಿಗಳು ಯಾವುದೇ ಸಮಸ್ಯೆಗಳು ಇದ್ದರು ಶೀಘ್ರದಲ್ಲಿ ಪರಿಹರಿಸಲಾಗುವುದು ಎಂದು ತಿಳಿಸಿದರು.

ಶಕ್ತಿಯೋಜನೆ ಕಲಬುರಗಿ ಜಿಲ್ಲೆಯ ಎಲ್ಲ ತಾಲೂಕು ಒಳಗೊಂಡಂತೆ ಪ್ರತಿದಿನ 1.87 ಲಕ್ಷ ಜನ ಮಹಿಳಾ ಪ್ರಯಾಣಿಕರು ಪ್ರಯಾಣ ಮಾಡಿರುತ್ತಾರೆ. ಸದರಿ ಪ್ರಯಾಣಿಕರಿಂದ ಪ್ರತಿದಿನ ಸರಾಸರಿ 61.93 ಲಕ್ಷ ಸಾರಿಗೆ ಇಲಾಖೆಗೆ ಆದಾಯ ಸಂಧಾಯವಾಗುತ್ತಿದೆ ಎಂದು ಅಧಿಕಾರಿಗಳು ಸಭೆಯ ಗಮನಕ್ಕೆ ತಂದರು.

ಸರ್ಕಾರವು ಯುವನಿಧಿ ಯೋಜನೆಯ ಮುಖಾಂತರ ನಿರುದ್ಯೋಗಿ ಯುವಕರನ್ನು ಆರ್ಥಿಕವಾಗಿ ಸದೃಡರನ್ನನಾಗಿ ಮಾಡುವ ಉದ್ದೇಶದಿಂದ ಪದವೀಧರ ನಿರುದ್ಯೋಗ ಯುವಕರಿಗೆ ಪ್ರತಿ ತಿಂಗಳು 3000, ಡಿಪ್ಲೋಮೊ ನಿರುದ್ಯೋಗ ಯುವಕರಿಗೆ 1500 ಯುವನಿಧಿಯಲ್ಲಿ ಇಲ್ಲಿಯವರೆಗೆ ಡಿಸೆಂಬರ್ 2023 ರಿಂದ ಪೆಬ್ರುವರಿ 2025 ರವರಿಗೆ 17574 ನೋಂದಣಿಯಾಗಿದ್ದು, ಒಟ್ಟು ಮೊತ್ತ 24,09,81,000 ಆಗಿದೆ ಎಂದು ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕ ಭೀಮಾರಾಯ ಮಾತನಾಡಿ, ಜಿಲ್ಲೆಯಲ್ಲಿ ಅಂತ್ಯೋದಯ ಅನ್ನ ಯೋಜನೆ ಕಾರ್ಡ 51,8000 ಬಿಪಿಎಲ್ ಕಾರ್ಡ್ 1,16,000 ಎಪಿಎಲ್ ಕಾರ್ಡಗಳು ಇದ್ದು, ಪೆಬ್ರವರಿ 2025 ರ ಮಾಹೆಯಿಂದ ಬಿ.ಪಿ.ಎಲ್. ಕಾರ್ಡಿನ ಪ್ರತಿ ಸದಸ್ಯರಿಗೆ 10 ಕೆ.ಜಿ. ಅಕ್ಕಿ ವಿತರಿಸಲಾಗುತ್ತದೆ ಎಂದು ಮಾಹಿತಿ ನೀಡಿದರು.

### ಪಾಕಿಸ್ತಾನದ ಇಸ್ಲಾಮಾಬಾದ್ ಕಲಬುರಗಿಯಲ್ಲೇಕೆ?

# ಇಸ್ಲಾಮಾಬಾದ್ ಕಾಲೋನಿ ಹೆಸರು ಬದಲಿಸಿ; ಹಿಂದೂ ಸಂಘಟನೆಗಳ ಆಗ್ರಹ

**ಕಲಬುರಗಿ, ಮೇ.2–** ಕಲಬುರಗಿ ಉತ್ತರ ವಿಧಾನಸಭೆ ಕ್ಷೇತ್ರದ ನಗರ ವ್ಯಾಪ್ತಿಯಲ್ಲಿರುವ ಒಂದು ಕಾಲೋನಿಗೆ ಇಸ್ಲಾಮಾಬಾದ್ ಎಂಬ ಹೆಸರಿದೆ. ಪಾಪಿ ಪಾಕಿಸ್ತಾನದ ರಾಜಧಾನಿ ಇಸ್ಲಾಮಾಬಾದ್ ಆಗಿರುವ ಹಿನ್ನಲೆಯಲ್ಲಿ ನಗರದಲ್ಲಿ ಅಂತಹ ಹೆಸರು ಬೇಡ. ಕೂಡಲೇ ಬೇರೆ ಹೆಸರು ನಾಮಕರಣ ಮಾಡಬೇಕು ಎಂದು ಒತ್ತಾಯಿಸಿ ಹಿಂದೂ ಜಾಗೃತಿ ಸೇನೆಯ ಕಾರ್ಯಕರ್ತರು ಮಹಾ ನಗರ ಪಾಲಿಕೆಯ ಮುಂದೆ ಪ್ರತಿಭಟನಾ ಪ್ರದರ್ಶನ ಮಾಡಿದರು.

ಪ್ರತಿಭಟನೆಕಾರರು ನಂತರ ಮಹಾನಗರ ಪಾಲಿಕೆಯ ಆಯುಕ್ತರಿಗೆ ಮನವಿ ಪತ್ರ ಸಲ್ಲಿಸಿ, ಇತ್ತೀಚೆಗೆ ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಹಿಂದೂ ಪ್ರವಾಸಿಗರ ಮೇಲೆ ಭಯೋತ್ಪಾದಕರು ಮಾಡಿದ ದಾಳಿಯು ಖಂಡನೀಯ. ಗುಂಡಿನ ದಾಳಿ ಮಾಡಿದ ಭಯೋತ್ಪಾದಕರಿಗೆ ಪಾಕಿಸ್ತಾನ್ ಸರ್ಕಾರ ಸಂಪೂರ್ಣ ಬೆಂಬಲ ನೀಡುತ್ತಿದೆ. ಸಾಕಷ್ಟು ಬಾರಿ ಭಾರತದ ಮೇಲೆ ಪಾಕಿಸ್ತಾನಿ ಭಯೋತ್ಪಾದಕರು ನಿರಂತರವಾಗಿ ಅಟ್ಟಹಾಸ ಮೆರೆಯುತ್ತಿದ್ದಾರೆ ನಗರದ



ಕಲಬುರಗಿ ಮಹಾನಗರ ಪಾಲಿಕೆ ಕಚೇರಿ ಮುಂದೆ ಹಿಂದೂ ಜಾಗೃತಿ ಸೇನೆಯ ಕಾರ್ಯಕರ್ತರು ನಗರದ ಬಡಾವಣೆಗೆ ಇಸ್ಲಾಮಾಬಾದ ಹೆಸರನ್ನು ಬದಲಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿದರು.

ಉತ್ತರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ವಾರ್ಡ್ ನಂಬರ್ 4ರ ಬಡಾವಣೆಯೊಂದಕ್ಕೆ ಇಸ್ಲಾಮಾಬಾದ್ ಕಾಲೋನಿ ಎಂಬ ಹೆಸರಿದ್ದು, ಅದನ್ನು ಕೂಡಲೇ ತೆಗೆದುಹಾಕಬೇಕು. ಭಾರತದ ಶತ್ರು ರಾಷ್ಟ್ರವಾಗಿರುವ ಸದಾ ನರಿಬುದ್ಧಿ ತೋರಿಸುತ್ತಿರುವ ಪಾಕಿಸ್ತಾನ್‌ದ ರಾಜಧಾನಿ ಇಸ್ಲಾಮಾಬಾದ್ ಕಾಲೋನಿ ಆಗಿದ್ದು, ಶತ್ರು ರಾಷ್ಟ್ರದ ರಾಜಧಾನಿ ಹೆಸರನ್ನು ನಗರದ ಬಡಾವಣೆಗೆ ಇಟ್ಟಿರುವುದು ಖಂಡ ನಾರ್ಹ. ಇಸ್ಲಾಮಾಬಾದ್ ಕಾಲೋನಿ ಯಲ್ಲಿರುವ ಸಮಸ್ತ ದೇಶಭಕ್ತ ಮುಸ್ಲಿಂ ಬಾಂಧವರು ತಕ್ಷಣ ಇಸ್ಲಾಮಾಬಾದ್ ಕಾಲೋನಿ ಹೆಸರನ್ನು ತೆರವುಗೊಳಿಸಿ ಭಾರತ ದೇಶಕ್ಕಾಗಿ ದುಡಿಯುವ ಹಾಗೂ ಭಾರತ ದೇಶವನ್ನು ಉತ್ತುಂಗಕ್ಕೆ ಕೊಂಡೊಯ್ದಿರುವ ವೀರ ಯೋಧ ಹವಾಲ್ದಾರ್ ಅಬ್ದುಲ್ ಹಮೀದ್, ದಿ. ಬ್ರಿಗೇಡರ್ ಮೊಹ್ಮದ್ ಉಸ್ಮಾನ್, ಮಾಜಿ ರಾಷ್ಟ್ರಪತಿ ಅಬ್ದುಲ್ ಕಲಾಂ, ದಿ. ಭಾರತರತ್ನ ಶಹನಾಯಿ ವಾದಕ ಉಸ್ತಾದ್ ಬಿಸ್ಮಿಲ್ಲಾಖಾನ್, ತಬಲಾ ಮಾಂತ್ರಿಕ ಜಾಕೀರ್ ಹುಸೇನ್ ಇಲ್ಲವೇ ಖಾಜಾ ಬಂದೇ ನವಾಜ್ ಅವರಂತಹ ಗಣ್ಯರ ಹೆಸರನ್ನು ಇಡಬೇಕು ಎಂದು ಒತ್ತಾಯಿಸಿದರು.

# ರಾಯಚೂರು ಡಿ.ಸಿ ಕಚೇರಿಗೆ ಬಾಂಬ್ ಬೆದರಿಕೆ ಸ್ಥಳಕ್ಕೆ ಧಾವಿಸಿದ ಬಾಂಬ್ ನಿಷ್ಕ್ರಿಯ ದಳ ತೀವ್ರ ಶೋಧನೆ

**ರಾಯಚೂರು, ಮೇ.2–** ರಾಯಚೂರು ಹಘೂ ಚಾಮರಾಜ ನಗರ ಜಿಲ್ಲಾಧಿಕಾರಿಗಳ ಕಚೇರಿ ಸ್ಫೋಟಿಸುವ ಬೆದರಿಕೆಯ ಇಮೇಲ್ ರವಾನೆಯಗಿದೆ. ರಾಯಚೂರು ಜಿಲ್ಲಾಧಿಕಾರಿಗಳು ಇಂದು ಬೆಳಿಗ್ಗೆ ಕಚೇರಿಗೆ ಆಗಮಿಸುತ್ತಲೇ ಇಮೇಲ್‌ನಲ್ಲಿ ಬಂದಿರುವ ಸಂದೇಶವೊಂದು, ಮಧ್ಯಾನ್ಹ 3 ಗಂಟೆಯೊಳಗೆ ಕಚೇರಿ ಸ್ಫೋಟಿಸುವ ಬೆದರಿಕೆ ಹಆಕಲಾಗಿದ್ದು, ಈ ಸುದ್ದಿ ಹರಡುತ್ತಲೇ ಹೆದರಿಕೆಯಿಂದ ಕಚೆರಿ ಸಿಬ್ಬಂದಿಗಳು ಕಚೇರಿಯಿಂದ ಹೊರಗೋಡಿ ಬಂದರು.

ಕೂಡಲೇ ಪೊಲೀಸರಿಗೆ ಸೂಚನೆ ನೀಡಿದ್ದು, ಪೊಲೀಸರು ಬಾಂಬ್ ನಿಷ್ಕ್ರೀಯ ದಳ ಮತ್ತು ಶ್ವಾನ ದಳದೊಂದಿಗೆ ಆಗಮಿಸಿ ಇಡೀ ಕಚೇರಿಯನ್ನು ಜಾಲಾಡಿದರು. ಮತ್ತು ಕಚೇರಿಯ ಸುತ್ತಲೂ ಬಿಗಿ ಭದ್ರತೆಯನ್ನು ಏರ್ಪಡಿಸಲಾಯಿತು. ಸುದ್ದಿ ತಿಳಿದ ನಗರದ ಜನತೆಯು ಆತಂಕಗೊಂಡಿದ್ದು, ನಿತ್ಯ ಜಿಲ್ಲಾಧಿಕಾರಿಗಳ ಕಚೇರಿ ವಿವಿಧ ಕೆಲಸಗಳಿಗೆ ಆಗಮಿಸಿರುವ ಜನರೂ ಕೂಡ ಕಚೇರಿ ಹೊರಗೆ ದೂರದಲ್ಲಿ ಆತಂಕದಿಂದ ನಿಂತಿರುವುದು ಕಂಡು ಬಂದಿತು. ಈ ಘಟನೆಯಿಂದ ಇಡೀ ನಗರದಲ್ಲಿ ಒಂದು ರೀತಿಯ ಆತಂಕದ ವಾತಾವರಣ ಮೂಡಿದ್ದು, ಜಿಲ್ಲಾಧಿಕಾರಿ ಗಳ ಕಚೇರಿ ತುಂಬ ಪೊಲೀಸರೇ ತುಂಬಿದ್ದಾರೆ. ಯಾರೋ ಕಿಡಿಗೇಡಿಗಳು ಮಾಡಿರಬಹುದು ಎಂದು ಅಲಕ್ಷಿಸು ವಂತೆಯೂ ಇಲ್ಲ. ಕಚೇರಿಯಲ್ಲಿ ಕೆಲಸ ಮಾಡುವ ಮತ್ತು ಕಚೇರಿಗೆ ಭೇಟಿ ನೀಡುವ ಪ್ರತಿಯೊಬ್ಬರ ಜೀವವೂ ಅಮೂಲ್ಯ



ವಾದದ್ದು. ಆದ್ದರಿಂದ ಯಾವುದೇ ಕಾರಣಕ್ಕೂ ನಾವು ರಿಸ್ಕ್ ತೆಗೆದ ಕೊಳ್ಳುವುದಿಲ್ಲ. ಆದ್ದರಿಂದ ಇಂದು ಒಂದು ದಿನ ಯಾರೂ ಕಚೇರಿ ಕಡೆ ಸುಳಿಯ ಕೂಡದು ಮತ್ತು ಮುಂದೆಯೂ ಕಚೇರಿಗೆ ಬಂದು ಹೋಗುವವರು ಮತ್ತು ಅವರ ಕೈಯಲ್ಲಿರುವ ವಸ್ತುಗಳ ಮೇಲೆ ಗಮನಹರಿಸಿ ಎಚ್ಚರಿಕೆ ವಹಿಸಬೇಕೆಂದು ಎಂದು ಡಿಸಿ ಅವರು ತಿಳಿಸಿದರು.

# ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ– ಶ್ರೀರಾಮುಲು

**ಬಳ್ಳಾರಿ ಮೇ.2–**ಮಂಗಳೂರಲ್ಲಿ ಗುರುವಾರ ರಾತ್ರಿ ಹಿಂದೂ ಸಂಘಟನೆ ಕಾರ್ಯಕರ್ತ ಕಾಟಿಪಳ್ಳ–ಕೋಡಿಕೆರೆ ನಿವಾಸಿಯಾಗಿದ್ದ ಸುಹಾಸ್ ಶೆಟ್ಟಿ (42) ಎಂಬಾತನನ್ನು ಭೀಕರವಾಗಿ ಬಜಪೆ ಕಿನ್ನಿಪದವು ಎಂಬಲ್ಲಿ ಕೊಲೆಗೈದಿರೋದನ್ನ ನೋಡಿದರೆ ಇದು ಪೂರ್ವ ನಿಯೋಜಿತ ಕೊಲೆ ಎಂದು ಬಿಜೆಪಿ ಹಿರಿಯ ಧುರೀಣ ಮಾಜಿ ಸಚಿವ ಶ್ರೀರಾಮುಲು ಅಭಿಪ್ರಾಯ ಪಟ್ಟಿದ್ದಾರೆ.



ಸುದ್ದಿಗೋಷ್ಠಿಯಲ್ಲಿ, ನಟ್ಟನಡು ರಸ್ತೆಯಲ್ಲಿ ದುಷ್ಕರ್ಮಿಗಳು ಭೀಕರವಾಗಿ ಹಿಂದೂ ಕಾರ್ಯಕರ್ತನನ್ನ ಕೊಲೆಗೈದಿರೋದು ಖಂಡನೀಯ ರಾಜ್ಯದಲ್ಲಿ ಈ ರೀತಿಯ ಅಹಿತಕರ ಘಟನೆಗಳು ಮರುಕಳುಹಿಸುತ್ತಿರುವುದನ್ನ ನೋಡ್ತಾ ಇದ್ದರೆ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹಾಳಾಗಿದ್ದು, ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಿನಿಂದಲೂ ಹಿಂದೂ ಕಾರ್ಯಕರ್ತರ ಕೊಲೆಗಳು ನಡೆಯುತ್ತಲೇ ಇವೆ. ರಾಜ್ಯದಲ್ಲಿ ಇಂತಹ ಅಹಿತಕರ ಘಟನೆಗಳು ನಡೆದಾಗಲೆಲ್ಲ ಗೃಹ ಸಚಿವ ಡಾ.ಜಿ.ಪರಮೇಶ್ವರ್ ರವರು ಬಹಳ ಹಾರಿಕೆಯ ಉತ್ತರವನ್ನು ಕೊಡುತ್ತಾರೆ. ಯಾವುದೂ ಕೂಡ ಸಿರಿಯಸ್ ಆಗಿ ತೆಗೆದುಕೊಳ್ಳುತ್ತಿಲ್ಲ. ಗೃಹ ಸಚಿವರು ಸಂಪೂರ್ಣ ವಿಫಲವಾರಾಗಿದ್ದಾರೆ. ಹಾಗಾಗಿ ಅವರು ರಾಜೀನಾಮೆ ಕೊಡಬೇಕು ಎಂದು ಶ್ರೀರಾಮುಲು ಒತ್ತಾಯಿಸಿದರಲ್ಲದೇ, ಸುಹಾಸ್ ಶೆಟ್ಟಿ ಕೊಲೆ ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಲು ಒತ್ತಾಯಿಸಿದರು.

ಹಿಂದೂ ಕಾರ್ಯಕರ್ತ ಸುಹಾಸ್ ಅವರ ಭೀಕರ ಕೊಲೆ ನಾಗರಿಕ ಸಮಾಜವನ್ನು ಬೆಚ್ಚಿ ಬೀಳಿಸಿದೆ. ಮತೀಯವಾದಿ ಹಿಂದೂ ವಿರೋಧಿ ರಕ್ಕಸರು ನಡು ರಸ್ತೆಯಲ್ಲೇ ಅಟ್ಟಹಾಸಗೈದು ಕೊಲೆಗೈಯುತ್ತಿರುವ ದೃಶ್ಯ ನಾವು ಯಾವ ನೆಲದಲ್ಲಿ ವಾಸಿಸುತ್ತಿದ್ದೇವೆ ಎಂಬ ಪ್ರಶ್ನೆ ಜನಸಾಮಾನ್ಯರನ್ನು ಕಾಡುತ್ತಿದೆ, ಈ ಅಮಾನುಷ ಘಟನೆಯನ್ನು ತೀವ್ರವಾಗಿ ಖಂಡಿಸುವೆ. ಸುಹಾಸ್ ಬರ್ಬರ ಕೊಲೆಗೀಡಾಗಿರುವ ಘಟನೆಯ ಹಿನ್ನೆಲೆ ಪೂರ್ವನಿಯೋಜಿತ ಎನ್ನುವುದು ಸುಸ್ಪಷ್ಟ. ಈ ಹಿನ್ನೆಲೆಯಲ್ಲಿ ಇದು ಗುಪ್ತಚರ ಇಲಾಖೆಯ ವೈಫಲ್ಯವೋ? ಕಾನೂನು ಸುವ್ಯವಸ್ಥೆಯ ಜವಾಬ್ದಾರಿ ಹೊತ್ತವರ ಹೊಣೆಗೇಡಿತನ ಕಾರಣವೋ? ಎಂಬ ಬಗ್ಗೆಯೂ ಸೂಕ್ತ ತನಿಖೆ ನಡೆಯಬೇಕಿದೆ ಎಂದರು.

ರಾಜ್ಯದ ಕಾನೂನು ಸುವ್ಯವಸ್ಥೆ ಬಗ್ಗೆ ವಿಧಾನಸಭೆಯ ಸ್ಪೀಕರ್ ಯು.ಟಿ.ಖಾದರ್ ರವರೇ ಹೇಳಿದ್ದಾರೆ. ಖಾದರ್ ರವರಿಗೆ ಅಂಡರ್ ವಲ್ಡ್‌ನಿಂದ ಜೀವ ಬೆದರಿಕೆ ಇದೆ ಎಂದು ಮಾಧ್ಯಮಗಳ ಮುಂದೆ ಹೇಳಿದ್ದಾರೆ. ಒಬ್ಬ ವಿಧಾನಸಭಾ ಸ್ಪೀಕರ್‌ಗೆ ಈ ರಾಜ್ಯದಲ್ಲಿ ರಕ್ಷಣೆ ಇಲ್ಲ ಅಂದರೆ ಇನ್ನು ಜನ ಸಾಮಾನ್ಯರ ಪರಿಸ್ಥಿತಿ ಏನೂ ಎಂದು ಶ್ರೀರಾಮುಲು ಸರಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಕಾಶ್ಮೀರದಲ್ಲಿ ಹಿಂದೂಗಳ ಮಾರಣ ಹೋಮದ ಸುದ್ದಿ ಇನ್ನೂ ಹಸಿಯಾಗಿರುವಾಗಲೇ, ಹಿಂದೂ ಕಾರ್ಯಕರ್ತನನ್ನು ಕೊಚ್ಚಿಕೊಂದಿರುವ ಮಂಗಳೂರು ಘಟನೆಯನ್ನು ಗಮನಿಸಿದರೆ ಕಾಂಗ್ರೆಸ್ ಸರ್ಕಾರ ಕರ್ನಾಟಕದಲ್ಲಿ ಕಾಶ್ಮೀರ ಪರಸ್ಥಿತಿ ನಿರ್ಮಾಣ ಮಾಡಲು ಹೊರಟಂತೆ ಕಾಣುತ್ತಿದೆ. ಮೇಲಿಂದ ಮೇಲೆ ಕರ್ನಾಟಕದಲ್ಲಿ ಹಿಂದೂಗಳ ಮೇಲಿನ ದೌರ್ಜನ್ಯ, ಹಲ್ಲೆ, ಕೊಲೆಗಳು ನಿರಂತರವಾಗಿ ನಡೆಯುತ್ತಿದ್ದು ರಾಜ್ಯದ ಜನತೆ ತೀವ್ರ ಆತಂಕಿತರಾಗಿದ್ದಾರೆ.

# ಕೇಂದ್ರೀಯ ವಿವಿಯಲ್ಲಿ ಬಸವ ಜಯಂತಿ–ಬಸವಣ್ಣ ನಾಸ್ತಿಕನಲ್ಲ, ಕೂಡಲಸಂಗಮ ದೇವನ ಆರಾಧಕ: ಗಣಪತಿ ಸಿನ್ನೂರ

**ಕಲಬುರಗಿ, ಮೇ.2–** ಬಸವಣ್ಣ ನಾಸ್ತಿಕ ಎಂದು ಇತ್ತೀಚೆಗೆ ಬಿಂಬಿಸಲಾಗುತ್ತಿದೆ. ಆದರೆ ಬಸವಣ್ಣ ಕೂಡಲ ಸಂಗಮ ದೇವನ ಆರಾಧಕ, ಕಾಯಕದ ಬಗ್ಗೆ ಹೇಳಿದ್ದರೂ ಕಾಯಕವೇ ಕೈಲಾಸ ಎಂದು ಹೇಳು, ಆತ ನಾಸ್ತಿಕನಲ್ಲ. ಕಾಯಕದಲ್ಲಿ ಕೈಲಾಸ ಕಾಣುವಂತೆ ತನ್ನ ವಚನಗಳ ಮೂಲಕ ಹೇಳಿರುವ ಬಸವಣ್ಣ, "ಅನುಭವ ಮಂಟಪ ಮತ್ತು ಮಹಾಮನೆ ನಿಜಅರ್ಥದಲ್ಲಿ ಮಾನವ ಅಭಿವೃದ್ಧಿಯ ಕೇಂದ್ರಗಳಾಗಿದ್ದವು" ಎಂದು ಕೇಂದ್ರೀಯ ವಿವಿ ಬಸವ ಪೀಠದ ಸಂಯೋಜಕ ಡಾ. ಗಣಪತಿ ಬಿ ಸಿನ್ನೂರ ಹೇಳಿದರು.



ಕಲಬುರಗಿಯ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಬಸವ ಜಯಂತಿ ಕಾರ್ಯಕ್ರಮದಲ್ಲಿ ಬಸವ ಪೀಠದ ಸಂಯೋಜಕ ಡಾ.ಗಣಪತಿ ಸಿನ್ನೂರ, ಪ್ರೊ.ಆರ್.ಆರ್.ಬಿರಾದಾರ, ಪ್ರೊ.ವಿಕ್ರಮ ವಿಸಾಜಿ ಮುಂತಾದವರಿದ್ದರು.

ನಗರದ ಹೊರವಲಯದಲ್ಲಿರುವ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ ಮಹಾತ್ಮ ಬಸವೇಶ್ವರರ ಜಯಂತಿ ಸಂದರ್ಭದಲ್ಲಿ "ಅನುಭವ ಮಂಟಪ ಮತ್ತು ಮಹಾಮನೆ: ಮಾನವ ಸಂಪನ್ಮೂಲ ಅಭಿವೃದ್ಧಿ ಕೇಂದ್ರಗಳು" ಕುರಿತು ವಿಶೇಷ ಉಪನ್ಯಾಸ ನೀಡಿದ ಅವರು, ಬಸವರೇಶ್ವರರು ಒಬ್ಬ ಮಹಾನ್ ಮಾನವತಾವಾದಿ ನಾಯಕರಾಗಿದ್ದರು ಮತ್ತು ಅವರು ಸಾಮಾನ್ಯ ಜನರನ್ನು ಅಸಾಧಾರಣ ಮನುಷ್ಯರನ್ನಾಗಿ ಪರಿವರ್ತಿಸಲು ಅನುಭವ ಮಂಟಪ ಮತ್ತು ಮಹಾಮನೆಯನ್ನು ಕಟ್ಟಿದರು. ಅಷ್ಟಾವರಣ, ಪಂಚಾಚಾರ ಮತ್ತು ಷಟ್ಸ್ಥಲಗಳು ಶರಣರ ಮಾನವ ಅಭಿವೃದ್ಧಿಯ ಪಠ್ಯಪುಸ್ತಕಗಳಾಗಿದ್ದವು. ಜನರನ್ನು ಹೆಚ್ಚು ಪರಿಣಾಮಕಾರಿಯಾಗಿ ನಿರ್ವಹಿಸಲು ಈ ತತ್ವಗಳು ಇಂದಿನ ಸಂಘಟನೆಗೆ ಬಹಳ ಪ್ರಸ್ತುತವಾಗಿವೆ. ಲಿಂಗಾಚಾರವು ಸಾಂಸ್ಥಿಕ ಪೌರತ್ವ ನಡವಳಿಕೆಯನ್ನು ತರುತ್ತದೆ ಮತ್ತು ಜನರು ಸಂಸ್ಥೆಗೆ ಹೆಚ್ಚು ನಿಷ್ಠರಾಗುವಂತೆ ಮಾಡುತ್ತದೆ. ಸದಾಚಾರವು ಕಾಯಕವೆ ಕೈಲಾಸ ಎಂಬ ಕಲ್ಪನೆಯನ್ನು ತರುತ್ತದೆ ಮತ್ತು ಜನರು ನೈತಿಕತೆ, ಪ್ರಾಮಾಣಿಕತೆ, ಬದ್ಧತೆ ಮತ್ತು ಸಮರ್ಪಣೆಯೊಂದಿಗೆ ಕೆಲಸ ಮಾಡುವಂತೆ ಮಾಡುತ್ತದೆ. ಇದು ಜನರನ್ನು ಅಭೌತಿಕ ಮತ್ತು ದುರಾಸೆ ರಹಿತರನ್ನಾಗಿ ಮಾಡುತ್ತದೆ. ಇದು ಸಾಂಸ್ಥಿಕ ಉತ್ಪಾದಕತೆಯನ್ನು ಹೆಚ್ಚಿಸುತ್ತದೆ. ದೇಶದಲ್ಲಿ ಬೆಳವಣಿಗೆ, ಸಮೃದ್ಧಿ ಮತ್ತು ಆರ್ಥಿಕ ಸಮಾನತೆಯನ್ನು ತರುತ್ತದೆ. ಶಿವಾಚಾರವು ಜನರನ್ನು ಹೆಚ್ಚು ಒಳಗೊಳ್ಳುವ ಮತ್ತು ಇತರರಿಗೆ ಹೊಂದಿಕೊಳ್ಳುವವರನ್ನಾಗಿ ಮಾಡುತ್ತದೆ. ಇದು ಸಂಸ್ಥೆಯಲ್ಲಿ ಸಮಾನತೆ, ವೈವಿಧ್ಯತೆ ಮತ್ತು ಒಳಗೊಳ್ಳುವಿಕೆಯನ್ನು ತರುತ್ತದೆ. ಆದ್ದರಿಂದ ಇದು ಸಾಂಸ್ಥಿಕ ತಾರತಮ್ಯ ಮತ್ತು ಸಂಘರ್ಷವನ್ನು ಕಡಿಮೆ ಮಾಡುತ್ತದೆ. ಆದ್ದರಿಂದ ಸಂಸ್ಥೆಯು ಕೆಲಸ ಮಾಡಲು ಅತಿ ಸಂತೋಷದ ಸ್ಥಳವಾಗುತ್ತದೆ ಎಂದರು.

ಗಣಾಚಾರವು ಜನರನ್ನು ಸಂಸ್ಥೆಯ ಸೈನಿಕರನ್ನಾಗಿ ಮಾಡುತ್ತದೆ. ಅವರು ಹೆಚ್ಚು ಶಿಸ್ತುಬದ್ಧರಾಗುತ್ತಾರೆ ಮತ್ತು ನಿಯಮ ಪಾಲಿಸುವವರಾಗುತ್ತಾರೆ. ಯಾರಾದರೂ ನಿಯಮ ಉಲ್ಲಂಘಿಸಿ ಸಂಸ್ಥೆಗೆ ಹಾನಿ ಮಾಡಲು ಪ್ರಯತ್ನಿಸಿದರೆ ಅಂತಹವರಿಂದ ಸಂಸ್ಥೆಯನ್ನು ರಕ್ಷಿಸುತ್ತಾರೆ. ಭೃತ್ಯಾಚಾರವು ಜನರನ್ನು ಹೆಚ್ಚು ವಿನಮ್ರ ಮತ್ತು ವಿಧೇಯರನ್ನಾಗಿ ಮಾಡುತ್ತದೆ. ಇದು ಪರಸ್ಪರ ಸಂಬಂಧಗಳನ್ನು ಸುಧಾರಿಸುತ್ತದೆ ಮತ್ತು ಜನರನ್ನು ಪರಸ್ಪರ ಸ್ನೇಹಪರ ಮತ್ತು ಸಹಕಾರಿಯನ್ನಾಗಿ ಮಾಡುತ್ತದೆ. ಮೇಲಿನ ಅನುಕೂಲಗಳ ಕಾರಣದಿಂದಾಗಿ ಇಂದಿನ ಸಂಸ್ಥೆಯಲ್ಲಿ ಪಂಚಾಚಾರಗಳ ಅನ್ವಯವು ಭ್ರಷ್ಟಾಚಾರ, ಸ್ವಜನಪಕ್ಷಪಾತ, ತಾರತಮ್ಯ, ಮಹಿಳೆಯರು ಮತ್ತು ದಲಿತರ ಮೇಲಿನ ಕಿರುಕುಳ, ಕೆಲಸ ಮತ್ತು ಸಂಘಟನೆಗೆ ಬದ್ಧತೆಯ ಕೊರತೆ, ಕಳಪೆ ಗುಣಮಟ್ಟದ ಸೇವೆ ಮತ್ತು ನಿರ್ಲಕ್ಷ್ಯ ಇತ್ಯಾದಿಗಳಂತಹ ಜ್ವಲಂತ ಸಮಸ್ಯೆಗಳನ್ನು ಪರಿಹರಿಸುತ್ತದೆ. ಆದ್ದರಿಂದ ಇದು ಹೆಚ್ಚು ಪರಿಣಾಮಕಾರಿ ಮತ್ತು ಸಂತೋಷದ ಸಂಸ್ಥೆಯನ್ನು ನಿರ್ಮಿಸಲು ಸಹಾಯ ಮಾಡುತ್ತದೆ ಎಂದು ಹೇಳಿದರು.

ಕುಲಸಚಿವ ಪ್ರೊ. ಆರ್. ಆರ್.ಬಿರಾದಾರ್ ಅವರು ಅಧ್ಯಕ್ಷೀಯ ಭಾಷಣ ಮಾಡಿ, ನಾವು ಬಸವೇಶ್ವರರಂತಹ ಮಹಾನ್ ನಾಯಕರನ್ನು ಅನುಸರಿಸಬೇಕು, ಏಕೆಂದರೆ ಇದು ಇಂದಿನ ಅಗತ್ಯವಾಗಿದೆ. ಇಂದಿನ ಸಂಸ್ಥೆಯಲ್ಲಿ ನಮ್ಮ ಕ್ರೂರ ಮನೋಭಾವದಿಂದಾಗಿ ಜನರಲ್ಲಿ ನಂಬಿಕೆಯ ಕೊರತೆಯಿದೆ, ಆದ್ದರಿಂದ ಸಂಸ್ಥೆಗಳು ಅನೇಕ ಸಮಸ್ಯೆಗಳಿಂದ ಬಳಲುತ್ತಿವೆ. ನಾವು ಶರಣರ ತತ್ವಗಳನ್ನು ಅನುಸರಿಸಬೇಕು ಮತ್ತು ನಿಜವಾದ ಮನುಷ್ಯರಾಗಬೇಕು. ಕಾಯಕವೇ ಕೈಲಾಸ, ದಾಸೋಹ, ಸಮಾನತೆ ಮತ್ತು ಒಳಗೊಳ್ಳುವಿಕೆ, ಭಕ್ತಿ, ಪ್ರಜಾಪ್ರಭುತ್ವದ ನಾಯಕತ್ವ, ತರ್ಕಬದ್ಧ ಚಿಂತನೆ, ನೀತಿಶಾಸ್ತ್ರ ಮತ್ತು ಅಹಿಂಸೆ ಬಸವೇಶ್ವರರ ಅಭಿವೃದ್ಧಿ ಮಾದರಿಯ ಪ್ರಮುಖ ತತ್ವಗಳಾಗಿವೆ. ಈ ತತ್ವಗಳನ್ನು ಅನುಸರಿಸುವುದು ವಿಕಸಿತ ಭಾರತವನ್ನು ಸಾಧಿಸಲು ಖಂಡಿತವಾಗಿಯೂ ಸಹಾಯ ಮಾಡುತ್ತದೆ ಎಂದು ಅವರು ಹೇಳಿದರು.

# ಕೇಂದ್ರದ ಜಾತಿಗಣತಿ ಓಕೆ, ಸಿದ್ದರಾಮಯ್ಯರ ಗಣತಿ ಯಾಕೆ: ಅವ್ವಣ್ಣ ಮ್ಯಾಕೇರಿ

**ಕಲಬುರಗಿ, ಮೇ.2––** ದೇಶದಲ್ಲಿ ಜನಗಣತಿ ಜೊತೆಯಾಗಿ ಜಾತಿಗಣತಿ ಮಾಡಲು ನಿರ್ಧರಿಸಿರುವ ಪ್ರಧಾನಿ ನರೇಂದ್ರ ಮೋದಿ ಅವರ ನಿಲುವು ಸ್ವಾಗತಾ ರ್ಹವಾಗಿದೆ. ಅಲ್ಲದೇ ರಾಜ್ಯದ ಮುಖ್ಯಮಂತ್ರಿ ದ್ಧರಾಮಯ್ಯ ಅವರು ಮಾಡಿದ ಸಮೀಕ್ಷೆಯು ಅವೈಜ್ಞಾನಿಕವಾಗಿದೆ ಎಂದು ಬಿಜೆಪಿ ರಾಜ್ಯ ಹಿಂದುಳಿದ ವರ್ಗಗಳ ಮೋರ್ಚಾ ಪ್ರಧಾನ ಕಾರ್ಯದರ್ಶಿ ಅವ್ವಣ್ಣ ಮ್ಯಾಕೇರಿ ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ, ದೇಶದಲ್ಲಿ ಸಂವಿಧಾನಿಕವಾಗಿ ನಿಖರ ಮೀಸಲಾತಿಯನ್ನು ಪಡೆಯದೇ ಅತಂತ್ರ ಸ್ಥಿತಿಯಲ್ಲಿರುವ ಹಿಂದುಳಿದ ವರ್ಗಗಳ ಜಾತಿ ಜನಗಣತಿಯಿಂದ ಅವರ ಸ್ಥಿತಿಗತಿಗಳ ಕುರಿತು ನಿಖರ ಮಾಹಿತಿ ಲಭ್ಯವಾಗುತ್ತದೆ. ಇದ ರಿಂದಾಗಿ ಮುಂದಿನ ದಿನಗಳಲ್ಲಿ ರಾಜಕೀಯ, ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಸೌಲಭ್ಯಗಳನ್ನು ನೀಡುವುದರ ಮೂಲಕ ಹಿಂದುಳಿದ ವರ್ಗಗಳನ್ನು ಮುಖ್ಯ ವಾಹಿತಿಗೆ ವಾಹಿನಿಗೆ ತರಲು ಸಾಧ್ಯವಾಗುತ್ತದೆ.

ಸ್ವಾತಂತ್ರ್ಯ ಪೂರ್ವದಲ್ಲಿ 1881, 1931ರಲ್ಲಿ ಬ್ರಿಟಿಷ ಇಂಡಿಯಾದಲ್ಲಿ ನಡೆದಿರುವ ಜಾತಿ ಜನಗಣತಿ ಸುಮಾರು 94 ವರ್ಷಗಳ ನಂತರ ದೇಶದಲ್ಲಿರುವ ಹಿಂದುಳಿದ ವರ್ಗಗಳ ಜನಸಂಖ್ಯೆ ಅವರ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸ್ಥಿತಿಗತಿಗಳ ಕುರಿತು ವೈಜ್ಞಾನಿಕವಾದ ನಿಖರ





ಅಂಕಿ, ಅಂಶಗಳು ಲಭ್ಯವಿಲ್ಲದ ಕಾರಣ ಅವರಿಗೆ ಅನ್ಯಾಯ ಆಗುತ್ತಿತ್ತು. ಈ ದಿಸೆಯಲ್ಲಿ ಡಾ. ಅಂಬೇಡ್ಕರ್ ಅವರೂ ಕೂಡ ದೇಶದ ಬಹಸಂಖ್ಯಾತ ಬಡವರಾದ ಹಿಂದುಳಿದ ವರ್ಗದವರಿಗೆ ಮೀಸಲಾತಿ ನೀಡಲಿಲ್ಲ ಎಂಬ ಕೊರಗಿನಿಂದ ಸಂಸತ್ತಿನಲ್ಲಿ ಅವರಿಗೆ ಮೀಸಲಾತಿ ನೀಡುವ ಮತ್ತು ಮಹಿಳೆಯರ ಹಕ್ಕಿನ ಕುರಿತು ಪ್ರಸ್ತಾಪಿಸಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಈ ಹಿಂದೆ ಕೂಡ ಪ್ರಧಾನಿ, ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಸಂವಿಧಾನದಲ್ಲಿ 102ನೇ ತಿದ್ದುಪಡಿ ಮಾಡಿ ರಾಷ್ಟ್ರೀಯ ಹಿಂದುಳಿದ ವರ್ಗಗಳ ಶಾಶ್ವತ ಆಯೋಗವನ್ನು 2018ರಲ್ಲಿ ಸ್ಥಾಪಿಸಿ ಹಿಂದುಳಿದ ವರ್ಗಗಳ ಜನರಿಗೆ ಸಂವಿಧಾನಿಕ ರಕ್ಷಣೆ ನೀಡಿದರು. ವಿ.ಪಿ.ಸಿಂಗ್‌ಸರ್ಕಾರ ಅಭಿವೃದ್ಧಿಗಾಗಿ 1979ರಲ್ಲಿ ಮಂಡಲ ವರದಿಯನ್ನು ಜಾರಿಗೆ ಮಾಡಿ 27ರಷ್ಟು ಮೀಸಲಾತಿಯನ್ನು ಜಾರಿ ಗೊಳಿಸಿದರು.ಹಿಂದುಳಿದ ವರ್ಗಗಳ ಮೀಸಲಾತಿ ವಿಚಾರದಲ್ಲಿ ಕಾಂಗ್ರೆಸ್ ಮಾತ್ರ ವಿರೋಧಿಸುತ್ತಲೇ ಬಂದಿತ್ತೆಂದು ದೂರಿದರು.

ಕರ್ನಾಟಕದಲ್ಲಿ ಹಿಂದುಳಿದ ವರ್ಗಗಳ ಸಮೀಕ್ಷೆ 2015ರಲ್ಲಿ ಪ್ರಾರಂಭ ಮಾಡಿದ್ದರೂ ಇಲ್ಲಿಯವರೆಗೂ ಜಾರಿ ಮಾಡಿಲ್ಲ. ಸಿದ್ಧರಾಮಯ್ಯ ಕೇವಲ ರಾಜಕೀಯಕ್ಕಾಗಿ ಹಿಂದುಳಿದ ವರ್ಗಗಳನ್ನು ದುರುಪಯೋಗ ಮಾಡಿಕೊಳ್ಳುತ್ತಿದ್ದಾರೆ. ಹತ್ತು ವರ್ಷಗಳ ನಂತರ ಎರಡೆರಡು ವರದಿಯನ್ನು ಪಡೆದು ಅವೈಜ್ಞಾನಿಕವಾದ ಸಮೀಕ್ಷೆಯನ್ನು ತಯಾರು ಮಾಡುತ್ತಿದ್ದಾರೆ. ಹಿಂದುಳಿದ ವರ್ಗಗಳ ನಿಖರವಾದ ಅಂಕಿ, ಸಂಖ್ಯೆಗಳನ್ನು ಸಲ್ಲಿಸದೇ ತಮಗೆ ಅನುಕೂಲ ರೀತಿಯಲ್ಲಿ ಮೀಸಲಾತಿ ವರ್ಗೀಕರಣ ಶಿಫಾರಸ್ಸು ಮಾಡಿದ್ದಾರೆ. ಆದಾಗ್ಯೂ, ಬಿಹಾರ ಮತ್ತು ತೆಲಂಗಾಣ ರಾಜ್ಯಗಳ ಉತ್ತಮವಾದ ಹಿಂದುಳಿದ ವರ್ಗಗಳ ಸಮೀಕ್ಷೆ ಮಾಡಿದೆ. ಆದ್ದರಿಂದ ದೇಶದಲ್ಲಿ ವೈಜ್ಞಾನಿಕವಾದ ಜಾತಿ ಜನಗಣತಿ ಯಿಂದ ಸರ್ವ ಜನಾಂಗದ ಅಂಕಿ, ಅಂಶಗಳು, ಸ್ಥಿತಿಗತಿಗಳು ಲಭ್ಯವಗಲಿದ್ದು, ಅವುಗಳ ಆಧಾರದ ಮೇಲೆ ಮೀಸಲಾತಿ ಮತ್ತು ಸೌಲಭ್ಯಗಳನ್ನು ನೀಡಲಿಕ್ಕೆ ಸಾಧ್ಯವಾಗುತ್ತದೆ ಎಂದು ಅವರು ತಿಳಿಸಿದರು.

# ಭಾರತ-ಪಾಕ್ ಉದ್ವಿಗ್ನತೆ: ಶೀಘ್ರದಲ್ಲೇ ವಿಶ್ವಸಂಸ್ಥೆ ಭದ್ರತಾ ಮಂಡಳಿ ಸಭೆ

**ವಿಶ್ವಸಂಸ್ಥೆ, ಮೇ 2:** ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆ ಪರಿಸ್ಥಿತಿ ಕುರಿತು ಚರ್ಚಿಸಲು ಶೀಘ್ರದಲ್ಲೇ ವಿಶ್ವಸಂಸ್ಥೆ ಭದ್ರತಾ ಮಂಡಳಿ ಸಭೆ (ಗಓಖಅ) ನಡೆಯಲಿದೆ. ಇದು ಅಭಿಪ್ರಾಯಗಳನ್ನು ವ್ಯಕ್ತಪಡಿಸಲು ಮತ್ತು ಉದ್ವಿಗ್ನತೆ ಕಡಿಮೆ ಮಾಡಲು ಒಂದು ಅವಕಾಶವಾಗಿದೆ ಎಂದು ಮಂಡಳಿ ಅಧ್ಯಕ್ಷರು ಹೇಳಿದ್ದಾರೆ. ಪರಮಾಣು ಸಶಸ್ತ್ರ ದಕ್ಷಿಣ ಏಷ್ಯಾದ ನೆರೆಹೊರೆಯ ರಾಷ್ಟ್ರಗಳ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಬಗ್ಗೆ ಅವರು ಕಳವಳ ವ್ಯಕ್ತಪಡಿಸಿದ್ದಾರೆ. ಪಿಟಿಐ ಪ್ರಶ್ನೆಯೊಂದಕ್ಕೆ ಉತ್ತರಿಸಿದ ವಿಶ್ವಸಂಸ್ಥೆಯ ಗ್ರೀಸ್ನ ಖಾಯಂ ಪ್ರತಿನಿಧಿ ಮತ್ತು ಮೇ ತಿಂಗಳ ಭದ್ರತಾ ಮಂಡಳಿಯ ಅಧ್ಯಕ್ಷ ಇವಾಂಜೆಲೋಸ್ ಸೆಕೆರಿಸ್, ಖಂಡಿತವಾಗಿಯೂ, ಸಭೆಗಾಗಿ ಮನವಿ ಬಂದರೆ, ನಾವು ಸಭೆ ನಡೆಸಬೇಕು ಎಂದು ಭಾವಿಸುತ್ತೇವೆ ಏಕೆಂದರೆ, ನಾವು ಹೇಳಿದಂತೆ, ಬಹುಶಃ ಇದು ಅಭಿಪ್ರಾಯಗಳನ್ನು ವ್ಯಕ್ತಪಡಿಸುವ ಅವಕಾಶವಾಗಿದ್ದು, ಸ್ವಲ್ಪ ಉದ್ವಿಗ್ನತೆ ಕಡಿಮೆ ಮಾಡಲು ನೆರವಾಗುತ್ತದೆ ಎಂದರು. ನಾವು ಉಭಯ ರಾಷ್ಟ್ರಗಳೊಂದಿಗೆ ನಿಕಟ ಸಂಪರ್ಕದಲ್ಲಿದ್ದೇವೆ. ಸಭೆ ನಡೆಯಬೇಕಾಗಿದೆ. ಈ ಕುರಿತು ಶೀಘ್ರದಲ್ಲೇ ಹೇಳುತ್ತೇನೆ. ಈ ನಿಟ್ಟಿನಲ್ಲಿ ತಯಾರಿ ನಡೆಸುತ್ತಿದ್ದೇವೆ. ಇದು ನಮ್ಮ (ಗಓಖಅ)ಅಧ್ಯಕ್ಷತೆಯ ಮೊದಲ ದಿನವಾಗಿದೆ ಎಂದು ತಿಳಿಸಿದರು. ಗುರುವಾರ ಇದೇ ವಿಚಾರ ಕುರಿತು ಪ್ರತಿಕ್ರಿಯಿಸಿದ್ದ ಸೆಕರಿಸಿಸ್, ತುಂಬಾ ಪ್ರಸ್ತುತವಾದ ವಿಷಯವಾಗಿದೆ. ನಾನು ಮೊದಲೇ ಹೇಳಿದಂತೆ ಪಹಲ್ಗಾಮ್ ನಲ್ಲಿ ಉಗ್ರರ ಹೀನ ದಾಳಿಯಿಂದ ಅಮಾಯಕರ ಹತ್ಯೆಯನ್ನು ಬಲವಾಗಿ ಖಂಡಿಸುತ್ತೇವೆ" ಎಂದು ಹೇಳಿದರು. ಭಯೋತ್ಪಾದನೆ ಎಲ್ಲೆಡೆ ನಡೆಯುತ್ತಿದೆ. ಮತ್ತೊಂದೆಡೆ, ಈ ಪ್ರದೇಶದಲ್ಲಿ ಹೆಚ್ಚುತ್ತಿರುವ ಈ ಉದ್ವಿಗ್ನತೆಯ ಬಗ್ಗೆ ನಾವು ಚಿಂತಿತರಾಗಿದ್ದೇವೆ. ಖಂಡಿತವಾಗಿಯೂ ಭಾರತವು ಪಾಕಿಸ್ತಾನಕ್ಕಿಂತ ದೊಡ್ಡದಾಗಿದೆ. ಎರಡೂ ದೇಶಗಳು ಗ್ರೀಸ್ಗಿಂತ ದೊಡ್ಡದಾಗಿದೆ. ಆದ್ದರಿಂದ ಗಾತ್ರ ಮತ್ತು ಪ್ರಮಾಣವು ವಿಭಿನ್ನ ಸ್ವಭಾವವನ್ನು ಹೊಂದಿದೆ. ಪರಿಸ್ಥಿತಿಯು ಕೈಮೀರದಂತೆ ಉಭಯ ರಾಷ್ಟ್ರಗಳ ನಾಯಕರ ಜೊತೆಗೆ ಮಾತನಾಡುತ್ತಿದ್ದೇವೆ ಎಂದು ತಿಳಿಸಿದರು. ಈ ಮಧ್ಯೆ ವಿಶ್ವಸಂಸ್ಥೆ ಅಧ್ಯಕ್ಷರು ಜೈಶಂಕರ್ ಮತ್ತು ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಅವರೊಂದಿಗೆ ಮಾತನಾಡಿದ್ದಾರೆ ಎಂದು ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರಸ್ ಅವರ ವಕ್ತಾರ ಸ್ಟೀಫನ್ ಡುಜಾರಿಕ್ ಸುದ್ದಿಗಾರರಿಗೆ ತಿಳಿಸಿದರು. ಎರಡೂ ಪಕ್ಷಗಳ ನಡುವೆ ಮಧ್ಯಸ್ಥಿಕೆ ವಹಿಸುವುದನ್ನು ಪರಿಗಣಿಸುತ್ತಾರೆಯೇ



ಎಂಬ ಪ್ರಶ್ನೆಗೆ ಉತ್ತರಿಸಿದ ಡುಜಾರಿಕ್, ಉಭಯ ರಾಷ್ಟ್ರಗಳಿಂದ ಸ್ಪಷ್ಟ ಸಂದೇಶ ಬರುವವರೆಗೆ ಯಾವುದೇ ಪ್ರಯಾಣವಿಲ್ಲ ಎಂದು ಸ್ಪಷ್ಟಪಡಿಸಿದರು.

# ಚಿಲಿ-ಅರ್ಜೆಂಟಿನಾ ಕರಾವಳಿಯಲ್ಲಿ 7.4 ತೀವ್ರತೆಯ ಭೂಕಂಪ: ಸುನಾಮಿ ಎಚ್ಚರಿಕೆ



**ವಾಷಿಂಗ್ಟನ್, ಮೇ 2 :** ಚಿಲಿ ಮತ್ತು ಅರ್ಜೆಂಟೀನಾದ ದಕ್ಷಿಣ ಕರಾವಳಿಯಲ್ಲಿ ಶುಕ್ರವಾರ 7.4 ತೀವ್ರತೆಯ ಭೂಕಂಪ ಸಂಭವಿಸಿದೆ ಎಂದು ಯುನೈಟೆಡ್ ಸ್ಟೇಟ್ಸ್ ಭೂವೈಜ್ಞಾನಿಕ ಸಮೀಕ್ಷೆ ತಿಳಿಸಿದೆ. ಕೇಪ್ ಹಾರ್ನ್ ಮತ್ತು ಅಂಟಾರ್ಕ್ಟಿಕಾ ನಡುವೆ 10 ಕಿಮೀ (6 ಮೈಲುಗಳು) ಆಳದಲ್ಲಿ ಭೂಕಂಪ ಸಂಭವಿಸಿದೆ. ತೀವ್ರ ಪ್ರಮಾಣದ ಭೂಕಂಪನದಿಂದಾಗಿ ಸುನಾಮಿಯ ಭೀತಿ ಎದುರಾಗಿದ್ದು, ಮ್ಯಾಗಲ್ಲೇನ್ಸ್ ಕರಾವಳಿ ಪ್ರದೇಶದಲ್ಲಿರುವ ಜನರನ್ನು ಸ್ಥಳಾಂತರಿಸಬೇಕೆಂದು ಚಿಲಿಯ ರಾಷ್ಟ್ರೀಯ ವಿಪತ್ತು ತಡೆಗಟ್ಟುವಿಕೆ ಮತ್ತು ಪ್ರತಿಕ್ರಿಯೆ ಸೇವೆ ತಿಳಿಸಿದೆ. ಚಿಲಿಯ ಅಧ್ಯಕ್ಷ ಗೇಬ್ರಿಯಲ್ ಬೋರಿಕ್ ಅವರು ಮ್ಯಾಗಲ್ಲೇನ್ಸ್ ಕರಾವಳಿ ಪ್ರದೇಶದಿಂದ ಸ್ಥಳಾಂತರವಾಗುವಂತೆ ಸಾರ್ವಜನಿಕರನ್ನು ಒತ್ತಾಯಿಸಿದ್ದಾರೆ. ಮಾಗಲ್ಲೇನ್ಸ್ ಮಾತ್ರವಲ್ಲದೆ ಸಮೀಪದ ಅಂಟಾರ್ಕ್ಟಿಕ್ ಪ್ರದೇಶಗಳಲ್ಲಿಯೂ ಸ್ಥಳಾಂತರಿಸಲು ಆದೇಶಿಸಲಾಗಿದೆ ಎಂದು ವರದಿಯಾಗಿದೆ.

# ಸಿಂಧೂ ನದಿ ನೀರನ್ನು ನಿಲ್ಲಿಸುವ ಭಾರತದ ಪ್ರಯತ್ನಕ್ಕೆ ರಕ್ತಪಾತದ ಉತ್ತರ: ಬಿಲಾವಲ್ ಭುಟ್ಟೋ ಎಚ್ಚರಿಕೆ

**ಕರಾಚಿ, ಮೇ 2:** ಭಾರತದ ವಿರುದ್ಧ ಕಠಿಣ ನಿಲುವು ತಳೆದ ಪಾಕಿಸ್ತಾನ ಪೀಪಲ್ಸ್ ಪಾರ್ಟಿ (ಪಿಪಿಪಿ) ನಾಯಕ ಬಿಲಾವಲ್ ಭುಟ್ಟೋ ಜರ್ದಾರಿ, ಸಿಂಧೂ ನದಿ ಸಿಂಧ್ನ ಗುರುತು ಮತ್ತು ಅದನ್ನು ಬೇರೆಡೆಗೆ ತಿರುಗಿಸಲು ಅಥವಾ ಉಸಿರುಗಟ್ಟಿಸಲು ಮಾಡುವ ಯಾವುದೇ ಪ್ರಯತ್ನಗಳಿಗೆ ರಕ್ತಪಾತವೇ ಎದುರಾಗಲಿದೆ ಎಂದು ಹೇಳಿದರು. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ, ಭಾರತ ಸಿಂಧೂ ಜಲ ಒಪ್ಪಂದವನ್ನು ರದ್ದುಗೊಳಿಸಿದಾಗಿನಿಂದ, ಭಯಭೀತ ಪಾಕಿಸ್ತಾನವು ಸಾಕಷ್ಟು ಕಠಿಣ ನಿಲುವುಗಳನ್ನು ತೆಗೆದುಕೊಂಡಿದೆ, ರಾಜಕಾರಣಿಗಳು ಎಲ್ಲಾ ರೀತಿಯ ವಾಕ್ಚಾತುರ್ಯಗಳನ್ನು ಹೊರಡಿಸುತ್ತಾ, ಸಿಂಧೂ ನದಿಯಿಂದ ನೀರನ್ನು ಬೇರೆಡೆಗೆ ತಿರುಗಿಸಲು ಅಥವಾ ನಿಲ್ಲಿಸಲು ಯಾವುದೇ ಪ್ರಯತ್ನಗಳು ನಡೆದರೆ "ಗಂಭೀರ ಪರಿಣಾಮಗಳು" ಉಂಟಾಗುತ್ತವೆ ಎಂದು ಭಾರತಕ್ಕೆ ಎಚ್ಚರಿಕೆ ನೀಡಿದ್ದಾರೆ. ತನ್ನ ಪಾಲಿಗೆ, ಭಾರತವು ಪಾಕಿಸ್ತಾನದ ಯಾವುದೇ ನಿಲುವಿಗೆ ಕಡಿಮೆ ಗಮನ ಹರಿಸಿದೆ ಮತ್ತು ಇಸ್ಲಾಮಾಬಾದ್ಗೆ ತಿಳಿಸದೆ ಝೀಲಂ ನದಿಯಿಂದ ಪಿಓಕೆಗೆ ನೀರನ್ನು ಬಿಡುಗಡೆ ಮಾಡಿತ್ತು, ಇದು ಮುಜಫರಾಬಾದ್ನಲ್ಲಿ ಪ್ರವಾಹಕ್ಕೆ ಕಾರಣವಾಯಿತು. ಭಾರತದ ಪ್ರಧಾನಿ "ತಮ್ಮ ದೇಶವನ್ನು ಪ್ರಾಚೀನ ನಾಗರಿಕತೆ ಎಂದು ಕರೆದಾಗಲೆಲ್ಲಾ, ನದಿಯು



ಸಿಂಧೂದಲ್ಲಿದೆ ಎಂಬುದನ್ನು ಅವರು ಮರೆಯಬಾರದು" ಎಂದು ಅವರು ಅಣಕಿಸಿದರು. "ನಮ್ಮ ನದಿಯನ್ನು ಉಳಿಸಲು ನಾವು ಕೊನೆಯವರೆಗೂ ಹೋರಾಡಲು ಸಿದ್ಧರಿದ್ದೇವೆ, ನಮಗೆ ಯುದ್ಧ ಬೇಡ, ಆದರೆ ಅವರು ಸಿಂಧೂ ನದಿಯ ಮೇಲೆ ದಾಳಿ ಮಾಡಿದರೆ, ಈ ನದಿಯಿಂದ ನೀರು ಹರಿಯುತ್ತದೆ ಅಥವಾ ಅವರ ರಕ್ತ ಹರಿಯುತ್ತದೆ ಎಂದು ಅವರಿಗೆ ತಿಳಿದಿದೆ!" ಎಂದು ಅವರು ಸಿಂಧ್ನಲ್ಲಿ ಜನರನ್ನು ಉದ್ದೇಶಿಸಿ ಹೇಳಿದರು.

## ಪಾಕಿಸ್ತಾನದ ಭಯೋತ್ಪಾದಕ ಸಂಪರ್ಕಗಳು ರಹಸ್ಯವೇನಲ್ಲ

ಭಯೋತ್ಪಾದಕ ಸಂಘಟನೆಗಳೊಂದಿಗಿನ ತಮ್ಮ ದೇಶದ ಸಂಬಂಧವನ್ನು ಪಾಕಿಸ್ತಾನದ ಮಾಜಿ ವಿದೇಶಾಂಗ ಸಚಿವ ಮತ್ತು ಪಾಕಿಸ್ತಾನ್ ಪೀಪಲ್ಸ್ ಪಾರ್ಟಿ (ಪಿಪಿಪಿ) ಅಧ್ಯಕ್ಷ ಬಿಲಾವಲ್ ಭುಟ್ಟೋ ಜರ್ದಾರಿ ಅವರು ಬಹಿರಂಗವಾಗಿ ಒಪ್ಪಿಕೊಂಡಿದ್ದಾರೆ. ಪಹಲ್ಗಾಮ್ ನಲ್ಲಿ ನಡೆದ ಭಯೋತ್ಪಾದಕ ದಾಳಿ ಬೆನ್ನಲೆ ಸ್ಕೈ ನ್ಯೂಸ್ಗೆ ನೀಡಿದ ಸಂದರ್ಶನವೊಂದರಲ್ಲಿ ಮಾತನಾಡಿದ ಬಿಲಾವಲ್ ಭುಟ್ಟೋ, ಪಾಕಿಸ್ತಾನದ ಇತಿಹಾಸದ ಬಗ್ಗೆ ಹೇಳುವುದಾದರೆ ಪಾಕಿಸ್ತಾನಕ್ಕೆ ಭಯೋತ್ಪಾದಕ ಸಂಘಟನೆಗಳೊಂದಿಗೆ ಸಂಪರ್ಕವಿದೆ ಎಂಬುದು ರಹಸ್ಯವೇನಲ್ಲ ಅದು ಇತಿಹಾಸವಾಗಿದೆ. ಆದರೆ ಇಂದು ನಾವು ಅದರಲ್ಲಿ ಭಾಗಿಯಾಗಿಲ್ಲ. ಇದು ನಮ್ಮ ಇತಿಹಾಸದ ದುರದೃಷ್ಟಕರ ಭಾಗವಾಗಿದೆ ಎಂಬುದು ನಿಜ ಎಂದು ಹೇಳಿದ್ದಾರೆ.

ಇತ್ತೀಚೆಗೆ ಪಾಕಿಸ್ತಾನದ ರಕ್ಷಣಾ ಸಚಿವ ಖ್ವಾಜಾ ಆಸಿಫ್ ಅವರು ದೇಶವು ಭಯೋತ್ಪಾದಕ ಗುಂಪುಗಳಿಗೆ ಬೆಂಬಲ ಮತ್ತು ಧನಸಹಾಯ ನೀಡಿದೆ ಎಂದು ಒಪ್ಪಿಕೊಂಡಿದ್ದರು, ಅಮೇರಿಕಕ್ಕಾಗಿ ನಾವು ಕೊಳಕು ಕೆಲಸ ಮಾಡಿದ್ದೇವೆ ಎಂದು ಹೇಳಿದ್ದರು. ಈ ಹೇಳಿಕೆಯನ್ನ ಬಿಲಾವಲ್ ಭುಟ್ಟೋ ಜರ್ದಾರಿ ಹೇಳಿಕೆ ಪುಷ್ಟೀಕರಿಸಿದೆ.

ಭಯೋತ್ಪಾದನೆಗೆ ಬೆಂಬಲ ನೀಡಿದಕ್ಕೆ ಪಾಕಿಸ್ತಾನ ಸಾಕಷ್ಟು ಅನುಭವಿಸಿದೆ. ನಾವು ಉಗ್ರವಾದದ ಹಲವುಅಲೆಗಳನ್ನು ಎದುರಿಸಿದ್ದೇವೆ. ನಾವು ಅನುಭವಿಸಿದ ಪರಿಣಾಮವಾಗಿ ನಾವು ಸಾಕಷ್ಟು ಪಾಠಗಳನ್ನು ಸಹ ಕಲಿತಿದ್ದೇವೆ. ಈ ಸಮಸ್ಯೆಯನ್ನು ಪರಿಹರಿಸಲು ನಾವು ಆಂತರಿಕ ಸುಧಾರಣೆಗಳ ಮೂಲಕ ಹೋಗಿದ್ದೇವೆ. ಇದು ಇತಿಹಾಸದ ದುರದೃಷ್ಟಕರ ಭಾಗವಾಗಿದೆ ಎಂಬುದು ನಿಜ ಎಂದು ಭುಟ್ಟೋ ಹೇಳಿದ್ದಾರೆ.

# ಪಹಲ್ಗಾಮ್ ಭಯೋತ್ಪಾದಕರ ಬೇಟೆ: ಭಾರತಕ್ಕೆ ಪಾಕಿಸ್ತಾನ ಸಹಕಾರ: ಅಮೆರಿಕ ಉಪಾಧ್ಯಕ್ಷ ವ್ಯಾನ್ಸ್ ನಿರೀಕ್ಷೆ

**ಪಹಲ್ಗಾಮ್‌ನ ಉಗ್ರರ ದಾಳಿ ಕೃತ್ಯಕ್ಕೆ ಪ್ರತಿಕ್ರಿಯಿಸುವಾಗ ಪಾಕ್ ಜೊತೆಗೆ ಸೇನಾ ಸಂಘರ್ಷ ಏರ್ಪಡುವುದನ್ನು ತಪ್ಪಿಸಬೇಕು ಎಂದೂ ಅಮೆರಿಕ ಭಾರತಕ್ಕೆ ಕೋರಿದೆ. ಪ್ರಾದೇಶಿಕ ಬಿಕ್ಕಟ್ಟು ಇನ್ನಷ್ಟು ಉಲ್ಬಣಗೊಳ್ಳದಂತೆ ಭಾರತ ಪ್ರತಿಕ್ರಿಯಿಸಲಿದೆ ಎಂದು ಆಶಿಸುತ್ತೇವೆ' ಅಮೆರಿಕದ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ಹೇಳಿದ್ದಾರೆ.**

**ವಾಷಿಂಗ್ಟನ್, ಮೇ2 :** ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಪಾಕಿಸ್ತಾನದಲ್ಲಿರುವ ನಿರ್ವಾಹಕರು ಮೇಲ್ವಿಚಾರಣೆ ಮಾಡಿದ್ದಾರೆ ಎಂಬ ಭಾರತದ ನಿಲುವನ್ನು ಬೆಂಬಲಿಸಿದ ಯುಎಸ್ ಉಪಾಧ್ಯಕ್ಷ ಜೆಡಿ ವ್ಯಾನ್ಸ್, ನವದೆಹಲಿಯೊಂದಿಗೆ ಸಹಕರಿಸುವಂತೆ ಮತ್ತು ಭಯೋತ್ಪಾದಕರನ್ನು ಬೇಟೆಯಾಡಿ ವ್ಯವಹರಿಸುವಂತೆ ಖಚಿತಪಡಿಸಿಕೊಳ್ಳುವಂತೆ ಇಸ್ಲಾಮಾಬಾದ್ ಅನ್ನು ಕೇಳಿಕೊಂಡಿದ್ದಾರೆ. ಅಮೆರಿಕ ಪಾಕಿಸ್ತಾನ ಮತ್ತು ಭಾರತ ಎರಡರೊಂದಿಗೂ ಸಂಪರ್ಕದಲ್ಲಿದೆ ಎಂದು ವ್ಯಾನ್ಸ್ ಹೇಳಿದರು ಮತ್ತು ಏಪ್ರಿಲ್ 22 ರ ಭಯೋತ್ಪಾದಕ ದಾಳಿಗೆ ನವದೆಹಲಿಯ ಪ್ರತಿಕ್ರಿಯೆಯು ವಿಶಾಲ ಪ್ರಾದೇಶಿಕ ಸಂಘರ್ಷಕ್ಕೆ ಕಾರಣವಾಗುವುದಿಲ್ಲ ಎಂದು ಆಶಿಸಿದ್ದಾರೆ. ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನತೆಯ ಭುಗಿಲೆದ್ದಿರುವ ಬಗ್ಗೆ ಟ್ರಂಪ್ ಆಡಳಿತ ಚಿಂತಿತವಾಗಿದೆಯೇ ಎಂದು ಫಾಕ್ಸ್ ನ್ಯೂಸ್ ಕೇಳಿದಾಗ, ಅವರು ಹೇಳಿದರು. "ಖಂಡಿತ, ನೀವು ಯಾವಾಗ ಬೇಕಾದರೂ ಹಾಟ್ಸ್ಪಾಟ್ ಸ್ಫೋಟಗೊಳ್ಳುವುದನ್ನು ನೋಡುತ್ತೀರಿ, ವಿಶೇಷವಾಗಿ ಎರಡು ಪರಮಾಣು ಶಕ್ತಿಗಳ ನಡುವೆ. "ನಾವು ಸ್ಪಷ್ಟವಾಗಿ ಭಾರತ ಮತ್ತು ಪಾಕಿಸ್ತಾನದಲ್ಲಿರುವ ನಮ್ಮ ಸ್ನೇಹಿತರೊಂದಿಗೆ ನಿಕಟ ಸಂಪರ್ಕದಲ್ಲಿದ್ದೇವೆ." "ಈ ಭಯೋತ್ಪಾದಕ ದಾಳಿಗೆ ಭಾರತವು ವಿಶಾಲವಾದ ಪ್ರಾದೇಶಿಕ ಸಂಘರ್ಷಕ್ಕೆ ಕಾರಣವಾಗದ ರೀತಿಯಲ್ಲಿ ಪ್ರತಿಕ್ರಿಯಿಸುತ್ತದೆ ಎಂಬುದು ನಮ್ಮ ಆಶಯ. "ಮತ್ತು ಪಾಕಿಸ್ತಾನವು ಜವಾಬ್ದಾರಿಯುತವಾಗಿರುವ ಮಟ್ಟಿಗೆ, ಕೆಲವೊಮ್ಮೆ ತಮ್ಮ ಭೂಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಭಯೋತ್ಪಾದಕರನ್ನು ಬೇಟೆಯಾಡಲಾಗುತ್ತದೆ ಮತ್ತು ವ್ಯವಹರಿಸ ಲಾಗುತ್ತದೆ ಎಂದು ಖಚಿತ ಪಡಿಸಿಕೊಳ್ಳಲು ಭಾರತ ದೊಂದಿಗೆ ಸಹಕರಿಸುತ್ತದೆ ಎಂದು ನಾವು ಪ್ರಾಮಾಣಿಕವಾಗಿ ಆಶಿಸುತ್ತೇವೆ.



"ಇದು ಹೀಗೆಯೇ ಆಗುತ್ತದೆ ಎಂದು ನಾವು ಭಾವಿಸುತ್ತೇವೆ; ನಾವು ಸ್ಪಷ್ಟವಾಗಿ ನಿಕಟ ಸಂಪರ್ಕದಲ್ಲಿದ್ದೇವೆ. ಏನಾಗುತ್ತದೆ ಎಂದು ನಾವು ನೋಡುತ್ತೇವೆ." ಗುರುವಾರ ಅಮೆರಿಕದ ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಅವರು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರೊಂದಿಗೆ ಮಾತನಾಡಿ, ಭಯೋತ್ಪಾದನೆಯ ವಿರುದ್ಧದ ಭಾರತದ ಹೋರಾಟದಲ್ಲಿ ಅಮೆರಿಕ ಸರ್ಕಾರದ ಸಂಪೂರ್ಣ ಬೆಂಬಲವನ್ನು ಪುನರುಚ್ಚರಿಸಿದ ನಂತರ ಯುಎಸ್ ಉಪಾಧ್ಯಕ್ಷರ ಹೇಳಿಕೆ ಬಂದಿದೆ. ಯುಎಸ್ ಭಾರತದೊಂದಿಗೆ ಒಗ್ಗಟ್ಟಿನಲ್ಲಿ ನಿಲ್ಲುತ್ತದೆ ಮತ್ತು ಭಾರತದ ತನ್ನನ್ನು ತಾನು ರಕ್ಷಿಸಿಕೊಳ್ಳುವ ಹಕ್ಕನ್ನು ಬೆಂಬಲಿಸುತ್ತದೆ" ಎಂದು ರಕ್ಷಣಾ ಸಚಿವಾಲಯದ ಹೇಳಿಕೆಯಲ್ಲಿ ಉಲ್ಲೇಖಿಸಲಾಗಿದೆ.

ಸಂಭಾಷಣೆಯ ಸಮಯದಲ್ಲಿ, ಪಾಕಿಸ್ತಾನವು ಭಯೋತ್ಪಾದಕ ಸಂಘಟನೆಗಳನ್ನು ಬೆಂಬಲಿಸುವ, ತರಬೇತಿ ನೀಡುವ ಮತ್ತು ಹಣಕಾಸು ಒದಗಿಸುವ ಇತಿಹಾಸವನ್ನು ಹೊಂದಿದೆ ಎಂದು ರಾಜನಾಥ್ ಪೀಟ್ ಹೆಗ್ಸೆತ್ಗೆ ತಿಳಿಸಿದರು.

"ಪಾಕಿಸ್ತಾನವು ಒಂದು ರಾಕ್ಷಸ ರಾಷ್ಟ್ರವೆಂದು ಬಹಿರಂಗಗೊಂಡಿದೆ, ಜಾಗತಿಕ ಭಯೋತ್ಪಾದನೆಯನ್ನು ಉತ್ತೇಜಿಸುತ್ತದೆ ಮತ್ತು ಪ್ರದೇಶವನ್ನು ಅಸ್ಥಿರಗೊಳಿಸುತ್ತದೆ. ಜಗತ್ತು ಇನ್ನು ಮುಂದೆ ಭಯೋತ್ಪಾದನೆಯತ್ತ ಕಣ್ಣು ಮುಚ್ಚಿಕೊಳ್ಳಲು ಸಾಧ್ಯವಿಲ್ಲ" ಎಂದು ರಾಜನಾಥ್ ಹೇಳಿದರು. ಜಾಗತಿಕ ಸಮುದಾಯವು ಇಂತಹ ಘೋರ ಭಯೋತ್ಪಾದನಾ ಕೃತ್ಯಗಳನ್ನು ಸ್ಪಷ್ಟವಾಗಿ ಮತ್ತು ನಿಸ್ಸಂದಿಗ್ಧವಾಗಿ ಖಂಡಿಸುವುದು ಮತ್ತು ಖಂಡಿಸುವುದು ಮುಖ್ಯವಾಗಿದೆ ಎಂದು ಅವರು ಹೇಳಿದರು.

# ಭಾರತದಿಂದ ಪ್ರತೀಕಾರದ ದಾಳಿ ಭೀತಿ: ಆಕ್ರಮಿತ ಕಾಶ್ಮೀರದ ಸಾವಿರಾರು ಮದರಸಾಗಳು ಬಂದ್!

**ನವದೆಹಲಿ, ಮೇ 2:** ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ, ಪಾಕಿಸ್ತಾನ ಸರ್ಕಾರ ಮತ್ತು ಅದರ ಸೇನೆಯು ಭಯದ ನೆರಳಿನಲ್ಲಿ ಬದುಕುತ್ತಿವೆ. ಭಾರತದ ಪ್ರತೀಕಾರದ ಭಯದಲ್ಲಿದ್ದಾರೆ. ಇದಕ್ಕಾಗಿಯೇ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಮುಂದಿನ 10 ದಿನಗಳವರೆಗೆ ಎಲ್ಲಾ ಧಾರ್ಮಿಕ ಕಾರ್ಯಕ್ರಮಗಳನ್ನು ನಿಷೇಧಿಸಿದೆ. ಇಷ್ಟು ಮಾತ್ರವಲ್ಲದೆ ಪಿಓಕೆಯಲ್ಲಿರುವ 1000ಕ್ಕೂ ಹೆಚ್ಚು ಮದರಸಾಗಳನ್ನು ತಾತ್ಕಾಲಿಕವಾಗಿ ಮುಚ್ಚಿದೆ. ಭಾರತವು ಈ ಮದರಸಾಗಳನ್ನು ಭಯೋತ್ಪಾದಕ ತರಬೇತಿ ಕೇಂದ್ರಗಳೆಂದು ಪರಿಗಣಿಸಿ ಗುರಿಯಾಗಿಸಬಹುದು ಎಂಬ ಭಯ ಪಾಕಿಸ್ತಾನಿ ಅಧಿಕಾರಿಗಳೇ ಒಪ್ಪಿಕೊಳ್ಳುತ್ತಿದ್ದಾರೆ.

ಈ ಮದರಸಾಗಳನ್ನು ತಾತ್ಕಾಲಿಕವಾಗಿ ಮುಚ್ಚುವುದು ನಮ್ಮ ರಕ್ಷಣಾತ್ಮಕ ಕ್ರಮವಾಗಿದೆ ಎಂದು ಪಾಕಿಸ್ತಾನಿ ಅಧಿಕಾರಿ ಹಫೀಜ್ ನಜೀರ್ ಅಹ್ಮದ್ ಸುದ್ದಿ ಸಂಸ್ಥೆ ರಾಯಿಟರ್ಸ್‌ಗೆ ನೀಡಿದ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಆದಾಗ್ಯೂ, ಉದ್ವಿಗ್ನ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಇಂತಹ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಅವರು ಹೇಳಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಪಾಕಿಸ್ತಾನ ಎರಡು ರೀತಿಯ ಉದ್ವಿಗ್ನ ಪರಿಸ್ಥಿತಿಯನ್ನು ಎದುರಿಸುತ್ತಿದೆ. ಒಂದು ವಾತಾವರಣದ್ದಾದರೆ ಮತ್ತೊಂದು ಭಾರತದ ಪ್ರಧಾನಿ ನರೇಂದ್ರ ಮೋದಿಯವರ ಕೋಪದಿಂದಾಗಿ ಹುಟ್ಟಿಕೊಂಡಿದೆ. ಪಾಕಿಸ್ತಾನದಲ್ಲಿ ಅವ್ಯವಸ್ಥೆಯ ಸಾಧ್ಯತೆಯನ್ನು ಗಮನದಲ್ಲಿಟ್ಟುಕೊಂಡು, ಬಿಸಿಲಿನ ಅಲೆಯನ್ನು ಅಧಿಸೂಚನೆಯಲ್ಲಿ ಉಲ್ಲೇಖಿಸಲಾಗಿದೆ ಎಂದು ಅವರೇ ಸ್ಪಷ್ಟಪಡಿಸಿದ್ದಾರೆ. ಪಿಓಕೆಯಲ್ಲಿ 445 ನೋಂದಾಯಿತ ಮದರಸಾಗಳಿದ್ದು, 26 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ ಎಂದು ಪಾಕಿಸ್ತಾನಿ ಅಧಿಕಾರಿ ತಿಳಿಸಿದ್ದಾರೆ. ಭಾರತವು ಬಹಳ ಸಮಯದಿಂದ ಪಿಓಕೆಯಲ್ಲಿರುವ ಭಯೋತ್ಪಾದಕ ಉಡಾವಣಾ ಪ್ಯಾಡ್‌ಗಳು ಮತ್ತು ತರಬೇತಿ ಶಿಬಿರಗಳ ಮೇಲೆ ನಿಗಾ ಇಟ್ಟಿದೆ. ಹಲವಾರು ವರದಿಗಳು ಮತ್ತು ಗುಪ್ತಚರ ಮಾಹಿತಿಗಳಲ್ಲಿ, ಈ ಮದರಸಾಗಳು ಜಿಹಾದಿ ತರಬೇತಿ ಚಟುವಟಿಕೆಗಳಲ್ಲಿ ಭಾಗಿಯಾಗಿರುವುದು ಕಂಡುಬಂದಿದೆ. 2016ರ ಸರ್ಜಿಕಲ್ ಸ್ಟ್ರೈಕ್ ಮತ್ತು 2019ರ ಬಾಲಕೋಟ್ ವಾಯುದಾಳಿಯ ನಂತರ ಪಿಓಕೆಯಲ್ಲಿ ಇಂತಹ ಚಟುವಟಿಕೆಗಳು ಕಂಡುಬರುತ್ತಿರುವುದು ಇದೇ ಮೊದಲು.

## ಯೂನಸ್‌ಗೆ ಇಸ್ಲಾಮಿಕ್ ಪಕ್ಷಗಳ ಎಚ್ಚರಿಕೆ!

ಬಾಂಗ್ಲಾದೇಶದ ಇಸ್ಲಾಮಿಕ್ ಪಕ್ಷಗಳು ಮೊಹಮ್ಮದ್ ಯೂನಸ್ ಸರ್ಕಾರಕ್ಕೆ ಕಠಿಣ ಎಚ್ಚರಿಕೆ ನೀಡಿವೆ. ತಮ್ಮ ಬೇಡಿಕೆಗಳನ್ನು ಈಡೇರಿಸದಿದ್ದರೆ ದೊಡ್ಡ ಚಳವಳಿ ನಡೆಸುವುದಾಗಿಯೂ ಈ ಪಕ್ಷಗಳು ಎಚ್ಚರಿಸಿವೆ. ಮಹಿಳಾ ಸುಧಾರಣಾ ಆಯೋಗವು ಇಸ್ಲಾಂ ವಿರೋಧಿ ಮತ್ತು ಪಾಶ್ಚಿಮಾತ್ಯ ಪ್ರೇರಿತ ಪ್ರಸ್ತಾಪಗಳನ್ನು ಉತ್ತೇಜಿಸುತ್ತಿದೆ ಎಂದು ಇಸ್ಲಾಮಿಕ್ ಪಕ್ಷಗಳು ಆರೋಪಿಸಿವೆ. ಮಹಿಳಾ ಸುಧಾರಣಾ ಆಯೋಗವನ್ನು ಆದಷ್ಟು ಬೇಗ ರದ್ದುಗೊಳಿಸುವಂತೆ ಇಸ್ಲಾಮಿಕ್ ಪಕ್ಷಗಳು ಮುಹಮ್ಮದ್ ಯೂನಸ್ ಸರ್ಕಾರಕ್ಕೆ ಸೂಚಿಸಿದೆ. ಮಹಿಳಾ ಸುಧಾರಣಾ ಆಯೋಗದ ಇಸ್ಲಾಂ ವಿರೋಧಿ ನೀತಿಗಳನ್ನು ಜಾರಿಗೆ ತಂದರೆ ಭೀಕರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಬಾಂಗ್ಲಾದೇಶದ ಒಲಾಮಾ ಮಶಾಯೇಖ್ ಎಮ್ಮಾ ಪರಿಷತ್‌ನ ಅಡಿಯಲ್ಲಿ ಇಸ್ಲಾಮಿಕ್ ಪಕ್ಷಗಳು ಯೂನಸ್ ಸರ್ಕಾರಕ್ಕೆ ಎಚ್ಚರಿಕೆ ನೀಡಿವೆ.



ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ವಾಷಿಂಗ್ಟನ್, ಡಿ.ಸಿ.ಯ ಶ್ವೇತಭವನದಲ್ಲಿ ನಡೆದ ರಾಷ್ಟ್ರೀಯ ಪ್ರಾರ್ಥನಾ ದಿನದ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದಾರೆ. ಟ್ರಂಪ್ ಗುರುವಾರ ತಮ್ಮ ರಾಷ್ಟ್ರೀಯ ಭದ್ರತಾ ಸಲಹೆಗಾರ ಮೈಕ್ ವಾಲ್ಟ್ಜ್ ಅವರನ್ನು ವಿಶ್ವಸಂಸ್ಥೆಯ ಮುಂದಿನ ಅಮೆರಿಕದ ರಾಯಭಾರಿಯಾಗಿ ನಾಮನಿರ್ದೇಶನ ಮಾಡಿದ್ದಾರೆ.

# ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಗುಜರಾತ್ ಟೈಟಾನ್ಸ್ ಬರ್ಜರಿ ಜಯ

**ಅಹಮದಾಬಾದ್, ಮೇ 2:** ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ ಐಪಿಎಲ್ 2025ರ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಗುಜರಾತ್ ಟೈಟಾನ್ಸ್ ಭರ್ಜರಿ ಗೆಲುವು ಸಾಧಿಸಿದೆ. ಈ ಸೋಲಿನ ಮೂಲಕ ಸನ್‌ರೈಸರ್ಸ್ ಹೈದರಾಬಾದ್ ಪ್ಲೇಆಫ್ ಅವಕಾಶ ಬಹುತೇಕ ಅಂತ್ಯವಾಗಿದೆ. ಈ ಗೆಲುವಿನ ಮೂಲಕ ಗುಜರಾತ್ ಟೈಟಾನ್ಸ್ 14 ಅಂಕಗಳನ್ನು ಪಡೆದಿದೆ.

ಟಾಸ್ ಗೆದ್ದ ಸನ್‌ರೈಸರ್ಸ್ ಹೈದರಾಬಾದ್ ಮೊದಲು ಬೌಲಿಂಗ್ ಆಯ್ಕೆ ಮಾಡಿಕೊಂಡಿತು.

ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್ ಟೈಟಾನ್ಸ್ 20 ಓವರ್‌ಗಳಲ್ಲಿ 6 ವಿಕೆಟ್ ಕಳೆದುಕೊಂಡು 224 ರನ್‌ಗಳ ಬೃಹತ್ ಮೊತ್ತ ಕಲೆಹಾಕಿತು. ಸಾಯಿ ಸುದರ್ಶನ್, ಶುಭಮನ್ ಗಿಲ್ ಮತ್ತು ಜೋಸ್ ಬಟ್ಲರ್ ಗುಜರಾತ್ ಟೈಟಾನ್ಸ್‌ಗೆ ಆಸರೆಯಾದರು.

ಸಾಯಿ ಸುದರ್ಶನ್ 23 ಎಸೆತಗಳಲ್ಲಿ 48 ರನ್ ಗಳಿಸಿದರೆ, ಶುಭಮನ್ ಗಿಲ್ 38 ಎಸೆತಗಳಲ್ಲಿ 10 ಬೌಂಡರಿ 2 ಸಿಕ್ಸರ್ ಸಹಿತ 76 ರನ್ ಗಳಿಸಿದರು. ಜೋಸ್ ಬಟ್ಲರ್ 37 ಎಸೆತಗಳಲ್ಲಿ 64 ರನ್ ಗಳಿಸಿ ಮಿಂಚಿದರು. ವಾಷಿಂಗ್ಟನ್ ಸುಂದರ್ 21 ರನ್ ಗಳಿಸಿದರು. ಸನ್‌ರೈಸರ್ಸ್ ಹೈದರಾಬಾದ್ ಪರ ಜಯದೇವ್ ಉನದ್ಕತ್ ಮಾತ್ರ 3 ವಿಕೆಟ್ ಪಡೆಯುವ ಮೂಲಕ ಯಶಸ್ವಿ ಬೌಲರ್ ಎನಿಸಿಕೊಂಡರು.




225 ರನ್‌ಗಳ ಬೃಹತ್ ಮೊತ್ತವನ್ನು ಬೆನ್ನಟ್ಟಿದ ಸನ್‌ರೈಸರ್ಸ್ ಹೈದರಾಬಾದ್ ಉತ್ತಮ ಆರಂಭವನ್ನೇ ಪಡೆಯಿತು. 4.3 ಓವರ್ ಗಳಲ್ಲಿ 49 ರನ್ ಗಳಿಸಿದ್ದಾಗ ಕನ್ನಡಿಗ ಪ್ರಸಿದ್ಧ್ ಕೃಷ್ಣ ಟ್ರಾವಿಸ್ ಹೆಡ್ ಅವರ ವಿಕೆಟ್ ಪಡೆಯುವ ಮೂಲಕ ಸನ್‌ರೈಸರ್ಸ್ ಹೈದರಾಬಾದ್‌ಗೆ ಶಾಕ್ ಕೊಟ್ಟರು. ಅದಾದ ಬಳಿಕ ಸನ್‌ರೈಸರ್ಸ್ ಹೈದರಾಬಾದ್ ಚೇತರಿಸಿಕೊಳ್ಳಲು ಆಗಲೇ ಇಲ್ಲ.

ಅಭಿಷೇಕ್ ಶರ್ಮಾ 41 ಎಸೆತಗಳಲ್ಲಿ 74 ರನ್ ಗಳಿಸುವ ಮೂಲಕ ಏಕಾಂಗಿ ಹೋರಾಟ ನೀಡಿದರು. ಇಶಾನ್ ಕಿಶನ್ 17 ಎಸೆತಗಳಲ್ಲಿ 13 ರನ್ ಗಳಿಸಿದರು. ಹೆನ್ರಿಚ್ ಕ್ಲಾಸೆನ್ 18 ಎಸೆಗಳಲ್ಲಿ 23 ರನ್ ಗಳಿಸಿ ಅಪಾಯಕಾರಿ ಯಾಗುತ್ತಿದ್ದಾಗ ಮತ್ತೆ ಬೌಲಿಂಗ್‌ಗೆ ಬಂದ ಪ್ರಸಿದ್ಧ್ ಕೃಷ್ಣ ಅವರನ್ನು ಔಟ್ ಮಾಡುವ ಮೂಲಕ ಗುಜರಾತ್ ಜೈಂಟ್ಸ್ ಗೆಲುವನ್ನು ಸುಲಭವಾಗಿಸಿದರು.

ಅಂತಿಮವಾಗಿ 20 ಓವರ್ ಗಳಲ್ಲಿ 6 ವಿಕೆಟ್ ಕಳೆದುಕೊಂಡು 186 ರನ್ ಗಳಿಸಿದ ಸನ್‌ರೈಸರ್ಸ್ ಹೈದರಾಬಾದ್ 38 ರನ್‌ಗಳಿಂದ ಸೋಲೊಪ್ಪಿಕೊಂಡಿತು. ಪ್ರಸಿದ್‌ಕೃಷ್ಣ 4 ಓವರ್ ಗಳಲ್ಲಿ ಕೇವಲ 19 ರನ್ ನೀಡಿ 2 ಪ್ರಮುಖ ವಿಕೆಟ್ ಪಡೆದುಕೊಂಡರು. ಮೊಹಮ್ಮದ್ ಸಿರಾಜ್ ಕೂಡ 2 ವಿಕೆಟ್ ಪಡೆದರೆ, ಇಶಾಂತ್ ಶರ್ಮಾ

# ಭಾರತ - ಯುಎಸ್‌ಎ ನಡುವೆ 5 ಬೋರ್ಡ್ ತಂಡಗಳ ಚೆಸ್ ಪಂದ್ಯ; ಗುಕೇಶ್-ಹಿಕಾರು ನಕಮುರಾ ಸೇರಿ ಘಟಾನುಘಟಿಗಳ ಕಾದಾಟ

**ಯಾರ ಯಾರ ವಿರುದ್ಧ ಸೆಣಸಾಟ:**

- ಹಿಕಾರು ನಕಮುರಾ (ಅಮೆರಿಕ, ವಿಶ್ವ ನಂ.2) vs ಗುಕೇಶ್ ಡಿ (ಭಾರತ, ವಿಶ್ವ ಚಾಂಪಿಯನ್)
- ಫ್ಯಾಬಿಯಾನೊ ಕರುವಾನಾ (ಅಮೆರಿಕ, ವಿಶ್ವ ನಂ.5) vs ಅರ್ಜುನ್‌ಎ ರಿಗೈಸಿ (ಭಾರತ, ವಿಶ್ವ ನಂ.4)
- ಕ್ಯಾರಿಸ್ಸಾ ಯಿಪ್ (ಅಮೆರಿಕ) vs ದಿವ್ಯಾ ದೇಶಮುಖ್ (ಭಾರತ)
- ಲೆವಿ ರೋಜ್ಜನ್ (ಅಮೆರಿಕ, ಗೌತಮ್ ಚೆಸ್) vs ಸಾಗರ್ ಶಾ (ಭಾರತ, ಚೆಸ್‌ಬೇಸ್ ಇಂಡಿಯಾ)
- ತನಿಟೊಲುವಾ ಅಡೆವುಮಿ (ಅಮೆರಿಕ) VS ಎಥಾನ್ ವಾಜ್ (ಭಾರತ)

ಅಕ್ಟೋಬರ್ 4ರಂದು ಟೆಕ್ಸಾಸ್‌ನ ಆರ್ಲಿಂಗ್ಟನ್ ಎಸ್ಪೋರ್ಟ್ಸ್ ಕ್ರೀಡಾಂಗಣದಲ್ಲಿ ನಡೆಯಲಿರುವ ಭಾರತ ಮತ್ತು ಯುಎಸ್‌ಎ ಐದು ಬೋರ್ಡ್ ತಂಡಗಳ ಚೆಸ್ ಪಂದ್ಯದಲ್ಲಿ ಹಾಲಿ ವಿಶ್ವ ಚಾಂಪಿಯನ್ ಗುಕೇಶ್ ಅವರು ವಿಶ್ವದ 2ನೇ ಶ್ರೇಯಾಂಕದ ಹಿಕಾರು ನಕಮುರಾ ವಿರುದ್ಧ ಸೆಣಸಾಟ ನಡೆಸಲಿದ್ದಾರೆ. ಹಾಗೆಯೇ ಫ್ಯಾಬಿಯಾನೊ ಕರುವಾನಾ ವಿರುದ್ಧ ಭಾರತದ ಅರ್ಜುನ್ ಎರಿಗೈಸಿ ಮತ್ತು ಕ್ಯಾರಿಸ್ಸಾ ಯಿಪ್ ವಿರುದ್ಧ ದಿವ್ಯಾ ದೇಶ್‌ಮುಖ್ ಕಾದಾಟ ನಡೆಸಲಿದ್ದಾರೆ.

ಪಂದ್ಯದ 2ನೇ ಹಂತವು ನಂತರ ಭಾರತದಲ್ಲಿ ನಡೆಯುವ ನಿರೀಕ್ಷೆಯಿದೆ ಎಂದು ವರದಿಯಾಗಿದೆ. ಯುಎಸ್‌ಎ ಮತ್ತು ಭಾರತ 5 ಸುತ್ತುಗಳನ್ನು ಒಳಗೊಂಡಿರುತ್ತವೆ.

2500 ಆಸನಗಳ ಕ್ರೀಡಾಂಗಣದಲ್ಲಿ ಪ್ರೇಕ್ಷಕರ ಮುಂದೆ ಒಂದು ಸಮಯದಲ್ಲಿ ಒಂದು ಬೋರ್ಡ್ ನೊಂದಿಗೆ ಆಡಲಾಗುತ್ತದೆ. ಆಟಗಾರರಿಗೆ ಪ್ರತಿ ಪಂದ್ಯಕ್ಕೆ 10 ನಿಮಿಷಗಳು ಇರುತ್ತವೆ ಮತ್ತು ಡ್ರಾಗೊಂಡರೆ, ಓವರ್‌ಟೈಮ್ ಆದರೆ ಆಟಗಾರರಿಗೆ ತಲಾ 5 ನಿಮಿಷ ಹೆಚ್ಚುವರಿ ನೀಡಲಾಗುತ್ತದೆ. ಆಗಲೂ ಡ್ರಾಗೊಂಡರೆ, ಒಂದು ನಿಮಿಷದ ಶೂಟೌಟ್ ಆಟವನ್ನು ಆಡಲಾಗುತ್ತದೆ. ಅದು ಕೂಡ ಡ್ರಾಗೊಂಡರೆ, ವಿಜೇತರಾಗುವ ತನಕ



ಪ್ರತಿ ಆಟಗಾರನ ಆಟಕ್ಕೆ ಹೆಚ್ಚುವರಿ ನಿಮಿಷ ಪಡೆಯುತ್ತಾರೆ. ತವರಿನ ಅನುಕೂಲವನ್ನು ಗುರುತಿಸಲು ಅಮೆರಿಕನ್ ಆಟಗಾರರು ಎಲ್ಲಾ ಬೋರ್ಡ್‌ಗಳಲ್ಲಿ ವೈಟ್ ಆಡುತ್ತಾರೆ. ಇದು ಚೆಸ್ ಅನ್ನು ಮುಂದಿನ ಹಂತಕ್ಕೆ ಏರಿಸುವ ರೀತಿಯ ಸ್ಪರ್ಧೆಯಾಗಿದೆ. ಜಾಗತಿಕ ಚೆಸ್‌ನಲ್ಲಿ ಭಾರತವು ಅತ್ಯಂತ ರೋಮಾಂಚಕಾರಿ ಶಕ್ತಿಗಳಲ್ಲಿ ಒಂದಾಗಿದೆ. ಯುಎಸ್‌ನಲ್ಲಿ ಜನಸಮೂಹದ ಮುಂದೆ ಕಣಕ್ಕಿಳಿಯಲು ರೋಮಾಂಚನಗೊಂಡಿದ್ದೇನೆ.

ಅಮೆರಿಕವು ಆಟದ ಕೆಲವು ಅತ್ಯುತ್ತಮ ಆಟಗಾರರಿಗೆ ನೆಲೆಯಾಗಿದೆ. ಚೆಸ್ ಯಾವುದೇ ಪ್ರಮುಖ ಕ್ರೀಡೆಯಂತೆ ರೋಮಾಂಚನಕಾರಿ ಮತ್ತು ಸ್ಪರ್ಧಾತ್ಮಕವಾಗಿರುತ್ತದೆ ಎಂದು ಜಗತ್ತಿಗೆ ತೋರಿಸಲು ನಾವು ಬಯಸುತ್ತೇವೆ ಎಂದು ಎರಡನೇ ಶ್ರೇಯಾಂಕದ ಹಿಕಾರು ನಕಮುರಾ ಹೇಳಿದ್ದಾರೆ.